ಬೆಂಗಳೂರು ಸೋಮವಾರ 28 ಸೆಪ್ಟೆಂಬರ್ 2026 I ಸಂಪುಟ 44 I ಸಂಚಿಕೆ 287 ಪುಟ 8 I ಬೆಲೆ 3.00

Sanjevani Kannada Daily I Bangalore I Monday I 28 September 2026 I Vol: 44 Issue 287 I Pages 8 I RNI No:36667/82 I Rs. 3.00

# ಸಂಜೆವಾಣಿ

1982

ಬೆಂಗಳೂರು - ಹುಬ್ಬಳ್ಳಿ - ಕಲಬುರಗಿ - ಬಳ್ಳಾರಿ - ಮೈಸೂರು - ಮಂಗಳೂರು - ರಾಯಚೂರು - ದಾವಣಗೆರೆ - ಶಿವಮೊಗ್ಗ

www.sanjevani.com contact @sanjevani.com PH: 080 22868882




# ನಕಲಿ ಔಷಧ ಕಿಂಗ್‌ಪಿನ್ ಸೆರೆ

## ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂಧನ, ತೀವ್ರ ವಿಚಾರಣೆ

**ಬೆಂಗಳೂರು,ಸೆ.28-** ರಾಮನಗರದ ದೊಡ್ಡೇರಿ ಫಾರ್ಮ್‌ಹೌಸ್‌ನಲ್ಲಿ ಪತ್ತೆಯಾಗಿದ್ದ ನಕಲಿ ಔಷಧ ಜಾಲ ಪ್ರಕರಣದ ಕಿಂಗ್‌ಪಿನ್ ಪ್ರಶಾಂತ್ ರಂಜನ್ ಬಾಬುನನ್ನು ವಿಶೇಷ ತನಿಖಾ ತಂಡ(ಎಸ್ ಐಟಿ) ಬಂಧಿಸುವಲ್ಲಿ ಯಶಸ್ವಿಯಾಗಿದೆ.



ಅಜರ್‌ಬೈಜಾನ್‌ನಿಂದ ಇಂದು ಬೆಳಿಗ್ಗೆ ವಾಪಸಾದ ಕಿಂಗ್‌ಪಿನ್ ಪ್ರಶಾಂತ್ ರಂಜನ್‌ನನ್ನು ದೇವನಹಳ್ಳಿಯ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಾರ್ಯಾಚರಣೆ ಕೈಗೊಂಡ ಎಸ್ ಐಟಿ ಅಧಿಕಾರಿಗಳು ಬಂಧಿಸಿ ವಿಚಾರಣೆ ಕೈಗೊಂಡಿದ್ದಾರೆ.

ಅಜರ್‌ಬೈಜಾನ್‌ನಿಂದಕೆಂಪೇಗೌಡಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆಬಂದಿದ್ದ ಪ್ರಶಾಂತ್ ರಂಜನ್ ಬಾಬುನನ್ನುಲುಕ್‌ಔಟ್ ನೋಟಿಸ್ ಹಿನ್ನೆಲೆಯಲ್ಲಿ ವಿಮಾನ ನಿಲ್ದಾಣದಿಂದ ಪ್ರಯಾಣಿಕರು ಹೊರಬರುವ ದ್ವಾರ(ಅರೈವಲ್ ಗೇಟ್) ಬಳಿ ಎಸ್ ಐಟಿ ಎಸಿಪಿ ಅಂಜನ್ ಕುಮಾರ್ ನೇತೃತ್ವದ ತನಿಖಾ ತಂಡಕ್ಕೆ ಹಸ್ತಾಂತರಿಸಲಾಗಿದೆ.

ಆರೋಪಿ ಪ್ರಶಾಂತ್‌ನನ್ನುಎಸ್‌ಐಟಿಅಧಿಕಾರಿಗಳು ವೈದ್ಯಕೀಯತಪಾಸಣೆಗೆ ಒಳಪಡಿಸಿ ಬಳಿಕ ಸುದೀರ್ಘ ವಿಚಾರಣೆ ನಡೆಸುತ್ತಿದ್ದಾರೆ. ನಕಲಿ ಔಷಧಿಗಳನ್ನುಎಲ್ಲೆಲ್ಲಿ ತಯಾರಿಸಲಾಗುತ್ತಿತ್ತು, ಯಾವ್ಯಾವ ಔಷಧ ಅಂಗಡಿಗಳಿಗೆ ಹಾಗೂ ಆಸ್ಪತ್ರೆಗಳಿಗೆಪೂರೈಸಲಾಗಿತ್ತು, ಜಾಲದಲ್ಲಿ ಇನ್ನು ಯಾರ್‍ಯಾರು ಭಾಗಿಯಾಗಿದ್ದಾರೆಎಂಬ ಬಗ್ಗೆಪ್ರಾಥಮಿಕಮಾಹಿತಿ ಸಂಗ್ರಹಿಸಲಾಗಿದೆ.

ಪ್ರಾಥಮಿಕ ವಿಚಾರಣೆ ಪೂರ್ಣಗೊಂಡ ನಂತರ ಆರೋಪಿಯನ್ನು ಇಂದು ಸಂಜೆ ನ್ಯಾಯಾಧೀಶರ ಮುಂದೆ ಹಾಜರುಪಡಿಸಿ, ಹೆಚ್ಚಿನ ತನಿಖೆಗಾಗಿ ಎಸ್‌ಐಟಿ ವಶಕ್ಕೆ ಪಡೆಯಲು ಸಿದ್ಧತೆ ನಡೆಸಲಾಗಿದೆ.

**ಪತ್ತೆಯಾಗಿದ್ದ ಆರೋಪಿ:**

ದೊಡ್ಡೇರಿ ಫಾರ್ಮ್‌ಹೌಸ್‌ನಲ್ಲಿ ನಡೆಯುತ್ತಿದ್ದ ನಕಲಿ ಔಷಧ ಜಾಲದ ಕಿಂಗ್‌ಪಿನ್ ಪ್ರಶಾಂತ್ ರಂಜನ್ ಬಾಬು ಎನ್ನುವುದು ಎಸ್‌ಐಟಿ ತನಿಖೆ ವೇಳೆ ಪತ್ತೆಯಾಗಿ ಆತ ಅಜರ್‌ಬೈಜಾನ್‌ನಲ್ಲಿರುವುದು ಕಂಡುಬಂದಿತ್ತು.

ಸೆಪ್ಟೆಂಬರ್ 9ರಂದು ವೀಸಾ ಅವಧಿ ಮುಗಿದ ಹಿನ್ನೆಲೆಯಲ್ಲಿ ಅಜರ್‌ಬೈಜಾನ್‌ನ ಕಸ್ಟಮ್ಸ್ ಅಧಿಕಾರಿಗಳ ವಶದಲ್ಲಿದ್ದ ಪ್ರಶಾಂತ್, ಭಾರತಕ್ಕೆ ಮರಳಿದ ಬಳಿಕ ಲುಕ್‌ಔಟ್ ನೋಟಿಸ್ ಆಧರಿಸಿ ಬಂಧಿಸಲು ತನಿಖಾ ತಂಡ ಸಿದ್ಧತೆ ನಡೆಸಿತ್ತು.

**15 ಕೋಟಿ ವಹಿವಾಟು:**

ನಕಲಿ ಔಷಧ ಜಾಲದ ಮತ್ತೊಬ್ಬ ಪ್ರಮುಖ ಆರೋಪಿ ವೀರೇಶ್ ಜೈನ್, ನಕಲಿ ಔಷಧಗಳ ಉತ್ಪಾದನೆ ಮತ್ತು ಪೂರೈಕೆ ವ್ಯವಸ್ಥೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾನೆ ಎನ್ನಲಾಗಿದೆ. ಬೆಂಗಳೂರಿನ ಆಸ್ಪತ್ರೆಗಳು ಹಾಗೂ ಮೆಡಿಕಲ್‌ಗಳಿಗೆ ನಕಲಿ ಔಷಧಗಳನ್ನು ಪೂರೈಸಲಾಗುತ್ತಿತ್ತು ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಈ ಜಾಲದ ವಾರ್ಷಿಕ ವಹಿವಾಟು ಸುಮಾರು 15 ಕೋಟಿಯಷ್ಟಿದ್ದು, ಪ್ರಕರಣದ ತನಿಖೆಯನ್ನು ಮುಂದುವರೆಸಲಾಗಿದೆ.

**ನಕಲಿ ಲೇಬಲ್‌ಗಳ ಪೂರೈಕೆ:**

ಆರೋಗ್ಯ ಇಲಾಖೆ ಅಧಿಕಾರಿಗಳು ರಾಮನಗರದ ದೊಡ್ಡೇರಿ ಗ್ರಾಮದ ಬಳಿಯ ಫಾರ್ಮ್‌ಹೌಸ್ ಮೇಲೆ ನಡೆಸಿದ ದಾಳಿ ವೇಳೆ ಪುಟ 2

## ಸಂಪುಟ ವಿಸ್ತರಣೆ: ಸಿಎಂ ದೆಹಲಿಗೆ

**ಬೆಂಗಳೂರು, ಸೆ. 28-** ರಾಜ್ಯ ಸಚಿವ ಸಂಪುಟದಲ್ಲಿ ಖಾಲಿ ಇರುವ 2 ಸ್ಥಾನಗಳನ್ನು ಭರ್ತಿ ಮಾಡಲು ಹಾಗೂ ನಿಗಮ ಮಂಡಳಿಗಳ ಅಧ್ಯಕ್ಷರು-ಉಪಾಧ್ಯಕ್ಷರ ನೇಮಕಾತಿ ಬಗ್ಗೆ ಕಾಂಗ್ರೆಸ್ ಹೈಕಮಾಂಡ್ ಜತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಚರ್ಚೆ ನಡೆಸುವರು.



ನಾಳೆ ದೆಹಲಿಯಲ್ಲಿ ನಡೆಯಲಿರುವ ಕಾಂಗ್ರೆಸ್ ಕಾರ್ಯಕಾರಿಣಿ ಸಭೆಯಲ್ಲಿ ಪಾಲ್ಗೊಳ್ಳಲು ಹಾಗೂ ಡಾ. ಕಸ್ತೂರಿ ರಂಗನ್ ವರದಿ ಜಾರಿಗೆ ವಿರೋಧ ಬರ ಪರಿಹಾರಕ್ಕೆ ಹೆಚ್ಚಿನ ನೆರವು ಕೋರಲು ಸರ್ವಪಕ್ಷ ನಿಯೋಗವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ದೆಹಲಿಗೆ ಕರೆದೊಯ್ಯಲಿದ್ದು, ಈ ಸಂದರ್ಭದಲ್ಲಿ ವರಿಷ್ಠರನ್ನು ಭೇಟಿ ಮಾಡಿ ಸಂಪುಟ ವಿಸ್ತರಣೆ ಮತ್ತು ನಿಗಮ ಮಂಡಳಿ ಅಧ್ಯಕ್ಷರು, ಉಪಾಧ್ಯಕ್ಷರ ನೇಮಕಾತಿ ಬಗ್ಗೆಯೂ ಚರ್ಚೆ ನಡೆಸುವರು.

ಇಂದು ಬೆಳಗ್ಗೆ ದೆಹಲಿಗೆ ತೆರಳಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸರ್ವಪಕ್ಷ ನಾಯಕರ ಜತೆ ಇಂದು ಮಧ್ಯಾಹ್ನ ಕೇಂದ್ರದ ಪರಿಸರ ಮತ್ತು ಅರಣ್ಯ ಸಚಿವರನ್ನು ಭೇಟಿ ಮಾಡಿ ಡಾ. ಕಸ್ತೂರಿ ರಂಗನ್ ವರದಿ ಜಾರಿ ಮಾಡದಂತೆ ಮನವಿ ಸಲ್ಲಿಸುವರು.

ಇದಾದ ಬಳಿಕ ಬರಕ್ಕೆ ಹೆಚ್ಚಿನ ನೆರವು ನೀಡುವಂತೆ ಕೇಂದ್ರ ಸಚಿವರನ್ನು ಭೇಟಿ ಮಾಡುವರು.

ನಾಳೆ ನಡೆಯುವ ರಾಷ್ಟ್ರೀಯ ಕಾರ್ಯಕಾರಿಣಿಯಲ್ಲಿ ಪಾಲ್ಗೊಂಡು ನಾಳೆ ರಾತ್ರಿ ಅವರು ಬೆಂಗಳೂರಿಗೆ ವಾಪಸ್ಸಾಗುವರು.

ಬರ ಪರಿಹಾರಕ್ಕೆ ಸಂಬಂಧಿಸಿದಂತೆ ಸರ್ವಪಕ್ಷ ನಿಯೋಗದಲ್ಲಿ ತಾವು ಹೋಗಲ್ಲ ಎಂದು ಬಿಜೆಪಿ ಮತ್ತು ಜೆಡಿಎಸ್ ಈಗಾಗಲೇ ಹೇಳಿ, ಡಾ. ಕಸ್ತೂರಿ ರಂಗನ್ ವರದಿ ಜಾರಿಗೆ ವಿರೋಧಿಸಿ ತೆರಳುವ ಸರ್ವಪಕ್ಷದ ನಿಯೋಗದಲ್ಲಿ ಭಾಗಿಯಾಗುವುದಾಗಿ ಸ್ಪಷ್ಟಪಡಿಸಿವೆ.

ಪಶ್ಚಿಮಘಟ್ಟಕ್ಕೆ ಸಂಬಂಧಿಸಿ ಪುಟ 2




## ನಂದಿನಿ ಹಾಲಿನ ದರ ಏರಿಕೆ ಸಂಪುಟ ಸಭೆಯಲ್ಲಿ ನಿರ್ಧಾರ

**ಬೆಂಗಳೂರು.ಸೆ.28-** ವಿರೋಧ ಪಕ್ಷದವರ ವಿರೋಧದನಡುವೆಯೂ ನಂದಿನಿ ಹಾಲಿನ ದರ ಏರಿಕೆಗೆಮುಂದಾಗಿರುವ ರಾಜ್ಯ ಸರ್ಕಾರ ಗುರುವಾರ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಅಂತಿಮ ನಿರ್ಧಾರ ಕೈಗೊಂಡು ದರ ಹೆಚ್ಚಳ ಪ್ರಕಟಸಲಿದೆ.




ಈ ಸಂಬಂಧ ಬೆಂಗಳೂರಿನ ಐಐಎಸ್‌ಸಿ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗುರುವಾರ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಹಾಲಿನ ದರ ಏರಿಕೆ ಕುರಿತು ಚರ್ಚಿಸಿ ಅಂತಿಮ ನಿರ್ಧಾರ ಕೈಗೊಂಡು, ಬಳಿಕ ದರವನ್ನು ಪ್ರಕಟಿಸಲಾಗುವುದು ಎಂದರು.

ಹಾಲಿನ ದರ ಏರಿಕೆ ಕುರಿತು ಈಗಾಗಲೇ ಸಭೆ ನಡೆಸಿ ಚರ್ಚಿಸಲಾಗಿದೆ. ಎಷ್ಟು ದರ ಏರಿಕೆ ಮಾಡಬೇಕು ಎಂಬುದರ ಬಗ್ಗೆ ಸಭೆಯಲ್ಲಿ ಚರ್ಚೆ ನಡೆದಿದ್ದು, ಈ ಕುರಿತು ಮುಖ್ಯಮಂತ್ರಿಗಳಿಗೂ ಸಂಪೂರ್ಣ ಮಾಹಿತಿ ನೀಡಲಾಗಿದೆ ಎಂದು ಪಶುಸಂಗೋಪನಾ ಸಚಿವ ಪುಟ್ಟರಂಗ ಶೆಟ್ಟಿ ತಿಳಿಸಿದ್ದಾರೆ.

ಹಾಲು ಉತ್ಪಾದಕರು ಪ್ರತಿ ಲೀಟರ್‌ಗೆ 10 ದರ ಏರಿಕೆ ಮಾಡಬೇಕೆಂದು ಒತ್ತಾಯಿಸುತ್ತಿದ್ದಾರೆ. ಆದರೆ ದರ ಏರಿಕೆಯಿಂದ ಯಾರಿಗೂ ತೊಂದರೆಯಾಗಬಾರದು ಎಂಬುದು ಸರ್ಕಾರದ ಉದ್ದೇಶವಾಗಿದೆ ಎಂದು ಹೇಳಿದರು.

ಇದು ಕೇವಲ ಒಬ್ಬರ ನಿರ್ಧಾರವಲ್ಲ. ಗುರುವಾರ ಕ್ಯಾಬಿನೆಟ್‌ನಲ್ಲಿ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು. ಎಲ್ಲರಿಗೂ ಅನುಕೂಲವಾಗುವ ರೀತಿಯಲ್ಲಿ ದರ ಏರಿಕೆ ಮಾಡಲಾಗುವುದು ಎಂದು ಪುಟ್ಟರಂಗ ಶೆಟ್ಟಿ ತಿಳಿಸಿದರು.

## ಮುಡಾ ಅಕ್ರಮ ನಿವೇಶನ ಪಟ್ಟಿ ಶೀಘ್ರ ಬಿಡುಗಡೆ

**ಮೈಸೂರು, ಸೆ. 28-** ಮುಡಾದ 50:50 ಅನುಪಾತದ ಅಕ್ರಮ ನಿವೇಶನಗಳ ಪಟ್ಟಿಯನ್ನು ಶೀಘ್ರದಲ್ಲೇ ಬಿಡುಗಡೆ ಮಾಡುತ್ತೇವೆ ಎಂದು ನಗರಾಭಿವೃದ್ಧಿ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಹೇಳಿದರು.



ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕುರಿತು ಬಿಜೆಪಿ ಶಾಸಕ ಶ್ರೀವತ್ಸ ಅವರು ಮನವಿ ಸಲ್ಲಿಸಿದ್ದಾರೆ. ಅದರಂತೆ ಅಕ್ರಮ ಸೈಟ್‌ಗಳ ಪಟ್ಟಿ ಸಿದ್ಧಪಡಿಸಲಾಗುತ್ತಿದ್ದು, ಶೀಘ್ರವೇ ಪ್ರಕಟಿಸಲಾಗುವುದು ಎಂದರು.

ನ್ಯಾಯಮೂರ್ತಿ ದೇಸಾಯಿ ಆಯೋಗದ ವರದಿಯಂತೆ ಎಲ್ಲಾ ಅಕ್ರಮ ಸೈಟ್‌ಗಳನ್ನು ರದ್ದುಪಡಿಸಲಾಗಿದೆ. ಆಯೋಗ ಕಾನೂನುಬದ್ಧವಾಗಿ ಸೈಟ್ ಪಡೆದವರನ್ನು ಪಟ್ಟಿಯಿಂದ ಹೊರಗಿಟ್ಟು, ಪ್ರತಿ ನಿವೇಶನದ ಬಗ್ಗೆಯೂ ತನಿಖೆ ನಡೆಸಿ ವರದಿ ನೀಡಿದೆ. ಹೀಗಾಗಿ ಮತ್ತೊಮ್ಮೆ ಪರಿಶೀಲನೆ ನಡೆಸುವ ಅಗತ್ಯವಿಲ್ಲ. ಆಯೋಗ ನೀಡಿರುವ ಅಕ್ರಮ ಪಟ್ಟಿಯನ್ನೇ ನಾವು ಪ್ರಕಟಿಸುತ್ತೇವೆ ಎಂದು ಸಚಿವರು ಸ್ಪಷ್ಟಪಡಿಸಿದರು.

ಅಕ್ರಮವಾಗಿ ಪಡೆದ ನಿವೇಶನಗಳನ್ನು ಬೇರೆಯವರಿಗೆ ಮಾರಾಟ ಮಾಡಿದ್ದಲ್ಲಿ, ಖರೀದಿದಾರರಿಗೆ ಸಮಸ್ಯೆಯಾಗದಂತೆ ತಪ್ಪಿಸಲು ಸಾಧ್ಯವೇ ಎಂಬ ಬಗ್ಗೆಯೂ ಪರಿಶೀಲನೆ ನಡೆಸುವುದಾಗಿ ಅವರು ತಿಳಿಸಿದರು. ಪುಟ 2

## ಬರ ಪರಿಶೀಲನೆ ರಾಜ್ಯಕ್ಕೆ ಕೇಂದ್ರ ತಂಡ

**ಬೆಂಗಳೂರು,ಸೆ.28-** ರಾಜ್ಯದಲ್ಲಿ ಬರ ಪರಿಸ್ಥಿತಿ ಪರಿಶೀಲನೆ ನಡೆಸಲು ಕೇಂದ್ರ ಸರ್ಕಾರದ ಮೂರು ತಂಡಗಳು ರಾಜ್ಯಕ್ಕೆ ಆಗಮಿಸಲಿದ್ದು, ಈಗಾಗಲೇ ರಾಜ್ಯ ಸರ್ಕಾರ ಸಲ್ಲಿಸಿರುವ ಮನವಿಯ ಆಧಾರದ ಮೇಲೆ ತಂಡಗಳು ಅಧ್ಯಯನ ನಡೆಸಿ ವರದಿ ನೀಡಲಿವೆ ಎಂದು ಉಪಮುಖ್ಯಮಂತ್ರಿ ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಇನ್ನಷ್ಟು ತಾಲ್ಲೂಕುಗಳಲ್ಲಿ ಬರದ 'ಗ್ರೌಂಡ್ ಟ್ರೂತಿಂಗ್' ನಡೆಯುತ್ತಿದೆ. ಈ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಕೇಂದ್ರಕ್ಕೆ ಸಮಗ್ರ ವರದಿ ಸಲ್ಲಿಸಲಾಗುವುದು. "ಅಕ್ಟೋಬರ್ ಮೊದಲ ವಾರದೊಳಗೆ ಬರದ ಸಂಪೂರ್ಣ ವರದಿಯನ್ನು ಕೇಂದ್ರಕ್ಕೆ ಕಳುಹಿಸಲಾಗುವುದು ಎಂದರು.

ರಾಜ್ಯ ಸರ್ಕಾರ ಈಗಾಗಲೇ ಕೇಂದ್ರಕ್ಕೆ ಮನವಿ ಸಲ್ಲಿಸಿದೆ. ಅದರ ಆಧಾರದ ಮೇಲೆ ಮೂರು ತಂಡಗಳು ಪರಿಶೀಲನೆ ನಡೆಸಲಿವೆ. ಎಲ್ಲ ತಾಲ್ಲೂಕುಗಳನ್ನೂ ಅಧ್ಯಯನಕ್ಕೆ ಒಳಪಡಿಸುವಂತೆ ಮತ್ತೊಂದು ಮನವಿಯನ್ನು ಸಲ್ಲಿಸಲಾಗುವುದು ಎಂದು ಹೇಳಿದರು.

ಬರ ಪರಿಸ್ಥಿತಿ ಕುರಿತು ಕೇಂದ್ರಕ್ಕೆ ಮನವಿ ಸಲ್ಲಿಸಲು ರಾಜ್ಯ ಸರ್ಕಾರ ರಚಿಸಿರುವ ಸರ್ವಪಕ್ಷ ನಿಯೋಗದೊಂದಿಗೆ ಬರುವುದಿಲ್ಲ ಎಂಬ ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿಕೆಗೆ ಪರಮೇಶ್ವರ್ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಬರ ಪಕ್ಷ ನೋಡಿ ಬರುತ್ತದೆಯೇ? ಬರ ಯಾವುದೋ ಒಂದು ಪಕ್ಷಕ್ಕೆ ಸೀಮಿತವಾದ ಸಮಸ್ಯೆಯಲ್ಲ. ಎಲ್ಲರೂ ನಿಯೋಗದೊಂದಿಗೆ ಬರಬೇಕು" ಎಂದು ಹೇಳಿದರು.

ಕೇಂದ್ರದಲ್ಲಿ ಬಿಜೆಪಿ ಸರ್ಕಾರವೇ ಇರುವುದರಿಂದ ರಾಜ್ಯದ ಬಿಜೆಪಿ ನಾಯಕರು ಸರ್ವಪಕ್ಷ ನಿಯೋಗದೊಂದಿಗೆ ಬಂದರೆ ಕೇಂದ್ರ ಸರ್ಕಾರದ ಮುಂದೆ ರಾಜ್ಯದ ಬರ ಪರಿಸ್ಥಿತಿ ಹಾಗೂ ರೈತರ ಸಂಕಷ್ಟವನ್ನು ಪರಿಣಾಮಕಾರಿಯಾಗಿ ಮನವರಿಕೆ ಮಾಡಲು ನೆರವಾಗಲಿದೆ. ಬಿಜೆಪಿ ನಾಯಕರನ್ನು ಮತ್ತೊಮ್ಮೆ ನಿಯೋಗದೊಂದಿಗೆ ಬರುವಂತೆ ಆಹ್ವಾನಿಸಲಾಗುವುದು ಎಂದರು.



"ಅವರು ಬರದಿದ್ದರೆ ನಾವು ಏನು ಮಾಡಲು ಸಾಧ್ಯ? ರೈತರ ಬಗ್ಗೆ ಕಾಳಜಿ ಇದ್ದರೆ ನಿಯೋಗದೊಂದಿಗೆ ಬರಬೇಕು" ಎಂದು ಪರಮೇಶ್ವರ್ ಹೇಳಿದರು. ಕೇಂದ್ರದಿಂದ ಬರ ಪರಿಹಾರ ದೊರೆಯದಿದ್ದರೆ ಮುಂದಿನ ಕ್ರಮದ ಬಗ್ಗೆ ಸರ್ಕಾರ ನಿರ್ಧರಿಸಲಿದೆ. ಕಳೆದ ಬಾರಿ ಸುಪ್ರೀಂಕೋರ್ಟ್ ಮೊರೆ ಹೋಗಿದ್ದೆವು. ಪುಟ 2

## ಪ್ರದೋಷ್ ಮಾಫಿ ಸಾಕ್ಷಿ: ಹೇಳಿಕೆ ನ್ಯಾಯಾಲಯದಲ್ಲಿ ದಾಖಲು



### ರೇಣುಕಾಸ್ವಾಮಿ ಹತ್ಯೆ ಪ್ರಕರಣ

**ಬೆಂಗಳೂರು. ಸೆ. 28-** ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಗರದ ಸಿಟಿ ಸಿವಿಲ್ ಕೋರ್ಟ್‌ನಲ್ಲಿ ಇಂದು ವಿಚಾರಣೆ ಮುಂದುವರಿದಿದ್ದು, ಆರೋಪಿ ಪ್ರದೋಷ್ ಹೇಳಿಕೆಯನ್ನು ಇನ್ ಕ್ಯಾಮೆರಾ ಪ್ರೊಸಿಡಿಂಗ್ಸ್‌ನಲ್ಲಿ ದಾಖಲಿಸುವ ಪ್ರಕ್ರಿಯೆ ನಡೆಯಿತು.

ಭದ್ರತೆಯೊಂದಿಗೆ ಕೋರ್ಟ್‌ಗೆ ಹಾಜರಾದ ಪ್ರದೋಷ್, ಪ್ರಕರಣಕ್ಕೆ ಸಂಬಂಧಿಸಿದ ಹಲವು ಘಟನೆಗಳ ಬಗ್ಗೆ ನ್ಯಾಯಾಲಯದ ಮುಂದೆ ಹೇಳಿಕೆ ನೀಡಿದ್ದಾರೆ. ದರ್ಶನ್ ಪರ ವಕೀಲರು ಅರ್ಜಿ ವಿಚಾರಣೆಯನ್ನು ಮುಂದೂಡುವಂತೆ ಮನವಿ ಮಾಡಿದರು.

ಇದಕ್ಕೆ ವಿಶೇಷ ಸರ್ಕಾರಿ ಅಭಿಯೋಜಕ (ಎಸ್‌ಪಿಪಿ) ಪ್ರಸನ್ನಕುಮಾರ್ ಆಕ್ಷೇಪ ವ್ಯಕ್ತಪಡಿಸಿದರು. ಆರೋಪಿಗಳ ಪರ ವಕೀಲರೂ ತ್ವರಿತ ವಿಚಾರಣೆಗೆ ಸಹಕರಿಸಬೇಕು ಎಂದು ಸುಪ್ರೀಂಕೋರ್ಟ್ ಸ್ಪಷ್ಟಪಡಿಸಿರುವುದಾಗಿ ಅವರು ನ್ಯಾಯಾಲಯದ ಗಮನಕ್ಕೆ ತಂದರು.

ನಂತರ ಕೆಲಕಾಲ ಅರ್ಜಿ ವಿಚಾರಣೆ ನಡೆದ ಬಳಿಕ, ಇನ್ ಕ್ಯಾಮೆರಾ ಪ್ರೊಸಿಡಿಂಗ್ಸ್ ಹಿನ್ನೆಲೆಯಲ್ಲಿ ಪ್ರಕರಣಕ್ಕೆ ಸಂಬಂಧಿಸಿದ ವಕೀಲರನ್ನು ಹೊರತುಪಡಿಸಿ ಉಳಿದವರು ಕೋರ್ಟ್‌ನಿಂದ ಹೊರಹೋಗುವಂತೆ ನ್ಯಾಯಾಧೀಶರು ಸೂಚಿಸಿದರು. ಪುಟ 2

### ದರ್ಶನ್ ಅರ್ಜಿ ವಜಾ

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಆರೋಪಿ ದರ್ಶನ್‌ಗೆ ಮತ್ತೊಂದು ಹಿನ್ನಡೆಯಾಗಿದೆ. ಪ್ರಕರಣದ ಮಾಫಿ ಸಾಕ್ಷಿ ಪ್ರದೋಷ್ ಹೇಳಿಕೆ ದಾಖಲಿಸುವ ಪ್ರಕ್ರಿಯೆಯನ್ನು ಮುಂದೂಡಬೇಕೆಂದು ದರ್ಶನ್ ಪರ ವಕೀಲರು ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣಾ ನ್ಯಾಯಾಲಯ ವಜಾಗೊಳಿಸಿದೆ. ಪ್ರದೋಷ್ ಅವರ ಮಾಫಿ ಸಾಕ್ಷಿ ಹೇಳಿಕೆ ಪುಟ 2

## ಬಿಜೆಪಿಯದ್ದು ಕಪಟ ನಾಟಕ: ಡಿಕೆಶಿ ತಿರುಗೇಟು

**ಬೆಂಗಳೂರು, ಸೆ. 28-** "ರಾಜ್ಯದ ಬರ ಪರಿಸ್ಥಿತಿ ಬಗ್ಗೆ ಕೇಂದ್ರ ಸರ್ಕಾರ-ಕ್ಕೆ ಮನವಿ ಸಲ್ಲಿಸಲು ಸರ್ವಪಕ್ಷ ನಿಯೋಗದೊಂದಿಗೆ ಬಾರದಿದ್ದರೆ, ಬಿಜೆಪಿಯವರದ್ದು ಕಪಟ ನಾಟಕ ಎಂಬುದು ಸಾಬೀತಾಗುತ್ತದೆ. ಕೇಂದ್ರ ಸರ್ಕಾರಕ್ಕೆ ರಾಜ್ಯ ಬಿಜೆಪಿ ನಾಯಕರು ಮನವರಿಕೆ ಮಾಡಿಕೊಡದಿದ್ದರೆ, ರೈತರ ಹಿತಕ್ಕಾಗಿ ನಾವೇ ಅಗತ್ಯ ಕ್ರಮ ತೆಗೆದುಕೊಳ್ಳುತ್ತೇವೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು.

ಸದಾಶಿವನಗರ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಬರ ವಿಚಾರದಲ್ಲಿ ಸರ್ವಪಕ್ಷ ನಿಯೋಗದೊಂದಿಗೆ ಹೋಗುವುದಿಲ್ಲ ಎಂಬ ಬಿಜೆಪಿ ನಾಯಕರ ಹೇಳಿಕೆ ಬಗ್ಗೆ ಕೇಳಿದಾಗ, "ವಿರೋಧ ಪಕ್ಷಗಳು ಸರ್ವಪಕ್ಷ ನಿಯೋಗದೊಂದಿಗೆ ಸೇರದಿದ್ದರೆ, ರೈತರ ಹಿತಾಸಕ್ತಿಯನ್ನು ಸರ್ಕಾರ ಕಡೆಗಣಿಸುವುದಿಲ್ಲ. ರಾಜ್ಯದ ರೈತರ ಹಿತ ಕಾಪಾಡಲು ಏನು ಮಾಡಬೇಕೋ ಅದನ್ನು ನಾವು ಮಾಡುತ್ತೇವೆ" ಎಂದರು.

"ಅವರ ಈ ನಡೆಯಿಂದ ರಾಜ್ಯದ ರೈತರ ಬಗ್ಗೆ ಅವರಿಗೆ ಕಾಳಜಿ ಇಲ್ಲ ಎಂಬುದು ಸ್ಪಷ್ಟವಾಗುತ್ತದೆ. ರೈತರಿಗೆ 25 ಸಾವಿರ, 50 ಸಾವಿರ ಪರಿಹಾರ ನೀಡಿ ಎಂದು ಹೇಳುವವರು ಕೇಂದ್ರ ಸರ್ಕಾರದ ಬಳಿ ಮಾತನಾಡಿ ಅವರೂ ಪರಿಹಾರ ಕೊಡಿಸಬೇಕು" ಎಂದು ಆಗ್ರಹಿಸಿದರು.

"ಬರ ಪರಿಸ್ಥಿತಿಯ ಅಧ್ಯಯನ ಕುರಿತು ಅ. 3ರಂದು ಕೇಂದ್ರದ ತಂಡ ಬರುತ್ತಿದೆ. ಆ ಸಮಿತಿಗೆ ಅಗತ್ಯವಿರುವ ಎಲ್ಲ ಸಹಕಾರವನ್ನು ಕಾನೂನಿನ ಚೌಕಟ್ಟಿನಲ್ಲಿ ನಮ್ಮ ಅಧಿಕಾರಿಗಳು ನೀಡಲಿದ್ದಾರೆ" ಎಂದು ತಿಳಿಸಿದರು.

"ಕಸ್ತೂರಿರಂಗನ್ ವರದಿ ಹಾಗೂ ಬರ ಕುರಿತು ಚರ್ಚಿಸಲು ಸರ್ವಪಕ್ಷ ಸಭೆ ನಡೆಸುವ ಪುಟ 2

## ಅಪ್ರಾಪ್ತೆ ಮೇಲೆ ಸಾಮೂಹಿಕ ಅತ್ಯಾಚಾರ: ಸುಪ್ರೀಂನಿಂದ ಸ್ವಯಂಪ್ರೇರಿತ ಪ್ರಕರಣ

**ನವದೆಹಲಿ,ಸೆ.28-** ದೆಹಲಿ-ಎನ್‌ಸಿಆರ್ ಪ್ರದೇಶದಲ್ಲಿ ಅಪ್ರಾಪ್ತ ಬಾಲಕಿಯರು ಹಾಗೂ ಮಹಿಳೆಯರ ಮೇಲೆ ನಡೆದಿರುವ ಲೈಂಗಿಕ ದೌರ್ಜನ್ಯ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿರುವ ಸುಪ್ರೀಂ ಕೋರ್ಟ್, ಇಂದು ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡು ದೆಹಲಿ ಪೊಲೀಸರಿಂದ ಪ್ರತಿಕ್ರಿಯೆ ಕೇಳಿದೆ.

ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದಿವಾಲಾ ಮತ್ತು ಕೆ. ವಿನೋದ್ ಚಂದ್ರನ್ ಅವರನ್ನೊಳಗೊಂಡ ಪೀಠವು, ಸಾರ್ವಜನಿಕ ಸ್ಥಳಗಳಲ್ಲಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆ ಕುರಿತು ಕಳವಳ ವ್ಯಕ್ತಪಡಿಸಿತು. ಉದ್ಯಾನಗಳು, ಬಸ್‌ಗಳು ಹಾಗೂ ರಸ್ತೆಗಳು ಹೆಚ್ಚಿನ ಅಪಾಯದ ಪ್ರದೇಶಗಳಾಗಿ ಮಾರ್ಪಡಲು ಅವಕಾಶ ನೀಡಬಾರದು ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿತು.

ಮಾಧ್ಯಮಗಳಲ್ಲಿ ವರದಿಯಾದ ಹಲವು ಪ್ರಕರಣಗಳನ್ನು ನ್ಯಾಯಪೀಠ ಗಮನಕ್ಕೆ ತೆಗೆದುಕೊಂಡಿದೆ. ಲೇಡಿ ಶ್ರೀರಾಮ್ ಕಾಲೇಜು ಸಮೀಪದ ಆಸ್ಥಾ ಕುಂಜ್ ಪಾರ್ಕ್‌ನಲ್ಲಿ 17 ವರ್ಷದ ಬಾಲಕಿಯ ಮೇಲೆ ನಡೆದಿರುವ ಅತ್ಯಾಚಾರ, ಸ್ವರೂಪ್ ನಗರದಲ್ಲಿ ಅಪ್ರಾಪ್ತೆಯ ಮೇಲೆ ನಡೆದಿರುವ ಸಾಮೂಹಿಕ ಅತ್ಯಾಚಾರ ಹಾಗೂ ಗ್ರೇಟರ್ ನೋಯ್ಡಾದಿಂದ ದೆಹಲಿಗೆ ಸಂಚರಿಸುತ್ತಿದ್ದ ಬಸ್‌ನಲ್ಲಿ 16 ವರ್ಷದ ಬಾಲಕಿಯ ಮೇಲೆ ನಡೆದಿರುವ ಲೈಂಗಿಕ ದೌರ್ಜನ್ಯದ ಪ್ರಕರಣಗಳು ಇದರಲ್ಲಿ ಸೇರಿವೆ. 2012ರ ನಿರ್ಭಯಾ ಪ್ರಕರಣದ ಬಳಿಕವೂ ರಾಷ್ಟ್ರ ರಾಜಧಾನಿ ಪುಟ 2

## ರೈತರ ಹಿತರಕ್ಷಣೆಗೆ ನಿರಂತರ ಹೋರಾಟ: ಎಚ್‌ಡಿಕೆ

**ಮೈಸೂರು, ಸೆ. 28-** ರೈತರ ಹಿತರಕ್ಷಣೆಗಾಗಿ ನಮ್ಮ ಹೋರಾಟ ನಿರಂತರವಾಗಿರುತ್ತದೆ, ನಮ್ಮ ನಿಲುವು ಯಾವಾಗಲೂ ರೈತಪರ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

ಮೈಸೂರಿನಲ್ಲಿ ಕನ್ನೇಗೌಡ ಟೈಗರ್ಸ್ ವತಿಯಿಂದ ಪ್ರತಿಷ್ಠಾಪಿಸಿರುವ ಗಣೇಶ ಮೂರ್ತಿಗೆ ಮಹಾಮಂಗಳಾರತಿ ಸಲ್ಲಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ರಾಜ್ಯ ಸರ್ಕಾರ ಬರ ನಿರ್ವಹಣೆಯಲ್ಲಿ ಸಂಪೂರ್ಣ ವಿಫಲವಾಗಿದೆ, ರಾಜ್ಯದ ರೈತರು ತೀವ್ರ ಸಂಕಷ್ಟದಲ್ಲಿ ಇದ್ದಾರೆ. ಎಲ್ಲದಕ್ಕೂ ಕೇಂದ್ರದ ಕಡೆ ಬೊಟ್ಟು ಮಾಡುವುದನ್ನು ಬಿಟ್ಟು, ರಾಜ್ಯ ಸರ್ಕಾರ ತನ್ನ ಸ್ವಂತ ಸಂಪನ್ಮೂಲದಿಂದ ರೈತರಿಗೆ ಪರಿಹಾರ ನೀಡಲಿ. ನಾನು ಎರಡು ಬಾರಿ ಮುಖ್ಯಮಂತ್ರಿಯಾಗಿದ್ದಾಗ ರಾಜ್ಯದ ಬೊಕ್ಕಸದಿಂದಲೇ ರೈತರಿಗೆ ನೆರವು ನೀಡಿದ್ದೆ ಎಂದು ಕುಮಾರಸ್ವಾಮಿ ಹೇಳಿದರು. ರಾಜ್ಯಾದ್ಯಂತ ಪಕ್ಷದ ವತಿಯಿಂದ ರೈತ ಯಾತ್ರೆ ಹಮ್ಮಿಕೊಳ್ಳಲಾಗಿದ್ದು, ಪುಟ 2

## ಕೆಪಿಎಸ್‌ಸಿ ಅಕ್ರಮ: ಕನ್ನಾಳೆ ಡೈರಿಯಲ್ಲಿ ಹಣದ ಲೆಕ್ಕ ಪತ್ತೆ

**ಬೆಂಗಳೂರು, ಸೆ.28-** ಕೆಪಿಎಸ್‌ಸಿ ಪರೀಕ್ಷಾ ಅಕ್ರಮ ಪ್ರಕರಣದ ತನಿಖೆ ಚುರುಕುಗೊಂಡಿರುವ ಬೆನ್ನಲ್ಲೇ, ಆರೋಪಿ ಬಸವರಾಜ್ ಕನ್ನಾಳೆ ಮನೆಯಲ್ಲಿ ಜಾರಿ ನಿರ್ದೇಶನಾಲಯದ (ಇಡಿ)ಅಧಿಕಾರಿಗಳು ನಡೆಸಿದ ಪರಿಶೀಲನೆ ವೇಳೆ ಹಣದ ಲೆಕ್ಕ ಹೊಂದಿರುವ ಡೈರಿ ಪತ್ತೆಯಾಗಿದೆ.

ಅಭ್ಯರ್ಥಿಗಳಿಂದ ಪಡೆಯಬೇಕಿದ್ದ ಹಣ, ಪಾವತಿಯಾಗಿರುವ ಮೊತ್ತ ಹಾಗೂ ಬಾಕಿ ಉಳಿದಿರುವ ಹಣದ ವಿವರಗಳನ್ನು ಬಸವರಾಜ್ ಕನ್ನಾಳೆ ಡೈರಿಯಲ್ಲಿ ದಾಖಲಿಸಿಕೊಂಡಿದ್ದ ಎನ್ನಲಾಗಿದ್ದು, ಕೆಲವು ಅಭ್ಯರ್ಥಿಗಳ ಹೆಸರುಗಳ ಜತೆಗೆ ನಿರ್ದಿಷ್ಟ ಮೊತ್ತಗಳನ್ನೂ ನಮೂದಿಸಿರುವುದು ತನಿಖೆಯ ವೇಳೆ ಬೆಳಕಿಗೆ ಬಂದಿದೆ.

ಡೈರಿಯಲ್ಲಿನ ಒಂದು ಹಾಳೆಯಲ್ಲಿ ಎಂಟು ಅಭ್ಯರ್ಥಿಗಳಿಂದ ಬರಬೇಕಿದ್ದ ಬಾಕಿ ಹಣದ ವಿವರಗಳಿವೆ. ಅದರಲ್ಲಿ ಮಂಜುನಾಥ್ ಅವರಿಂದ 10 ಲಕ್ಷ, ಪೂಜಾ ಅವರಿಂದ 10 ಲಕ್ಷ, ಅಶ್ವಿನಿ ಕುಮಾರ್‌ರಿಂದ 10 ಲಕ್ಷ, ಮೋಹನ್ ಕುಮಾರ್‌ನಿಂದ 5 ಲಕ್ಷ, ಸಂಗಮೇಶ್ ಅವರಿಂದ 10 ಲಕ್ಷ, ಪದ್ಮಾವತಿ ಅವರಿಂದ 10 ಲಕ್ಷ ಹಾಗೂ ಹರೀಶ್ ಅವರಿಂದ 10 ಲಕ್ಷ ಬಾಕಿ ಬರಬೇಕಿದೆ ಎಂದು ನಮೂದಿಸಲಾಗಿದೆ.

ಇದರೊಂದಿಗೆ ಬ್ಯಾಂಕ್ ಖಾತೆ ಸಂಖ್ಯೆಗಳು, ಹಣದ ಮೊತ್ತ ಹಾಗೂ ಜಲಸಂಪನ್ಮೂಲ ಇಲಾಖೆ ಪುಟ 2

ಚಿನಿವಾರಪೇಟೆ - ಮುಂಬೈ, ಸೆಪ್ಟೆಂಬರ್ 28: ಚಿನ್ನ: ಅಪರಂಜಿ - 24 ಕ್ಯಾರೆಟ್ 10 ಗ್ರಾಂ I 1,54,420 I 22 ಕ್ಯಾರೆಟ್ - 10 ಗ್ರಾಂ 1,41,550 I ಬೆಳ್ಳಿ: 1 ಕೆ.ಜಿ. - 3,20,000

ಸಂಜೆವಾಣಿ

ಬೆಂಗಳೂರು । ಜಾಹೀರಾತಿಗಾಗಿ ಸಂಪರ್ಕಿಸಿ - 94498 71825
contact@sanjevani.com

(ಒಂದನೇ ಪುಟದಿಂದ)

# ಸಂಪುಟ ವಿಸ್ತರಣೆ: ಸಿಎಂ ದೆಹಲಿಗೆ

ದಂತೆ ಡಾ. ಕಸ್ತೂರಿ ರಂಗನ್ ವರದಿ ಒಪ್ಪುವುದಿಲ್ಲ. ಈ ವರದಿಯನ್ನು ಜಾರಿ ಮಾಡಬಾರದು ಎಂದು ರಾಜ್ಯ ಸರ್ಕಾರ ವಿಧಾನಮಂಡಲದ ಉಭಯ ಸದನಗಳಲ್ಲಿ ಈಗಾಗಲೇ ನಿರ್ಣಯ ಕೈಗೊಂಡಿದೆ.

ವಿಧಾನಸಭೆಯ ನಿರ್ಣಯವನ್ನು ಕೇಂದ್ರ ಸಚಿವರ ಗಮನಕ್ಕೆ ಸರ್ವಪಕ್ಷ ತರಲಿದ್ದು, ಕಸ್ತೂರಿ ರಂಗನ್ ವರದಿ ಜಾರಿಯಿಂದ ಪಶ್ಚಿಮ ಘಟ್ಟಜದ ಜನ ಜೀವನಕ್ಕೆ ಆಗುವ ತೊಂದರೆಯನ್ನು ಕೇಂದ್ರ ಸಚಿವರಿಗೆ ಮನವರಿಕೆ ಮಾಡಿಕೊಡಲಾಗುವುದು.

**ಸಿದ್ದರಾಮಯ್ಯ ಸಹ ದೆಹಲಿಗೆ**

ದೆಹಲಿಯಲ್ಲಿ ನಾಳೆ ನಡೆಯಲಿರುವ ಕಾಂಗ್ರೆಸ್‌ನ ರಾಷ್ಟ್ರೀಯ ಕಾರ್ಯಕಾರಿಣಿಯಲ್ಲಿ ಪಾಲ್ಗೊಳ್ಳಲು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಹ ಇಂದು ಮಧ್ಯಾಹ್ನ ದೆಹಲಿಗೆ ತೆರಳಿದರು.

ಇಂದು ದೆಹಲಿಯಲ್ಲೇ ವಾಸ್ತವ್ಯ ಹೂಡಲಿರುವ ಸಿದ್ದರಾಮಯ್ಯ ಅವರು ಸಹ ವರಿಷ್ಠ ನಾಯಕರನ್ನು ಭೇಟಿ ಮಾಡಿ ರಾಜ್ಯ ರಾಜಕೀಯ ವಿಚಾರಗಳ ಬಗ್ಗೆ ಚರ್ಚೆ ನಡೆಸಲಿದ್ದು, ಸಂಪುಟದಲ್ಲಿ ಖಾಲಿ ಇರುವ ಎರಡು ಸ್ಥಾನಗಳ ಭರ್ತಿ, ನಿಗಮ ಮಂಡಳಿ ಅಧ್ಯಕ್ಷರ ನೇಮಕಾತಿ ಎಲ್ಲ ವಿಚಾರಗಳ ಬಗ್ಗೆ ಚರ್ಚೆ ನಡೆಸುವರು ಎಂದು ಹೇಳಲಾಗಿದೆ.

# ಬರ ಪರಿಶೀಲನೆ ರಾಜ್ಯಕ್ಕೆ ಕೇಂದ್ರ ತಂಡ

ಈ ಬಾರಿ ಅಂತಹ ಪರಿಸ್ಥಿತಿ ಎದುರಾಗುವುದಿಲ್ಲ ಎಂಬ ವಿಶ್ವಾಸವಿದೆ ಎಂದು ತಿಳಿಸಿದರು.

ಗ್ಯಾರಂಟಿ ಯೋಜನೆಗಳಿಗೆ ಹೆಚ್ಚಿನ ಹಣ ವ್ಯಯವಾಗುತ್ತಿರುವ ಕುರಿತು ಸ್ವಪಕ್ಷೀಯರಿಂದಲೇ ಅಪಸ್ವರ ವ್ಯಕ್ತವಾಗುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಪರಮೇಶ್ವರ್, ಗ್ಯಾರಂಟಿ ಯೋಜನೆಗಳಿಗೆ ಹೆಚ್ಚಿನ ಹಣ ಬೇಕಾಗುತ್ತದೆ ಎಂಬುದು ಆರಂಭದಲ್ಲಿಯೇ ಎಲ್ಲರಿಗೂ ತಿಳಿದಿರುವ ವಿಚಾರ ಎಂದರು.

ಗ್ಯಾರಂಟಿಗಳಿಂದ ರಾಜ್ಯದ ಹಣಕಾಸಿನ ಮೇಲೆ ಸಹಜವಾಗಿಯೇ ಒತ್ತಡ ಉಂಟಾಗುತ್ತದೆ. ಆದರೂ ಕಳೆದ ಮೂರು ವರ್ಷಗಳಿಂದ ಹಣಕಾಸಿನ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸಿಕೊಂಡು ಬರಲಾಗಿದೆ. ಮುಂದೆಯೂ ಗ್ಯಾರಂಟಿ ಯೋಜನೆಗಳು ಮುಂದುವರಿಯಲಿವೆ ಎಂದು ಸ್ಪಷ್ಟಪಡಿಸಿದರು.

"ಹಣಕಾಸಿನ ಹೊರೆ ಇದ್ದರೂ ಅದನ್ನು ನಿರ್ವಹಿಸಿಕೊಂಡು ಬಂದಿದ್ದೇವೆ. ಮೂರು ವರ್ಷಗಳಿಂದ ಹಣಕಾಸಿನ ವಿಚಾರವನ್ನು ನಿರ್ವಹಣೆ ಮಾಡಿದ್ದೇವೆ. ಮುಂದೆಯೂ ಅದನ್ನು ಸಮರ್ಥವಾಗಿ ನಿರ್ವಹಿಸುತ್ತೇವೆ. ಅವರವರ ವ್ಯಾಪ್ತಿಯಲ್ಲಿ ಕೆಲವರು ಹೇಳಿಕೆ ನೀಡುತ್ತಿದ್ದಾರೆ ಅಷ್ಟೇ" ಎಂದು ಪರಮೇಶ್ವರ್ ಹೇಳಿದರು.

# ಅಪ್ರಾಪ್ತೆ ಮೇಲೆ ಸಾಮೂಹಿಕ ಅತ್ಯಾಚಾರ

ಪ್ರದೇಶದಲ್ಲಿ ಇಂತಹ ಘಟನೆಗಳು ಮರುಕಳಿಸುತ್ತಿರುವ ಬಗ್ಗೆ ನ್ಯಾಯಪೀಠ ಬೇಸರ ವ್ಯಕ್ತಪಡಿಸಿತು. ಸಾರ್ವಜನಿಕ ಸುರಕ್ಷತೆಯ ಭರವಸೆ ಇದ್ದರೂ ಎನ್‌ಸಿಆರ್‌ನಲ್ಲಿ ಲೈಂಗಿಕ ದೌರ್ಜನ್ಯ ಪ್ರಕರಣಗಳು ನಡೆಯುತ್ತಿರುವುದು ಕಳವಳಕಾರಿ ಎಂದು ಹೇಳಿದ ನ್ಯಾಯಾಲಯ, ಹಿಂಸೆಯಿಂದ ಮುಕ್ತವಾಗಿ ಗೌರವಯುತವಾಗಿ ಬದುಕುವ ಹಕ್ಕು ಸಂವಿಧಾನದ 21ನೇ ವಿಧಿಯಡಿ ಮೂಲಭೂತ ಹಕ್ಕಾಗಿದೆ ಎಂದು ತಿಳಿಸಿತು.

ನ್ಯಾಯಾಲಯದ ಗಮನ ಸೆಳೆದ ಪ್ರಮುಖ ಪ್ರಕರಣದಲ್ಲಿ 16 ವರ್ಷದ ಬಾಲಕಿ ಆಗಸ್ಟ್ 4ರಂದು ಗ್ರೇಟರ್ ನೋಯ್ಡಾದಿಂದ ನೋಯ್ಡಾಕ್ಕೆ ತೆರಳಲು ಸ್ಲೀಪರ್ ಬಸ್ ಹತ್ತಿದ್ದಳು. ಬಸ್ ಚಲಿಸುತ್ತಿದ್ದ ಸಂದರ್ಭದಲ್ಲೇ ಚಾಲಕ ಮತ್ತು ನಿರ್ವಾಹಕರು ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಲಾಗಿದೆ.

ಬಳಿಕ ಬಾಲಕಿಯನ್ನು ಹಳೆಯ ದೆಹಲಿಯ ಕಾಶ್ಮೀರಿ ಗೇಟ್ ಪ್ರದೇಶದ ಬಳಿ ಬಿಟ್ಟು ಹೋಗಲಾಗಿತ್ತು. ಆಕೆ ಬಸ್ ಹತ್ತಿದ ಸ್ಥಳದಿಂದ ಸುಮಾರು 40 ಕಿ.ಮೀ. ದೂರದಲ್ಲಿ ಆಕೆಯನ್ನು ಇಳಿಸಲಾಗಿತ್ತು ಎಂದು ವರದಿಯಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಚಾಲಕ ಮತ್ತು ನಿರ್ವಾಹಕರನ್ನು ಪೊಲೀಸರು ಬಂಧಿಸಿದ್ದಾರೆ.

ಪ್ರಕರಣದ ತನಿಖೆ ವೇಳೆ ಖಾಸಗಿ ಸ್ಲೀಪರ್ ಬಸ್‌ನ ಸುರಕ್ಷತಾ ವ್ಯವಸ್ಥೆಗಳ ಬಗ್ಗೆಯೂ ಪ್ರಶ್ನೆಗಳು ಎದ್ದಿವೆ. ಬಸ್‌ನ ಸಿಸಿಟಿವಿ ವ್ಯವಸ್ಥೆ ಕಾರ್ಯನಿರ್ವಹಿಸುತ್ತಿರಲಿಲ್ಲ ಹಾಗೂ ವಾಹನಕ್ಕೆ ಕೆಲವು ಸಂಚಾರ ನಿಯಮ ಉಲ್ಲಂಘನೆಗಳ ಬಾಕಿ ದಂಡಗಳಿದ್ದವು ಎಂದು ತನಿಖಾ ವರದಿಗಳು ತಿಳಿಸಿವೆ.

ಚಾಲಕ ಮತ್ತು ನಿರ್ವಾಹಕರ ನೇಮಕಾತಿ ಹಾಗೂ ಅವರ ಹಿನ್ನೆಲೆ ಪರಿಶೀಲನೆ ಹೇಗೆ ನಡೆದಿದೆ ಎಂಬ ಬಗ್ಗೆಯೂ ಬಸ್ ನಿರ್ವಹಣಾ ಸಂಸ್ಥೆಯವರನ್ನು ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ. ಬಸ್‌ನಿಂದ ವಿಧಿವಿಜ್ಞಾನ ಸಾಕ್ಷ್ಯಗಳನ್ನು ಸಂಗ್ರಹಿಸಲಾಗಿದ್ದು, ಪ್ರಕರಣದ ಮುಂದಿನ ಕಾನೂನು ಪ್ರಕ್ರಿಯೆಗೆ ಅಗತ್ಯವಾದ ಸಾಕ್ಷ್ಯಗಳನ್ನು ಪರಿಶೀಲಿಸಲಾಗುತ್ತಿದೆ.

ಈ ಪ್ರಕರಣದ ಕುರಿತು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗವೂ ಈ ಹಿಂದೆ ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡು, ದೆಹಲಿ ಹಾಗೂ ಗೌತಮ್ ಬುದ್ಧ ನಗರ ಪೊಲೀಸ್ ಆಯುಕ್ತರಿಂದ ತನಿಖೆಯ ಪ್ರಗತಿ ಮತ್ತು ಸಂತ್ರಸ್ತೆಗೆ ನೀಡಿರುವ ಪರಿಹಾರದ ಕುರಿತು ವರದಿ ಕೇಳಿತ್ತು.

# ಪ್ರದೋಷ್ ಮಾಫಿ ಸಾಕ್ಷಿ

ಬಳಿಕ ಬಾಗಿಲು ಮುಚ್ಚಿ ವಿಚಾರಣೆ ಮುಂದುವರಿಸಲಾಯಿತು.

**ದರ್ಶನ್ ಪರಿಚಯದ ಬಗ್ಗೆ ಹೇಳಿಕೆ:**

2003ರಲ್ಲಿ ಕ್ರಿಕೆಟ್ ಆಡಲು ಹೋಗುತ್ತಿದ್ದ ಸಂದರ್ಭದಲ್ಲಿ ದರ್ಶನ್ ಅವರ ಪರಿಚಯವಾಯಿತು. ಕಾಲಕ್ರಮೇಣ ಇಬ್ಬರೂ ಆತ್ಮೀಯ ಸ್ನೇಹಿತರಾದರು ಎಂದು ಪ್ರದೋಷ್ ಹೇಳಿಕೆ ನೀಡಿದ್ದಾರೆ.

ಕಾರ್ಪೊರೇಟ್ ಕಂಪನಿಯಲ್ಲಿ ಕೆಲಸ ಮಾಡುತ್ತಿರುವುದರಿಂದ ಶನಿವಾರ ಮತ್ತು ಭಾನುವಾರ ರಜೆ ಇರುತ್ತದೆ. ಈ ವೇಳೆ ದರ್ಶನ್ ಅವರನ್ನು ಭೇಟಿಯಾಗುತ್ತಿದ್ದೆ. ಕಾರ್ಯಕ್ರಮಗಳಿದ್ದಾಗ ಅವರ ಮನೆಗೂ ಹೋಗುತ್ತಿದ್ದೆ ಎಂದು ಅವರು ತಿಳಿಸಿದ್ದಾರೆ.

2024ರ ಜೂನ್ 8ರಂದು ಶನಿವಾರ ರಜೆ ಇದ್ದ ಕಾರಣ ಗಿರಿನಗರದ ಮನೆಯಿಂದ ಬೈಕ್‌ನಲ್ಲಿ ದರ್ಶನ್ ಅವರ ಐಡಿಯಲ್ ಹೋಮ್ಸ್‌ನ ಮನೆಗೆ ತೆರಳಿದ್ದೆ. ಆಗ ದರ್ಶನ್ ಜಿಮ್‌ನಲ್ಲಿ ವರ್ಕೌಟ್ ಮಾಡುತ್ತಿದ್ದರು. ಅವರ ತರಬೇತುದಾರ ಹೇಮಂತ್ ಕೂಡ ಅಲ್ಲಿದ್ದರು ಎಂದು ಪ್ರದೋಷ್ ಹೇಳಿದ್ದಾರೆ.

ದರ್ಶನ್ ಅವರನ್ನು ಭೇಟಿಯಾಗಿ ಕುಶಲೋಪರಿ ವಿಚಾರಿಸಿದ ಬಳಿಕ ಅವರ ಶೂಟಿಂಗ್ ಬಗ್ಗೆ ಸುಮಾರು 15 ನಿಮಿಷ ಮಾತನಾಡಿದ್ದೆ. ಮಗಳನ್ನು ಸ್ವಿಮ್ಮಿಂಗ್‌ಗೆ ಕರೆದುಕೊಂಡು ಹೋಗಬೇಕಿರುವುದರಿಂದ ಮನೆಗೆ ತೆರಳುವುದಾಗಿ ತಿಳಿಸಿದ್ದೆ. ಆದರೆ, ಮಧ್ಯಾಹ್ನ ವಿನಯ್ ಅವರ ಸ್ಟೋನಿ ಬ್ರೂಕ್‌ನಲ್ಲಿ ಸಣ್ಣ ಪಾರ್ಟಿ ಇದೆ, ಬರುವಂತೆ ದರ್ಶನ್ ಒತ್ತಾಯಿಸಿದರು ಎಂದು ಹೇಳಿದ್ದಾರೆ.

**ಸ್ಟೋನಿ ಬ್ರೂಕ್‌ಗೆ ತೆರಳಿದ ತಂಡ :**

ನಾನು ಸುಸ್ತಾಗಿದ್ದೇನೆ, ಬರಲು ಸಾಧ್ಯವಿಲ್ಲ ಎಂದು ಹೇಳಿದರೂ ದರ್ಶನ್ ಒತ್ತಾಯಿಸಿದ ಹಿನ್ನೆಲೆಯಲ್ಲಿ ಪಾರ್ಟಿಗೆ ತೆರಳಲು ಒಪ್ಪಿಕೊಂಡೆ. ನಂತರ ಮನೆಗೆ ತೆರಳಿ ಬಟ್ಟೆ ಬದಲಿಸಿಕೊಂಡು ಸ್ಕಾರ್ಪಿಯೋ ಕಾರಿನಲ್ಲಿ ದರ್ಶನ್ ಅವರ ಮನೆಗೆ ಮಧ್ಯಾಹ್ನ ಸುಮಾರು 12.30ಕ್ಕೆ ಬಂದೆ ಎಂದು ಪ್ರದೋಷ್ ಹೇಳಿದ್ದಾರೆ.

ನಟ ದರ್ಶನ್ ಮನೆಯಿಂದ ನಾಗರಾಜ್ ಕೂಡ ಕಾರಿನಲ್ಲಿ ಸೇರಿಕೊಂಡರು. ಅಲ್ಲಿಂದ ಆರ್.ಆರ್.ನಗರದಲ್ಲಿರುವ ವೆಂಕಟೇಶ್ವರ ಸ್ವಾಮಿ ದೇವಸ್ಥಾನಕ್ಕೆ ತೆರಳಿ, ಕಾರಿನಲ್ಲೇ ದರ್ಶನ ಪಡೆದ ಬಳಿಕ ಸ್ಟೋನಿ ಬ್ರೂಕ್ ರೆಸ್ಟೋರೆಂಟ್‌ಗೆ ತೆರಳಿದ್ದೆವು ಎಂದು ತಿಳಿಸಿದ್ದಾರೆ.

ದಾಖಲಿಸಲು ಸೆ.28ರಂದು ನ್ಯಾಯಾಲಯ ದಿನಾಂಕ ನಿಗದಿಪಡಿಸಿತ್ತು. ಇದನ್ನು ತಡೆಯುವಂತೆ ದರ್ಶನ್ ಪರ ವಕೀಲರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಆದರೆ, ಹೈಕೋರ್ಟ್ ಅರ್ಜಿಯನ್ನು ವಜಾಗೊಳಿಸಿತ್ತು.

ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ಕನಿಷ್ಠ 10 ದಿನಗಳ ಕಾಲಾವಕಾಶ ಅಗತ್ಯವಿದೆ. ಹೀಗಾಗಿ, ಪ್ರದೋಷ್ ಅವರ ಹೇಳಿಕೆ ದಾಖಲಿಸುವ ಪ್ರಕ್ರಿಯೆಯನ್ನು ಮಾತ್ರ ಮುಂದೂಡಬೇಕು. ಉಳಿದ ಸಾಕ್ಷಿಗಳ ಹೇಳಿಕೆ ದಾಖಲಿಸಬಹುದು ಎಂದು ದರ್ಶನ್ ಪರ ವಕೀಲರು ಸೆಷನ್ಸ್ ಕೋರ್ಟ್‌ಗೆ ಮನವಿ ಮಾಡಿದ್ದರು.

ಹೈಕೋರ್ಟ್ ಸೂಚಿಸಿರುವ ಏಳು ಸಾಕ್ಷಿಗಳ ಪೈಕಿ ಪ್ರದೋಷ್ ಕೂಡ ಒಬ್ಬರಾಗಿದ್ದು, ಅವರನ್ನು ಏಳನೇ ಸಾಕ್ಷಿಯಾಗಿ ಪರಿಗಣಿಸಿ ಹೇಳಿಕೆ ದಾಖಲಿಸಬೇಕು ಎಂದು ವಕೀಲರು ವಾದಿಸಿದ್ದರು. ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಲು ಸಮಯ ನೀಡುವಂತೆ ಮನವಿ ಮಾಡಲಾಗಿತ್ತು.

ಇದಕ್ಕೆ ಸರ್ಕಾರಿ ಪರ ವಕೀಲ ಸಚಿನ್ ಆಕ್ಷೇಪ ವ್ಯಕ್ತಪಡಿಸಿದರು. ಸೆ.24ರಂದೇ ಪ್ರದೋಷ್ ಅವರಿಗೆ ಸಮನ್ಸ್ ಜಾರಿ ಮಾಡಲಾಗಿದೆ. ಹೈಕೋರ್ಟ್‌ನಲ್ಲಿ ಅರ್ಜಿಯ ವಿಚಾರಣೆ ನಡೆದ ಬಳಿಕವೇ ಸಮನ್ಸ್ ನೀಡಲಾಗಿದೆ. ಅರ್ಜಿಯಲ್ಲಿ ಯಾವುದೇ ಹೊಸ ಮಾಹಿತಿ ಅಥವಾ ಹೊಸ ಅಂಶಗಳಿಲ್ಲ. ಹೀಗಾಗಿ ಅರ್ಜಿಯನ್ನು ಪುರಸ್ಕರಿಸಬಾರದು ಎಂದು ನ್ಯಾಯಾಲಯಕ್ಕೆ ಮನವಿ ಮಾಡಿದರು.

ಎರಡೂ ಕಡೆಯ ವಾದ ಆಲಿಸಿದ ವಿಚಾರಣಾ ನ್ಯಾಯಾಲಯ, ಪ್ರದೋಷ್ ಅವರ ಮಾಫಿ ಸಾಕ್ಷಿ ಹೇಳಿಕೆ ದಾಖಲಿಸುವುದನ್ನು ಮುಂದೂಡಲು ದರ್ಶನ್ ಪರ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದೆ.

ರೆಸ್ಟೋರೆಂಟ್‌ಗೆ ಸುಮಾರು 1.30ರ ವೇಳೆಗೆ ತಲುಪಿದ್ದೆವು. ಅಲ್ಲಿ ಯಶಸ್ ಸೂರ್ಯ ಇದ್ದರು. ಮತ್ತೊಂದು ಸ್ಕಾರ್ಪಿಯೋ ಹಾಗೂ ಫೋರ್ಡ್ ಎಂಡೀವರ್ ಕಾರುಗಳು ನಮ್ಮ ಕಾರನ್ನು ಹಿಂಬಾಲಿಸುತ್ತಿದ್ದವು. ಅವುಗಳಲ್ಲಿ ದರ್ಶನ್ ಅವರ ಪರಿಚಿತರು ಹಾಗೂ ಬಾಡಿಗಾರ್ಡ್ ಇದ್ದರು ಎಂದು ಪ್ರದೋಷ್ ಹೇಳಿದ್ದಾರೆ.

**ದರ್ಶನ್, ಪವಿತ್ರಾ ನಡುವೆ ವೀಡಿಯೊ ಕರೆ :**

ರೆಸ್ಟೋರೆಂಟ್‌ನ ಮೊದಲ ಮಹಡಿಯಲ್ಲಿ ದರ್ಶನ್‌ಗಾಗಿ ವಿಶೇಷವಾಗಿ ಮಾಡಲಾಗಿದ್ದ ಡಿ ಬಾಸ್ ಸಫಾರಿ ಎಂಬ ಸ್ಥಳದಲ್ಲಿ ಎಲ್ಲರೂ ಸೇರಿದ್ದರು. ದರ್ಶನ್, ಯಶಸ್ ಸೂರ್ಯ, ನಾಗರಾಜ್, ವಿನಯ್ ಹಾಗೂ ನಂತರ ಚಿಕ್ಕಣ್ಣ ಕೂಡ ಬಂದಿದ್ದರು. ತಾನು ಮದ್ಯಪಾನ ಮಾಡುವುದಿಲ್ಲದ ಕಾರಣ ಜ್ಯೂಸ್ ತೆಗೆದುಕೊಂಡಿದ್ದೆ ಎಂದು ಪ್ರದೋಷ್ ಹೇಳಿದ್ದಾರೆ.

ಸುಮಾರು ಮಧ್ಯಾಹ್ನ 2.30ರ ವೇಳೆಗೆ ದರ್ಶನ್ ಮನೆಯಲ್ಲಿ ಕೆಲಸ ಮಾಡುತ್ತಿದ್ದ ಪವನ್ ಅಲ್ಲಿಗೆ ಬಂದರು. ದರ್ಶನ್ ಮತ್ತು ವಿನಯ್ ಬಳಿ ತೆರಳಿ ಮೊಬೈಲ್‌ನಲ್ಲಿದ್ದ ಫೋಟೊವೊಂದನ್ನು ತೋರಿಸಿದರು. ಬಳಿಕ ಪವನ್, ಪವಿತ್ರಾ ಗೌಡ ಅವರಿಗೆ ವಾಟ್ಸ್‌ಪ್ ವೀಡಿಯೊ ಕಾಲ್ ಮಾಡಿದರು ಎಂದು ಪ್ರದೋಷ್ ನ್ಯಾಯಾಲಯಕ್ಕೆ ತಿಳಿಸಿದ್ದಾರೆ.

ವೀಡಿಯೊ ಕರೆಯಲ್ಲಿ ದರ್ಶನ್ ಪವಿತ್ರಾ ಗೌಡ ಜೊತೆ ಮಾತನಾಡಿದರು. ನೀನು ಅಳಬೇಡ, ನಾನಿದ್ದೀನಿ ಎಂದು ಹೇಳಿದ್ದಲ್ಲದೆ, ರೆಸ್ಟೋರೆಂಟ್‌ನಿಂದ ಊಟ ಕಳುಹಿಸುವುದಾಗಿ ತಿಳಿಸಿದರು ಎಂದು ಪ್ರದೋಷ್ ಹೇಳಿದ್ದಾರೆ.

ಪವಿತ್ರಾ ಮನೆಗೆ ತೆರಳಿದ ದರ್ಶನ್:

ಊಟ ಮುಗಿಸಿದ ಬಳಿಕ ಎಲ್ಲರೂ ಹೊರಡಲು ಸಿದ್ಧರಾದಾಗ, ದರ್ಶನ್, ತಮಗೂ ವಿನಯ್‌ಗೂ ಸ್ವಲ್ಪ ಕೆಲಸವಿದೆ ಎಂದು ಹೇಳಿದ್ದರು. ಬಳಿಕ ಪ್ರದೋಷ್ ಅವರ ಕಾರಿನಲ್ಲಿ ತೆರಳಲು ದರ್ಶನ್ ಸೂಚಿಸಿದರು.

ವಿಷ್ಣುವರ್ಧನ್ ಸಮಾಧಿ ರಸ್ತೆಯಲ್ಲಿ ಸಾಗುತ್ತಿದ್ದಾಗ ಬಾಡಿಗಾರ್ಡ್‌ನ್ನು ಅವರ ಮನೆಗೆ ತೆರಳುವಂತೆ ದರ್ಶನ್ ಸೂಚಿಸಿದರು. ನಂತರ ಎಲ್ಲಿಗೆ ಹೋಗಬೇಕು ಎಂದು ಕೇಳಿದಾಗ ಪವಿತ್ರಾ ಗೌಡ ಮನೆಗೆ ತೆರಳಬೇಕು ಎಂದು ದರ್ಶನ್ ತಿಳಿಸಿದರು ಎಂದು ಪ್ರದೋಷ್ ಹೇಳಿದ್ದಾರೆ.

ಮಧ್ಯಾಹ್ನ ಸುಮಾರು 3ರಿಂದ 4 ಗಂಟೆಯ ವೇಳೆಗೆ ಪವಿತ್ರಾಗೌಡ ಮನೆಗೆ ತೆರಳಿದ್ದೆವು. ಪವಿತ್ರಾ ಗೌಡ ಕಾರಿನ ಬಳಿಗೆ ಬಂದ ಬಳಿಕ ದರ್ಶನ್ ಮತ್ತು ಪವಿತ್ರಾ ಗೌಡ ಹಿಂದಿನ ಸೀಟ್‌ನಲ್ಲಿ ಕುಳಿತುಕೊಂಡರು ಎಂದು ಪ್ರದೋಷ್ ನ್ಯಾಯಾಲಯದಲ್ಲಿ ಹೇಳಿಕೆ ನೀಡಿದ್ದಾರೆ.

# ಮುಡಾ ಅಕ್ರಮ ನಿವೇಶನ

ಮಾವುತರು, ಕಾವಾಡಿಗಳ ಉಪಹಾರ ಕೂಟಕ್ಕೆ ತಡವಾಗಿ ಬಂದಿದ್ದಕ್ಕೆ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಸ್ಪಷ್ಟನೆ ನೀಡಿದ್ದಾರೆ.

ಮೈಸೂರಿನಲ್ಲಿ ನಮ್ಮದು ಹೊಸ ಮನೆ. ಮನೆಯ ವಸ್ತುಗಳು ಎಲ್ಲೆಡೆ ಚೆಲ್ಲಾಪಿಲ್ಲಿಯಾಗಿವೆ. ಮನೆಯಲ್ಲಿ ತಾಯಿ ಇರಲಿಲ್ಲ, ಯಾವುದೇ ಕೆಲಸಗಾರರು ಇರಲಿಲ್ಲ. ಹೀಗಾಗಿ ಕೆಲವು ವ್ಯವಸ್ಥೆಗಳನ್ನು ಮಾಡಿಕೊಂಡು ಬರುವಲ್ಲಿ ತಡವಾಯಿತು. ಉದ್ದೇಶಪೂರ್ವಕವಾಗಿ ತಡವಾಗಿ ಬಂದಿಲ್ಲ ಎಂದು ಅವರು ಹೇಳಿದರು.

ಈ ವಿಚಾರವಾಗಿ ಶಾಸಕ ತನ್ವೀರ್ ಸೇಠ್ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿದ್ದೇನೆ ಎಂದು ಸಚಿವ ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

# ಬಿಜೆಪಿಯದ್ದು ಕಪಟ ನಾಟಕ

ಶೀಘ್ರದಲ್ಲೇ ದಿನಾಂಕ ನಿಗದಿಪಡಿಸಲಾಗುವುದು. ಈ ಹಿನ್ನೆಲೆಯಲ್ಲಿ ಸಭೆಯ ದಿನಾಂಕ ನಿಗದಿಪಡಿಸುತ್ತೇನೆ. ಇದೇ ವೇಳೆ ಕೆಲವು ಕೇಂದ್ರ ಸಚಿವರನ್ನು ಭೇಟಿಯಾಗಲಿದ್ದು, ಎಸ್ ಐಆರ್ ಹಾಗೂ ಮುಖ್ಯ ಚುನಾವಣಾ ಆಯುಕ್ತರ ವಿಚಾರದ ಬಗ್ಗೆ ನಡೆಯುತ್ತಿರುವ ಸಿಡಬ್ಲ್ಯೂಸಿ ಸಭೆಯಲ್ಲಿ ಭಾಗವಹಿಸಲಾಗುವುದು. ಚರ್ಚೆ ನಡೆಸಬೇಕಿದೆ" ಎಂದು ಹೇಳಿದರು.

"ಕಸ್ತೂರಿರಂಗನ್ ವರದಿ ವಿಚಾರವಾಗಿಯೂ ಕೇಂದ್ರದ ಮಟ್ಟದಲ್ಲಿ ಚರ್ಚೆ ನಡೆಸಲಾಗುತ್ತದೆ. ಕಸ್ತೂರಿರಂಗನ್ ವಿಚಾರದಲ್ಲಿ ಕೇಂದ್ರ ಸಚಿವರ, ಪ್ರಧಾನಮಂತ್ರಿಯವರ ಭೇಟಿಗೆ ಸಮಯ ಕೇಳುತ್ತೇನೆ. ಸಮಯ ಪಡೆದು, ರಾಜ್ಯದ ಪರವಾಗಿ ಅಗತ್ಯವಿರುವ ಮನವಿಯನ್ನು ಸಲ್ಲಿಸುವ ಕೆಲಸ ಮಾಡುತ್ತೇನೆ" ಎಂದು ಹೇಳಿದರು.

# ಕೆಪಿಎಸ್‌ಸಿ ಅಕ್ರಮ

ಎಂಬ ಉಲ್ಲೇಖವೂ ಡೈರಿಯಲ್ಲಿ ಕಂಡುಬಂದಿದೆ ಎಂದು ತಿಳಿದುಬಂದಿದೆ.

**20ಕ್ಕೂ ಅಧಿಕ ಅಭ್ಯರ್ಥಿಗಳಿಗೆ ತರಬೇತಿ**

ಸುಮಾರು 20ಕ್ಕೂ ಅಧಿಕ ಅಭ್ಯರ್ಥಿಗಳಿಗೆ ತರಬೇತಿ ನೀಡಲು ಮೂರು ವಿಲ್ಲಾಗಳನ್ನು ಬುಕ್ ಮಾಡಲಾಗಿತ್ತು ಎಂಬ ಮಾಹಿತಿಯೂ ತನಿಖೆಯಲ್ಲಿ ಲಭ್ಯವಾಗಿದೆ. ಅಭ್ಯರ್ಥಿಗಳಿಂದ ಸ್ವೀಕರಿಸಿದ ಹಣ ಹಾಗೂ ಬಾಕಿ ಉಳಿದ ಮೊತ್ತದ ಲೆಕ್ಕವನ್ನು ಆರೋಪಿ ದಾಖಲಿಸಿಕೊಂಡಿದ್ದಾನೆ ಎಂದು ತನಿಖಾ ಮೂಲಗಳು ತಿಳಿಸಿವೆ.

ಪತ್ತೆಯಾಗಿರುವ ಡೈರಿ ಹಾಗೂ ಅದರಲ್ಲಿನ ಹಣಕಾಸಿನ ವಿವರಗಳನ್ನು ತನಿಖಾಧಿಕಾರಿಗಳು ಪರಿಶೀಲಿಸುತ್ತಿದ್ದು, ಹೆಸರುಗಳು ಮತ್ತು ಹಣದ ವ್ಯವಹಾರಗಳಿಗೆ ಸಂಬಂಧಿಸಿದಂತೆ ಹೆಚ್ಚಿನ ವಿಚಾರಣೆ ನಡೆಯುತ್ತಿದೆ. ಡೈರಿಯಲ್ಲಿ ಉಲ್ಲೇಖವಾಗಿರುವ ವ್ಯಕ್ತಿಗಳ ಪಾತ್ರದ ಕುರಿತು ತನಿಖೆ ಪೂರ್ಣಗೊಂಡ ಬಳಿಕವೇ ಹೆಚ್ಚಿನ ಸ್ಪಷ್ಟತೆ ಸಿಗಲಿದೆ.

# ನಿರಂತರ ಹೋರಾಟ: ಎಚ್‌ಡಿಕೆ

ನಾವು ಸದಾ ರೈತರ ಜೊತೆ ಇರುತ್ತೇವೆ. ನೈಸ್ ಯೋಜನೆಯ ಅಕ್ರಮ ಮತ್ತು ಬಿಡದಿ ಟೌನ್ ಶಿಪ್ ವಿರುದ್ಧದ ನಮ್ಮ ಹೋರಾಟ ಮುಂದುವರಿಯಲಿದೆ. ನಾವು ರೂಪಿಸಿದ ಯೋಜನೆಗಳನ್ನು ತಮ್ಮದೆಂದು ಹೇಳಿಕೊಂಡು ಈಗಿನ ಸರ್ಕಾರ ಹಣ ಮಾಡಲು ಹೊರಟಿದೆ ಎಂದು ಆರೋಪಿಸಿದರು.

ರೈತರು ಸಂಕಷ್ಟದಲ್ಲಿರುವಾಗಲೇ ರಾಜ್ಯ ಸರ್ಕಾರ ಹಾಲಿನ ದರ ಹೆಚ್ಚಳ ಮಾಡಿದೆ. ಮುಂದಿನ ದಿನಗಳಲ್ಲಿ ಈ ಸರ್ಕಾರದ ದುರಾಡಳಿತದ ವಿರುದ್ಧ ನಿರಂತರ ಹೋರಾಟ ನಡೆಸಲಾಗುವುದು ಎಂದು ಕುಮಾರಸ್ವಾಮಿ ಎಚ್ಚರಿಸಿದರು.

# ನಕಲಿ ಔಷಧ ಕಿಂಗ್‌ಪಿನ್ ಸೆರೆ

ನಕಲಿ ಔಷಧ ದಂಧೆ ಬೆಳಕಿಗೆ ಬಂದಿತ್ತು. ತನಿಖೆ ವಿಸ್ತರಿಸಿದಂತೆ ನಕಲಿ ಔಷಧಗಳ ಉತ್ಪಾದನೆ, ಪೂರೈಕೆ ಹಾಗೂ ಆಸ್ಪತ್ರೆ ಮತ್ತು ಮೆಡಿಕಲ್‌ಗಳಿಗೆ ವಿತರಿಸುವ ದೊಡ್ಡ ಜಾಲದ ಮಾಹಿತಿ ಹೊರಬಂದಿದೆ.

ತನಿಖೆ ರಾಜ್ಯದ ಗಡಿ ದಾಟಿದ್ದು, ಹಲವು ರಾಜ್ಯಗಳಲ್ಲಿ ದಾಳಿ ನಡೆಸಲಾಗಿದೆ. ನಕಲಿ ಔಷಧ ಜಾಲಕ್ಕೆ ಅಂತರರಾಜ್ಯ ಹಾಗೂ ಅಂತಾರಾಷ್ಟ್ರೀಯ ಸಂಪರ್ಕಗಳಿರುವ ಬಗ್ಗೆಯೂ ತನಿಖಾಧಿಕಾರಿಗಳಿಗೆ ಮಾಹಿತಿ ಲಭ್ಯವಾಗಿದೆ. ಟರ್ಕಿಯಿಂದ ನಕಲಿ ಲೇಬಲ್‌ಗಳನ್ನು ತರಿಸಿ ಔಷಧ ಪೂರೈಕೆಗೆ ಬಳಸಲಾಗುತ್ತಿತ್ತು ಎಂಬ ಮಾಹಿತಿಯೂ ತನಿಖೆಯಲ್ಲಿ ಬಯಲಾಗಿದೆ.

**ತೀವ್ರಗೊಂಡ ತನಿಖೆ:**

ಪ್ರಶಾಂತ್ ರಂಜನ್ ಬಾಬು ಬಂಧನದ ಬೆನ್ನಲ್ಲೇ ಜಾಲದ ಕಾರ್ಯವೈಖರಿ, ಹಣಕಾಸು ವ್ಯವಹಾರ, ಔಷಧಗಳ ಉತ್ಪಾದನೆ ಮತ್ತು ಇತರ ಆರೋಪಿಗಳೊಂದಿಗಿನ ಸಂಪರ್ಕದ ಕುರಿತು ತನಿಖೆ ಮತ್ತಷ್ಟು ಚುರುಕುಗೊಳ್ಳುವ ನಿರೀಕ್ಷೆಯಿದೆ.

**ಫಾರ್ಮ್‌ಹೌಸ್ ದಾಳಿ**

ದೊಡ್ಡರಿ ಫಾರ್ಮ್‌ಹೌಸ್‌ನಲ್ಲಿ ಕಳೆದ ಆ.18ರಂದು ತಾವರೆಕೆರೆ ಠಾಣೆ ಪೊಲೀಸರು ಹಾಗೂ ಔಷಧ ನಿಯಂತ್ರಣ ಇಲಾಖೆ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದಾಗ ಸುಮಾರು 5 ಕೋಟಿ ಮೌಲ್ಯದ ನಕಲಿ ಮತ್ತು ಅವಧಿ ಮೀರಿದ ಔಷಧಿಗಳ ಸಂಗ್ರಹ ಪತ್ತೆಯಾಗಿತ್ತು.

ಪ್ರಕರಣದ ವ್ಯಾಪ್ತಿ ಕರ್ನಾಟಕಕ್ಕೆ ಮಾತ್ರ ಸೀಮಿತವಾಗಿರದೆ ಹಲವು ರಾಜ್ಯಗಳಿಗೆ ವಿಸ್ತರಿಸಿರುವ ಶಂಕೆ ವ್ಯಕ್ತವಾಗಿತ್ತು. ಇದನ್ನು ಗಂಭೀರವಾಗಿ ಪರಿಗಣಿಸಿದ ಸರ್ಕಾರವು ಪೊಲೀಸ್ ಅಧಿಕಾರಿಗಳು ಮತ್ತು ಔಷಧ ನಿಯಂತ್ರಣ ಇಲಾಖೆಯ ಅಧಿಕಾರಿಗಳನ್ನು ಒಳಗೊಂಡ ವಿಶೇಷ ತನಿಖಾ ತಂಡವನ್ನು ಜಂಟಿ ಪೊಲೀಸ್ ಆಯುಕ್ತ ಸಿ.ವಂಶಿಕೃಷ್ಣ ನೇತೃತ್ವದಲ್ಲಿ ರಚಿಸಿತ್ತು.

12 ಕೋಟಿ ಔಷಧಿ ಪೂರೈಕೆ:

ತನಿಖೆ ಮತ್ತಷ್ಟು ವಿಸ್ತರಿಸಿದಂತೆ, 2025ರ ಫೆಬ್ರವರಿಯಿಂದ ನಗರದ ಆಸ್ಪತ್ರೆಗಳು ಹಾಗೂ ಕರ್ನಾಟಕದ ಇತರ ಭಾಗಗಳಿಗೆ ಸುಮಾರು 12 ಕೋಟಿ ಮೌಲ್ಯದ ಶಂಕಿತ ನಕಲಿ ಔಷಧಿಗಳನ್ನು ಪೂರೈಸಿರುವ ಆರೋಪದ ಬಗ್ಗೆ ಎಸ್‌ಐಟಿ ತನಿಖೆ ನಡೆಸುತ್ತಿದೆ.

ವಿಶೇಷವಾಗಿ ಪ್ರತಿಷ್ಠಿತ ಔಷಧ ಕಂಪನಿಗಳ ಹೆಸರನ್ನು ಬಳಸಿ ನಕಲಿ ಔಷಧಿಗಳನ್ನು ಮಾರುಕಟ್ಟೆಗೆ ತಳ್ಳಲಾಗಿದೆಯೇ ಎಂಬ ಅಂಶವೂ ತನಿಖೆಯಲ್ಲಿದೆ. ವಶಪಡಿಸಿಕೊಂಡ ಔಷಧಿಗಳ ಮಾದರಿಗಳನ್ನು ಪ್ರಯೋಗಾಲಯ ಪರೀಕ್ಷೆಗೆ ಕಳುಹಿಸಲಾಗಿದ್ದು, ಅವುಗಳ ರಾಸಾಯನಿಕ ಸಂಯೋಜನೆ, ಗುಣಮಟ್ಟ ಹಾಗೂ ನಿಜವಾದ ಔಷಧಿಗಳೊಂದಿಗೆ ಇರುವ ವ್ಯತ್ಯಾಸವನ್ನು ಪರಿಶೀಲಿಸಲಾಗುತ್ತಿದೆ.

# ಕನಕಪುರದಲ್ಲಿ ರೈತ ಸ್ವಾಭಿಮಾನ ಯಾತ್ರೆ

ಬೆಂಗಳೂರು,ಸೆ.28-ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರು ಕ್ಷೇತ್ರ ಕನಕಪುರದಲ್ಲಿ ಜೆಡಿಎಸ್‌ನ ರೈತ ಸ್ವಾಭಿಮಾನ ಯಾತ್ರೆ ಆರಂಗೊಂಡಿದೆ.

ರೈತ ಸ್ವಾಭಿಮಾನ ಯಾತ್ರೆ ಆರಂಭಕ್ಕೂ ಮುನ್ನ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಕನಕಪುರದ ಶಿವ ಪಾರ್ವತಿ ದೇವಸ್ಥಾನಕ್ಕೆ ಭೇಟಿ ನೀಡಿ, ಶಿವನಿಗೆ ವಿಶೇಷ ಪೂಜೆ ಸಲ್ಲಿಸಿ ಪಾದಯಾತ್ರೆಗೆ ಚಾಲನೆ ನೀಡಿದರು.

ಕನಕಪುರ ಶಿವನಂದ ನಗರದ ರೈಸ್ ಮಿಲ್ ಸರ್ಕಲ್‌ನಿಂದ ಚೆನ್ನಬಸಪ್ಪ ಸರ್ಕಲ್ ವರೆಗೆ ಪಾದಯಾತ್ರೆ ನಡೆಸಲಾಯಿತು. ಪಾದಯಾತ್ರೆಯಲ್ಲಿ ಸಹಸ್ರಾರು ಸಂಖ್ಯೆಯಲ್ಲಿ ರೈತರು, ಪಕ್ಷದ ಮಾಜಿ ಶಾಸಕರು, ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಅನ್ನದಾತರು ಉಪಸ್ಥಿತರಿದ್ದರು.

# ರಾಜ್ಯದ ಹಲವೆಡೆ ಮಳೆ ನಿರೀಕ್ಷೆ




ಬೆಂಗಳೂರು,ಸೆ.28-ಕರ್ನಾಟಕದಲ್ಲಿ ನೈಋತ್ಯ ಮುಂಗಾರು ಚಟುವಟಿಕೆಗಳು ಕ್ಷೀಣಿಸಿರುವುದರಿಂದ ರಾಜ್ಯದ ಬಹುತೇಕ ಭಾಗಗಳಲ್ಲಿ ಹಗಲಿನ ವೇಳೆ ಬಿಸಿಲಿನ ವಾತಾವರಣ ಮುಂದುವರಿದಿದೆ. ಆದಾಗ್ಯೂ, ವಾತಾವರಣದಲ್ಲಾಗುತ್ತಿರುವ ಸ್ಥಳೀಯ ಬದಲಾವಣೆಗಳಿಂದಾಗಿ ಮಧ್ಯಾಹ್ನದ ನಂತರ ಹಲವು ಜಿಲ್ಲೆಗಳಲ್ಲಿ ಮೋಡ ಕವಿದು ಗುಡುಗು, ಮಿಂಚು ಹಾಗೂ ಬಿರುಗಾಳಿ ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ವಿಶೇಷವಾಗಿ ಸೆಪ್ಟೆಂಬರ್ 28 ಮತ್ತು 29ರಂದು ದಕ್ಷಿಣ ಒಳನಾಡಿನ ವಿವಿಧ ಪ್ರದೇಶಗಳಲ್ಲಿ ಮಳೆಯ ಆರ್ಭಟ ಕೊಂಚ ಹೆಚ್ಚಾಗಲಿದ್ದು, ಗಂಟೆಗೆ 30 ರಿಂದ 40 ಕಿ.ಮೀ. ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಯಿದೆ.

ಸೆಪ್ಟೆಂಬರ್ 28ರಂದು ಕರಾವಳಿಯ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಲಿದ್ದು, ಉತ್ತರ ಕನ್ನಡದಲ್ಲಿ ಹಗುರ ಮಳೆಯಾಗುವ ನಿರೀಕ್ಷೆಯಿದೆ. ಉತ್ತರ ಒಳನಾಡಿನ ವಿಜಯಪುರ, ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ ಒಂದೆ-ರಡು ಕಡೆಗಳಲ್ಲಿ ಗುಡುಗು ಸಹಿತ ಮಳೆಯಾಗಬಹುದು. ಇದೇ ವೇಳೆ ದಕ್ಷಿಣ ಒಳನಾಡಿನ ಮೈಸೂರು, ಚಾಮರಾಜನಗರ ಹಾಗೂ ಕೊಡಗು ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆಯಿದ್ದು, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಮಂಡ್ಯ, ರಾಮನಗರ, ಹಾಸನ, ಶಿವಮೊಗ್ಗ, ಚಿಕ್ಕಮಗಳೂರು, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಹಲವೆಡೆ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ಸೆಪ್ಟೆಂಬರ್ 29ರಂದು ಮಳೆಯ ವ್ಯಾಪ್ತಿ ಇನ್ನಷ್ಟು ವಿಸ್ತರಿಸಲಿದ್ದು, ಕರಾವಳಿಯ ಮೂರೂ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ. ಉತ್ತರ ಒಳನಾಡಿನ ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಿರುಗಾಳಿ ಹಾಗೂ ಗುಡುಗು-ಮಿಂಚಿನೊಂದಿಗೆ ಮಳೆ ಬೀಳುವ ಸಾಧ್ಯತೆಯಿದೆ. ದಕ್ಷಿಣ ಒಳನಾಡಿನ ಹಾಸನ, ಚಿಕ್ಕಮಗಳೂರು, ತುಮಕೂರು, ಶಿವಮೊಗ್ಗ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಮಂಡ್ಯ, ರಾಮನಗರ ಮತ್ತು ಕೊಡಗು ಜಿಲ್ಲೆಗಳ ಕೆಲವೆಡೆ ಭಾರಿ ಮಳೆಯಾಗಲಿದ್ದು, ಮೈಸೂರು, ಚಾಮರಾಜನಗರ ಸೇರಿದಂತೆ ಉಳಿದ ಜಿಲ್ಲೆಗಳಲ್ಲಿ ಸಾಧಾರಣ ಮಳೆ ನಿರೀಕ್ಷಿಸಲಾಗಿದೆ. ಪ್ರಸ್ತುತ ಮುಂಗಾರು ದುರ್ಬಲವಾಗಿದ್ದರೂ ಮಧ್ಯಾಹ್ನದ ನಂತರ ಸ್ಥಳೀಯವಾಗಿ ಮೋಡಗಳು ಆವರಿಸುವುದರಿಂದ ಜಿಲ್ಲೆಯಿಂದ ಜಿಲ್ಲೆಗೆ ಹವಾಮಾನದಲ್ಲಿ ಏರಿಳಿತ ಕಂಡುಬರಲಿದೆ.

# ಉ. ಪ್ರದೇಶದಲ್ಲಿ ಭಾರೀ ಮಳೆ 56 ಮಂದಿ ಸಾವು

**ಲಖನೌ, ಸೆ. 28-** ಉತ್ತರ ಪ್ರದೇಶದಲ್ಲಿ ಭಾರಿ ಮಳೆ ಮತ್ತು ಬಿರುಗಾಳಿಯಿಂದಾಗಿ ಕಳೆದ 48 ಗಂಟೆಗಳಲ್ಲಿ 56 ಮಂದಿ ಮೃತಪಟ್ಟಿದ್ದು, 46 ಮಂದಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಾಜ್ಯದಲ್ಲಿ ಇದುವರೆಗೆ 97.6 ಮಿ.ಮೀ. ಮಳೆಯಾಗಿದ್ದು, ಈ ಅವಧಿಯ ಸಾಮಾನ್ಯ ಸರಾಸರಿ ಮಳೆ ಕೇವಲ 4.5 ಮಿ.ಮೀ. ಆಗಿದೆ. ರಾಜ್ಯದ 75 ಜಿಲ್ಲೆಗಳ ಪೈಕಿ 56 ಜಿಲ್ಲೆಗಳಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆಯಾಗಿದೆ.

ಮಳೆಯಿಂದಾಗಿ 1,020ಕ್ಕೂ ಹೆಚ್ಚು ಮನೆಗಳು ಹಾನಿಗೊಳಗಾಗಿದ್ದು, 107 ಪ್ರಾಣಿಗಳು ಮೃತಪಟ್ಟಿವೆ ಎಂದು ಪರಿಹಾರ ಆಯುಕ್ತ ಹೃಷಿಕೇಶ್ ಭಾಸ್ಕರ್ ಯಶೋದ್ ತಿಳಿಸಿದ್ದಾರೆ. ಇನ್ನೂ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿರುವುದರಿಂದ ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಅವರು ಹೇಳಿದ್ದಾರೆ.

48 ಗಂಟೆಗಳಿಗೂ ಹೆಚ್ಚು ಕಾಲ ಮುಂದುವರಿದ ಪ್ರತಿಕೂಲ ಹವಾಮಾನ ಪರಿಸ್ಥಿತಿ ಇದೀಗ ಸ್ವಲ್ಪ ಮಟ್ಟಿಗೆ ತಗ್ಗಿದ್ದು, ಮುಖ್ಯವಾಗಿ ತೇರಾಯಿ ಪ್ರದೇಶದಲ್ಲಿ ಮುಂದುವರಿದಿದೆ. ಈ ಭಾಗದಲ್ಲಿ ಭಾರಿ ಇಂ ಅತಿ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

**ಒಡಿಶಾದಲ್ಲಿ ಪ್ರವಾಹ ಭೀತಿ**

ಇದೇ ವೇಳೆ, ಒಡಿಶಾದ ಹಲವು ತಗ್ಗು ಪ್ರದೇಶಗಳಲ್ಲಿ ಪ್ರವಾಹದ ಆತಂಕ ಎದುರಾಗಿದೆ. ಮಹಾನದಿ ನದಿ ವ್ಯವಸ್ಥೆಯ ಮೂಲಕ ಮುಂಡಲಿಯಲ್ಲಿ ಸೋಮವಾರದ ವೇಳೆಗೆ 8 ಲಕ್ಷ ಕ್ಯೂಸೆಕ್‌ವರೆಗೆ ನೀರು ಹರಿಯುವ ಸಾಧ್ಯತೆಯಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಒಡಿಶಾ ಜಲಸಂಪನ್ಮೂಲ ಇಲಾಖೆಯ ಮುಖ್ಯ ಎಂಜಿನಿಯರ್ ದಿಲೀಪ್ ಕುಮಾರ್ ರೌತ್ ಅವರ ಪ್ರಕಾರ, ಭಾನುವಾರ ರಾತ್ರಿ ವೇಳೆಗೆ ಮುಂಡಲಿ ಮೂಲಕ ಸುಮಾರು 7 ಲಕ್ಷ ಕ್ಯೂಸೆಕ್ ನೀರು ಹರಿಯುವ ನಿರೀಕ್ಷೆಯಿದ್ದು, ಇಂದು ಬೆಳಗ್ಗೆ 10 ಗಂಟೆಯ ವೇಳೆಗೆ ಇದು 8 ಲಕ್ಷ ಕ್ಯೂಸೆಕ್‌ಗೆ ಏರಿಕೆಯಾಗಬಹುದು.

ನೀರಿನ ಮಟ್ಟ ಏರಿಕೆಯಿಂದ ಖೋರ್ಧಾ, ಕಟಕ್, ಪುರಿ ಮತ್ತು ಜಗತ್‌ಸಿಂಗ್‌ಪುರ ಜಿಲ್ಲೆಗಳ ತಗ್ಗು ಪ್ರದೇಶಗಳಿಗೆ ಪರಿಣಾಮ ಬೀರುವ ಸಾಧ್ಯತೆಯಿದೆ. ಮಹಾನದಿ ನದಿ ವ್ಯವಸ್ಥೆಯ ಲುನಾ, ಕರಂಡಿಯಾ, ಚಿತ್ರೋತ್ಪಲಾ, ಕಥಜೋಡಿ ಮತ್ತು ಕುವಾಖಾಯಿ ಸೇರಿದಂತೆ ಹಲವು ನದಿಗಳಲ್ಲಿ ಪ್ರವಾಹ ಉಂಟಾಗುವ ಸಾಧ್ಯತೆಯಿದೆ.

ಇದರ ಜತೆಗೆ ದೇವಿ, ಕಂಡಾಲಾ, ಕುಶಭದ್ರಾ, ದಯಾ, ಭಾರ್ಗವಿ, ರಾಜುವಾ ಮತ್ತು ಮಕರಾ ನದಿಗಳಲ್ಲೂ ಪ್ರವಾಹ ಪರಿಸ್ಥಿತಿ ನಿರ್ಮಾಣವಾಗುವ ಸಾಧ್ಯತೆಯಿದೆ. ಇದೇ ವೇಳೆ ಉತ್ತರ ಒಡಿಶಾದ ಹಲವು ಭಾಗಗಳಲ್ಲಿ ಪ್ರವಾಹ ಪರಿಸ್ಥಿತಿ ಮತ್ತಷ್ಟು ಹದಗೆಟ್ಟಿದ್ದು, ಬೈತರಿಣಿ, ಸಾಲಂದಿ ಮತ್ತು ಸುವರ್ಣರೇಖಾ ನದಿಗಳು ಅಪಾಯದ ಮಟ್ಟಕ್ಕಿಂತ ಮೇಲಾಗಿ ಹರಿಯುತ್ತಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.




# ಉಚಿತ ಆಂಬುಲೆನ್ಸ್ ಸೇವೆಗೆ ಚಾಲನೆ

ಕೆ.ಆರ್.ಪುರ,ಸೆ.28-ಮಹದೇವಪುರ ಕ್ಷೇತ್ರದ ಅಯ್ಯಪ್ಪನಗರ ಸಮೀಪದ ಅಲ್ಫಾ ಗಾರ್ಡನ್ ಲೇಔಟ್‌ನಲ್ಲಿ ಗ್ರಾಮಾಂತರ ಮಂಡಲ ಡಬ್ಲ್ಯೂಎ ವತಿಯಿಂದ ಮೆಡಿಕವರ್ ಆಸ್ಪತ್ರೆಯ ಸಹಯೋಗದೊಂದಿಗೆ ನಿವಾಸಿಗಳ ತುರ್ತು ಆರೋಗ್ಯ ಸೇವೆಗಾಗಿ ಉಚಿತ ನೂತನ ಆಂಬುಲೆನ್ಸ್ ಸೇವೆಗೆ ಚಾಲನೆ ನೀಡಲಾಯಿತು ಎಂದು ಶಾಸಕಿ ಮಂಜುಳಾ ಅರವಿಂದ್ ಲಿಂಬಾವಳಿ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಆಂಬುಲೆನ್ಸ್ ಸೇವೆ ಕುರಿತ ಒಪ್ಪಂದ ಕ್ಕೆ ಚಾಲನೆ ನೀಡುವುದರ ಜೊತೆಗೆ ಆಂಬುಲೆನ್ಸ್‌ನ್ನು ಲೋಕಾರ್ಪಣೆ ಮಾಡಲಾಯಿತು.

ತುರ್ತು ಸಂದರ್ಭಗಳಲ್ಲಿ ಸಮಯಕ್ಕೆ ಸರಿಯಾಗಿ ಆಸ್ಪತ್ರೆಗೆ ತೆರಳಲು ಆಂಬುಲೆನ್ಸ್ ಸೇವೆ ಅತ್ಯಂತ ಅಗತ್ಯವಾಗಿದ್ದು, ಅಲ್ಫಾ ಗಾರ್ಡನ್ ಲೇಔಟ್ ಸೇರಿದಂತೆ ಸುತ್ತಮುತ್ತಲಿನ ನಿವಾಸಿಗಳಿಗೆ ಈ ಉಚಿತ ಸೇವೆ ಅನುಕೂಲವಾಗಲಿದೆ. ಅಪಘಾತ, ಅನಾರೋಗ್ಯ ಸೇರಿದಂತೆ ತುರ್ತು ಆರೋಗ್ಯ ಪರಿಸ್ಥಿತಿಗಳಲ್ಲಿ ರೋಗಿಗಳನ್ನು ಶೀಘ್ರವಾಗಿ ಆಸ್ಪತ್ರೆಗೆ ಕರೆದೊಯ್ಯಲು ಈ ಸೇವೆಯನ್ನು ಬಳಸಿಕೊಳ್ಳಬಹುದಾಗಿದೆ ಎಂದು ಅವರು ಹೇಳಿದರು.

ಸ್ಥಳೀಯ ನಿವಾಸಿಗಳ ಆರೋಗ್ಯ ಮತ್ತು ಸುರಕ್ಷತೆಗೆ ಆದ್ಯತೆ ನೀಡುವ ನಿಟ್ಟಿನಲ್ಲಿ ಡಬ್ಲ್ಯೂಎ ಹಾಗೂ ಮೆಡಿಕವರ್ ಆಸ್ಪತ್ರೆಯ ಸಹಯೋಗದಲ್ಲಿ ಆರಂಭಿಸಿರುವ ಈ ಸೇವೆ ಸಾರ್ವಜನಿಕರಿಗೆ ಮತ್ತಷ್ಟು ನೆರವಾಗಲಿದೆ. ಮುಂದಿನ ದಿನಗಳಲ್ಲಿಯೂ ನಿವಾಸಿಗಳ ಅಗತ್ಯಕ್ಕೆ ಅನುಗುಣವಾಗಿ ಆರೋಗ್ಯ ಹಾಗೂ ಮೂಲಭೂತ ಸೌಲಭ್ಯಗಳಿಗೆ ಸಂಬಂಧಿಸಿದ ಕಾರ್ಯಕ್ರಮಗಳನ್ನು ಕೈಗೊಳ್ಳುವ ಕುರಿತು ಈ ಸಂದರ್ಭದಲ್ಲಿ ಚರ್ಚಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಾಮಾಂತರ ಮಂಡಲ ಅಧ್ಯಕ್ಷ ಎಚ್.ಎಸ್. ಪಿಳ್ಳಪ್ಪ, ಗ್ರಾಮಾಂತರ ಮಂಡಲ ಆರ್ ಡಬ್ಲ್ಯೂಎ ಉಸ್ತುವಾರಿ ಪಾಪಣ್ಣ, ಡಬ್ಲ್ಯೂಎ ಅಧ್ಯಕ್ಷ ಮಂಜುನಾಥ್ ಪಾಟೀಲ್, ಪ್ರಧಾನ ಕಾರ್ಯದರ್ಶಿ ರಾಜೇಶ್ ರೆಡ್ಡಿ, ಸ್ಥಳೀಯ ಮುಖಂಡರಾದ ಸತೀಶ್, ಮೆಡಿಕವರ್ ಆಸ್ಪತ್ರೆಯ ಮುಖ್ಯಸ್ಥ ಸಿದ್ಧರೆಡ್ಡಿ, ಮುಖಂಡರು, ಕಾರ್ಯಕರ್ತರು ಹಾಗೂ ಸ್ಥಳೀಯ ನಿವಾಸಿಗಳು ಉಪಸ್ಥಿತರಿದ್ದರು.

Sanjevani - Printed and Published by B.T.Amuthan on behalf of M/s Karnataka News Publications (P) Ltd. Printed at Dinasudar Printing Division, 11/2, Queen's Road, Bangalore, Karnataka - 560052.
Published at M/s Karnataka News Publications (P) Ltd. 11/2, Queen's Road, Bangalore, Karnataka - 560052. Editor: B.T. Amuthan. RNI No.36667/82

# ಬೆಂಗಳೂರಲ್ಲಿ ಹೆಚ್1ಎನ್1 ಪ್ರಕರಣ ಹೆಚ್ಚಳ

ಬೆಂಗಳೂರು,ಸೆ.28– ರಾಜಧಾನಿ ಬೆಂಗಳೂರಿನಲ್ಲಿ ಹೆಚ್1ಎನ್1 ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರಲ್ಲಿ ಆತಂಕ ಮೂಡಿದೆ.

ಕೆಲವು ಖಾಸಗಿ ಆಸ್ಪತ್ರೆಗಳಲ್ಲಿ ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಹೆಚ್1ಎನ್1 ಪಾಸಿಟಿವ್ ಪ್ರಕರಣಗಳ ಸಂಖ್ಯೆ ಹೆಚ್ಚಾಗಿದೆ.ಆದರೆ ಆಸ್ಪತ್ರೆಗೆ ದಾಖಲಾಗುವವರ ಸಂಖ್ಯೆ ಕಡಿಮೆಯಿರುವುದರಿಂದ ಸದ್ಯಕ್ಕೆ ಆತಂಕಪಡುವ ಅಗತ್ಯವಿಲ್ಲ ಎಂದು ವೈದ್ಯರು ತಿಳಿಸಿದ್ದಾರೆ.

ಹೆಚ್1ಎನ್1 ಹೊಸ ವೈರಸ್ ಅಲ್ಲ.ಪ್ರಸ್ತುತ ಕಾಣಿಸಿಕೊಳ್ಳುತ್ತಿರುವುದು ಸೀಸನಲ್ ಹೆಚ್1ಎನ್1 ಸ್ಟ್ರೈನ್ ಎಂದು ತಜ್ಞರು ತಿಳಿಸಿದ್ದಾರೆ. ಮಳೆಗಾಲ ಮತ್ತು ಚಳಿಗಾಲದಲ್ಲಿ ಈ ಸೋಂಕಿನ ಪ್ರಕರಣಗಳು ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ವೈದ್ಯರು ಸಲಹೆ ನೀಡಿದ್ದಾರೆ.

ದಿಢೀರ್ ಜ್ವರ, ಗಂಟಲು ನೋವು, ಮೈಕೈ ನೋವು, ಕೆಮ್ಮು ಮತ್ತು ಸುಸ್ತು ಹೆಚ್1ಎನ್1 ನ ಸಾಮಾನ್ಯ ಲಕ್ಷಣಗಳಾಗಿವೆ. ಕೆಲವರಲ್ಲಿ ವಾಂತಿ ಹಾಗೂ ಭೇದಿಯಂತಹ ಲಕ್ಷಣಗಳೂ ಕಾಣಿಸಿಕೊಳ್ಳಬಹುದು. ಒಂದೇ ಕುಟುಂಬದ ಹಲವು ಸದಸ್ಯರಿಗೆ ಸತತವಾಗಿ ಜ್ವರ ಕಾಣಿಸಿಕೊಂಡು ದಿನಗಟ್ಟಲೆ ಕಡಿಮೆಯಾಗದಿದ್ದರೆ ವೈದ್ಯರನ್ನು ಸಂಪರ್ಕಿಸುವುದು ಅಗತ್ಯವಾಗಿದೆ.

ಎಲ್ಲಾ ಜ್ವರದ ಪ್ರಕರಣಗಳೂ ಹೆಚ್1ಎನ್1ಆಗಿರುವುದಿಲ್ಲ. ಡೆಂಗ್ಯೂ, ಚಿಕೂನ್‌ಗುನ್ಯಾ ಹಾಗೂ ಮಲೇರಿಯಾದಂತಹ ಕಾಯಿಲೆಗಳೂ ಜ್ವರಕ್ಕೆ ಕಾರಣವಾಗಬಹುದು. ಹೀಗಾಗಿ ವೈದ್ಯರ ಸಲಹೆಯಿಲ್ಲದೆ ಸ್ವಯಂ ಔಷಧಿ, ವಿಶೇಷವಾಗಿ ಆಂಟಿಬಯೋಟಿಕ್ಸ್ ಸೇವಿಸುವುದು ಸೂಕ್ತವಲ್ಲ ಎಂದು ವೈದ್ಯರು ಎಚ್ಚರಿಸಿದ್ದಾರೆ.

ಸೋಂಕು ಹರಡುವುದನ್ನು ತಡೆಯಲು ಕೈಗಳನ್ನು ಆಗಾಗ್ಗೆ ಸಾಬೂನಿನಿಂದ ತೊಳೆಯುವುದು, ಅಗತ್ಯವಿದ್ದಲ್ಲಿ ಮಾಸ್ಕ್ ಧರಿಸುವುದು ಹಾಗೂ ಅನಾರೋಗ್ಯದವರೊಂದಿಗೆ ನಿಕಟ ಸಂಪರ್ಕ ತಪ್ಪಿಸುವಂತೆ ಸಲಹೆ ನೀಡಲಾಗಿದೆ.

ಮಕ್ಕಳು, ವೃದ್ಧರು, ಗರ್ಭಿಣಿಯರು ಹಾಗೂ ಮಧುಮೇಹ, ಆಸ್ತಮಾ, ರಕ್ತದೊತ್ತಡ ಮತ್ತು ಹೃದಯ ಸಂಬಂಧಿತ ಕಾಯಿಲೆಗಳಿಂದ ಬಳಲುತ್ತಿರುವವರು ಹೆಚ್ಚಿನ ಮುನ್ನೆಚ್ಚರಿಕೆ ವಹಿಸಬೇಕು ಎಂದು ವೈದ್ಯರು ತಿಳಿಸಿದ್ದಾರೆ.

# ಲ್ಯಾಂಡಿಂಗ್ ವೇಳೆ ರನ್‌ವೇಗೆ ತಾಕಿದ ವಿಮಾನ ಪ್ರಯಾಣಿಕರು ಪಾರು

ಬೆಂಗಳೂರು,ಸೆ.28– ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಲ್ಯಾಂಡಿಂಗ್ ವೇಳೆ ಇಂಡಿಗೋ ವಿಮಾನವೊಂದರ ಹಿಂಭಾಗ ರನ್‌ವೇಗೆ ತಾಗಿದ ಘಟನೆ ನಡೆದಿದೆ.

ಅಸ್ಸಾಂನ ಗುವಾಹಟಿಯಿಂದ ಬೆಂಗಳೂರಿಗೆ ಆಗಮಿಸಿದ್ದ ಇಂ-ಡಿಗೋದ 6ಇ6542 ವಿಮಾನ ನಿನ್ನೆ ಸಂಜೆ ಲ್ಯಾಂಡಿಂಗ್ ವೇಳೆ ಟೇಲ್ ಸ್ಟ್ರೈಕ್‌ಗೆ ಒಳಗಾಗಿದೆ. ಬಲವಾದ ಗಾಳಿಯ ನಡುವೆ ವಿಮಾನ ಇಳಿಯುವಾಗ ಅದರ ಹಿಂಭಾಗ ರನ್‌ವೇಗೆ ತಾಗಿರುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮೊದಲ ಪ್ರಯತ್ನದಲ್ಲಿ ಲ್ಯಾಂಡಿಂಗ್ ಸಾಧ್ಯವಾಗದ ಹಿನ್ನೆಲೆಯಲ್ಲಿ ಎರಡನೇ ಪ್ರಯತ್ನದಲ್ಲಿ ವಿಮಾನ ಸುರಕ್ಷಿತವಾಗಿ ರನ್‌ವೇ ಮೇಲೆ ಇಳಿದಿದೆ. ಘಟನೆಯಲ್ಲಿ ಯಾವುದೇ ಪ್ರಯಾಣಿಕರು ಅಥವಾ ಸಿಬ್ಬಂದಿಗೆ ಗಾಯಗಳಾಗಿಲ್ಲ. ಎಲ್ಲ ಪ್ರಯಾಣಿಕರನ್ನು ಸುರಕ್ಷಿತವಾಗಿ ವಿಮಾನದಿಂದ ಕೆಳಗಿಳಿಸಲಾಗಿದೆ.

ಮುನ್ನೆಚ್ಚರಿಕೆ ಕ್ರಮವಾಗಿ ವಿಮಾನವನ್ನು ತಾತ್ಕಾಲಿಕವಾಗಿ ಸೇವೆಯಿಂದ ಹೊರಗಿಟ್ಟು ತಾಂತ್ರಿಕ ಪರಿಶೀಲನೆಗೆ ಒಳಪಡಿಸಲಾಗಿದೆ. ವಿಮಾನದಲ್ಲಿ ಅಸಹಜ ರನ್‌ವೇ ಸಂಪರ್ಕ ಉಂಟಾಗಿರುವ ಕುರಿತು ಸಂಬಂಧಿತ ಅಧಿಕಾರಿಗಳಿಗೆ ಮಾಹಿತಿ ನೀಡಲಾಗಿದೆ.

**ಟೇಲ್ ಸ್ಟ್ರೈಕ್ ಎಂದರೇನು?**

ವಿಮಾನ ಟೇಕ್‌ಆಫ್ ಅಥವಾ ಲ್ಯಾಂಡಿಂಗ್ ವೇಳೆ ಅದರ ಹಿಂಭಾಗ ರನ್‌ವೇಗೆ ತಾಗುವುದನ್ನು ಟೇಲ್ ಸ್ಟ್ರೈಕ್ ಎಂದು ಕರೆಯಲಾಗುತ್ತದೆ. ಬಲವಾದ ಗಾಳಿ, ಹವಾಮಾನ ಪರಿಸ್ಥಿತಿ ಅಥವಾ ಲ್ಯಾಂಡಿಂಗ್ ವೇಳೆ ವಿಮಾನದ ಕೋನದಲ್ಲಿನ ಬದಲಾವಣೆ ಸೇರಿದಂತೆ ವಿವಿಧ ಕಾರಣಗಳಿಂದ ಇಂತಹ ಘಟನೆ ಸಂಭವಿಸಬಹುದು.

ಇಂತಹ ಘಟನೆಗಳ ಬಳಿಕ ವಿಮಾನವನ್ನು ಸಂಪೂರ್ಣ ತಾಂತ್ರಿಕ ಪರಿಶೀಲನೆಗೆ ಒಳಪಡಿಸಲಾಗುತ್ತದೆ. ಘಟನೆಯ ಕುರಿತು ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯ (ಡಿಜಿಸಿಎ) ತನಿಖೆ ನಡೆಸುವ ಸಾಧ್ಯತೆಯಿದ್ದು, ತನಿಖೆಯ ಬಳಿಕ ನಿಖರ ಕಾರಣ ತಿಳಿದುಬರಲಿದೆ.

**ಈ ತಿಂಗಳಲ್ಲೇ ಮತ್ತೊಂದು ಘಟನೆ:**

ಈ ತಿಂಗಳ ಆರಂಭದಲ್ಲಿ ಶ್ರೀನಗರ ವಿಮಾನ ನಿಲ್ದಾಣದಲ್ಲಿ ಇಂಡಿಗೋ ವಿಮಾನವೊಂದು ಪಾರ್ಕಿಂಗ್ ವೇಳೆ ವಿಷುಯಲ್ ಡಾಕಿಂಗ್ ಗೈಡೆನ್ಸ್ ಸಿಸ್ಟಮ್ (ವಿಡಿಜಿಎಸ್) ಕಂಬಕ್ಕೆ ಡಿಕ್ಕಿ ಹೊಡೆದ ಘಟನೆ ನಡೆದಿತ್ತು. ಆ ಸಂದರ್ಭದಲ್ಲೂ ಪ್ರಯಾಣಿಕರು ಮತ್ತು ಸಿಬ್ಬಂದಿ ಸುರಕ್ಷಿತವಾಗಿದ್ದರು.

# 130 ಚೀಲ ಪಡಿತರ ಅಕ್ಕಿ ಜಪ್ತಿ




ಕಲಬುರಗಿ,ಸೆ.28: ಮಹಾರಾಷ್ಟ್ರಕ್ಕೆ ಅಕ್ರಮವಾಗಿ ಸಾಗಿಸುತ್ತಿದ್ದ ಪಡಿತರ ಅಕ್ಕಿಯನ್ನು ಅಧಿಕಾರಿಗಳು ಜಪ್ತಿ ಮಾಡಿರುವ ಘಟನೆ ಕಲಬುರಗಿ ಜಿಲ್ಲೆಯ ಆಳಂದ ಪಟ್ಟಣದ ಆರ್‌ಟಿಒ ಚೆಕ್‌ಪೋಸ್ಟ್ ಬಳಿ ನಡೆದಿದೆ.

ಕಲಬುರಗಿಯಿಂದ ಮಹಾರಾಷ್ಟ್ರದತ್ತ ತೆರಳುತ್ತಿದ್ದ ಲಾರಿಯನ್ನು ಆರ್‌ಟಿಒ ಚೆಕ್‌ಪೋಸ್ಟ್ ಬಳಿ ತಡೆದು ಅಧಿಕಾರಿಗಳು ಪರಿಶೀಲನೆ ನಡೆಸಿದಾಗ, ಲಾರಿಯಲ್ಲಿ 50 ಕೆ.ಜಿ. ತೂಕದ 130 ಚೀಲ ಪಡಿತರ ಅಕ್ಕಿ ಪತ್ತೆಯಾಗಿದೆ.ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಾಗಿಸಲಾಗುತ್ತಿದೆ ಎಂಬ ಮಾಹಿತಿ ಹಿನ್ನೆಲೆಯಲ್ಲಿ ಲಾರಿಯನ್ನು ತಡೆದು ತಪಾಸಣೆ ನಡೆಸಲಾಗಿದೆ. ಪರಿಶೀಲನೆ ಬಳಿಕ ಲಾರಿಯಲ್ಲಿದ್ದ 130 ಚೀಲ ಅಕ್ಕಿ ಹಾಗೂ ಸಾಗಾಟಕ್ಕೆ ಬಳಸಿದ್ದ ಲಾರಿಯನ್ನು ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ಈ ಸಂಬಂಧ ಅಕ್ರಮವಾಗಿ ಪಡಿತರ ಅಕ್ಕಿಯನ್ನು ಮಹಾರಾಷ್ಟ್ರಕ್ಕೆ ಸಾಗಿಸುತ್ತಿದ್ದ ಆರೋಪದ ಮೇಲೆ ಶರಣು ಔರಾದಿ ಹಾಗೂ ಲಾರಿ ಚಾಲಕ ಸಮೀರ್ ಪಟೇಲ್ ವಿರುದ್ಧ ಆಳಂದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಪಡಿತರ ಅಕ್ಕಿಯ ಅಕ್ರಮ ಸಾಗಾಟದ ಜಾಲದ ಕುರಿತು ಪೊಲೀಸರು ತನಿಖೆ ಕೈಗೊಂಡಿದ್ದು, ಅಕ್ಕಿಯನ್ನು ಎಲ್ಲಿಂದ ಸಂಗ್ರಹಿಸಲಾಗಿತ್ತು ಹಾಗೂ ಯಾರಿಗೆ ಸಾಗಿಸಲಾಗುತ್ತಿತ್ತು ಎಂಬುದರ ಬಗ್ಗೆಯೂ ಮಾಹಿತಿ ಕಲೆಹಾಕುತ್ತಿದ್ದಾರೆ.

# ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ ದೈಹಿಕ ಪರೀಕ್ಷೆ ಆರಂಭ

ಬೆಂಗಳೂರು, ಸೆ.28: ರಾಜ್ಯ ಪೊಲೀಸ್ ನೇಮಕಾತಿ ವಿಭಾಗದ ವತಿಯಿಂದ ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್‌ಗಳ ನೇಮಕಾತಿಗೆ ಸಂಬಂಧಿಸಿದ ದೇಹದಾರ್ಢ್ಯ ಪರೀಕ್ಷೆ ಹಾಗೂ ಸಹಿಷ್ಣುತಾ ಪರೀಕ್ಷೆ ಸೋಮವಾರದಿಂದ ರಾಜ್ಯದ ವಿವಿಧ ಕೇಂದ್ರಗಳಲ್ಲಿ ಆರಂಭಗೊಂಡಿದೆ.

ರಾಜ್ಯದಲ್ಲಿ 3,991 ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಗಳ ನೇಮಕಾತಿ ನಡೆಯುತ್ತಿದ್ದು, ಲಿಖಿತ ಪರೀಕ್ಷೆಯಲ್ಲಿ ಅರ್ಹತೆ ಪಡೆದಿರುವ 19,396 ಅಭ್ಯರ್ಥಿಗಳು ದೈಹಿಕ ಪರೀಕ್ಷೆಗೆ ಹಾಜರಾಗಿದ್ದಾರೆ.

ಉಳಿಕೆ ಮೂಲ ವೃಂದದ 3,395 ಹುದ್ದೆಗಳಿಗೆ 16,454 ಅಭ್ಯರ್ಥಿಗಳು ಹಾಗೂ ಕಲ್ಯಾಣ ಕರ್ನಾಟಕ ವೃಂದದ (KK) 596 ಹುದ್ದೆಗಳಿಗೆ 2,942 ಅಭ್ಯರ್ಥಿಗಳು ದೈಹಿಕ ಪರೀಕ್ಷೆಗೆ ಅರ್ಹತೆ ಪಡೆದಿದ್ದಾರೆ.

ಬೆಂಗಳೂರು ನಗರ ಘಟಕದ ಅಭ್ಯರ್ಥಿಗಳಿಗೆ ಸೆ.28ರಿಂದ ಅ.5ರವರೆಗೆ ಚಾಮರಾಜಪೇಟೆಯ ಸಿಎಆರ್ (ಹೆಚ್‌ಕ್ಯೂ), ಆಡುಗೋಡಿಯ ಸಿಎಆರ್ (ದಕ್ಷಿಣ) ಹಾಗೂ ತನಿಸಂದ್ರ ಮುಖ್ಯರಸ್ತೆಯ ಸಿಎಆರ್ (ಉತ್ತರ) ಪರೇಡ್ ಮೈದಾನಗಳಲ್ಲಿ ಪರೀಕ್ಷೆ ನಡೆಯಲಿದೆ.

ಕೇಂದ್ರ ವಲಯದ ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಹಾಗೂ ರೈಲ್ವೆ ವಿಭಾಗದ ಅಭ್ಯರ್ಥಿಗಳಿಗೆ ಸೆ.28ರಿಂದ ಅ.3ರವರೆಗೆ ಬೆಂಗಳೂರಿನ ಕೋರಮಂಗಲದಲ್ಲಿರುವ 3ನೇ ಬೆಟಾಲಿಯನ್ ಕೆಎಸ್‌ಆರ್‌ಪಿ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ದಕ್ಷಿಣ ವಲಯದ ಮೈಸೂರು, ಹಾಸನ, ಕೊಡಗು, ಚಾಮರಾಜನಗರ ಮತ್ತು ಮಂಡ್ಯ ಜಿಲ್ಲೆಗಳ ಅಭ್ಯರ್ಥಿಗಳಿಗೆ ಸೆ.28ರಿಂದ ಅ.5ರವರೆಗೆ ಮೈಸೂರಿನ ರೇಸ್‌ಕೋರ್ಸ್ ಹಿಂಭಾಗದ ಸಿಎಆರ್ ಪರೇಡ್ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ಪೂರ್ವ ವಲಯದ ಶಿವಮೊಗ್ಗ, ಹಾವೇರಿ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳ ಅಭ್ಯರ್ಥಿಗಳಿಗೆ ಸೆ.29ರಿಂದ ಅ.6ರವರೆಗೆ ಶಿವಮೊಗ್ಗದ ನವಿಲೆಯಲ್ಲಿರುವ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ಪಶ್ಚಿಮ ವಲಯದ ಮಂಗಳೂರು, ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಹಾಗೂ ಚಿಕ್ಕಮಗಳೂರು ಜಿಲ್ಲೆಗಳ ಅಭ್ಯರ್ಥಿಗಳಿಗೆ ಸೆ.28ರಿಂದ ಅ.3ರವರೆಗೆ ಮಂಗಳೂರಿನ ಲಾಲ್‌ಬಾಗ್‌ನ ಮಂಗಳ ಕ್ರೀಡಾಂಗಣದಲ್ಲಿ ಪರೀಕ್ಷೆ ನಡೆಯಲಿದೆ.

ಉತ್ತರ ವಲಯದ ಗದಗ ಹಾಗೂ ಹುಬ್ಬಳ್ಳಿ–ಧಾರವಾಡ ಅಭ್ಯರ್ಥಿಗಳಿಗೆ ಸೆ.29 ಮತ್ತು 30ರಂದು ಬೆಳಗಾವಿಯ ಮಚ್ಚೆಯಲ್ಲಿರುವ 2ನೇ ಬೆಟಾಲಿಯನ್ ಕೆಎಸ್‌ಆರ್‌ಪಿ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ. ಬಳ್ಳಾರಿ ವಲಯದ ಅಭ್ಯರ್ಥಿಗಳಿಗೆ ಅ.5 ಮತ್ತು 6ರಂದು ಕೊಪ್ಪಳದ ಮುನಿರಾಬಾದ್ ಕೆಎಸ್‌ಆರ್‌ಪಿ ಪಿ.ಟಿ.ಎಸ್. ಮೈದಾನದಲ್ಲಿ ಪರೀಕ್ಷೆ ನಿಗದಿಯಾಗಿದೆ.

ಕಲ್ಯಾಣ ಕರ್ನಾಟಕ ವೃಂದದ ಅಭ್ಯರ್ಥಿಗಳಿಗೆ ಅ.8ರಂದು ಬೆಂಗಳೂರು ನಗರದಲ್ಲಿ ಚಾಮರಾಜಪೇಟೆ ಹಾಗೂ ಆಡುಗೋಡಿ ಸಿಎಆರ್ ಮೈದಾನಗಳಲ್ಲಿ ದೈಹಿಕ ಪರೀಕ್ಷೆ ನಡೆಯಲಿದೆ.

ಕೊಪ್ಪಳ, ರಾಯಚೂರು, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳ ಅಭ್ಯರ್ಥಿಗಳಿಗೆ ಅ.12ರಿಂದ 15ರವರೆಗೆ ಮುನಿರಾಬಾದ್ ಕೆಎಸ್‌ಆರ್‌ಪಿ ಮೈದಾನದಲ್ಲಿ ಮತ್ತು ಕಲಬುರಗಿ ಹಾಗೂ ಬೀದರ್ ಜಿಲ್ಲೆಗಳ ಅಭ್ಯರ್ಥಿಗಳಿಗೆ ಅ.12ರಿಂದ 14ರವರೆಗೆ ಕಲಬುರಗಿಯ ತಾಜ್ ಸುಲ್ತಾನ್‌ಪುರದ 6ನೇ ಬೆಟಾಲಿಯನ್ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ದೈಹಿಕ ಪರೀಕ್ಷೆಗೆ ಅರ್ಹತೆ ಪಡೆದಿರುವ ಅಭ್ಯರ್ಥಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಅಧಿಕೃತ ವೆಬ್‌ಸೈಟ್‌ನಿಂದ ಕರೆಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು. ಕರೆಪತ್ರದಲ್ಲಿ ನಮೂದಿಸಿರುವ ದಿನಾಂಕ, ಸಮಯ ಹಾಗೂ ಪರೀಕ್ಷಾ ಕೇಂದ್ರಕ್ಕೆ ತಪ್ಪದೇ ಹಾಜರಾಗುವಂತೆ ಪೊಲೀಸ್ ನೇಮಕಾತಿ ವಿಭಾಗ ಸೂಚಿಸಿದೆ.

# ಸುಹಾಸ್ ಶೆಟ್ಟಿ ಹತ್ಯೆಗೆ ಪ್ರತೀಕಾರ ಮುಸ್ಲಿಂ ವ್ಯಕ್ತಿಯ ಕೊಲೆಗೆ 25 ಲಕ್ಷ ಸುಪಾರಿ

ಮಂಗಳೂರು,ಸೆ.28– ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆಗೆ ಪ್ರತೀಕಾರವಾಗಿ ಮುಸ್ಲಿಂ ವ್ಯಕ್ತಿಯೊಬ್ಬನನ್ನು ಕೊಲೆ ಮಾಡಲು 24ರಿಂದ 25 ಲಕ್ಷ ರೂಪಾಯಿ ಸುಪಾರಿ ನೀಡುವ ಬಗ್ಗೆ ಸಂಚು ನಡೆದಿತ್ತು ಎಂಬ ಆರೋಪ ಕೇಳಿಬಂದಿದೆ.

ಈ ಕೊಲೆ ಸಂಚಿನಲ್ಲಿ ಭಾಗಿಯಾಗಿದ್ದ ಎನ್ನಲಾದ ಯುವಕನೊಬ್ಬ ಮನಪರಿವರ್ತನೆಯಾಗಿ ಬಜ್ಪೆ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಪ್ರಕರಣಕ್ಕೆ ಹೊಸ ತಿರುವು ಸಿಕ್ಕಿದೆ.

ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಮಿತ್ತೊಟ್ಟು ಕಾಶಿಪಟ್ಲ ನಿವಾಸಿ ಅಭಿಷೇಕ್ ದೂರು ನೀಡಿದ ಯುವಕನಾಗಿದ್ದಾನೆ, ಕಳೆದ 2025ರ ಮೇ ತಿಂಗಳಲ್ಲಿ ಸುಹಾಸ್ ಶೆಟ್ಟಿ ಹತ್ಯೆಯಾದ ಬಳಿಕ ಉಡುಪಿಯ ಸುದೀಪ್ ಎಂಬಾತ ತನ್ನನ್ನು ಸಂಪರ್ಕಿಸಿದ್ದ ಎಂದು ಅಭಿಷೇಕ್ ದೂರಿನಲ್ಲಿ ತಿಳಿಸಿದ್ದಾರೆ.

ಒಬ್ಬ ಹಿಂದುವಿನ ಹತ್ಯೆಗೆ ಪ್ರತಿಯಾಗಿ ಮುಸ್ಲಿಂ ವ್ಯಕ್ತಿಯೊಬ್ಬನನ್ನು ಕೊಲೆ ಮಾಡಬೇಕು ಎಂದು ಸುದೀಪ್ ಹೇಳಿದ್ದ ಎನ್ನಲಾಗಿದೆ. ಬಳಿಕ ನಾಲ್ಕು ತಿಂಗಳ ಹಿಂದೆ ಅಭಿಷೇಕ್ ಹಾಗೂ ಆತನ ಸ್ನೇಹಿತ ಕೀರ್ತನ್‌ನನ್ನು ಉಡುಪಿಗೆ ಕರೆಸಿಕೊಂಡು, ಮಹೇಶ್ ಎಂಬಾತನನ್ನು ಪರಿಚಯಿಸಿ ಕೊಲೆ ಯೋಜನೆ ರೂಪಿಸಲಾಗಿತ್ತು ಎಂದು ಆರೋಪಿಸಲಾಗಿದೆ.

ಬಜ್ಪೆ ಕಿನ್ನಿಪದವಿನ ವ್ಯಕ್ತಿಯೊಬ್ಬರ ಫೋಟೋ ನೀಡಿ ಆತನನ್ನು ಹತ್ಯೆ ಮಾಡಲು ಸೂಚಿಸಲಾಗಿತ್ತು ಎನ್ನಲಾಗಿದೆ. ಕೃತ್ಯ ಎಸಗಿದರೆ 24ರಿಂದ 25 ಲಕ್ಷ ರೂ ನೀಡುವುದಾಗಿ ಹಾಗೂ ಜೈಲಿಗೆ ಹೋದರೆ ಕುಟುಂಬದ ನಿರ್ವಹಣೆಗಾಗಿ ಪ್ರತಿ ತಿಂಗಳು 15 ಸಾವಿರ ರೂ ಮತ್ತು 5 ಸಾವಿರ ರೂ ಮೌಲ್ಯದ ದಿನಸಿ ನೀಡುವುದಾಗಿ ಭರವಸೆ ನೀಡಲಾಗಿತ್ತು ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಕೊಲೆಗಾಗಿ ಎರಡು ತಲವಾರುಗಳನ್ನು ಸಿದ್ಧಪಡಿಸಿಕೊಂಡಿದ್ದಾಗಿಯೂ ಅಭಿಷೇಕ್ ತಿಳಿಸಿದ್ದಾರೆ.

**ಮನಪರಿವರ್ತನೆ:**

ಈ ನಡುವೆ ಅಭಿಷೇಕ್ ಪತ್ನಿಗೆ ಹೆರಿಗೆಯಾದ ಬಳಿಕ ಆತನ ಮನಸ್ಥಿತಿಯಲ್ಲಿ ಬದಲಾವಣೆಯಾಗಿದ್ದು, ಅಪರಾಧ ಕೃತ್ಯದಲ್ಲಿ ಭಾಗಿಯಾದರೆ ಜೈಲು ಸೇರಬೇಕಾಗುತ್ತದೆ ಎಂಬ ಭಯದಿಂದ ಕೊಲೆ ಯೋಜನೆಯಿಂದ ಹಿಂದೆ ಸರಿದಿದ್ದಾನೆ ಎನ್ನಲಾಗಿದೆ.

ನಂತರ ವಾಟ್ಸಾಪ್ ಚಾಟ್‌ಗಳು, ಸ್ಕ್ರೀನ್‌ಶಾಟ್‌ಗಳು ಹಾಗೂ ಸಂಭಾಷಣೆಯ ಆಡಿಯೋ ಸೇರಿದಂತೆ ಲಭ್ಯವಿದ್ದ ಸಾಕ್ಷ್ಯಗಳೊಂದಿಗೆ ಪೊಲೀಸರಿಗೆ ದೂರು ನೀಡಿದ್ದಾರೆ.

ಪ್ರಕರಣದ ಗಂಭೀರತೆಯನ್ನು ಪರಿಗಣಿಸಿರುವ ಮಂಗಳೂರು ಪೊಲೀಸ್ ಕಮಿಷನರ್ ಸುಧೀರ್ ರೆಡ್ಡಿ ಅವರು ತನಿಖೆಯನ್ನು ಸಿಸಿಬಿಗೆ ಹಸ್ತಾಂತರಿಸಿದ್ದಾರೆ. ಈಗಾಗಲೇ ಎಫ್‌ಐಆರ್ ದಾಖಲಾಗಿದ್ದು, ಲಭ್ಯವಿರುವ ಸಾಕ್ಷ್ಯಾಧಾರಗಳನ್ನು ಪರಿಶೀಲಿಸಿ ಆರೋಪಗಳ ಸತ್ಯಾಸತ್ಯತೆ ಹಾಗೂ ಕೊಲೆ ಸಂಚಿನ ಹಿನ್ನೆಲೆಯನ್ನು ಪತ್ತೆಹಚ್ಚಲು ತನಿಖೆ ಮುಂದುವರಿದಿದೆ.

# 22 ಸಚಿವರಿಗೆ ದಸರಾ ಉಸ್ತುವಾರಿ: ಯತೀಂದ್ರ

ಮೈಸೂರು, ಸೆ. 28: ದಸರಾ ಆಚರಣೆಯ ಇತಿಹಾಸದಲ್ಲೇ ಮೊದಲ ಬಾರಿಗೆ 22 ಸಚಿವರಿಗೆ ಉಸ್ತುವಾರಿ ಹೊಣೆ ನೀಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 10 ದಿನಗಳ ನವರಾತ್ರಿ ಉತ್ಸವವನ್ನು ಅಚ್ಚುಕಟ್ಟಾಗಿ ನಡೆಸುವ ಉದ್ದೇಶದಿಂದ ಪ್ರತಿ ದಿನ ಇಬ್ಬರು ಸಚಿವರಂತೆ ಉಸ್ತುವಾರಿ ನಿಯೋಜಿಸಲಾಗಿದೆ. ಇದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರಿಕಲ್ಪನೆ. ದಸರಾವನ್ನು ಹೆಚ್ಚು ವ್ಯವಸ್ಥಿತವಾಗಿ ಆಯೋಜಿಸಲು ಈ ಹೊಸ ಪ್ರಯತ್ನ ಮಾಡಲಾಗಿದ್ದು, ಇದು ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಲಿದೆ ಎಂದರು.

ಈ ವ್ಯವಸ್ಥೆಯಿಂದ ಯಾರ ಹಿಡಿತ ಮೇಲೂ ಇಲ್ಲ, ಕೆಳಗೂ ಇಲ್ಲ. ಎಲ್ಲ ಸಮಿತಿಗಳ ಒಟ್ಟಾರೆ ಉಸ್ತುವಾರಿ ನನ್ನದೇ ಆಗಿದೆ. ಹೀಗಾಗಿ ಇದು ನನಗೆ ಯಾವುದೇ ರೀತಿಯ ಹಿನ್ನಡೆಯಲ್ಲ ಎಂದು ಸಚಿವ ಯತೀಂದ್ರ ಸ್ಪಷ್ಟಪಡಿಸಿದರು.

# ಕುಖ್ಯಾತ ರೌಡಿ ದೀಪು ಹತ್ಯೆ

ಬೆಂಗಳೂರು,ಸೆ.28– ಕ್ಷುಲ್ಲಕ ಕಾರಣದ ಹಿನ್ನೆಲೆಯಲ್ಲಿ ಉಂಟಾದ ಜಗಳದ ದ್ವೇಷದಲ್ಲಿ ಏಳೆಂಟು ಮಂದಿಯ ಗುಂಪು ದಾಳಿ ನಡೆಸಿ ಕುಖ್ಯಾತ ರೌಡಿ ದೀಪಕ್ ಅಲಿಯಾಸ್ ದೀಪು ನನ್ನು ಭೀಕರವಾಗಿ ಕೊಲೆ ಮಾಡಿರುವ ದುರ್ಘಟನೆ ಪೀಣ್ಯದ ಗುಲ್ಬರ್ಗ ಕಾಲೋನಿಯಲ್ಲಿ ನಿನ್ನೆ ರಾತ್ರಿ ನಡೆದಿದೆ.

ಗುಲ್ಬರ್ಗ ಕಾಲೋನಿಯಲ್ಲಿ ರಾತ್ರಿ ನಂದಿನಿ ಲೇಔಟ್‌ನ ರೌಡಿ ದೀಪಕ್ ಅಲಿಯಾಸ್ ದೀಪು ಮೇಲೆ ಏಳೆಂದು ಮಂದಿ ದುಷ್ಕರ್ಮಿಗಳ ಗುಂಪು ದಾಳಿ ನಡೆಸಿ ಚಾಕುವಿನಿಂದ ಇರಿದು ಕೊಲೆ ಮಾಡಿ ಪರಾರಿಯಾಗಿದೆ.

ಎರಡು ದಿನಗಳ ಹಿಂದೆ ದೀಪು, ಈಶ್ವರ್ ನೇಪಾಳಿ ಹಾಗೂ ಸುಮನ್ ಅಲಿಯಾಸ್ ಪಾರಿವಾಳನ ನಡುವೆ ಗಲಾಟೆ ನಡೆದಿತ್ತು. ಇದೇ ವಿಚಾರಕ್ಕೆ ಸಂಬಂಧಿಸಿದಂತೆ ದೀಪಕ್ ಮೇಲೆ ದಾಳಿ ನಡೆಸಲಾಗಿದೆ.

ಚಾಕು ಇರಿತದಿಂದ ಗಂಭೀರವಾಗಿ ಗಾಯಗೊಂಡಿದ್ದ ದೀಪಕ್‌ನನ್ನು ಆಸ್ಪತ್ರೆಗೆ ಕರೆದೊಯ್ಯುವ. ಮಾರ್ಗಮಧ್ಯೆಯೇ ಆತ ಮೃತಪಟ್ಟಿದ್ದಾನೆ.

ಮೃತದೇಹವನ್ನು ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಲಾಗಿದ್ದು, ಘಟನೆ ಸಂಬಂಧ ಪೀಣ್ಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಆರೋಪಿಗಳ ಪತ್ತೆಗೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಕೆಆರ್‌ಐಡಿಎಲ್ ಎಇಇ ಪತ್ತೆಗೆ ವಿಜಯವಾಡ ಬಳಿ ಶೋಧ

ಗದಗ,ಸೆ.28– ರಾಜ್ಯ ಸರ್ಕಾರದಿಂದ ಅನುದಾನ ಬಿಡುಗಡೆಯಾಗದಿರುವುದು ಹಾಗೂ ಗುತ್ತಿಗೆದಾರರು ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿ ಇಲಾಖೆಯ ಎಂಡಿಗೆ ಡೆತ್ ನೋಟ್ ಮಾದರಿ ಪತ್ರ ಬರೆದಿಟ್ಟು ನಾಪತ್ತೆಯಾಗಿರುವ ಕೆಆರ್‌ಐಡಿಎಲ್ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ (ಎಇಇ) ಅಧಿಕಾರಿ ಫರ್ವೇಜ್ ಪತ್ತೆಗೆ ವಿಶೇಷ ತನಿಖಾ ತಂಡಗಳು ತೀವ್ರ ಶೋಧ ಕೈಗೊಂಡಿವೆ.

ಕಳೆದ ಸೆ.13ರಂದು ಬೆಂಗಳೂರಿನಲ್ಲಿ ನಡೆಯುವ ಇಲಾಖೆಯ ಸಭೆಗೆ ತೆರಳುವುದಾಗಿ ಮನೆಯಿಂದ ಹೊರಟಿದ್ದ ಫರ್ವೇಜ್ ಬಳಿಕ ನಾಪತ್ತೆಯಾಗಿದ್ದಾರೆ. ಅವರ ಮೊಬೈಲ್ ಸ್ವಿಚ್ ಆಫ್ ಆಗಿದ್ದು, ಮನೆಗೆ ಮರಳದ ಹಿನ್ನೆಲೆಯಲ್ಲಿ ಸೆ. 16ರಂದು ಗದಗದ ಬೆಟಗೇರಿ ಬಡಾವಣೆ ಪೊಲೀಸ್ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಾಗಿದೆ.

ಪೊಲೀಸರ ಪ್ರಾಥಮಿಕ ತನಿಖೆಯಲ್ಲಿ ಫರ್ವೇಜ್ ಗದಗದಿಂದ ಬೆಂಗಳೂರಿಗೆ ತೆರಳಿದ್ದು, ಅಲ್ಲಿಂದ ಆಂಧ್ರಪ್ರದೇಶದ ವಿಜಯವಾಡದತ್ತ ಪ್ರಯಾಣಿಸಿರುವ ಸುಳಿವು ಲಭ್ಯವಾಗಿದೆ. ಅವರ ಮೊಬೈಲ್‌ನ ಕೊನೆಯ ಲೊಕೇಷನ್ ವಿಜಯವಾಡ ಎಂದು ತಿಳಿದುಬಂದಿದೆ.

**40 ಸಾವಿರ ನಗದು:**

ಫರ್ವೇಜ್ ಮನೆಯಿಂದ ಹೊರಡುವಾಗ 40 ಸಾವಿರ ನಗದು ತೆಗೆದುಕೊಂಡು ಹೋಗಿರುವ ಮಾಹಿತಿ ಲಭ್ಯವಾಗಿದೆ. ಆದರೆ ಇದುವರೆಗೆ ಅವರ ಎಟಿಎಂ ಕಾರ್ಡ್ ಅಥವಾ ಮೊಬೈಲ್ ಬಳಕೆಯಾಗಿಲ್ಲ ಎನ್ನಲಾಗಿದೆ. ಈ ತಾಂತ್ರಿಕ ಸುಳಿವುಗಳ ಆಧಾರದ ಮೇಲೆ ಪೊಲೀಸರು ಆಂಧ್ರಪ್ರದೇಶದತ್ತ ಶೋಧ ಕಾರ್ಯ ಚುರುಕುಗೊಳಿಸಿದ್ದಾರೆ.

ಗದಗ ಎಸ್ಪಿ ಮಿಥುನ್ ಎಚ್. ಎನ್. ಅವರ ಮಾರ್ಗದರ್ಶನದಲ್ಲಿ ಹಾಗೂ ಡಿವೈಎಸ್ಪಿ ಮೇಲ್ವಿಚಾರಣೆಯಲ್ಲಿ ಅಧಿಕಾರಿ ಪತ್ತೆಗಾಗಿ ಐದು ಪೊಲೀಸ್ ತಂಡಗಳನ್ನು ರಚಿಸಲಾಗಿದೆ. ಕರ್ನಾಟಕ ಮಾತ್ರವಲ್ಲದೆ ಹೊರ ರಾಜ್ಯಗಳಲ್ಲಿಯೂ ಪೊಲೀಸರು ಶೋಧ ಕಾರ್ಯ ನಡೆಸುತ್ತಿದ್ದಾರೆ.

**2024ರಲ್ಲೂ ನಾಪತ್ತೆ:**

ಇನ್ನು ಫರ್ವೇಜ್ ಅವರು 2024ರ ಫೆಬ್ರವರಿಯಲ್ಲೂ ನಾಲ್ಕೈದು ದಿನಗಳ ಕಾಲ ನಾಪತ್ತೆಯಾಗಿದ್ದರು ಎನ್ನಲಾಗಿದೆ. ಆಗ ಕೆಲಸದ ಒತ್ತಡ ಹಾಗೂ ಹಿರಿಯ ಅಧಿಕಾರಿಗಳ ಕಿರುಕುಳದ ಆರೋಪ ಮಾಡಿದ್ದರು. ಪೊಲೀಸರು ಹುಡುಕಾಟ ನಡೆಸಿದಾಗ ರಾಜಸ್ಥಾನದ ಅಜ್ಮೇರ್‌ನಲ್ಲಿ ಪತ್ತೆಯಾಗಿದ್ದರು.

ಇದೀಗ ಎರಡನೇ ಬಾರಿಗೆ ಫರ್ವೇಜ್ ನಾಪತ್ತೆಯಾಗಿರುವುದು ಅಧಿಕಾರಿಗಳು ಹಾಗೂ ರಾಜಕೀಯ ವಲಯದಲ್ಲಿ ಹಲವು ಚರ್ಚೆಗಳಿಗೆ ಕಾರಣವಾಗಿದೆ. ಅನುದಾನ ಬಿಡುಗಡೆಯಾಗದಿರುವುದು ಹಾಗೂ ಗುತ್ತಿಗೆದಾರರಿಂದ ಕಿರುಕುಳದ ಆರೋಪಗಳ ಬಗ್ಗೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಟಿಟಿ ಪಲ್ಟಿ 10 ಮಂದಿಗೆ ಗಾಯ

ಚಿತ್ರದುರ್ಗ,ಸೆ.28– ಮಂತ್ರಾಲಯಕ್ಕೆ ತೆರಳುತ್ತಿದ್ದ ಟಿಟಿ ವಾಹನ ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾಗಿ 10 ಕ್ಕೂ ಹೆಚ್ಚು ಮಂದಿ ಗಾಯಗೊಂಡಿರುವ ಘಟನೆ ಚಳ್ಳಕೆರೆ ತಾಲೂಕಿನ ಕೋಡಿಹಳ್ಳಿ ಗೇಟ್ ಬಳಿ ನಡೆದಿದೆ.

ಅಪಘಾತದಲ್ಲಿ ಗಾಯಗೊಂಡಿರುವ 10ಕ್ಕೂ ಹೆಚ್ಚು ಮಂದಿಯನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ.

ಚಾಲಕನ ನಿಯಂತ್ರಣ ತಪ್ಪಿದ ಪರಿಣಾಮ ವಾಹನ ಡಿವೈಡರ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾಗಿದೆ. ಗಾಯಾಳುಗಳನ್ನು ಕೂಡಲೇ ಚಳ್ಳಕೆರೆ ತಾಲೂಕು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ.

ಘಟನೆ ಕುರಿತು ಚಳ್ಳಕೆರೆ ಪೊಲೀಸರು ಮಾಹಿತಿ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ವಾಕಿಂಗ್‌ಗೆ ತೆರಳಿದ ವ್ಯಕ್ತಿ ಕಾಡಾನೆ ದಾಳಿಗೆ ಸಿಲುಕಿ ಸಾವು



ಬೆಂಗಳೂರು,ಸೆ.28– ಕೆಂಗೇರಿ ಸಮೀಪದ ರಾಜರಾಜೇಶ್ವರಿ ವೈದ್ಯಕೀಯ ಕಾಲೇಜಿನ ಹಿಂಭಾಗದಲ್ಲಿ ಇಂದು ಮುಂಜಾನೆ ವಾಯುವಿಹಾರಕ್ಕೆ ತೆರಳಿದ್ದ ವ್ಯಕ್ತಿಯೊಬ್ಬರು ಕಾಡಾನೆ ದಾಳಿಗೆ ಸಿಲುಕಿ ಒದ್ದಾಡಿ ಮೃತಪಟ್ಟಿದ್ದಾರೆ

ಅಂಚೆಪಾಳ್ಯ ಗ್ರಾಮದ ಕೂಲಿ ಕಾರ್ಮಿಕ ನಾಗರಾಜ್ (60) ಮೃತಪಟ್ಟ ದುರ್ದೈವಿಯಾಗಿದ್ದಾರೆ, ಮೈಸೂರು ರಸ್ತೆಯ ಅಂಚೆಪಾಳ್ಯ ಗ್ರಾಮದ ನಾಗರಾಜ್ ಅವರು ಎಂದಿನಂತೆ ಬೆಳಗಿನ ಜಾವ ಸುಮಾರು 5 ಗಂ-ಟೆಗೆ ವಾಯುವಿಹಾರಕ್ಕೆ ತೆರಳಿದ್ದಾಗ

ಈ ವೇಳೆ ಆರ್.ಆರ್. ವೈದ್ಯಕೀಯ ಕಾಲೇಜು ಹಿಂಭಾಗದಲ್ಲಿ ವಾಯುವಿಹಾರ ಮಾಡುತ್ತಿದ್ದಾಗ ಹಿಂದಿನಿಂದ ಏಕಾಏಕಿ ಬಂದ ಕಾಡಾನೆ ದಾಳಿ ನಡೆಸಿದೆ.

ಆನೆಯಿಂದ ತಪ್ಪಿಸಿಕೊಳ್ಳಲು ನಾಗರಾಜ್ ಅವರು ಯತ್ನಿಸಿದರಾದರೂ ಸಾಧ್ಯವಾಗದೆ ಗಂಭೀರವಾಗಿ ಗಾಯಗೊಂಡಿದ್ದಾರೆ. ಮಾರ್ಗದಲ್ಲಿ ತೆರಳುತ್ತಿದ್ದವರು ಘಟನೆ ಗಮನಿಸಿ ತಕ್ಷಣ ಅವರನ್ನು ರಾಜರಾಜೇಶ್ವರಿ ಆಸ್ಪತ್ರೆಗೆ ದಾಖಲಿಸಿದರಾದರೂ ಚಿಕಿತ್ಸೆ ಫಲಕಾರಿಯಾಗದೆ ನಾಗರಾಜ್ ಮೃತಪಟ್ಟಿದ್ದಾರೆ.

ಸುದ್ದಿ ತಿಳಿಯುತ್ತಿದ್ದಂತೆ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ಘಟನಾ ಸ್ಥಳದಲ್ಲಿ ಎರಡು ಕಾಂಪೌಂಡ್‌ಗಳು ಕೂಡ ಉರುಳಿ ಬಿದ್ದಿರುವುದು ಕಂಡುಬಂದಿದೆ.

**ಕಾಡಾನೆ ಬಂದಿದ್ದೇಗೆ:**

ಜನವಸತಿ ಪ್ರದೇಶದಲ್ಲಿ ಕಾಡಾನೆ ಪ್ರತ್ಯಕ್ಷವಾಗಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಕಾಡಾನೆ ಜನವಸತಿ ಪ್ರದೇಶಕ್ಕೆ ಹೇಗೆ ಬಂದಿತು ಎಂಬುದು ನಿಗೂಢವಾಗಿದ್ದು, ಸ್ಥಳೀಯರಲ್ಲಿ ಆತಂಕ ಹೆಚ್ಚಾಗಿದೆ.

ಇತ್ತೀಚೆಗೆ ನಗರದ ಬನಶಂಕರಿ 6ನೇ ಹಂತ ಹಾಗೂ ಕರಿಯಣ್ಣಪಾಳ್ಯ ಸಮೀಪ ಚಿರತೆ ಕಾಣಿಸಿಕೊಂಡು ಸ್ಥಳೀಯರಲ್ಲಿ ಭೀತಿ ಮೂಡಿಸಿತ್ತು. ಚಿರತೆ ಓಡಾಟದ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿದ್ದ ಘಟನೆ ಮಾಸುವ ಮುನ್ನವೇ ಕಾಡಾನೆ ಪ್ರತ್ಯಕ್ಷವಾಗಿ ವ್ಯಕ್ತಿಯೊಬ್ಬರ ಸಾವಿಗೆ ಕಾರಣವಾಗಿರುವುದು ಜನರಲ್ಲಿ ಮತ್ತಷ್ಟು ಆತಂಕ ಮೂಡಿಸಿದೆ.

# ಇರಾನ್ ದಾಳಿ: 8 ಮಂದಿ ಅಮೆರಿಕ ಸೈನಿಕರಿಗೆ ಗಾಯ



ವಾಷಿಂಗ್ಟನ್,ಸೆ.28: ಹೋರ್ಮುಜ್ ಜಲಸಂಧಿಯಲ್ಲಿ ಅಮೆರಿಕದ ಸೈನಿಕರು ಕಾರ್ಯಾಚರಣೆ ನಡೆಸುತ್ತಿದ್ದ ನೌಕೆ-ಯ ಮೇಲೆ ಇರಾನ್‌ನ ಹಡಗು ನಿರೋಧಕ ಕ್ರೂಸ್ ಕ್ಷಿಪಣಿ ದಾಳಿ ನಡೆಸಿದ್ದು, ಘಟನೆಯಲ್ಲಿ ಎಂಟು ಅಮೆರಿಕನ್ ಮೆರೈನ್ ಸೈನಿಕರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

ಸೆಪ್ಟೆಂಬರ್ 14ರಂದು ನಡೆದ ಈ ದಾಳಿಯಲ್ಲಿ ಗಾಯಗೊಂಡ ಸೈನಿಕರಿಗೆ ಗಂಭೀರ ಸ್ವರೂಪದ ಗಾಯಗಳಾಗಿಲ್ಲ. ಆದರೆ ಹೊಗೆ ಸೇವನೆಯಿಂದ ಉಂಟಾದ ತೊಂದರೆ ಹಾಗೂ ತಲೆನೋವು ಸೇರಿದಂತೆ ಮೆದುಳಿಗೆ ಆಘಾತವಾಗಿರುವ ಸಾಧ್ಯತೆ ಇರುವ ಲಕ್ಷಣಗಳು ಕಂಡುಬಂದಿವೆ ಎಂದು ಅಮೆರಿಕದ ಅಧಿಕಾರಿಗಳನ್ನು ಉಲ್ಲೇಖಿಸಿ ಎನ್‌ಬಿಸಿ ನ್ಯೂಸ್ ವರದಿ ಮಾಡಿದೆ.

ಗಾಯಗೊಂಡ ಎಂಟು ಮಂದಿಯಲ್ಲಿ ಏಳು ಮಂದಿ ಮೆರೈನ್ ಸೈನಿಕರು ಹಾಗೂ ಒಬ್ಬ ಅಧಿಕಾರಿ ಇದ್ದರು. ಇವರೆಲ್ಲರೂ ದಾಳಿಯ ಕೆಲವೇ ಸಮಯದ ಬಳಿಕ ಕರ್ತವ್ಯಕ್ಕೆ ಮರಳಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಸೈನಿಕರು ಬ್ಯಾಟಾಲಿಯನ್ ಲ್ಯಾಂಡಿಂಗ್ ಟೀಮ್‌ನ ಭಾಗವಾಗಿ ಕಾರ್ಯಾಚರಣೆ ನಡೆಸುತ್ತಿದ್ದರು. ಕ್ಷಿಪಣಿ ಅಪ್ಪಳಿಸಿದ ನೌಕೆ ಅಮೆರಿಕ ನೌಕಾಪಡೆಯ ಯುದ್ಧನೌಕೆಯಾಗಿರಲಿಲ್ಲ. ಆದರೆ ನೌಕೆಯ ನಿಖರ ಸ್ವರೂಪ ಅಥವಾ ಹೆಸರು ಬಹಿರಂಗಪಡಿಸಲು ಅಧಿಕಾರಿಗಳು ನಿರಾಕರಿಸಿದ್ದು, ಅದನ್ನು ಕೇವಲ 'ಸಾಗರ ನೌಕೆ' ಎಂದು ವಿವರಿಸಿದ್ದಾರೆ.

ಇದರ ಬೆನ್ನಲ್ಲೇ ಅಮೆರಿಕದ ರಕ್ಷಣಾ ಇಲಾಖೆಯ ಸಾರ್ವಜನಿಕ ದಾಖಲೆಗಳಲ್ಲಿ ಇರಾನ್ ಸಂಘರ್ಷಕ್ಕೆ ಸಂಬಂಧಿಸಿದ ಗಾಯಾಳು ಸೈನಿಕರ ಸಂಖ್ಯೆಯನ್ನು ಇತ್ತೀಚೆಗೆ 37ರಷ್ಟು ಹೆಚ್ಚಿಸಲಾಗಿದೆ. ಇದರಲ್ಲಿ 29 ನೌಕಾಪಡೆ ಸಿಬ್ಬಂದಿ ಮತ್ತು 8 ಮೆರೈನ್ ಸೈನಿಕರು ಸೇರಿದ್ದಾರೆ. ಸೆಪ್ಟೆಂಬರ್ 24ರ ವೇಳೆಗೆ ಇರಾನ್ ಸಂಘರ್ಷದಲ್ಲಿ ಗಾಯಗೊಂಡ ಅಮೆರಿಕ ಸೈನಿಕರ ಒಟ್ಟು ಸಂಖ್ಯೆ 861 ಎಂದು ದಾಖಲಾಗಿತ್ತು.

ಆದರೆ ಈ 37 ಮಂದಿಗೆ ಯಾವ ಸಂದರ್ಭದಲ್ಲಿ ಮತ್ತು ಯಾವಾಗ ಗಾಯಗಳಾಗಿವೆ ಎಂಬುದರ ಕುರಿತು ಪೆಂಟಗನ್ ಸಾರ್ವಜನಿಕವಾಗಿ ವಿವರ ನೀಡಿಲ್ಲ. ಗಾಯಗಳ ದಾಖಲೆಗಳಲ್ಲಿ ವಿಳಂಬವಾಗುವ ಸಾಧ್ಯತೆ, ವಿಶೇಷವಾಗಿ ಕನ್ಕಷನ್ ಅಥವಾ ಮೆದುಳಿನ ಆಘಾತದಂತಹ ಲಕ್ಷಣಗಳು ನಂತರದಲ್ಲಿ ಕಾಣಿಸಿಕೊಳ್ಳುವುದು, ಇದಕ್ಕೆ ಕಾರಣವಾಗಿರಬಹುದು ಎಂದು ವರದಿಗಳು ಸೂಚಿಸಿವೆ.

ಪರ್ಷಿಯನ್ ಕೊಲ್ಲಿ ಮತ್ತು ಒಮಾನ್ ಕೊಲ್ಲಿಯನ್ನು ಸಂಪರ್ಕಿಸುವ ಹೋರ್ಮುಜ್ ಜಲಸಂಧಿ ಜಾಗತಿಕ ತೈಲ ಮತ್ತು ಅನಿಲ ಸಾಗಣೆಗೆ ಅತ್ಯಂತ ಪ್ರಮುಖ ಸಮುದ್ರಮಾರ್ಗವಾಗಿದೆ. ಈ ಪ್ರದೇಶದಲ್ಲಿ ನಡೆಯುತ್ತಿರುವ ಅಮೆರಿಕ–ಇರಾನ್ ಸಂಘರ್ಷದ ಹಿನ್ನೆಲೆಯಲ್ಲಿ ಜಲಸಂಧಿಯಲ್ಲಿ ಹಡಗುಗಳ ಸಂಚಾರ ಮತ್ತು ಭದ್ರತೆ ಮತ್ತಷ್ಟು ಸೂಕ್ಷ್ಮ ವಿಷಯವಾಗಿದೆ.



**ವಿನಾಯಕ ಯುವಕರ ಬಳಗದ ವತಿಯಿಂದ ಗಣೇಶ ಹಬ್ಬದ ಆಚರಣೆ ಅಂಗವಾಗಿ ಗಣೇಶ ದೇವಸ್ಥಾನದ ರಸ್ತೆಯ ಉದಯನಗರದ ದಂಪತಿಗಳಾದಂತಹ ಶ್ರೀ ಪದ್ಮಾವತಿ ಶ್ರೀನಿವಾಸುಲು ಅವರು ಹರಾಜಿನಲ್ಲಿ 2 ಸಾವಿರದ ಲಾಡನ್ನು 55 ಸಾವಿರಕ್ಕೆ ತಮ್ಮ ದಾಗಿಸಿಕೊಂಡರು, ಮತ್ತು ಇವರು ಬಂದವರಿಗೆಲ್ಲ ಪ್ರಸಾದ ಮತ್ತು ಅನ್ನದಾನವನ್ನು ಮಾಡಿದರು.**

# ಪಾನಮತ್ತ ಚಾಲನೆ 582 ಪ್ರಕರಣ ದಾಖಲು

ಬೆಂಗಳೂರು,ಸೆ.28– ನಗರದ ಮದ್ಯ ಸೇವಿಸಿ ವಾಹನ ಚಲಾಯಿಸುವವರ ವಿರುದ್ಧ ವಿಶೇಷ ಕಾರ್ಯಾಚರಣೆ ಕೈಗೊಂಡ ಸಂಚಾರ ಪೊಲೀಸರು 35,581 ವಾಹನಗಳನ್ನು ತಪಾಸಣೆ ನಡೆಸಿ 582 ಪ್ರಕರಣಗಳನ್ನು ದಾಖಲಿಸಿದ್ದಾರೆ.

ಕಳೆದ ಸೆ.21 ರಿಂದ ಆ.27 ರವರೆಗೆ ನಗರದ 53 ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕೈಗೊಂಡ ಪಾನಮತ್ತ ಚಾಲಕರ ವಿಶೇಷ ಕಾರ್ಯಾಚರಣೆ ಕೈಗೊಂಡು ತಪಾಸಣೆಗೆ ಒಳಪಡಿಸಿ ಪಾನಮತ್ತ ಚಾಲಕರ ವಿರುದ್ಧ 582 ಪ್ರಕರಣಗಳನ್ನು ದಾಖಲಿಸಿ ಚಾಲನಾ ಪರವಾನಗಿ ಜಪ್ತಿ ಮಾಡಲಾಗಿದೆ.

ಅಲ್ಲದೆ, ಅತೀ ವೇಗ ಮತ್ತು ಅಜಾಗರೂಕತೆಯಿಂದ ವಾಹನ ಚಲಾಯಿಸುತ್ತಿದ್ದ 183 ಮಂದಿಯ ವಿರುದ್ಧ ಪ್ರಕರಣಗಳು ದಾಖಲಾಗಿವೆ. ಕೇವಲ ಒಂದೇ ವಾರದಲ್ಲಿ ಈ ನಿಯಮ ಉಲ್ಲಂಘನೆಗಳಿಗಾಗಿ 1.84 ಲಕ್ಷ ರೂ ದಂಡ ವಸೂಲಿ ಮಾಡಲಾಗಿದೆ.

ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಹಾಗೂ ಮದ್ಯಪಾನ ಮಾಡಿ ವಾಹನ ಚಲಾಯಿಸದಂತೆ ಸಂಚಾರ ಪೊಲೀಸ್ ಜಂಟಿ ಆಯುಕ್ತ ಕಾರ್ತಿಕ್ ರೆಡ್ಡಿ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

# ಎಐ ದುರ್ಬಳಕೆ ಪಾಪರಾಜಿಗಳ ವಿರುದ್ಧ ಸಲ್ಮಾನ್ ಕಿಡಿ

ಮುಂಬೈ, ಸೆ.28:– ಸಾಮಾಜಿಕ ಜಾಲತಾಣಗಳಲ್ಲಿ ಕೃತಕ ಬುದ್ಧಿಮತ್ತೆಯ (ಎಐ) ದುರುಪಯೋಗ, ಟ್ರೋಲ್‌ಗಳು ಮತ್ತು ಪಾಪರಾಜಿಗಳ ಅತಿಯಾದ ವರ್ತನೆಯ ವಿರುದ್ಧ ಬಾಲಿವುಡ್ ನಟ ಸಲ್ಮಾನ್ ಖಾನ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಿಯಾಲಿಟಿ ಶೋ 'ಬಿಗ್ ಬಾಸ್ 20' ರ 'ವೀಕೆಂಡ್ ಕಾ ವಾರ್' ಸಂಚಿಕೆಯಲ್ಲಿ ಮಾತನಾಡಿದ ಅವರು, ಡಿಜಿಟಲ್ ಮಾಧ್ಯಮಗಳಲ್ಲಿ ತಕ್ಷಣವೇ ಸೆನ್ಸಾರ್‌ಶಿಪ್ ಜಾರಿಗೆ ತರಬೇಕೆಂದು ಒತ್ತಾಯಿಸಿದ್ದಾರೆ.

ಎಐ ವೀಡಿಯೊ ಹಾಗೂ ನಕಲಿ ಧ್ವನಿಗಳ ದುರುಪಯೋಗ

ಕಾರ್ಯಕ್ರಮದಲ್ಲಿ ತಮ್ಮ ಅಸಮಾಧಾನ ಹಂಚಿಕೊಂಡ ಸಲ್ಮಾನ್ ಖಾನ್, ಇತ್ತೀಚೆಗೆ ಎಐ ತಂತ್ರಜ್ಞಾನವನ್ನು ತೀವ್ರವಾಗಿ ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ. ನನ್ನದೇ ಆದ ನಕಲಿ ವೀಡಿಯೊಗಳು ಮತ್ತು ಧ್ವನಿಗಳನ್ನು ಸೃಷ್ಟಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳಲಾಗುತ್ತಿದೆ. ನಾನು ಪಬ್‌ನಲ್ಲಿದ್ದೆ ಎಂದು ಬಿಂಬಿಸುವ ನಕಲಿ ವೀಡಿಯೊಗಳನ್ನು ನೋಡಿ ನನಗೇ ಆಶ್ಚರ್ಯವಾಗಿದೆ. ಈ ರೀತಿ ಇತರರ ತೇಜೋವಧೆ ಮಾಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಹೇಳಿದ್ದಾರೆ.

ತಪ್ಪಿತಸ್ಥರಿಗೆ ಜೈಲು ಶಿಕ್ಷೆಯಾಗಲಿ:

ಇಂತಹ ಕೃತ್ಯಗಳಲ್ಲಿ ತೊಡಗುವ ಒಬ್ಬರು ಅಥವಾ ಇಬ್ಬರನ್ನು ಜೈಲಿಗೆ ಹಾಕುವವರೆಗೆ ಈ ಪ್ರವೃತ್ತಿ ನಿಲ್ಲುವುದಿಲ್ಲ. ಡಿಜಿಟಲ್ ವೇದಿಕೆಗಳಲ್ಲಿ ಕಾಮೆಂಟ್ ಮಾಡುವವರು ಮತ್ತು ವಿಷಯಗಳನ್ನು ಪೋಸ್ಟ್ ಮಾಡುವವರು ತಮ್ಮ ಮಾತುಗಳಿಗೆ ಹೊಣೆಗಾರರಾಗಬೇಕು. ಇದಕ್ಕಾಗಿ ಸೆನ್ಸಾರ್ ಮಂಡಳಿಯಂತಹ ಸಂಸ್ಥೆಯ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಫೋನ್ ಹಿಡಿದವರೆಲ್ಲಾ ಪಾಪರಾಜಿಗಳಲ್ಲ

ಹುಂಕಾರ್ ಚಿತ್ರದ ಪ್ರಚಾರಕ್ಕಾಗಿ ಆಗಮಿಸಿದ್ದ ನಟಿ



ಫಾತಿಮಾ ಸನಾ ಶೇಖ್ ಅವರು ಪಾಪರಾಜಿಗಳ ಕಿರುಕುಳದ ಕುರಿತು ಮಾತನಾಡಿದಾಗ, ಸಲ್ಮಾನ್ ಖಾನ್ ಅದನ್ನು ಬೆಂಬಲಿಸಿದರು. ಮೊಬೈಲ್ ಫೋನ್ ಹಿಡಿದುಕೊಂಡು ನಿಲ್ಲುವ ಪ್ರತಿಯೊಬ್ಬರೂ ಪತ್ರಕರ್ತರು ಅಥವಾ ಪಾಪರಾಜಿಗಳಲ್ಲ. ಅವರ ಅತಿಯಾದ ವರ್ತನೆಯಿಂದ ಅನೇಕ ಮಹಿಳೆಯರು ಅನಾನುಕೂಲತೆ ಎದುರಿಸುತ್ತಿದ್ದಾರೆ. ನಿಜವಾದ ಮಾಧ್ಯಮದವರು ಇಂತಹವರನ್ನು ದೂರವಿಡಬೇಕು ಎಂದು ಸ್ಪಷ್ಟಪಡಿಸಿದರು.

ಸಾಮಾಜಿಕ ಜಾಲತಾಣಗಳು ಹಾಗೂ ಇನ್‌ಫ್ಲುಯೆನ್ಸರ್‌ಗಳು ಉದ್ಯೋಗ ಸೃಷ್ಟಿಗೆ ಒಳ್ಳೆಯದೇ ಆದರೂ, ಅದನ್ನು ದುರುಪಯೋಗಪಡಿಸಿಕೊಂಡು ಹಣ ಗಳಿಸುವುದು ಸರಿಯಲ್ಲ ಎಂದು ಸಲ್ಮಾನ್ ಖಾನ್ ಎಚ್ಚರಿಸಿದ್ದಾರೆ. ಸಲ್ಮಾನ್ ಅವರನ್ನು ಬೆಂಬಲಿಸಿ ವರುಣ್ ಧವನ್ ಒಂದು ವಿಡಿಯೋ ಬಿಡುಗಡೆ ಮಾಡಿದ್ದಾರೆ. ಅವರು ತಮ್ಮ ಅಧಿಕೃತ ಸಾಮಾಜಿಕ ಮಾಧ್ಯಮ ಖಾತೆಯಲ್ಲಿ ವಿಡಿಯೋವೊಂದನ್ನು ಪೋಸ್ಟ್ ಮಾಡಿದ್ದಾರೆ, ಅದರಲ್ಲಿ ಅವರು ಮತ್ತು ಅವರ ತಂದೆ ಡೇವಿಡ್ ಧವನ್ ಸಲ್ಮಾನ್ ಅವರನ್ನು ನೋಡಿ ಸಂತೋಷ ವ್ಯಕ್ತಪಡಿಸಿದ್ದಾರೆ.

## 138 ಕೋಟಿ ಗಳಿಸಿದ ಪ್ಯಾರಡೈಸ್



ನ್ಯಾಚುರಲ್ ಸ್ಟಾರ್ ನಾನಿ ಅಭಿನಯದ ಸಾಹಸಮಯ ಆಕ್ಷನ್ ಸಿನಿಮಾ 'ದಿ ಪ್ಯಾರಡೈಸ್' ಚಿತ್ರಮಂದಿರಗಳಲ್ಲಿ ಪ್ರದರ್ಶನ ಕಾಣುತ್ತಿದ್ದು, ಮೊದಲ ವಾರಾಂತ್ಯದಲ್ಲಿ ಸ್ಥಿರವಾದ ಗಳಿಕೆಯನ್ನು ಮುಂದುವರಿಸಿದೆ. ಶ್ರೀಕಾಂತ್ ಒಡೆಲಾ ನಿರ್ದೇಶನದ ಈ ಚಿತ್ರವು ಬಿಡುಗಡೆಯಾದ ನಾಲ್ಕು ದಿನಗಳಲ್ಲಿ ಪ್ರಪಂಚದಾದ್ಯಂತ ಸುಮಾರು 138.25 ಕೋಟಿ ರೂಪಾಯಿ ಒಟ್ಟು ಮಾಡುವ ಮೂಲಕ 150 ಕೋಟಿ ರೂಪಾಯಿಗಳ ಸಾಗುವ ಹಾದಿಯಲ್ಲಿದೆ.

ಚಿತ್ರವು ಬಿಡುಗಡೆಯಾದ ಮೊದಲ ದಿನವೇ ಭರ್ಜರಿ ಆರಂಭವನ್ನು ಪಡೆದುಕೊಂಡಿತ್ತಾದರೂ, ನಂತರದ ದಿನಗಳಲ್ಲಿ "ಮರ್ಶಕರಿಂದ ಮತ್ತು ಪ್ರೇಕ್ಷಕರಿಂದ "ಶ್ರ ಪ್ರತಿಕ್ರಿಯೆ ವ್ಯಕ್ತವಾಗಿತ್ತು. ಆದಾಗ್ಯೂ, ಬಾಕ್ಸ್ ಆಫೀಸ್ ಗಳಿಕೆಯಲ್ಲಿ ಯಾವುದೇ ಭಾರಿ ಕುಸಿತ ಕಾಣದೆ ಶನಿವಾರ ಮತ್ತು ಭಾನುವಾರದ ವಾರಾಂತ್ಯದ ದಿನಗಳಲ್ಲಿ ಸ್ಥಿರತೆಯನ್ನು ಕಾಯ್ದುಕೊಂಡಿದೆ. ಭಾನುವಾರ (4ನೇ ದಿನ) ಭಾರತದಲ್ಲೇ ನೆಟ್ ಕಲೆಕ್ಷನ್ 15.70 ಕೋಟಿ ರೂಪಾಯಿಗಳಷ್ಟಾಗಿದ್ದು, ಶನಿವಾರದ ಗಳಿಕೆಗಿಂತ (15.25 ಕೋಟಿ ರೂಪಾಯಿ) ಸಣ್ಣ ಮಟ್ಟದ ಏರಿಕೆಯನ್ನು ದಾಖಲಿಸಿದೆ.

?ಈ ನಾಲ್ಕು ದಿನಗಳ ಒಟ್ಟು ಕಲೆಕ್ಷನ್ ನೋಡುವುದಾದರೆ, ಭಾರತದಲ್ಲಿ ನೆಟ್ ಗಳಿಕೆ 92.10 ಕೋಟಿ ರೂಪಾಯಿ ತಲುಪಿದ್ದು, ಗ್ರೋಸ್ ಗಳಿಕೆ 109.00 ಕೋಟಿ ರೂಪಾಯಿ ದಾಟಿದೆ. "ದೇಶಿ ಮಾರುಕಟ್ಟೆಯಿಂದ ಒಟ್ಟು 29.25 ಕೋಟಿ ರೂಪಾಯಿ ಸಂಗ್ರಹವಾಗಿದೆ. ಮುಖ್ಯವಾಗಿ ತೆಲುಗು ಆವೃತ್ತಿಯಿಂದಲೇ ಹೆಚ್ಚಿನ ಗಳಿಕೆ ಹರಿದುಬರುತ್ತಿದ್ದು, "ಂದಿ ಮತ್ತು ತ"ಳು ಆವೃತ್ತಿಗಳು ಸಹ ಗಣನೀಯ ಕೊಡುಗೆ ನೀಡುತ್ತಿವೆ. ನಾನಿ ಅವರ ತೀವ್ರತರವಾದ ನಟನೆ, ಅನಿರುದ್ಧ್ ರ"ಚಂದರ್ ಅವರ "ನ್ನೆಲೆ ಸಂಗೀತ ಮತ್ತು ನಿರ್ಮಾಣ ಮೌಲ್ಯಗಳು ಪ್ರೇಕ್ಷಕರನ್ನು ಚಿತ್ರಮಂದಿರಗಳತ್ತ ಸೆಳೆಯುತ್ತಿದ್ದು, ಮುಂಬರುವ ದಿನಗಳಲ್ಲಿ ಚಿತ್ರವು 150 ಕೋಟಿ ರೂಪಾಯಿಗಳ ಗಡಿಯನ್ನು ಸುಲಭವಾಗಿ ದಾಟುವ ನಿರೀಕ್ಷೆಯಿದೆ.

## ಬೆಂಗಳೂರಿನಲ್ಲಿ ಪೆಪೆ ಜೀನ್ಸ್ ಲಂಡನ್ ವಿಸ್ತರಣೆ

ಬೆಂಗಳೂರು, ಸೆ.28: ಜಾಗತಿಕ ಡೆನಿಮ್ ಮತ್ತು ಲೈಫ್‌ಸ್ಟೈಲ್ ಬ್ರ್ಯಾಂಡ್ ಪೆಪೆ ಜೀನ್ಸ್ ಲಂಡನ್ ಬೆಂಗಳೂರಿನಲ್ಲಿ ತನ್ನ ರಿಟೇಲ್ ಜಾಲವನ್ನು ವಿಸ್ತರಿಸಿದ್ದು, ಫೀನಿಕ್ಸ್ ಮಾರ್ಕೆಟ್‌ಸಿಟಿ ವೈಟ್‌ಫೀಲ್ಡ್‌ನಲ್ಲಿ ಹೊಸ ಮಳಿಗೆ ಆರಂಭಿಸಿದೆ. ಸೆ.25ರಂದು ಇಂದಿರಾನಗರ ಮತ್ತು ಎಚ್‌ಎಸ್‌ಆರ್ ಲೇಔಟ್‌ನಲ್ಲಿ ತಲಾ ಒಂದು ಮಳಿಗೆ ಆರಂಭಿಸುವ ಮೂಲಕ ಒಂದೇ ದಿನ ನಗರದಲ್ಲಿ ಮೂರು ಮಳಿಗೆಗಳನ್ನು ಸೇರ್ಪಡೆಗೊಳಿಸಿದೆ.

ಹೊಸ ಮಳಿಗೆಯಲ್ಲಿ ಪುರುಷರು, ಮಹಿಳೆಯರು ಹಾಗೂ ಮಕ್ಕಳಿಗಾಗಿ ಡೆನಿಮ್, ಶರ್ಟ್, ಟಿ–ಶರ್ಟ್ ಸೇರಿದಂತೆ ವಿವಿಧ ಕ್ಯಾಶುವಲ್ ಉಡುಪುಗಳು ಮತ್ತು ಉನ್ನತ ಶ್ರೇಣಿಯ ಉತ್ಪನ್ನಗಳು ಲಭ್ಯವಿವೆ.

ಪೆಪೆ ಜೀನ್ಸ್ ಲಂಡನ್ (ಭಾರತ) ಸಿಇಒ ರಾಕೇಶ್ ಜಲ್ಲಿಪಲ್ಲಿ ಮಾತನಾಡಿ, ವೈಟ್‌ಫೀಲ್ಡ್ ಮಳಿಗೆಯು ಬೆಂಗಳೂರಿನ ಪ್ರಮುಖ ಶಾಪಿಂಗ್ ತಾಣಗಳಲ್ಲಿ ಬ್ರ್ಯಾಂಡ್‌ನ ಗ್ರಾಹಕ ಸಂಪರ್ಕವನ್ನು ಮತ್ತಷ್ಟು ವಿಸ್ತರಿಸಲಿದೆ ಎಂದರು.

ಪ್ರಸ್ತುತ ದೇಶಾದ್ಯಂತ 200ಕ್ಕೂ ಹೆಚ್ಚು ಮಳಿಗೆಗಳನ್ನು ಹೊಂದಿರುವ ಸಂಸ್ಥೆ, ಮುಂದಿನ 18 ತಿಂಗಳಲ್ಲಿ ಇನ್ನೂ 100 ಮಳಿಗೆಗಳನ್ನು ಆರಂಭಿಸುವ ಯೋಜನೆ ಹೊಂದಿದೆ.

## ಮಿಲನ್ ಫ್ಯಾಷನ್ ವೀಕ್‌ನಲ್ಲಿ ಸೆನ್ನೆಸ್ ಆಭರಣಗಳ ಮೆರುಗು

ಮಿಲನ್, ಸೆ.24: ಸೆಂಕೋ ಸಂಸ್ಥೆಯ ಲ್ಯಾಬ್–ಗ್ರೋನ್ ವಜ್ರಾಭರಣ ಬ್ರ್ಯಾಂಡ್ 'ಸೆನ್ನೆಸ್', ಮಿಲನ್ ಫ್ಯಾಷನ್ ವೀಕ್‌ನಲ್ಲಿ ಡಿಸೈನರ್ ಧ್ರುವ್ ಕಪೂರ್ ಅವರ ಫ್ಯಾಷನ್ ಪ್ರದರ್ಶನದೊಂದಿಗೆ ಕೈಜೋಡಿಸುವ ಮೂಲಕ ಜಾಗತಿಕ ಫ್ಯಾಷನ್ ವೇದಿಕೆಯಲ್ಲಿ ಗಮನ ಸೆಳೆದಿದೆ.

ಸೆ.22ರಂದು ನಡೆದ ಕಪೂರ್ ಅವರ ರನ್‌ವೇ ಪ್ರದರ್ಶನದಲ್ಲಿ ಸೆನ್ನೆಸ್ ಆಭರಣ ಪಾಲುದಾರನಾಗಿ ಭಾಗವಹಿಸಿತು. ಈ ಮೂಲಕ 2026ರ ಕ್ಯಾನೆಸ್ ಚಲನಚಿತ್ರೋತ್ಸವದ ಬಳಿಕ ಬ್ರ್ಯಾಂಡ್ ಮತ್ತೊಂದು ಪ್ರಮುಖ ಅಂತರರಾಷ್ಟ್ರೀಯ ವೇದಿಕೆಯಲ್ಲಿ ತನ್ನ ವಿನ್ಯಾಸಗಳನ್ನು ಪರಿಚಯಿಸಿದೆ.

ಪ್ರದರ್ಶನದ ಪ್ರಮುಖ ಆಕರ್ಷಣೆಯಾಗಿದ್ದು 'ಟಾಯ್ ಎಟ್ ಮೊಯ್' ಕಲೆಕ್ಷನ್. ಫ್ರೆಂಚ್‌ನಲ್ಲಿ 'ನೀನು ಮತ್ತು ನಾನು' ಎಂಬ ಅರ್ಥ ನೀಡುವ ಈ ಪರಿಕಲ್ಪನೆಯಲ್ಲಿ ಎರಡು ವಿಭಿನ್ನ ಬಣ್ಣದ ಲ್ಯಾಬ್–ಗ್ರೋನ್ ವಜ್ರಗಳು ತಮ್ಮದೇ ಆದ ವೈಶಿಷ್ಟ್ಯ ಉಳಿಸಿಕೊಂಡೇ ಒಂದಾಗುವ ವಿನ್ಯಾಸವನ್ನು ರೂಪಿಸಲಾಗಿದೆ.

ನೆಕ್ಲೇಸ್, ಕಿವಿಯೋಲೆ, ಉಂಗುರ, ಪೆಂಡೆಂಟ್ ಮತ್ತು ಬ್ರೇಸ್‌ಲೆಟ್ ಸೇರಿದಂತೆ ಸುಮಾರು 71 ಆಭರಣಗಳನ್ನು ಐದು ವಿಭಿನ್ನ ಲುಕ್‌ಗಳಲ್ಲಿ ರನ್‌ವೇಯಲ್ಲಿ ಪ್ರದರ್ಶಿಸಲಾಯಿತು. ಆಭರಣಗಳು ಕೇವಲ ಅಲಂಕಾರಿಕ ವಸ್ತುಗಳಾಗಿ ಉಳಿಯದೆ, ಧ್ರುವ್ ಕಪೂರ್ ಅವರ ಸಮಕಾಲೀನ ಫ್ಯಾಷನ್ ವಿನ್ಯಾಸದ ಭಾಗವಾಗಿಯೇ ಮೂಡಿಬಂದವು.

ಸೆನ್ನೆಸ್ ಮತ್ತು ಸೆಂಕೋ ಗೋಲ್ಡ್ ಅಂಡ್ ಡೈಮಂಡ್ಸ್‌ನ ಮಾರ್ಕೆಟಿಂಗ್ ಹಾಗೂ ವಿನ್ಯಾಸ ವಿಭಾಗದ ನಿರ್ದೇಶಕಿ ಜೋಯಿತಾ ಸೇನ್, 'ಟಾಯ್ ಎಟ್ ಮೊಯ್' ಮೂಲಕ ವಿಭಿನ್ನತೆಯನ್ನು ಉಳಿಸಿಕೊಂಡೇ ಮೂಡುವ ಸಂಬಂಧದ ಸೌಂದರ್ಯವನ್ನು ಅಭಿವ್ಯಕ್ತಿಸಲಾಗಿದೆ ಎಂದು ಹೇಳಿದ್ದಾರೆ.

2024ರ ಸೆಪ್ಟೆಂಬರ್‌ನಲ್ಲಿ ಮಿಲನ್ ಫ್ಯಾಷನ್ ವೀಕ್‌ನಲ್ಲಿ 'ಎಸೆನ್ಸ್ ಆಫ್ ಯೂ' ಕಲೆಕ್ಷನ್ ಮೂಲಕ ಅಂತರರಾಷ್ಟ್ರೀಯ ಪರಿಚಯ ಪಡೆದಿದ್ದ ಸೆನ್ನೆಸ್, ಇದೀಗ ಮತ್ತೊಮ್ಮೆ ಮಿಲನ್ ವೇದಿಕೆಗೆ ಮರಳಿದೆ. ಕ್ಯಾನೆಸ್‌ನಿಂದ ಮಿಲನ್‌ವರೆಗೆ ಜಾಗತಿಕ ಫ್ಯಾಷನ್ ಮತ್ತು ಐಷಾರಾಮಿ ವಲಯದಲ್ಲಿ ತನ್ನ ಉಪಸ್ಥಿತಿಯನ್ನು ವಿಸ್ತರಿಸುವತ್ತ ಬ್ರ್ಯಾಂಡ್ ಗಮನಹರಿಸಿದೆ.

## ನಾಳೆ ಜೋಶಿ ಮನೆಗೆ ಮುತ್ತಿಗೆ

ಮೈಸೂರು, ಸೆ.28:– ರೈತರ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸೆ.29ರಂದು ಹುಬ್ಬಳ್ಳಿಯಲ್ಲಿನ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಅವರ ನಿವಾಸಕ್ಕೆ ರಾಜ್ಯ ರೈತ ಸಂಘ, ಹಸಿರು ಸೇನೆ ವತಿಯಿಂದ ರೈತರು ಮುತ್ತಿಗೆ ಹಾಕಲಿದ್ದಾರೆ ಎಂದು ಸಂಘಟನೆಯ ಜಿಲ್ಲಾಧ್ಯಕ್ಷ ಸತೀಶ್ ರಾವ್ ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಡಾ.ಸ್ವಾಮಿನಾಥನ್ ಆಯೋಗದ ವರದಿ ಜಾರಿಗೊಳಿಸಿ ರೈತರ ಆದಾಯ ದುಪ್ಪಟ್ಟು ಮಾಡುವುದಾಗಿ ಅಧಿಕಾರಕ್ಕೆ ಬಂದ ಪ್ರಧಾನಿ ನರೇಂದ್ರ ಮೋದಿ ಮಾತು ತಪ್ಪಿದ್ದಾರೆ. ಹೀಗಾಗಿ ಮೋಸದ ಎಂಎಸ್‌ಪಿ ರದ್ದುಗೊಳಿಸಿ ವೈಜ್ಞಾನಿಕವಾಗಿ ಡಾ.ಸ್ವಾಮಿನಾಥನ್ ಆಯೋಗದ ವರದಿ ಜಾರಿಗೆ ಈ ವೇಳೆ ಒತ್ತಾಯಿಸಲಾಗುವುದು. ಪ್ರತಿ ಟನ್ ಕಬ್ಬಿಗೆ ರಾಜ್ಯಾದ್ಯಂತ ಕಟಾವು ಮತ್ತು ಸಾಗಾಣಿಕೆ ವೆಚ್ಚ ಕಳೆದು 5500 ರೂ. ನಿಗದಿ ಪಡಿಸಬೇಕು. ಕಬ್ಬಿಗೆ ದರ ನಿಗದಿ ಪಡಿಸುವಾಗ 8.5 ಇಳುವರಿ ಮಾನದಂಡವಾಗಬೇಕೆಂದು ಆಗ್ರಹಿಸಲಾಗುವುದೆಂದರು.

# ಇಂದು ವಿಶ್ವ ರೇಬೀಸ್ ದಿನ




ವಿಶ್ವ ರೇಬೀಸ್ ದಿನವನ್ನು ಪ್ರತಿವರ್ಷ ಸೆಪ್ಟೆಂಬರ್ 28 ರಂದು ಜಾಗತಿಕ ಮಟ್ಟದಲ್ಲಿ ಆಚರಿಸಲಾಗುತ್ತದೆ. ಪ್ರಪಂಚದಾದ್ಯಂತ ಅಪಾರ ಸಂಖ್ಯೆಯ ಪ್ರಾಣಿಗಳು ಮತ್ತು ಮಾನವರ ಜೀವಕ್ಕೆ ಕಂಟಕವಾಗಿರುವ ರೇಬೀಸ್ ರೋಗವನ್ನು ತಡೆಗಟ್ಟುವುದು, ಅದರ ತೀವ್ರತೆಯ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಈ ಮಾರಣಾಂತಿಕ ರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದು ಈ ದಿನದ ಆಚರಣೆಯ ಪ್ರಮುಖ ಉದ್ದೇಶವಾಗಿದೆ. ರೇಬೀಸ್ ರೋಗಕ್ಕೆ ಪ್ರಥಮ ಯಶಸ್ವಿ ಲಸಿಕೆಯನ್ನು ಕಂಡುಹಿಡಿದ ಪ್ರಸಿದ್ಧ ಫ್ರೆಂಚ್ ಸೂಕ್ಷ್ಮಜೀವಿ ವಿಜ್ಞಾನಿ ಹಾಗೂ ರಸಾಯನಶಾಸ್ತ್ರಜ್ಞ ಲೂಯಿಸ್ ಪಾಶ್ಚರ್ ಅವರ ಪುಣ್ಯತಿಥಿಯ ಸವಿನೆನಪಿಗಾಗಿ ಜಾಗತಿಕ ರೇಬೀಸ್ ನಿಯಂತ್ರಣ ಸಂಸ್ಥೆಯು ಈ ದಿನಾಂಕವನ್ನು ಆಯ್ದುಕೊಂಡಿದೆ. ಪ್ರಸ್ತುತ ಆಧುನಿಕ ವೈದ್ಯಕೀಯ ಕ್ಷೇತ್ರದಲ್ಲಿ ಅಪಾರ ಬೆಳವಣಿಗೆಯಾಗಿದ್ದರೂ ಸಹ ರೇಬೀಸ್ ಇಂದಿಗೂ ವಿಶ್ವದ ಅನೇಕ ದೇಶಗಳಲ್ಲಿ, ವಿಶೇಷವಾಗಿ ಏಷ್ಯಾ ಮತ್ತು ಆಫ್ರಿಕಾ ಖಂಡಗಳಲ್ಲಿ ತೀವ್ರ ಸ್ವರೂಪದ ಸಾರ್ವಜನಿಕ ಆರೋಗ್ಯ ಸಮಸ್ಯೆಯಾಗಿ ಉಳಿದುಕೊಂಡಿದೆ. ಪ್ರತಿಯೊಬ್ಬ ನಾಗರಿಕನಿಗೂ ಈ ರೋಗದ ಗಂಭೀರತೆ ಹಾಗೂ ತಡೆಗಟ್ಟುವ ಕ್ರಮಗಳ ಬಗ್ಗೆ ಜಾಗೃತಿ ಇದ್ದಾಗ ಮಾತ್ರ ರೇಬೀಸ್ ಮುಕ್ತ ಸಮಾಜವನ್ನು ನಿರ್ಮಿಸಲು ಸಾಧ್ಯ ಎಂಬುದನ್ನು ಈ ದಿನವು ನಮಗೆ ನೆನಪಿಸುತ್ತದೆ.

ರೇಬೀಸ್ ಎಂಬುದು ರಾಬ್ಡೋವಿರಿಡೆ ಕುಟುಂಬಕ್ಕೆ ಸೇರಿದ ನ್ಯೂರೋಟ್ರೋಪಿಕ್ ವೈರಸ್‌ನಿಂದ ಬರುವ ತೀವ್ರ ಸ್ವರೂಪದ ಝೂನೋಟಿಕ್ ಅಂದರೆ ಪ್ರಾಣಿಗಳಿಂದ ಮಾನವರಿಗೆ ಹರಡುವ ಕಾಯಿಲೆಯಾಗಿದೆ. ರೇಬೀಸ್ ಪೀಡಿತ ನಾಯಿ, ಬೆಕ್ಕು, ಕತ್ತೆಕಿರುಬ, ತೋಳ, ನರಿ ಅಥವಾ ಬಾವಲಿಗಳಂತಹ ಪ್ರಾಣಿಗಳ ಕಚ್ಚುವಿಕೆ, ಗಾಯದ ಮೇಲೆ ಅವು ನೆಕ್ಕುವುದು ಅಥವಾ ಅವುಗಳ ಜೊಲ್ಲು ರಸವು ಮಾನವನ ರಕ್ತ ಹಾಗೂ ಲೋಳೆಪೊರೆಯನ್ನು ಪ್ರವೇಶಿಸುವುದರಿಂದ ಈ ವೈರಾಣು ದೇಹದೊಳಗೆ ತೂರಿಕೊಳ್ಳುತ್ತದೆ. ದೇಹವನ್ನು ಪ್ರವೇಶಿಸಿದ ವೈರಸ್ ನೇರವಾಗಿ ನರಮಂಡಲಕ್ಕೆ ಹಾನಿಯುಂಟುಮಾಡುತ್ತಾ ಬೆನ್ನುಹುರಿಯ ಮೂಲಕ ಮೆದುಳನ್ನು ತಲುಪುತ್ತದೆ. ಪ್ರಾಣಿ ಕಚ್ಚಿದ ತಕ್ಷಣವೇ ಲಕ್ಷಣಗಳು ಕಾಣಿಸಿಕೊಳ್ಳುವುದಿಲ್ಲ; ವೈರಾಣು ಮೆದುಳನ್ನು ತಲುಪಲು ಕೆಲವು ವಾರಗಳಿಂದ ಹಿಡಿದು ಕೆಲವು ತಿಂಗಳುಗಳವರೆಗೆ ಸಮಯ ತೆಗೆದುಕೊಳ್ಳಬಹುದು. ಆದರೆ ಒಮ್ಮೆ ಈ ರೋಗದ ಲಕ್ಷಣಗಳು ವ್ಯಕ್ತಿಯಲ್ಲಿ ಕಾಣಿಸಿಕೊಂಡರೆ, ನಂತರ ಆತನನ್ನು ಬದುಕಿಸುವುದು ಅತ್ಯಂತ ದುರ್ಲಭವಾಗುತ್ತದೆ ಮತ್ತು ಸಾವು ಶೇಕಡಾ ನೂರರಷ್ಟು ಖಚಿತವಾಗಿರುತ್ತದೆ.

ಈ ರೋಗದ ಲಕ್ಷಣಗಳು ವ್ಯಕ್ತಿಯಲ್ಲಿ ಕಾಣಿಸಿಕೊಳ್ಳಲು ಪ್ರಾರಂಭಿಸಿದಾಗ ಆರಂಭದಲ್ಲಿ ಸಾಮಾನ್ಯ ಜ್ವರ, ತಲೆನೋವು, ದೈಹಿಕ ಆಯಾಸ ಹಾಗೂ ಪ್ರಾಣಿ ಕಚ್ಚಿದ ಜಾಗದಲ್ಲಿ ತೀವ್ರ ಉರಿ ಅಥವಾ ತುರಿಕೆ ಕಾಣಿಸಿಕೊಳ್ಳುತ್ತದೆ. ರೋಗವು ತೀವ್ರಗೊಳ್ಳುತ್ತಿದ್ದಂತೆ ರೋಗಿಯು ನೀರಿನ ಶಬ್ದ ಕೇಳಿದರೆ ಅಥವಾ ನೀರನ್ನು ನೋಡಿದರೆ ವಿಪರೀತ ಭಯಪಡುವ 'ಹೈಡ್ರೋಫೋಬಿಯಾ' ಎಂಬ ವಿಚಿತ್ರ ಲಕ್ಷಣಕ್ಕೆ ಒಳಗಾಗುತ್ತಾನೆ. ಗಂಟಲಿನ ಸ್ನಾಯುಗಳು ಪಾರ್ಶ್ವವಾಯುವಿಗೆ ಒಳಗಾಗುವುದರಿಂದ ನೀರನ್ನು ಕುಡಿಯಲು ಅಥವಾ ನುಂಗಲು ಸಾಧ್ಯವಾಗದೆ ತೀವ್ರ ಯಾತನೆ ಅನುಭವಿಸುತ್ತಾನೆ. ಇದರೊಂದಿಗೆ ಬೆಳಕು ಮತ್ತು ಗಾಳಿಯ ಸ್ಪರ್ಶಕ್ಕೂ ತೀವ್ರವಾಗಿ ಸಂವೇದನಾಶೀಲರಾಗುವುದು, ಅತಿಯಾದ ಆತಂಕ, ವರ್ತನೆಯಲ್ಲಿ ತೀವ್ರ ಬದಲಾವಣೆ, ಬಾಯಲ್ಲಿ ನಿರಂತರವಾಗಿ ಜೊಲ್ಲು ಸುರಿಯುವುದು ಮತ್ತು ಅಂತಿಮವಾಗಿ ಕೋಮಾ ಹಂತಕ್ಕೆ ಹೋಗಿ ಉಸಿರಾಟದ ವೈಫಲ್ಯದಿಂದ ಸಾವು ಸಂಭವಿಸುತ್ತದೆ.

ಲಕ್ಷಣಗಳು ಕಾಣಿಸಿಕೊಂಡ ನಂತರ ರೇಬೀಸ್‌ಗೆ ಯಾವುದೇ ನಿರ್ದಿಷ್ಟ ಔಷಧಿಯಾಗಲಿ ಅಥವಾ ಚಿಕಿತ್ಸೆಯಾಗಲಿ ಇಲ್ಲದಿದ್ದರೂ, ಪ್ರಾಣಿ ಕಚ್ಚಿದ ತಕ್ಷಣ ಸೂಕ್ತ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡರೆ ರೋಗ ಬಾರದಂತೆ ನೂರಕ್ಕೆ ನೂರರಷ್ಟು ತಡೆಯಬಹುದು. ಯಾವುದೇ ಪ್ರಾಣಿ ಕಚ್ಚಿದ ಅಥವಾ ಪರಚಿದ ತಕ್ಷಣವೇ ಗಾಯಗೊಂಡ ಭಾಗವನ್ನು ಹರಿಯುವ ಸಾಬೂನು ನೀರಿನಲ್ಲಿ ಕನಿಷ್ಠ 15 ನಿಮಿಷಗಳ ಕಾಲ ನಿರಂತರವಾಗಿ ತೊಳೆಯುವುದು ಪ್ರಥಮ ಚಿಕಿತ್ಸೆಯ ಅತ್ಯಂತ ಪ್ರಮುಖ ಹಂತವಾಗಿದೆ. ಇದರಿಂದ ಪ್ರಾಣಿಯ ಜೊಲ್ಲಿನಲ್ಲಿದ್ದ ಹೆಚ್ಚಿನ ವೈರಾಣುಗಳು ನಾಶವಾಗುತ್ತವೆ. ಗಾಯಕ್ಕೆ ಯಾವುದೇ ಕಾರಣಕ್ಕೂ ಖಾರದ ಪುಡಿ, ಅರಿಶಿನ, ಸುಣ್ಣ ಅಥವಾ ಗಿಡಮೂಲಿಕೆಗಳನ್ನು ಹಚ್ಚದೆ ತಕ್ಷಣವೇ ಸಮೀಪದ ಸರ್ಕಾರಿ ಅಥವಾ ಖಾಸಗಿ ಆಸ್ಪತ್ರೆಗೆ ಭೇಟಿ ನೀಡಿ ರೇಬೀಸ್ ನಿರೋಧಕ ಲಸಿಕೆಯನ್ನು ಪಡೆಯಬೇಕು. ಗಾಯದ ತೀವ್ರತೆಗೆ ಅನುಗುಣವಾಗಿ ವೈದ್ಯರು ಆಂಟಿ–ರೇಬೀಸ್ ವ್ಯಾಕ್ಸಿನ್ ಮತ್ತು ರೇಬೀಸ್ ಇಮ್ಯುನೊಗ್ಲೋಬುಲಿನ್ ಚುಚ್ಚುಮದ್ದನ್ನು ನೀಡುತ್ತಾರೆ.

ರೇಬೀಸ್ ರೋಗ ಹರಡುವಿಕೆಯನ್ನು ತಡೆಯುವಲ್ಲಿ ಸಾಕುಪ್ರಾಣಿ ಮತ್ತು ಬೀದಿಪ್ರಾಣಿಗಳ ಆರೋಗ್ಯ ನಿರ್ವಹಣೆ ಅತ್ಯಂತ ಮುಖ್ಯವಾದ ಪಾತ್ರ ವಹಿಸುತ್ತದೆ. ಮಾನವರಲ್ಲಿ ಕಂಡುಬರುವ ಶೇಕಡಾ 99 ರಷ್ಟು ರೇಬೀಸ್ ಪ್ರಕರಣಗಳು ನಾಯಿಗಳ ಕಚ್ಚುವಿಕೆಯಿಂದಲೇ ಸಂಭವಿಸುವುದರಿಂದ, ಮನೆಯಲ್ಲಿ ಸಾಕುವ ನಾಯಿ ಹಾಗೂ ಬೆಕ್ಕುಗಳಿಗೆ ಸಕಾಲದಲ್ಲಿ ರೇಬೀಸ್ ನಿರೋಧಕ ಲಸಿಕೆಯನ್ನು ಹಾಕಿಸುವುದು ಪ್ರತಿಯೊಬ್ಬ ಪ್ರಾಣಿ ಮಾಲೀಕರ ಜವಾಬ್ದಾರಿಯಾಗಿದೆ. ಇದಲ್ಲದೆ ಸ್ಥಳೀಯ ಸಂಸ್ಥೆಗಳು, ಮಹಾನಗರ ಪಾಲಿಕೆಗಳು ಮತ್ತು ಸರ್ಕಾರಿ ರೋಗ ನಿಯಂತ್ರಣ ಮಂಡಳಿಗಳು ಬೀದಿ ನಾಯಿಗಳ ಸಂತಾನಶಕ್ತಿ ಹರಣ ಚಿಕಿತ್ಸೆ ಮತ್ತು ಸಮುದಾಯ ಮಟ್ಟದಲ್ಲಿ ಜಂಟಿ ಲಸಿಕಾ ಅಭಿಯಾನಗಳನ್ನು ಆಯೋಜಿಸುವುದು ಅಗತ್ಯವಾಗಿದೆ. ವಿಶ್ವ ಆರೋಗ್ಯ ಸಂಸ್ಥೆಯು 2030 ರ ವೇಳೆಗೆ ನಾಯಿಗಳಿಂದ ಹರಡುವ ರೇಬೀಸ್‌ನಿಂದ ಸಂಭವಿಸುವ ಮಾನವ ಸಾವುಗಳನ್ನು ಸಂಪೂರ್ಣವಾಗಿ ಇಲ್ಲದಂತೆ ಮಾಡುವ 'ಝೀರೋ ಬೈ 30' ಎಂಬ ಯೋಜನೆಯನ್ನು ರೂಪಿಸಿದ್ದು, ಈ ಗುರಿಯನ್ನು ಸಾಧಿಸಲು ಸಾರ್ವಜನಿಕರ ಸಹಭಾಗಿತ್ವ ಅತ್ಯಗತ್ಯವಾಗಿದೆ.

ರೇಬೀಸ್ ಮುಕ್ತ ಜಗತ್ತನ್ನು ನಿರ್ಮಿಸಲು ಪ್ರಾಣಿ ಆರೋಗ್ಯ, ಮಾನವ ಆರೋಗ್ಯ ಮತ್ತು ಪರಿಸರ ಆರೋಗ್ಯ ಕ್ಷೇತ್ರಗಳು ಒಟ್ಟಾಗಿ ಕೆಲಸ ಮಾಡುವ 'ಒಂದು ಆರೋಗ್ಯ' ಪರಿಕಲ್ಪನೆಯನ್ನು ಅಳವಡಿಸಿಕೊಳ್ಳುವುದು ಅತ್ಯಂತ ತುರ್ತು ಅಗತ್ಯವಾಗಿದೆ. ಶಾಲಾ–ಕಾಲೇಜುಗಳಲ್ಲಿ, ಗ್ರಾಮೀಣ ಪ್ರದೇಶಗಳಲ್ಲಿ ಮತ್ತು ದಿನಗೂಲಿ ಕಾರ್ಮಿಕರಲ್ಲಿ ರೇಬೀಸ್ ರೋಗದ ಅಪಾಯ ಹಾಗೂ ಪ್ರಥಮ ಚಿಕಿತ್ಸೆಯ ಬಗ್ಗೆ ವ್ಯಾಪಕ ಅರಿವು ಮೂಡಿಸಬೇಕಿದೆ. ಬೀದಿ ನಾಯಿಗಳನ್ನು ಹಿಂಸಿಸದೆ ಅವುಗಳೊಂದಿಗೆ ಸುರಕ್ಷಿತವಾಗಿ ನಡೆದುಕೊಳ್ಳುವ ವಿಧಾನಗಳನ್ನು ಮಕ್ಕಳಿಗೆ ತಿಳಿಸಿಕೊಡುವುದು ಕೂಡ ಅಪಘಾತಗಳನ್ನು ತಡೆಯಲು ನೆರವಾಗುತ್ತದೆ. ಸೂಕ್ತ ಸಮಯಕ್ಕೆ ಲಸಿಕೆ ಪಡೆಯುವುದು, ಉಚಿತ ವೈದ್ಯಕೀಯ ಸೇವೆಗಳ ಸೌಲಭ್ಯವನ್ನು ಬಳಸಿಕೊಳ್ಳುವುದು ಮತ್ತು ಸಮುದಾಯದಲ್ಲಿ ಅರಿವು ಹಂಚಿಕೊಳ್ಳುವುದರಿಂದ ಮಾತ್ರ ಪ್ರಾಣಿಗಳಿಂದ ಬರುವ ಈ ಭಯಾನಕ ರೋಗದಿಂದ ಸಾವು–ನೋವುಗಳು ಸಂಭವಿಸದಂತೆ ಶಾಶ್ವತವಾಗಿ ತಡೆಯಲು ಸಾಧ್ಯವಿದೆ.

## ಹನುಮಾನ್ ಅಂಶ್ ಇತಿಹಾಸ 400 ಕೋಟಿ ಕ್ಲಬ್‌ಗೆ ಎಂಟ್ರಿ

ಮುಂಬೈ,ಸೆ.28:– ವಿಶಾಲ್ ಚತುರ್ವೇದಿ ನಿರ್ದೇಶನದ ಭಕ್ತಿಪ್ರಧಾನ ಚಿತ್ರ ಹನುಮಾನ್ ಅಂಶ್ ಚಿತ್ರಮಂದಿರಗಳಲ್ಲಿ ಪ್ರದರ್ಶನ ಆರಂಭಿಸಿದ ದಿನದಿಂದಲೂ ಪ್ರತಿದಿನವೂ ಅದ್ಭುತ ಕಲೆಕ್ಷನ್ ಮಾಡುವ ಮೂಲಕ ಬಾಕ್ಸ್ ಆಫೀಸ್‌ನಲ್ಲಿ ಹೊಸ ಇತಿಹಾಸ ಸೃಷ್ಟಿಸುತ್ತಿದೆ.



ಕೇವಲ 2 ಕೋಟಿ (ಸುಮಾರು $20 ಮಿಲಿಯನ್) ಸಣ್ಣ ಬಜೆಟ್‌ನಲ್ಲಿ ನಿರ್ಮಾಣಗೊಂಡಿದ್ದ ಈ ಚಿತ್ರವು, ಆರಂಭದ ಎರಡು ವಾರಗಳಲ್ಲಿ ನಿಧಾನಗತಿಯ ಗಳಿಕೆ ಕಂಡು ಹಾಗೂ ಇತರ ಹೊಸ ಸಿನಿಮಾಗಳ ಬಿಡುಗಡೆಯಿಂದಾಗಿ ಪ್ರದರ್ಶನಗಳ ಸಂಖ್ಯೆ ಕಡಿಮೆಯಾಗಿದ್ದರೂ, ದಿನಗಳೆದಂತೆ ಪ್ರೇಕ್ಷಕರ ಮನ ಗೆಲ್ಲುವಲ್ಲಿ ಯಶಸ್ವಿಯಾಯಿತು.

ಚಿತ್ರಮಂದಿರಗಳಲ್ಲಿ ಯಶಸ್ವಿ 50 ದಿನಗಳನ್ನು ಪೂರೈಸಿದ ನಂತರವೂ ಅನೇಕ ಹೊಸ ಸಿನಿಮಾಗಳು ಬಂದು ಹೋದರೂ ಈ ಚಿತ್ರದ ಗಳಿಕೆ ಮತ್ತು ಪ್ರದರ್ಶನದ ಮೇಲೆ ಯಾವುದೇ ರೀತಿಯ ಪರಿಣಾಮ ಬೀರದಿರುವುದು ವಿಶೇಷವಾಗಿದೆ.

ಇದೀಗ ಪ್ರದರ್ಶನದ 52ನೇ ದಿನಕ್ಕೆ ಕಾಲಿಟ್ಟಿರುವ ಹನುಮಾನ್ ಅಂಶ್ ಭಾನುವಾರದಂದು ಮತ್ತೊಂದು ಪ್ರಮುಖ ಮೈಲಿಗಲ್ಲನ್ನು ತಲುಪುವ ಮೂಲಕ ಚಾರಿತ್ರಿಕ ಕಲೆಕ್ಷನ್ ದಾಖಲಿಸಿದೆ. ಜಾಗತಿಕ ಮಟ್ಟದಲ್ಲೂ ಭಾರಿ ಸದ್ದು ಮಾಡುತ್ತಿರುವ ಈ ಸಿನಿಮಾ, ವಿದೇಶಿ ಮಾರುಕಟ್ಟೆಯಿಂದ ಬಂದ 38.50 ಕೋಟಿ ಸೇರಿದಂತೆ ಒಟ್ಟಾರೆಯಾಗಿ ವಿಶ್ವಾದ್ಯಂತ 401.20 ಕೋಟಿಗೂ ಅಧಿಕ ಗಳಿಕೆ ಮಾಡುವ ಮೂಲಕ 400 ಕೋಟಿಯ ಬೃಹತ್ ಮೈಲಿಗಲ್ಲನ್ನು ಯಶಸ್ವಿಯಾಗಿ ದಾಟಿದೆ.

## ಲತಾ ಮಂಗೇಶ್ಕರ್ ಜನ್ಮದಿನ: ಪ್ರಧಾನಿಯಿಂದ ಗೌರವ ಸಮರ್ಪಣೆ

ನವದೆಹಲಿ,ಸೆ.28–ನರೇಂದ್ರ ಮೋದಿ ಅವರು ಭಾರತ ರತ್ನ ಲತಾ ಮಂಗೇಶ್ಕರ್ ಅವರ ಜನ್ಮ ವಾರ್ಷಿಕೋತ್ಸವದಂದು ಅವರಿಗೆ ಗಣ್ಯ ಗೌರವ ಹಾಗೂ ಆದರಪೂರ್ವಕ ಶ್ರದ್ಧಾಂಜಲಿಯನ್ನು ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್ ಪೋಸ್ಟ್‌ನಲ್ಲಿ ಲತಾ ಮಂಗೇಶ್ಕರ್ ಅವರನ್ನು ಸ್ಮರಿಸಿದ ಮೋದಿ ಅವರು, ಲತಾಜಿಯವರು ತಮ್ಮ ದಿವ್ಯ ಗಾಯನ ಪ್ರತಿಭೆ ಮತ್ತು ಮಧುರ ಧ್ವನಿಯಿಂದ ಪ್ರಪಂಚದಾದ್ಯಂತ ಭಾರತಕ್ಕೆ ಅಪಾರ ಕೀರ್ತಿ ಮತ್ತು ಹೆಮ್ಮೆಯನ್ನು ತಂದುಕೊಟ್ಟಿದ್ದಾರೆ ಎಂದು ಬಣ್ಣಿಸಿದರು. ಲತಾ ಮಂಗೇಶ್ಕರ್ ಅವರು ಕೇವಲ ತಮ್ಮ ಕಂಠಸಿರಿಯಿಂದ ಭಾರತೀಯ ಸಂಗೀತ ಲೋಕವನ್ನು ಮತ್ತು ದೇಶವನ್ನು ಶ್ರೀಮಂತಗೊಳಿಸಿದ್ದು ಮಾತ್ರವಲ್ಲದೆ, ದೇಶದ ಪ್ರಗತಿ ಹಾಗೂ ಸಮೃದ್ಧಿಗೆ ಸಂಬಂಧಿಸಿದ ಪ್ರತಿಯೊಂದು ರಾಷ್ಟ್ರೀಯ ಪ್ರಯತ್ನವನ್ನೂ ನಿರಂತರವಾಗಿ ಪ್ರೋತ್ಸಾಹಿಸಿ ಜೊತೆಗೂಡಿದ್ದರು ಎಂದು ಪ್ರಧಾನಿ ಪ್ರಶಂಸಿಸಿದ್ದಾರೆ. ಅಷ್ಟೇ ಅಲ್ಲದೆ, ಭಾರತೀಯ ಸಂಗೀತ ಕ್ಷೇತ್ರಕ್ಕೆ ಲತಾ ಮಂಗೇಶ್ಕರ್ ಅವರು ನೀಡಿದ ಅನುಪಮ ಹಾಗೂ ಅಮೂಲ್ಯ ಕೊಡುಗೆಗಳು ಮುಂಬರುವ ಯುಗಯುಗಾಂತರಗಳಿಗೂ ಪ್ರತಿಯೊಬ್ಬ ಭಾರತೀಯನ ಮನದಲ್ಲಿ ಎಂದೆಂದಿಗೂ ಸ್ಮರಣೀಯವಾಗಿ ಉಳಿಯಲಿವೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಿಳಿಸಿದ್ದಾರೆ.



## ವೀರಶೈವ ಶಿವಾಚಾರ್ಯ ಸಂಸ್ಥೆಗೆ 2 ಎಕರೆ ಜಮೀನು ಡಾ.ಎಸ್‌ಪಿ. ದಯಾನಂದ ಧನ್ಯವಾದ



ಬೆಂಗಳೂರು: ಸೆ.28:– ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಗೆ ಎರಡು ಎಕರೆ ಜಮೀನು ನೀಡುವುದಾಗಿ ಘೋಷಿಸಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಡಿ.ಎಸ್. ಮ್ಯಾಕ್ಸ್ ಕಾರ್ಯ ನಿರ್ವಾಹಕ ನಿರ್ದೇಶಕ ಮತ್ತು ಸಹ ಸಂಸ್ಥಾಪಕ ಡಾ.ಎಸ್.ಪಿ. ದಯಾನಂದ ಅವರು ಧನ್ಯವಾದಗಳನ್ನು ತಿಳಿಸಿದ್ದಾರೆ.

ಭಾನುವಾರ ಬಸವೇಶ್ವರ ಸುಜ್ಞಾನ ಮಂಟಪದಲ್ಲಿ ಏರ್ಪಡಿಸಿದ್ದ ವೀರಶೈವ ಲಿಂಗಾಯತ ಧರ್ಮ ಸಂರಕ್ಷಣಾ ಸಮ್ಮೇಳನದಲ್ಲಿ ಮಾತನಾಡಿದ ದಯಾನಂದ ಅವರು, ಸಮಾಜದ ಸರ್ವತೋಮುಖ ಬೆಳವಣಿಗೆಗೆ ವೀರಶೈವ ಮತ್ತು ಲಿಂಗಾಯತ ಸಮುದಾಯದ ಪ್ರತಿಯೊಬ್ಬರೂ ಭೇದಭಾವವಿಲ್ಲದೆ ಒಂದಾಗುವುದು ಇಂದಿನ ಕಾಲಘಟ್ಟದಲ್ಲಿ ಅತ್ಯಂತ ಅಗತ್ಯ ಎಂದು ಬಲವಾಗಿ ಪ್ರತಿಪಾದಿಸಿದರು. ಸಮಾಜದಲ್ಲಿರುವ ನೂರಾರು ಉಪಪಂಗಡಗಳನ್ನು ಒಂದೇ ವೇದಿಕೆಯಡಿಯಲ್ಲಿ ಸಂಘಟಿಸಿ, ಆಂತರಿಕ ಭಿನ್ನಾಭಿಪ್ರಾಯಗಳನ್ನು ಮರೆತು ಕಷ್ಟ–ಸುಖಗಳಿಗೆ ಪರಸ್ಪರ ಸ್ಪಂದಿಸಬೇಕಿದೆ ಎಂದರು.

ಮಠಾಧೀಶರ ಹಾಗೂ ಹಿರಿಯರ ಮಾರ್ಗದರ್ಶನದಲ್ಲಿ ಯುವಜನತೆ ಶಿಕ್ಷಣ, ಉದ್ಯಮ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಕೈಜೋಡಿಸಿ ಬಲವಾದ ಸಮಾಜ ನಿರ್ಮಾಣಕ್ಕೆ ಶ್ರಮಿಸಬೇಕು ಎಂದು ಕರೆ ನೀಡಿದರು. ಸರ್ಕಾರದ ಈ ಭೂಮಿ ಮಂಜೂರಾತಿ ಕೊಡುಗೆಯು ಸಂಸ್ಥೆಯ ಶೈಕ್ಷಣಿಕ ಹಾಗೂ ಧಾರ್ಮಿಕ ಚಟುವಟಿಕೆಗಳನ್ನು ವಿಸ್ತರಿಸಲು ಬೃಹತ್ ಶಕ್ತಿಯಾಗಲಿದೆ ಎಂದು ದಯಾನಂದ ಅವರು ಹರ್ಷ ವ್ಯಕ್ತಪಡಿಸಿದರು.

ಇದೇ ವೇಳೆ ಸಮ್ಮೇಳನಕ್ಕೆ ಆಗಮಿಸಿದ್ದ ಸ್ವಾಮೀಜಿರವರಿಗೆ ಸ್ವಂತ ವೆಚ್ಚದಲ್ಲಿ 600ಕ್ಕೂ ಹೆಚ್ಚು ಬ್ಯಾಗ್‌ಗಳನ್ನು ದಯಾನಂದ ಅವರು ಉಚಿತವಾಗಿ ವಿತರಿಸಿ ಸೇವಾ ಕಾರ್ಯ ನೆರವೇರಿಸಿದರು.

## ಎಫ್‌ಎಮ್‌ಸಿಜಿ ವಲಯದಲ್ಲಿ ಬಿಕ್ಕಟ್ಟು ಅಗತ್ಯ ವಸ್ತು ಮಾರಾಟ ಕುಸಿತ



ನವದೆಹಲಿ,ಸೆ.28–ಭಾರತದ ದಿನನಿತ್ಯದ ಬಳಕೆಯ ಸರಕುಗಳ (ಎಫ್‌ಎಮ್‌ಸಿಜಿ) ಮಾರುಕಟ್ಟೆ ಪ್ರಸ್ತುತ ತೀವ್ರ ಬಿಕ್ಕಟ್ಟನ್ನು ಎದುರಿಸುತ್ತಿದ್ದು, ದಿನನಿತ್ಯದ ಅಗತ್ಯ ವಸ್ತುಗಳ ಮಾರಾಟವು ಭಾರಿ ಪ್ರಮಾಣದಲ್ಲಿ ಕುಸಿದಿದೆ. ಪ್ರಮುಖ ಕಂಪನಿಗಳು ಸಹ ಈ ಕುಸಿತದಿಂದ ಕಂಗಾಲಾಗಿದ್ದು, ನೀಲ್ಸನ್‌ಐಕ್ಯೂನ ಎರಡನೇ ತ್ರೈಮಾಸಿಕದ ವರದಿಯು ಮಾರುಕಟ್ಟೆಯ ಆತಂಕಕಾರಿ ಚಿತ್ರಣವನ್ನು ಹೊರಹಾಕಿದೆ. ಏಪ್ರಿಲ್‌ನಿಂದ ಜೂನ್‌ವರೆಗಿನ ತ್ರೈಮಾಸಿಕದಲ್ಲಿ ಎಫ್‌ಎಮ್‌ಸಿಜಿ ವಲಯವು ಉತ್ಪಾದನಾ ವೆಚ್ಚಗಳ ಏರಿಕೆ, ಚಲನಶೀಲತೆಯ ಕೊರತೆ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿನ ಆದಾಯ ಕುಸಿತದಂತಹ ಮೂರು ಪ್ರಮುಖ ಹಿನ್ನಡೆಗಳನ್ನು ಎದುರಿಸಿದೆ. ಪರಿಸ್ಥಿತಿ ಎಷ್ಟು ಗಂಭೀರವಾಗಿದೆಯೆಂದರೆ, ಒಟ್ಟು ಎಫ್‌ಎಮ್‌ಸಿಜಿ ಬುಟ್ಟಿಯ ಶೇಕಡಾ 68 ರಷ್ಟು ಮಾರಾಟ ಕುಸಿದಿದ್ದು, ಪರಿಮಾಣದ ದೃಷ್ಟಿಯಿಂದ ಮಾರಾಟವು ಶೇಕಡಾ 2 ರಷ್ಟು ಕಡಿಮೆಯಾಗಿದೆ. ಮೌಲ್ಯದ ಆಧಾರದ ಮೇಲಿನ ಬೆಳವಣಿಗೆಯೂ ಕೇವಲ ಶೇಕಡಾ 0.8 ಕ್ಕೆ ಸೀಮಿತವಾಗಿದ್ದರೆ, ಮಾರುಕಟ್ಟೆಯಲ್ಲಿ ಬೆಲೆಗಳು ಶೇಕಡಾ 2.8 ರಷ್ಟು ಏರಿಕೆಯಾಗಿವೆ. ಹೆಚ್ಚುತ್ತಿರುವ ಹಣದುಬ್ಬರದಿಂದಾಗಿ ಗ್ರಾಹಕರು ಅಗತ್ಯ ವಸ್ತುಗಳನ್ನು ಖರೀದಿಸಲು ಸಹ ಹಿಂದೇಟು ಹಾಕುತ್ತಿದ್ದಾರೆ.

ಈ ಆರ್ಥಿಕ ಹಿಂಜರಿತದ ಬಿಸಿ ನಗರಗಳಿಗಿಂತ ಹೆಚ್ಚಾಗಿ ಗ್ರಾಮೀಣ ಭಾರತಕ್ಕೆ ತಟ್ಟಿದೆ. ನಗರ ಪ್ರದೇಶಗಳಲ್ಲಿ ಮಾರಾಟವು ಶೇಕಡಾ 0.1 ರಷ್ಟು ಸ್ಥಿರವಾಗಿದ್ದರೆ, ಹಳ್ಳಿಗಳಲ್ಲಿ ಶೇಕಡಾ 5 ರಷ್ಟು ಭಾರಿ ಕುಸಿತ ಕಂಡಿದೆ. ಜೂನ್ ತಿಂಗಳಲ್ಲಿ ಸಗಟು ಹಣದುಬ್ಬರವು ಶೇಕಡಾ 9.9 ಕ್ಕೆ ತಲುಪಿದ್ದು, ಚಿಲ್ಲರೆ ಹಣದುಬ್ಬರವು ಶೇಕಡಾ 4.4 ರಷ್ಟಿತ್ತು. ಇದರೊಂದಿಗೆ ಕಚ್ಚಾ ತೈಲ ಬೆಲೆಗಳು ಪ್ರತಿ ಬ್ಯಾರೆಲ್‌ಗೆ ನೂರು ಡಾಲರ್ ದಾಟಿರುವುದರಿಂದ ಸರಕು ಸಾಗಣೆ ಹಾಗೂ ಪ್ಯಾಕೇಜಿಂಗ್ ವೆಚ್ಚಗಳು ದುಬಾರಿಯಾಗಿವೆ. ಗ್ರಾಮೀಣ ಭಾಗದಲ್ಲಿ ಮಳೆ ಶೇಕಡಾ 40 ರಷ್ಟು ಕಡಿಮೆಯಾಗಿ ಕೃಷಿ ಬಿತ್ತನೆ ವಿಳಂಬವಾಗಿದ್ದು, ಗ್ರಾಮೀಣ ನಿರುದ್ಯೋಗ ದರವು ಶೇಕಡಾ 5.1 ಕ್ಕೆ ಏರಿಕೆಯಾಗಿದೆ. ಕಾರ್ಮಿಕ ಬಲದ ಭಾಗವಹಿಸುವಿಕೆಯೂ ಶೇಕಡಾ 0.6 ರಷ್ಟು ಕಡಿಮೆಯಾಗಿದ್ದು, ಜನರ ಆದಾಯದ ಮೇಲೆ ನೇರ ಹೊಡೆತ ಬಿದ್ದಿದೆ. ದೇಶದ ಒಟ್ಟು ಕುಸಿತದಲ್ಲಿ ಶೇಕಡಾ 86 ರಷ್ಟು ಕೊಡುಗೆ ನೀಡಿರುವ ಉತ್ತರ ಪ್ರದೇಶ, ಪಶ್ಚಿಮ ಬಂಗಾಳ, ಮಧ್ಯಪ್ರದೇಶ, ಬಿಹಾರ, ರಾಜಸ್ಥಾನ, ಪಂಜಾಬ್ ಮತ್ತು ಮಹಾರಾಷ್ಟ್ರ ರಾಜ್ಯಗಳು ತೀವ್ರ ಸಂಕಷ್ಟಕ್ಕೆ ಸಿಲುಕಿವೆ.

ಮಾರುಕಟ್ಟೆಯ ಈ ಮಂದಗತಿಯ ನಡುವೆಯೂ ಗ್ರಾಹಕರ ಶಾಪಿಂಗ್ ವಿಧಾನದಲ್ಲಿ ಗಮನಾರ್ಹ ಬದಲಾವಣೆಗಳು ಕಂಡುಬಂದಿವೆ. ದೇಶದ ಶೇಕಡಾ 82 ರಷ್ಟು ವ್ಯಾಪಾರವನ್ನು ಹೊಂದಿರುವ ಸಾಂಪ್ರದಾಯಿಕ ದಿನಸಿ ಅಂಗಡಿಗಳಲ್ಲಿ ಮಾರಾಟವು ಶೇಕಡಾ 6 ರಷ್ಟು ಕುಸಿದಿದ್ದರೆ, ಬೃಹತ್ ಸೂಪರ್‌ಮಾರ್ಕೆಟ್‌ಗಳು ಹಾಗೂ ಆಧುನಿಕ ವ್ಯಾಪಾರ ಕೇಂದ್ರಗಳು ಶೇಕಡಾ 17.5 ರಷ್ಟು ಪ್ರಭಾವಶಾಲಿ ಬೆಳವಣಿಗೆ ದಾಖಲಿಸಿವೆ. ಇ–ಕಾಮರ್ಸ್ ವಲಯವು ಶೇಕಡಾ 34.8 ರಷ್ಟು ವೃದ್ಧಿಯಾಗಿದ್ದು, ಎರಡನೇ ಹಾಗೂ ಮೂರನೇ ಹಂತದ ನಗರಗಳಲ್ಲಿ ಆನ್‌ಲೈನ್ ಶಾಪಿಂಗ್ ವೇಗವಾಗಿ ಬೆಳೆಯುತ್ತಿದೆ. ಮಹಾನಗರಗಳಲ್ಲಿ ಹತ್ತು ನಿಮಿಷಗಳ ವಿತರಣೆಯ ಕ್ವಿಕ್ ಕಾಮರ್ಸ್ ತಂತ್ರಜ್ಞಾನವು ಪ್ರಬಲವಾಗಿದ್ದು, ಒಟ್ಟು ಇ–ಕಾಮರ್ಸ್ ಮಾರುಕಟ್ಟೆಯಲ್ಲಿ ಇದರ ಪಾಲು ಶೇಕಡಾ 76 ರಿಂದ ಶೇಕಡಾ 85 ಕ್ಕೆ ಏರಿದೆ.

# ಸಿಇಸಿ ವಿರುದ್ಧ ತನಿಖೆಗೆ ಎಂಬಿಪಿ ಒತ್ತಾಯ

ವಿಜಯಪುರ,ಸೆ.28– ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಆರೋಪಗಳ ಕುರಿತು ತನಿಖೆ ನಡೆಯಬೇಕು. ಕೂಡಲೇ ಅವರನ್ನು ಹುದ್ದೆಯಿಂದ ತೆಗೆದುಹಾಕಬೇಕು.ಸುಪ್ರೀಂಕೋರ್ಟ್‌ನಲ್ಲಿ ಈ ವಿಚಾರವಾಗಿ ತನಿಖೆ ನಡೆಯಬೇಕು ಮತ್ತು ಚುನಾವಣಾ ಆಯೋಗದಲ್ಲಿ ಪ್ರಾಮಾಣಿಕ ವ್ಯಕ್ತಿಯನ್ನು ನೇಮಕ ಮಾಡಬೇಕು ಎಂದು ಸಚಿವ ಎಂ.ಬಿ. ಪಾಟೀಲ್ ಒತ್ತಾಯಿಸಿದರು.

ವಿಜಯಪುರದಲ್ಲಿ ನಡೆದ ಮಾತನಾಡಿದ ಅವರು,ಎರಡು ಕಡೆಗಳಲ್ಲಿ ಹೆಸರು ಇರುವ ಮತದಾರರನ್ನು ನಿಯಮಾನುಸಾರ ತೆಗೆದುಹಾಕುವುದಕ್ಕೆ ತಮ್ಮ ಆಕ್ಷೇಪವಿಲ್ಲ. ಆದರೆ, ಚುನಾವಣೆಯಲ್ಲಿ ಗೆಲ್ಲುವ ಉದ್ದೇಶದಿಂದ ಅರ್ಹ ಮತದಾರರ ಹೆಸರುಗಳನ್ನು ತೆಗೆದುಹಾಕುವುದು ಸರಿಯಲ್ಲ ಎಂದು ಹೇಳಿದರು.

ಚುನಾವಣಾ ಆಯೋಗವನ್ನು ದುರುಪಯೋಗಪಡಿಸಿಕೊಂಡು ಅರ್ಹ ಮತದಾರರ ಹಕ್ಕುಗಳನ್ನು ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಮುಂದಿನ 18 ತಿಂಗಳಲ್ಲಿ ಚುನಾವಣೆ ನಡೆಯಲಿದ್ದು,ಉತ್ತರ ಪ್ರದೇಶ, ಗುಜರಾತ್ ಸೇರಿದಂತೆ ಹಲವು ರಾಜ್ಯಗಳಲ್ಲೂ ಚುನಾವಣೆಗಳು ನಡೆಯಲಿವೆ.ಹೀಗಾಗಿ ಈ ಪ್ರಕ್ರಿಯೆ ಮುಂದುವರಿಯುವ ಸಾಧ್ಯತೆ ಇದೆ ಎಂದು ಹೇಳಿದರು.

ವಿಜಯಪುರದಲ್ಲಿ ಆಕ್ಷೇಪಣೆಗಳ ಕುರಿತು ಆರೋಪ: ಬಬಲೇಶ್ವರ ವಿಧಾನಸಭಾ ಕ್ಷೇತ್ರದಲ್ಲಿ 1,372 ಮತದಾರರಿಗೆ ಸಂಬಂಧಿಸಿದ ಆಕ್ಷೇಪಣಾ ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ಎಂ.ಬಿ. ಪಾಟೀಲ ತಿಳಿಸಿದರು.ದೊಡ್ಡಪ್ರಮಾಣದಲ್ಲಿ ಮತದಾರರನ್ನು ತೆಗೆದುಹಾಕುವಂತೆ 7–8 ಮಂದಿ ಅರ್ಜಿಗಳನ್ನು ಸಲ್ಲಿಸಿದ್ದು,ಬಳಿಕ ಆ ಅರ್ಜಿಗಳನ್ನು ಹಿಂಪಡೆದಿದ್ದಾರೆ ಎಂದು ಆರೋಪಿಸಿದರು.

ವಿಜಯಪುರ ನಗರ ವಿಧಾನಸಭಾ ಕ್ಷೇತ್ರದಲ್ಲಿ ಸೆ.22ರಂದು ಸುಮಾರು 5,000 ಆಕ್ಷೇಪಣಾ ಅರ್ಜಿಗಳು ಹಾಗೂ ಸೆ.23ರಂದು ಮತ್ತೊಮ್ಮೆ ಸುಮಾರು 8,000 ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ಹೇಳಿದರು.

ಈ ಅರ್ಜಿಗಳಿಗೆ ಸಂಬಂಧಿಸಿದಂತೆ ಸತೀಶ್ ಪದಮಾನೂರ, ಚಂದ್ರಶೇಖರ ಕವಟಗಿ,ರಾಜಶೇಖರ,ಪ್ರೇಮಾನಂದ ಬಿರಾದಾರ,ಗಿರೀಶ್ ಬಿರಾದಾರ್ ಹಾಗೂ ಚಂದ್ರು ಚೌಧರಿ ಅವರ ಹೆಸರುಗಳನ್ನು ಸಚಿವರು ಉಲ್ಲೇಖಿಸಿದರು.

ಈ ಬೆಳವಣಿಗೆಗಳು ಮೇಲ್ನೋಟಕ್ಕೆ ಹಲವು ಪ್ರಶ್ನೆಗಳನ್ನು ಹುಟ್ಟುಹಾಕುತ್ತವೆ. ಯಾರೇ ಆಗಿದ್ದರೂ ಅರ್ಹ ಮತದಾರರ ಮತದಾನದ ಹಕ್ಕನ್ನು ಕಸಿದುಕೊಳ್ಳಬಾರದು ಎಂದರು.

ಕಾರಜೋಳ ಹೇಳಿಕೆಗೆ ಪ್ರತಿಕ್ರಿಯೆ : ಜ್ಞಾನೇಶ್ ಕುಮಾರ್ ದಲಿತ ಸಮುದಾಯಕ್ಕೆ ಸೇರಿದವರು ಎಂಬ ಕಾರಣಕ್ಕೆ ಕಾಂಗ್ರೆಸ್ ಅವರನ್ನು ಗುರಿಯಾಗಿಸಿಕೊಂಡಿದೆ ಎಂಬ ಸಂಸದರಾದ ರಮೇಶ್ ಜಿಗಜಿಣಗಿ ಹಾಗೂ ಗೋವಿಂದ ಕಾರಜೋಳ ಹೇಳಿಕೆಗೆ ಪ್ರತಿಕ್ರಿಯಿಸಿದ ಪಾಟೀಲ್,ತಪ್ಪು ಮಾಡಿದ ವ್ಯಕ್ತಿ ಯಾವುದೇ ಜಾತಿಯವರಾಗಿದ್ದರೂ ಪ್ರಶ್ನಿಸಬೇಕು ಎಂದರು.

ದಲಿತ ಇರಲಿ,ಲಿಂಗಾಯತ ಇರಲಿ, ತಪ್ಪು ಮಾಡುವ ಹಾಗಿಲ್ಲ.ಲಿಂಗಾಯತ ಇದ್ದಾರೆ ಎಂದರೆ ಏನು ಬೇಕಾದರೂ ಮಾಡಬಹುದಾ? ಎಂದು ಪ್ರಶ್ನಿಸಿದ ಅವರು, ಯಾವುದೇ ವಿಚಾರವನ್ನು ಜಾತಿಯೊಂದಿಗೆ ಜೋಡಿಸುವುದು ಸರಿಯಲ್ಲ ಎಂದು ಹೇಳಿದರು.

ತಮ್ಮ ಮತಕ್ಷೇತ್ರದಲ್ಲಿ 1,372 ಮತದಾರರ ಹೆಸರುಗಳ ವಿಚಾರದಿಂದ ವೈಯಕ್ತಿಕವಾಗಿ ತಮಗೆ ಯಾವುದೇ ಸಮಸ್ಯೆ ಇಲ್ಲ. ಆದರೆ ಒಬ್ಬನೇ ಒಬ್ಬ ಅರ್ಹ ಮತದಾರ ತನ್ನ ಮತದಾನದ ಹಕ್ಕನ್ನು ಕಳೆದುಕೊಳ್ಳಬಾರದು ಎಂಬುದು ತಮ್ಮ ಉದ್ದೇಶ ಎಂದು ಸ್ಪಷ್ಟಪಡಿಸಿದರು.

ಕೇಂದ್ರದ ನೆರವಿಗೆ ಪಾಟೀಲ ಆಗ್ರಹ: ಬರ ಪರಿಸ್ಥಿತಿ ವಿಚಾರದಲ್ಲೂ ಕೇಂದ್ರ ಸರ್ಕಾರ ಕರ್ನಾಟಕಕ್ಕೆ ತಾರತಮ್ಯ ಮಾಡುತ್ತಿದೆ ಎಂದು ಎಂ.ಬಿ. ಪಾಟೀಲ ಆರೋಪಿಸಿದರು.

ವಿಜಯಪುರ ಜಿಲ್ಲೆಯಲ್ಲಿ ಸದ್ಯ ಕುಡಿಯುವ ನೀರಿಗೆ ದೊಡ್ಡ ಸಮಸ್ಯೆ ಎದುರಾಗಿಲ್ಲ.ಮಹಾರಾಷ್ಟ್ರದಲ್ಲಿ ಉತ್ತಮ ಮಳೆಯಾಗಿ ಆಲಮಟ್ಟಿ ಜಲಾಶಯ ಭರ್ತಿಯಾಗಿರುವುದರಿಂದ ಕುಡಿಯುವ ನೀರಿನ ಸಮಸ್ಯೆ ಉಂಟಾಗಿಲ್ಲ ಎಂದು ಹೇಳಿದರು.

ಆದರೆ ಮಳೆ ಆಧಾರಿತ ಕೃಷಿಗೆ ಭಾರಿ ಹಾನಿಯಾಗಿದೆ ಎಂದು ಹೇಳಿದ ಅವರು, ತೊಗರಿ, ಹತ್ತಿ, ಕಬ್ಬು ಸೇರಿದಂತೆ ಹಲವು ಬೆಳೆಗಳು ಹಾನಿಗೊಳಗಾಗಿವೆ.ಕೇಂದ್ರಸರ್ಕಾರ ತಕ್ಷಣ ರೈತರ ನೆರವಿಗೆ ಧಾವಿಸಬೇಕು ಹಾಗೂ ರೈತರ ಸಾಲ ಮನ್ನಾ ಮಾಡಬೇಕು ಎಂದು ಆಗ್ರಹಿಸಿದರು.

# 18 ರಾಜ್ಯಗಳಲ್ಲಿ ಭಾರಿ ಮಳೆ ಮುನ್ಸೂಚನೆ



ನವದೆಹಲಿ,ಸೆ.28–ದೇಶದ ವಿವಿಧ ಭಾಗಗಳಲ್ಲಿ ಹವಾಮಾನ ವ್ಯವಸ್ಥೆಯು ದಿಢೀರ್ ಬದಲಾಗಿದ್ದು, ಮಾನ್ಸೂನ್ ನಿರ್ಗಮನದ ಹೊಸ್ತಿಲಲ್ಲಿ ಹಲವು ರಾಜ್ಯಗಳಲ್ಲಿ ಧಾರಾಕಾರ ಮಳೆ ಹಾಗೂ ಬಲವಾದ ಬಿರುಗಾಳಿ ಮುಂದುವರಿದಿದೆ ಎಂದು ಭಾರತೀಯ ಹವಾಮಾನ ಇಲಾಖೆಯ (ಐಎಂಡಿ) ಮುನ್ಸೂಚನೆ ನೀಡಿದೆ.ಈಶಾನ್ಯ ಮಧ್ಯಪ್ರದೇಶ ಮತ್ತು ಉತ್ತರ ಛತ್ತೀಸ್‌ಗಢದಲ್ಲಿದ್ದ ವಾಯುಭಾರ ಕುಸಿತವು ಕ್ಷೀಣಿಸಿ ಕಡಿಮೆ ಒತ್ತಡದ ಪ್ರದೇಶವಾಗಿ ಮಾರ್ಪಟ್ಟಿದೆ. ಇದರ ಜೊತೆಗೆ, ದಕ್ಷಿಣ ಮ್ಯಾನ್ಮಾರ್ ಕರಾವಳಿಯಲ್ಲಿ ಸೃಷ್ಟಿಯಾಗಿರುವ ಮತ್ತೊಂದು ಹೊಸ ಕಡಿಮೆ ಒತ್ತಡದ ವಲಯವು ಮುಂದಿನ 24 ಗಂಟೆಗಳಲ್ಲಿ ಉತ್ತರ ಅಂಡಮಾನ್ ಸಮುದ್ರ ಹಾಗೂ ಮ್ಯಾನ್ಮಾರ್–ಬಾಂಗ್ಲಾದೇಶ ಕರಾವಳಿಯ ಈಶಾನ್ಯ ಬಂಗಾಳಕೊಲ್ಲಿಗೆ ಚಲಿಸುವ ಸಾಧ್ಯತೆಯಿದೆ. ಈ ಪ್ರಭಾವದಿಂದಾಗಿ ದೇಶಾದ್ಯಂತ ಮೋಡ ಕವಿದ ವಾತಾವರಣ ಸೃಷ್ಟಿಯಾಗಿದ್ದು, ಇಂದು ಉತ್ತರ ಪ್ರದೇಶ, ಬಿಹಾರ, ಜಾರ್ಖಂಡ್, ಪಶ್ಚಿಮ ಬಂಗಾಳ, ಒಡಿಶಾ, ಮಧ್ಯಪ್ರದೇಶ, ಛತ್ತೀಸ್‌ಗಢ, ಗುಜರಾತ್ ಹಾಗೂ ಉತ್ತರಾಖಂಡ ಸೇರಿದಂತೆ ಒಟ್ಟು 18 ರಾಜ್ಯಗಳಲ್ಲಿ ಮಿಂಚು ಮತ್ತು ಸಿಡಿಲು ಸಹಿತ ಭಾರಿ ಮಳೆಯಾಗುವ ಕುರಿತು ರೆಡ್ ಅಲರ್ಟ್ ಮಾದರಿಯ ತೀವ್ರ ಎಚ್ಚರಿಕೆ ನೀಡಲಾಗಿದೆ.

?ಮಳೆಯ ತೀವ್ರತೆ ಹಾಗೂ ಗಂಟೆಗೆ 60 ಕಿಲೋಮೀಟರ್ ವೇಗದಲ್ಲಿ ಬೀಸಲಿರುವ ಬಿರುಗಾಳಿಯಿಂದಾಗಿ ಸಾಮಾನ್ಯ ಜೀವನ ಅಸ್ತವ್ಯಸ್ತಗೊಳ್ಳುವ ಭೀತಿಯಿದ್ದು, ವಿಶೇಷವಾಗಿ ಗುಡ್ಡಗಾಡು ಪ್ರದೇಶಗಳಲ್ಲಿ ಭೂಕುಸಿತ ಮತ್ತು ಹಠಾತ್ ಪ್ರವಾಹದ ಅಪಾಯ ಹೆಚ್ಚಿರುವುದರಿಂದ ಪ್ರಯಾಣಿಕರು ಅತ್ಯಂತ ಜಾಗರೂಕರಾಗಿರಲು ಸೂಚಿಸಲಾಗಿದೆ. ಉತ್ತರ ಪ್ರದೇಶದಲ್ಲಿ ವ್ಯಾಪಕ ಮಳೆಯಿಂದಾಗಿ ತಗ್ಗು ಪ್ರದೇಶಗಳು ಜಲಾವೃತಗೊಂಡು ರಸ್ತೆ ಸಂಚಾರಕ್ಕೆ ಅಡಚಣೆ ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಅನಗತ್ಯವಾಗಿ ಹೊರಗೆ ಬಾರದಂತೆ ಆಡಳಿತ ಮಂಡಳಿ ತಿಳಿಸಿದೆ. ಬಿಹಾರ, ಪಶ್ಚಿಮ ಮಧ್ಯಪ್ರದೇಶ ಮತ್ತು ಪೂರ್ವ ಮಧ್ಯಪ್ರದೇಶಗಳಲ್ಲಿ ಅಕ್ಟೋಬರ್ 1 ರವರೆಗೆ ಮಳೆ ಮುಂದುವರಿಯಲಿದ್ದರೆ, ಛತ್ತೀಸ್‌ಗಢ, ಗುಜರಾತ್, ಕೊಂಕಣ ಹಾಗೂ ಗೋವಾ ಪ್ರದೇಶಗಳಲ್ಲಿ ಅಕ್ಟೋಬರ್ 3 ರವರೆಗೆ ಗುಡುಗು ಸಹಿತ ಸಾಧಾರಣದಿಂದ ಭಾರಿ ಮಳೆಯಾಗಲಿದೆ.

?ಇದೇ ವೇಳೆ, ಈಶಾನ್ಯ ರಾಜ್ಯಗಳಾದ ಅಸ್ಸಾಂ, ಮೇಘಾಲಯ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ ಮತ್ತು ತ್ರಿಪುರಾಗಳಲ್ಲೂ ಸೆಪ್ಟೆಂಬರ್ 29 ರಿಂದ ಅಕ್ಟೋಬರ್ 3 ರವರೆಗೆ ವಿವಿಧ ಹಂತಗಳಲ್ಲಿ ಮಳೆಯಾಗುವ ನಿರೀಕ್ಷೆಯಿದೆ. ದಕ್ಷಿಣ ಭಾರತದ ಉತ್ತರ ಒಳನಾಡು ಕರ್ನಾಟಕ, ಕರಾವಳಿ ಆಂಧ್ರಪ್ರದೇಶ, ತಮಿಳುನಾಡು, ಪುದುಚೇರಿ ಹಾಗೂ ಲಕ್ಷದ್ವೀಪಗಳಲ್ಲೂ ಮಾನ್ಸೂನ್ ಸಕ್ರಿಯವಾಗಿರಲಿದೆ.

# ಪ್ರತಿಭಟನೆ ಹಿನ್ನಲೆ: ಎಲ್‌ಪಿಯು ತರಗತಿ 10 ದಿನ ಸ್ಥಗಿತ

ಫಗ್ವಾರಾ, ಪಂಜಾಬ್, ಸೆ. 28: ಪಂಜಾಬ್‌ನ ಫಗ್ವಾರಾದಲ್ಲಿರುವ ಲವ್ಲಿ ಪ್ರೊಫೆಷನಲ್ ಯೂನಿವರ್ಸಿಟಿ (ಎಲ್ ಪಿಯು) ಆವರಣದಲ್ಲಿ ನಡೆದ ಹಿಂಸಾತ್ಮಕ ಪ್ರತಿಭಟನೆಗಳ ಹಿನ್ನೆಲೆಯಲ್ಲಿ ಇಂದಿನಿಂದ 10 ದಿನಗಳ ಕಾಲ ನಿಯಮಿತ ತರಗತಿಗಳನ್ನು ಸ್ಥಗಿತಗೊಳಿಸಿದೆ.

ಹೊರಗಿನ ವ್ಯಕ್ತಿಯೊಬ್ಬರಿಂದ ವಿದ್ಯಾರ್ಥಿನಿಯ ಮೇಲೆ ಅತ್ಯಾಚಾರ ನಡೆದಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯದ ಆವರಣದಲ್ಲಿ ಪ್ರತಿಭಟನೆಗಳು ನಡೆದಿದ್ದವು. ವಿಶ್ವವಿದ್ಯಾಲಯವು ಮಧ್ಯಂತರ ಪರೀಕ್ಷೆಗಳನ್ನು ಮುಂದಿನ ಸೂಚನೆ ಬರುವವರೆಗೆ ಮುಂದೂಡಿದೆ. ಪರಿಷ್ಕೃತ ಪರೀಕ್ಷಾ ವೇಳಾಪಟ್ಟಿಯನ್ನು ಯೂನಿವರ್ಸಿಟಿ ಮ್ಯಾನೇಜ್‌ಮೆಂಟ್ ಸಿಸ್ಟಮ್ ಮೂಲಕ ವಿದ್ಯಾರ್ಥಿಗಳಿಗೆ ತಿಳಿಸಲಾಗುವುದು ಎಂದು ಎಲ್‌ಪಿಯು ಹೇಳಿದೆ.

ವಿದ್ಯಾರ್ಥಿಗಳು ಶಾಂತವಾಗಿದ್ದು, ವಿಶ್ವವಿದ್ಯಾಲಯದ ಅಧಿಕೃತ ಸೂಚನೆಗಳನ್ನು ಪಾಲಿಸುವಂತೆ ಆಡಳಿತ ಮಂಡಳಿ ಮನವಿ ಮಾಡಿದೆ. 10 ದಿನಗಳ ಅವಧಿಯಲ್ಲಿ ವಿದ್ಯಾರ್ಥಿಗಳು ತಮ್ಮ ಪೋಷಕರು ಅಥವಾ ಪಾಲಕರೊಂದಿಗೆ ಸಮಾಲೋಚಿಸಿ ತಮ್ಮ ಊರುಗಳಿಗೆ ತೆರಳಲು ಅವಕಾಶ ನೀಡಲಾಗಿದೆ.

ಆವರಣದಲ್ಲೇ ಉಳಿಯುವ ವಿದ್ಯಾರ್ಥಿಗಳು ತಮ್ಮ ಹಾಸ್ಟೆಲ್‌ಗಳು ಅಥವಾ ವಾಸಸ್ಥಳಗಳಲ್ಲೇ ಇರಬೇಕು. ಅನಗತ್ಯವಾಗಿ ಹೊರಗೆ ಸಂಚರಿಸಬಾರದು ಮತ್ತು ಪ್ರತಿಭಟನೆ ಅಥವಾ ಅಶಾಂತಿಗೆ ಸಂಬಂಧಿಸಿದ ಚಟುವಟಿಕೆಗಳಿಂದ ದೂರವಿರಬೇಕು ಎಂದು ವಿಶ್ವವಿದ್ಯಾಲಯ ಸೂಚಿಸಿದೆ.

ವಿದ್ಯಾರ್ಥಿಗಳ ಸುರಕ್ಷತೆ ಮತ್ತು ಕಲ್ಯಾಣವನ್ನು ಖಚಿತಪಡಿಸಿಕೊಳ್ಳುವ ಉದ್ದೇಶದಿಂದ ನಿಯಮಿತ ತರಗತಿಗಳನ್ನು ಸ್ಥಗಿತಗೊಳಿಸುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಎಲ್‌ಪಿಯು ತನ್ನ ಸೂಚನೆಯಲ್ಲಿ ತಿಳಿಸಿದೆ.

ಮಧ್ಯಂತರ ಪರೀಕ್ಷೆಗಳು ಮುಂದಿನ ಸೂಚನೆ ಬರುವವರೆಗೆ ಮುಂದೂಡಲ್ಪಟ್ಟಿದ್ದು, ಹೊಸ ಪರೀಕ್ಷಾ ವೇಳಾಪಟ್ಟಿಗೆ ಸಂಬಂಧಿಸಿದ ಮಾಹಿತಿಗಾಗಿ ವಿದ್ಯಾರ್ಥಿಗಳು ಯೂನಿವರ್ಸಿಟಿ ಮ್ಯಾನೇಜ್‌ಮೆಂಟ್ ಸಿಸ್ಟಮ್ ಅನ್ನು ನಿಯಮಿತವಾಗಿ ಪರಿಶೀಲಿಸುವಂತೆ ಸೂಚಿಸಲಾಗಿದೆ. ಆವರಣದಲ್ಲಿ ನಡೆದ ಪ್ರತಿಭಟನೆಗಳು ಮತ್ತು ಪೊಲೀಸ್‌ರೊಂದಿಗೆ ಉಂಟಾದ ಘರ್ಷಣೆಗಳ ನಂತರ ಈ ನಿರ್ಧಾರ ಕೈಗೊಳ್ಳಲಾಗಿದೆ.

# ತ್ಯಾವರೆಕೆರೆಕೊಪ್ಪ: ನಾಲ್ಕು ಸಿಂಹದ ಮರಿಗಳ ಸಾವು




ಶಿವಮೊಗ್ಗ, ಸೆ.28– ಶಿವಮೊಗ್ಗ ನಗರದ ಹೊರವಲಯ ತ್ಯಾವರೆಕೊಪ್ಪ ಹುಲಿ ಸಿಂಹಧಾಮದಲ್ಲಿ ನಾಲ್ಕು ನವಜಾತ ಸಿಂಹದ ಮರಿಗಳು ಮೃತಪಟ್ಟಿರುವ ದಾರುಣ ಘಟನೆ ಇತ್ತೀಚೆಗೆ ನಡೆದಿದೆ ಎನ್ನಲಾಗಿದ್ದು, ತಡವಾಗಿ ಪ್ರಕರಣ ಬೆಳಕಿಗೆ ಬಂದಿದೆ.

ಗುಜರಾತ್ ರಾಜ್ಯದಿಂದ ತ್ಯಾವರೆಕೊಪ್ಪ ತರಲಾಗಿದ್ದ 'ಸಾರಾ' ಎಂಬ ಹೆಣ್ಣು ಸಿಂಹವು ಸೆಪ್ಟೆಂಬರ್ ಮೊದಲ ವಾರದಲ್ಲಿ ನಾಲ್ಕು ಮರಿಗಳಿಗೆ ಜನ್ಮ ನೀಡಿತ್ತು. ಇದು ಚೊಚ್ಚಲ ಹೆರಿಗೆಯಾಗಿತ್ತು.

ಆದರೆ ತಾಯಿ ಸಿಂಹದಿಂದ ಸಮರ್ಪಕವಾಗಿ ಹಾಲು ದೊರಕದ ಕಾರಣದಿಂದ, ಮರಿಗಳು ಕ್ರಮೇಣ ನಿತ್ರಾಣಗೊಂಡಿದ್ದವು ಎಂಬ ಮಾಹಿತಿ ಲಭ್ಯವಾಗಿದೆ.

ಇದರಿಂದ ದಿನಕಳೆದಂತೆ ಮರಿಗಳ ಆರೋಗ್ಯ ಮತ್ತಷ್ಟು ಹದಗೆಟ್ಟು, ನಾಲ್ಕು ಮರಿಗಳು ಸೆಪ್ಟೆಂಬರ್ ಮೂರನೇ ವಾರದಲ್ಲಿ ಮೃತಪಟ್ಟಿವೆ ಎಂದು ಹೇಳಲಾಗುತ್ತಿದೆ.

ನಿಗೂಢ : ಸಿಂಹದ ಮರಿಗಳ ಜನನದ ಬಗ್ಗೆಯಾಗಲಿ, ಅವುಗಳ ಅನಾರೋಗ್ಯ ಹಾಗೂ ಮೃತಪಟ್ಟ ವಿಷಯದ ಕುರಿತಂತೆ ತ್ಯಾವರೆಕೊಪ್ಪ ಸಿಂಹಧಾಮ ಆಡಳಿತ ಗೌಪ್ಯತೆ ಕಾಪಾಡಿಕೊಂಡಿದ್ದು ಸಾರ್ವಜನಿಕ ವಲಯದಲ್ಲಿ ಹಲವು ರೀತಿಯ ಚರ್ಚೆಗಳಿಗೆ ಎಡೆಮಾಡಿಕೊಟ್ಟಿದೆ.

ಒಟ್ಟಾರೆ ನಾಲ್ಕು ಮರಿಗಳ ಸಾವಿನ ಕುರಿತಂತೆ ಅಧಿಕೃತ ವಿವರಗಳು ಇನ್ನಷ್ಟೆ ಲಭ್ಯವಾಗಬೇಕಾಗಿದ್ದು, ನಾಲ್ಕು ಮರಿಗಳ ಸಾವು ವನ್ಯಜೀವಿ ಪ್ರಿಯರಲ್ಲಿ ಅತೀವ ಬೇಸರ ಉಂಟು ಮಾಡಿದೆ.

# ಕೋಡಿಹಳ್ಳಿ ಚಂದ್ರಶೇಖರ್‌ಗೆ 14 ದಿನ ನ್ಯಾಯಾಂಗ ಬಂಧನ

ಹುಬ್ಬಳ್ಳಿ,ಸೆ.28– 2013ರ ರೈಲು ತಡೆ (ರೈಲು ರೋಕೋ) ಪ್ರಕರಣಕ್ಕೆ ಸಂಬಂಧಿಸಿದಂತೆ ರೈತ ಮುಖಂಡ ಕೋಡಿಹಳ್ಳಿ ಚಂದ್ರಶೇಖರ್ ಅವರನ್ನು ಹುಬ್ಬಳ್ಳಿ ನ್ಯಾಯಾಲಯ 14 ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

2013ರಲ್ಲಿ ರೈತರ ಪ್ರತಿಭಟನೆಯ ಅಂಗವಾಗಿ ಹುಬ್ಬಳ್ಳಿಯಲ್ಲಿ ಸುಮಾರು ಆರು ಗಂಟೆಗಳ ಕಾಲ ರೈಲು ಸಂಚಾರಕ್ಕೆ ಅಡ್ಡಿಪಡಿಸಿದ ಆರೋಪಕ್ಕೆ ಸಂಬಂಧಿಸಿದಂತೆ ಪ್ರಕರಣ ದಾಖಲಾಗಿತ್ತು. ಈ ಪ್ರಕರಣದಲ್ಲಿ ಚಂದ್ರಶೇಖರ್ ಅವರ ವಿರುದ್ಧ ನ್ಯಾಯಾಲಯ ವಾರೆಂಟ್ ಜಾರಿಯಾಗಿತ್ತು.

ವಾರೆಂಟ್ ಹಿನ್ನೆಲೆಯಲ್ಲಿ ರೈಲ್ವೆ ಪೊಲೀಸ್ ಪಡೆ (ಆರ್‌ಪಿಎಫ್) ಪೊಲೀಸರು ಚಂದ್ರಶೇಖರ್ ಅವರನ್ನು ವಶಕ್ಕೆ ಪಡೆದು ಹುಬ್ಬಳ್ಳಿ ನ್ಯಾಯಾಲಯದ ಮುಂದೆ ಹಾಜರುಪಡಿಸಿದರು.

ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಲಯವು ಅವರನ್ನು 14 ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಆದೇಶ ನೀಡಿತು.

ಕೋರ್ಟ್‌ಗೆ ಹಾಜರುಪಡಿಸುವುದಕ್ಕೂ ಮುನ್ನ ರೈತ ಸಂಘ ಹಸಿರು ಸೇನೆ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಅವರನ್ನು ಸೋಮವಾರ ಬೆಳ್ಳಂಬೆಳಗ್ಗೆ ಉತ್ತರ ಕನ್ನಡ ಜಿಲ್ಲೆಯ ಶಿರಸಿಯಲ್ಲಿ ಬಂಧಿಸಲಾಗಿತ್ತು.

ಬೆಳಗ್ಗೆ 10 ಗಂಟೆಗೆ ಶಿರಸಿಯ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿ ನಡೆಸಲು ಹಾಗೂ ತದ ನಂತರ 11.30ಕ್ಕೆ ದಾಸನಕೊಪ್ಪದಲ್ಲಿ ರೈತರ ಬೃಹತ್ ಪ್ರತಿಭಟನೆ ನಡೆಸಲು ರೈತ ಸಂಘ ಉದ್ದೇಶಿಸಿತ್ತು. ಅದಕ್ಕಾಗಿ ಕೋಡಿಹಳ್ಳಿ ಚಂದ್ರಶೇಖರ್ ಶಿರಸಿಗೆ ಆಗಮಿಸಿದ್ದರು. ಆ ಸಂದರ್ಭದಲ್ಲಿ ಕಳಸಾ ಬಂಡೂರಿ ಯೋಜನೆ ಜಾರಿಗೆ ಆಗ್ರಹಿಸಿ 2013ರಲ್ಲಿ ಸುಮಾರು ಆರು ಗಂಟೆ ಎಲ್ಲಾ ರೈಲುಗಳನ್ನು ತಡೆದು ರೈತರು ಹೋರಾಟ ಮಾಡಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿ ವಾರೆಂಟ್ ಮೇಲೆ ಹುಬ್ಬಳ್ಳಿ ರೈಲ್ವೆ ಪೊಲೀಸರು ಶಿರಸಿ ಪೊಲೀಸರ ಸಹಕಾರ ಪಡೆದು ಕೋಡಿಹಳ್ಳಿ ಚಂದ್ರಶೇಖರ್‌ರನ್ನು ಬಂಧಿಸಲಾಯಿತು,

# ವಿಜಯನಗರದಲ್ಲಿ ಎನ್‌ಡಿಎ ಚುನಾವಣಾ ಕಚೇರಿ ಉದ್ಘಾಟನೆ



ಬೆಂಗಳೂರು,ಸೆ.28– ನಗರದ ವಿಜಯನಗರ, ಮಾರುತಿ ಮಂದಿರ ಹತ್ತಿರ ಬೆಂಗಳೂರು ಶಿಕ್ಷಕರ ಕ್ಷೇತ್ರದ ಚುನಾವಣಾ ಎನ್‌ಡಿಎ ಕಚೇರಿಯನ್ನು ಜೆ ಡಿ ಎಸ್ ರಾಜ್ಯ ಯುವ ಘಟಕದ ಅಧ್ಯಕ್ಷ ನಿಕಿಲ್ ಕುಮಾರಸ್ವಾಮಿ ಯವರು ಉದ್ಘಾಟಿಸಿದರು.

ಬೆಂಗಳೂರು ಶಿಕ್ಷಕರ ಕ್ಷೇತ್ರದ ಸಾವಿರಾರು ಶಿಕ್ಷಕರುಗಳನ್ನು ಕುರಿತು ಈ ಬಾರಿ ಎನ್ ಡಿ ಎ ಎರಡೂ ಪಕ್ಷಗಳಿಂದ ಒಂದಾಗಿ–ಒಟ್ಟಾಗಿ ಎ ಪಿ ರಂಗನಾಥ ರವರನ್ನು ಬೆಂಗಳೂರು ಶಿಕ್ಷಕರ ಕ್ಷೇತ್ರಕ್ಕೆ ಅಭ್ಯರ್ಥಿಯಾಗಿ ಆಯ್ಕೆ ಮಾಡಿದ್ದು ಎನ್ ಡಿ ಎ ಪಕ್ಷದಿಂದ ಎಲ್ಲಾ ರೀತಿಯ ಬೆಂಬಲದೊಂದಿಗೆ ಹಗಲಿರುಳು ಎನ್ನದೇ ಪಕ್ಷದಿಂದಲೂ ಸಹಕರಿಸಿ ಹಾಗೂ ನಿಮ್ಮೆಲ್ಲರ ಬೆಂಬಲದೊಂದಿಗೆ ಈ ಬಾರಿ ಅತ್ಯಧಿಕ ಮತಗಳಿಂದ ವಿಧಾನ ಪರಿಷತಿಗೆ ಆಯ್ಕೆ ಮಾಡುತ್ತೀರಿ ಎಂಬ ಪೂರ್ಣ ನಂಬಿಕೆ ಇದೆ ಎಂದರು.

ಎನ್ ಡಿ ಎ ಅಭ್ಯರ್ಥಿ ಎ ಪಿ ರಂಗನಾಥ ಮಾತನಾಡಿ ಶಿಕ್ಷಕರು ಹಲವು ವರ್ಷಗಳಿಂದ ತಮ್ಮ ಸಮಸ್ಯೆಗಳನ್ನು ಎದಿರಿಸುತ್ತಿದೀರಿ ಎಂಬುದು ನನಗೆ ಅರಿವಿದೆ 2 ಬಾರಿ ನಾನು ಸೋತಿದ್ದೇನೆ ಆದರೂ ನಿಮ್ಮಗಳ ಸಮಸ್ಯೆಗಳಿಗೆ ನಾನು ಹಿಂಜರಿಯದೆ ನಿಮ್ಮಗಳ ಒಡನಾಟದಲ್ಲಿದ್ದೇನೆ.2028 ರ ಚುನಾವಣೆಯಲ್ಲಿ ಎನ್ ಡಿ ಎ ಸರ್ಕಾರ ಬರುವುದು ಶತಸಿದ್ದ ನಾವು–ನೀವುಗಳೆಲ್ಲರೂ ಒಟ್ಟಾಗಿ ಸೇರಿ ಏನೇ ಸಮಸ್ಯೆಗಳಿದ್ದರೂ ಬಗೆ ಹರಿಸುವ ಪ್ರಯತ್ನ ಮಾಡುತ್ತೇನೆ ಎಂದರು.

ಜೆ ಡಿ ಎಸ್ ನ ರಾಜ್ಯ ಪ್ರಧಾನ ಕಾರ್ಯದರ್ಶಿ ವಾಸುದೇವ ರವರು ವಿಧಾನ ಪರಿಷತ್ ಚುನಾವಣೆ ಸೇರಿ ಮುಂದೆ ಬರುವ ಎಲ್ಲಾ ಚುನಾವಣೆಗಳನ್ನು ಎನ್ ಡಿ ಎ ಮೈತ್ರಿ ಕೂಟ ಜಂಟಿಯಾಗಿ ಎದುರಿಸಲಿದ್ದೇವೆ ಎಂದರು.ಈ ಸಂದರ್ಭದಲ್ಲಿ ಗೋಪಿನಾಥ್ ರೆಡ್ಡಿ,ಪ್ರಕಾಶ್,ನರಸೇಗೌಡ,ಸೂಡಿ ಸುರೇಶ್ ಹಾಗು ಮುಖಂಡರು,ಸಾವಿರಾರು ಶಿಕ್ಷಕರು ಉಪಸ್ಥಿತರಿದ್ದರು

ವಿಶ್ವ ಹೃದಯ ದಿನ: ಪ್ರತಿದಿನ ಹೃದಯದ ಆರೈಕೆ ಅಗತ್ಯ

# ಆರಂಭಿಕ ಪತ್ತೆ, ಆರೋಗ್ಯಕರ ಜೀವನಶೈಲಿಗೆ ಡಾ. ನಟರಾಜ್ ಶೆಟ್ಟಿ ಕರೆ

ಬೆಂಗಳೂರು, ಸೆ.28: ಹೃದಯ ಸಂಬಂಧಿ ಕಾಯಿಲೆಗಳು ಆರಂಭದಲ್ಲಿ ಯಾವುದೇ ಸ್ಪಷ್ಟ ಲಕ್ಷಣಗಳಿಲ್ಲದೆ ಬೆಳೆಯಬಹುದಾಗಿದ್ದು, ನಿಯಮಿತ ತಪಾಸಣೆ ಹಾಗೂ ಆರೋಗ್ಯಕರ ಜೀವನಶೈಲಿಯಿಂದ ಅವುಗಳನ್ನು ಮುನ್ನೆಚ್ಚರಿಕೆಯಿಂದ ನಿಯಂತ್ರಿಸಬಹುದು ಎಂದು ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಹೃದ್ರೋಗ ವಿಭಾಗದ ಸಹಾಯಕ ಪ್ರಾಧ್ಯಾಪಕ *ಡಾ. ಎಚ್. ಎಸ್. ನಟರಾಜ್ ಶೆಟ್ಟಿ ತಿಳಿಸಿದ್ದಾರೆ. ಸೆ.29ರಂದು ಆಚರಿಸಲಾಗುವ ವಿಶ್ವ ಹೃದಯ ದಿನದ ಅಂಗವಾಗಿ ಮಾತನಾಡಿದ ಅವರು,*"ಹೃದಯಾಘಾತ ಸಂಭವಿಸುವವರೆಗೆ ಕಾಯದೆ, ಮೊದಲಿನಿಂದಲೇ ಹೃದಯದ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು"ಎಂದು ಸಲಹೆ ನೀಡಿದರು.

ರಕ್ತದೊತ್ತಡ, ರಕ್ತದಲ್ಲಿನ ಸಕ್ಕರೆ ಹಾಗೂ ಕೊಲೆಸ್ಟ್ರಾಲ್ ಮಟ್ಟಗಳನ್ನು ನಿಯಮಿತವಾಗಿ ಪರಿಶೀಲಿಸುವುದು, ಸಮತೋಲಿತ ಆಹಾರ ಸೇವನೆ, ದೈಹಿಕ ಚಟುವಟಿಕೆ, ತಂಬಾಕು ಸೇವನೆಗೆ ದೂರವಿರುವುದು ಮತ್ತು ವೈದ್ಯರ ಸಲಹೆ ಪಾಲಿಸುವುದು ಅಗತ್ಯ ಎಂದರು. ಎದೆಭಾರ ಅಥವಾ ನೋವು, ಉಸಿರಾಟದ ತೊಂದರೆ, ಅತಿಯಾದ ಬೆವರು ಹಾಗೂ ತೋಳು, ಬೆನ್ನು ಅಥವಾ ದವಡೆಗೆ ಹರಡುವ ನೋವು ಕಾಣಿಸಿಕೊಂಡರೆ ತಡ ಮಾಡದೆ ತುರ್ತು ವೈದ್ಯಕೀಯ ನೆರವು ಪಡೆಯಬೇಕು ಎಂದು ಹೇಳಿದರು.

ಡಾ. ಶೆಟ್ಟಿ ಅವರು 2013ರಿಂದ ಎಚ್‌ಐವಿಯೊಂದಿಗೆ ಬದುಕುತ್ತಿರುವವರಲ್ಲಿ ಹೃದಯ ರಕ್ತನಾಳದ ಕಾಯಿಲೆಗಳ ಕುರಿತು ಸಂಶೋಧನೆ ನಡೆಸುತ್ತಿದ್ದಾರೆ. ಹೃದಯದ ಸಮಸ್ಯೆಗಳು ಹಾಗೂ ಅದರ ಅಪಾಯಕಾರಿ ಅಂಶಗಳ ಕುರಿತ ಅವರ ಅಧ್ಯಯನಗಳು ಅಂತರರಾಷ್ಟ್ರೀಯ ವೈಜ್ಞಾನಿಕ ವೇದಿಕೆಗಳಲ್ಲೂ ಪ್ರಸ್ತುತಗೊಂಡಿವೆ. ಹೃದಯ ತಪಾಸಣೆ ಮತ್ತು ಚಿಕಿತ್ಸೆಯನ್ನು ಆಸ್ಪತ್ರೆಗಳಿಗಷ್ಟೇ ಸೀಮಿತಗೊಳಿಸದೆ, ಗ್ರಾಮೀಣ ಹಾಗೂ ಸೌಲಭ್ಯ ವಂಚಿತ ಸಮುದಾಯಗಳಿಗೂ ತಲುಪಿಸಬೇಕು. ತಡೆಗಟ್ಟುವಿಕೆ, ಆರಂಭಿಕ ಪತ್ತೆ ಮತ್ತು ಸಮಯೋಚಿತ ಚಿಕಿತ್ಸೆ* ಹೃದಯ ಆರೋಗ್ಯದ ಪ್ರಮುಖ ಅಂಶಗಳಾಗಿವೆ ಎಂದು ಅವರು ಹೇಳಿದರು. ಈ ವರ್ಷದ ವಿಶ್ವ ಹೃದಯ ದಿನದ "ಡೋಂಟ್ ಮಿಸ್ ಎ ಬೀಟ್"* ಅಭಿಯಾನವೂ ದೈಹಿಕ ಚಟುವಟಿಕೆ ಮತ್ತು ಆರೋಗ್ಯಕರ ಜೀವನಶೈಲಿಗೆ ಒತ್ತು ನೀಡುತ್ತಿದೆ.

# ಪ್ರತ್ಯೇಕ ಅಪಘಾತ: ಇಬ್ಬರು ಸಾವು

ಬೆಂಗಳೂರು,ಸೆ.28–ನಗರದಲ್ಲಿ ನಡೆದ ಎರಡು ಪ್ರತ್ಯೇಕ ರಸ್ತೆ ಅಪಘಾತಗಳಲ್ಲಿ ಇಬ್ಬರು ವ್ಯಕ್ತಿಗಳು ಮೃತಪಟ್ಟಿರುವ ಘಟನೆ ನಡೆದಿದೆ.

ತಲಘಟ್ಟಪುರ ಪೊಲೀಸ್ ಠಾಣಾ ವ್ಯಾಪ್ತಿಯ ಗೊಟ್ಟಿಗೆರೆ, ಜಂಬೂಸವಾರಿದಿಣ್ಣೆ ರಸ್ತೆಯ ಮಧ್ಯೆ ರಸ್ತೆ ದಾಟುತ್ತಿದ್ದ ಸುಮಾರು 55 ವರ್ಷದ ಅಪರಿಚಿತ ವ್ಯಕ್ತಿಗೆ ಬಿಎಂಟಿಸಿ ಬಸ್ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ವ್ಯಕ್ತಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತರ ಗುರುತು ಇನ್ನೂ ಪತ್ತೆಯಾಗಿಲ್ಲ.

ಮತ್ತೊಂದು ಘಟನೆಯಲ್ಲಿ ಜೀವನ್ ಭೀಮಾ ನಗರ ಪೊಲೀಸ್ ಠಾಣಾ ವ್ಯಾಪ್ತಿಯ ಕೊಡುಗೆಹಳ್ಳಿ ರಸ್ತೆಯ ಇಂಡಿಯನ್ ಓವರ್ಸೀಸ್ ಬ್ಯಾಂಕ್ ಬಳಿ ಪಾದಚಾರಿಗೆ ಯಮಹಾ ಮೋಟಾರ್ ಬೈಕ್ ಡಿಕ್ಕಿ ಹೊಡೆದು ಗೋವಿಂದರಾಜ್(55) ಮೃತಪಟ್ಟಿದ್ದಾರೆ.

ಈ ಸಂಬಂಧ ಜೀವನ್ ಭೀಮಾನಗರ ಸಂಚಾರ ಪೊಲೀಸರು ಬೈಕ್ ಸವಾರ ಭರತ್ ಲಾಲ್ ವಿರುದ್ಧ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

# ಜಿಬಿಎ ಚುನಾವಣೆ ವಿಳಂಬ ದಿನೇಶ್ ಅಸಮಾಧಾನ



ನಗರದ ಕ್ವೀನ್ಸ್ ರಸ್ತೆ, ಕೆಪಿಸಿಸಿ ಕಚೇರಿ ಹಿಂಭಾಗದ ಭಾರತ್ ಜೋಡೋ ಭವನದಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಬೆಂಗಳೂರು ಕೇಂದ್ರ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ ಸರವಣನ್‌ರವರು ಅಧಿಕಾರ ಸ್ವೀಕರಿಸಿದರು. ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಮಾಜಿ ಸಚಿವ ಹಾಗೂ ಶಾಸಕ ದಿನೇಶ್ ಗುಂಡೂರಾವ್ ಮತ್ತಿತರರು ಉಪಸ್ಥಿತರಿದ್ದರು.

ಬೆಂಗಳೂರು, ಸೆ.28–ಜಿಬಿಎ (ಗ್ರೇಟರ್ ಬೆಂಗಳೂರು ಅಥಾರಿಟಿ) ಚುನಾವಣೆಗಳನ್ನು ಆದಷ್ಟು ಬೇಗ ನಡೆಸಬೇಕು ಎಂದು ಮಾಜಿ ಸಚಿವ ದಿನೇಶ್ ಗುಂಡೂರಾವ್ ಒತ್ತಾಯಿಸಿದ್ದಾರೆ.

ಬೆಂಗಳೂರಿನ ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯ ಭಾರತ್ ಜೋಡೋ ಭವನದಲ್ಲಿ ಬೆಂಗಳೂರು ಕೇಂದ್ರ ಜಿಲ್ಲಾ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷರಾಗಿ ಸರವಣನ್ ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಮಾತನಾಡಿದ ಅವರು, ಚುನಾವಣೆ ಈಗಾಗಲೇ ವಿಳಂಬವಾಗಿದೆ. ಪಕ್ಷದ ಕಾರ್ಯಕರ್ತರು ಹಾಗೂ ಎರಡನೇ ಹಂತದ ನಾಯಕತ್ವಕ್ಕೆ ಜಿಬಿಎ ಚುನಾವಣೆ ಮಹತ್ವದ್ದಾಗಿದೆ ಎಂದು ಅವರು ಹೇಳಿದರು. ತಮ್ಮ ಕ್ಷೇತ್ರದಲ್ಲಿ ಹತ್ತುಕ್ಕೂ ಹೆಚ್ಚು ವಾರ್ಡ್‌ಗಳು ಬರಲಿದ್ದು, ಅವುಗಳಲ್ಲಿ ಕಾಂಗ್ರೆಸ್ ಗೆಲ್ಲಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಸಚಿವ ರಿಜ್ವಾನ್ ಅರ್ಷದ್ ಮಾತನಾಡಿ, ಸಾಮಾನ್ಯ ಕಾರ್ಯಕರ್ತನೂ ಪಕ್ಷದಲ್ಲಿ ಉನ್ನತ ಸ್ಥಾನಕ್ಕೆ ಏರಬಹುದು ಎಂಬುದಕ್ಕೆ ಸರವಣನ್ ಅವರ ನೇಮಕಾತಿ ಉದಾಹರಣೆ ಎಂದರು. ಇದೇ ವೇಳೆ ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಅವರು ಟೀಕೆ ಮಾಡಿದ್ದು, ತಮ್ಮ ಹೋರಾಟ ಚುನಾವಣೆಯಲ್ಲಿ ಗೆಲ್ಲುವುದಕ್ಕಷ್ಟೇ ಅಲ್ಲ, ಪ್ರಜಾಪ್ರಭುತ್ವವನ್ನು ರಕ್ಷಿಸುವುದಕ್ಕಾಗಿ ಎಂದು ಹೇಳಿದರು.

ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಮಾತನಾಡಿ, ಕಾಂಗ್ರೆಸ್ ಪಕ್ಷ ನಿರಂತರವಾಗಿ ಹೊಸ ನಾಯಕತ್ವಕ್ಕೆ ಅವಕಾಶ ನೀಡುವ ಪಕ್ಷವಾಗಿದೆ ಎಂದು ಹೇಳಿದರು. ಸರವಣನ್ ಅವರನ್ನು ಆಯ್ಕೆ ಮಾಡುವಲ್ಲಿ ರಾಹುಲ್ ಗಾಂಧಿ ಅಂತಿಮ ನಿರ್ಧಾರ ಕೈಗೊಂಡಿದ್ದಾರೆ ಎಂದು ಅವರು ತಿಳಿಸಿದರು.

ಮತದಾರರ ಪಟ್ಟಿಯ ವಿಚಾರವನ್ನೂ ಪ್ರಸ್ತಾಪಿಸಿದ ಹರಿಪ್ರಸಾದ್, ಅರ್ಹ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡದಂತೆ ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು. ಬೆಂಗಳೂರಿನಲ್ಲಿ ಮತದಾರರ ಪಟ್ಟಿಯಿಂದ ದೊಡ್ಡ ಪ್ರಮಾಣದಲ್ಲಿ ಹೆಸರುಗಳನ್ನು ತೆಗೆದುಹಾಕಲಾಗಿದೆ ಎಂಬ ಆರೋಪವನ್ನೂ ಅವರು ಮಾಡಿದರು. ಕೇಂದ್ರ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧವೂ ಅವರು ತೀವ್ರ ಟೀಕೆಗಳನ್ನು ವ್ಯಕ್ತಪಡಿಸಿದರು.

ಬಳಿಕ ಬಿಜೆಪಿ ಶಾಸಕರು ಹಾಗೂ ಆರ್‌ಎಸ್‌ಎಸ್ ವಿರುದ್ಧ ತೀವ್ರವಾಗ್ದಾಳಿ ನಡೆಸಿರುವ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಬಿಜೆಪಿ ಶಾಸಕರು ಬೋಗಸ್ ಎಂದು ಟೀಕಿಸಿದ್ದಾರೆ.

ವಂದೇ ಮಾತರಂ ಗೀತೆಯನ್ನು ಉಲ್ಲೇಖಿಸಿದ ಅವರು, ಬಿಜೆಪಿ ನಾಯಕರಿಗೆ ಗೀತೆಯನ್ನು ಸರಿಯಾಗಿ ಹಾಡಲು ಬರುವುದಿಲ್ಲ ಎಂದು ಆರೋಪಿಸಿದರು. ಕಾಂಗ್ರೆಸ್‌ನವರು ವಂದೇ ಮಾತರಂ ಗೀತೆಯನ್ನು ಚೆನ್ನಾಗಿ ಹಾಡುತ್ತಾರೆ. ಆರ್‌ಎಸ್‌ಎಸ್ ಹಾಗೂ ಬಿಜೆಪಿ ಕಾರ್ಯಕರ್ತರನ್ನು ಬೆಂಗಳೂರಿನಿಂದ ಓಡಿಸಬೇಕು ಎಂದು ಪಕ್ಷದ ಕಾರ್ಯಕರ್ತರಿಗೆ ಕರೆ ನೀಡಿದರು.

ಕಾರ್ಯಕ್ರಮದ ವೇಳೆ ಜಿಬಿಎ ಚುನಾವಣೆ ಶೀಘ್ರ ನಡೆಸಬೇಕು, ಮತದಾರರ ಪಟ್ಟಿಯಲ್ಲಿನ ಹೆಸರುಗಳ ಕುರಿತು ಎಚ್ಚರಿಕೆ ವಹಿಸಬೇಕು ಎಂಬುದು ಕಾಂಗ್ರೆಸ್ ನಾಯಕರ ಪ್ರಮುಖ ಒತ್ತಾಯವಾಗಿತ್ತು.

ಕಾರ್ಯಕ್ರಮದಲ್ಲಿ ರಾಜ್ಯಸಭಾ ಸದಸ್ಯ ಮನ್ಸೂರ್ ಅಲಿ ಖಾನ್ ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಬಿಆರ್‌ಟಿ ಅರಣ್ಯದಲ್ಲಿ ಗಾಂಜಾ ಗಿಡಗಳು ಪತ್ತೆ



ಹನೂರು,ಸೆ.28–ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶಕ್ಕೆ ಸೇರಿದ ಕೂಳಿಹಟ್ಟಿ ಅರಣ್ಯ ಭಾಗದಲ್ಲಿ ಅಕ್ರಮವಾಗಿ ಬೆಳೆಯಲಾಗಿದ್ದ ಭಾರಿ ಪ್ರಮಾಣದ ಗಾಂಜಾ ಗಿಡಗಳನ್ನು ಅಬಕಾರಿ ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸಿ ವಶಕ್ಕೆ ಪಡೆದುಕೊಂಡಿದ್ದಾರೆ.

ದಟ್ಟವಾದ ಅರಣ್ಯ ಪ್ರದೇಶದ ನಡುವೆ ಕಾನೂನುಬಾಹಿರವಾಗಿ ಗಾಂಜಾ ಗಿಡಗಳನ್ನು ಬೆಳೆಸಲಾಗಿದೆ ಎಂಬ ಖಚಿತ ಸುಳಿವು ಲಭಿಸಿದ ಹಿನ್ನೆಲೆಯಲ್ಲಿ ದಾಳಿ ನಡೆಸಿದ ಅಧಿಕಾರಿಗಳ ತಂಡಕ್ಕೆ ಸುಮಾರು 213 ಕೆಜಿ ತೂಕ ಹೊಂದಿದ್ದ 293 ಕ್ಕೂ ಹೆಚ್ಚು ಬೃಹತ್ ಗಾಂಜಾ ಗಿಡಗಳು ಪತ್ತೆಯಾಗಿವೆ. ದಟ್ಟ ಕಾಡಿನ ಮಧ್ಯೆ ಹೂವಿನ ಗಿಡಗಳಂತೆ ಸಾಲಾಗಿ ಬೆಳೆಸಲಾಗಿದ್ದ ಈ ಗಾಂಜಾ ತೋಟವನ್ನು ಕಂಡು ದಾಳಿ ನಡೆಸಿದ ಅಧಿಕಾರಿಗಳೇ ಅಚ್ಚರಿ ವ್ಯಕ್ತಪಡಿಸಿದ್ದಾರೆ.

ಅಬಕಾರಿ ಇಲಾಖೆಯ ಉಪ ಅಧೀಕ್ಷಕ ವಿಜಯ್ ಕುಮಾರ್, ಅಬಕಾರಿ ನಿರೀಕ್ಷಕ ದಯಾನಂದ್ ಹಾಗೂ ಬೈಲೂರು ವಲಯ ಅರಣ್ಯಾಧಿಕಾರಿ ದೇವರಾಜು ಅವರ ನೇತೃತ್ವದಲ್ಲಿ ಸಿಬ್ಬಂದಿಗಳು ಈ ಯಶಸ್ವಿ ಕಾರ್ಯಾಚರಣೆಯನ್ನು ಪೂರ್ಣಗೊಳಿಸಿದ್ದು, ವಶಪಡಿಸಿಕೊಂಡ ಗಾಂಜಾ ಗಿಡಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. ಈ ಅಕ್ರಮ ಗಾಂಜಾ ಕೃಷಿಯ ಹಿಂದೆ ಯಾರಿದ್ದಾ–ರೆ ಎಂಬುದನ್ನು ಪತ್ತೆ ಹಚ್ಚಲು ಅಧಿಕಾರಿಗಳು ಜಂಟಿ ತನಿಖೆ ಆರಂಭಿಸಿದ್ದು, ತಲೆಮರೆಸಿಕೊಂಡಿರುವ ಆರೋಪಿಗಳಿಗಾಗಿ ಜಾಲ ಬೀಸಿದ್ದಾರೆ.

# ಮೂತ್ರನಾಳದ ಸೋಂಕು ನಿರ್ಲಕ್ಷ್ಯ ಬೇಡ

ಮೂತ್ರ ವಿಸರ್ಜನೆಯ ಸಮಯದಲ್ಲಿ ಉಂಟಾಗುವ ಸೌಮ್ಯವಾದ ಉರಿ ಇಲ್ಲವೇ ಪದೇ ಪದೇ ತುರ್ತಾಗಿ ಮೂತ್ರ ವಿಸರ್ಜನೆ ಮಾಡಬೇಕೆಂಬ ಭಾವನೆಯು ಸಾಮಾನ್ಯ ಮೂತ್ರನಾಳದ ಸೋಂಕಿನ ಲಕ್ಷಣಗಳಾಗಿರಬಹುದು. ಈ ಲಕ್ಷಣಗಳನ್ನು ಸಮಯಕ್ಕೆ ಸರಿಯಾಗಿ ಗುರುತಿಸಿ ಚಿಕಿತ್ಸೆ ಪಡೆಯದಿದ್ದರೆ, ಸೋಂಕು ಮೂತ್ರಪಿಂಡಗಳಿಗೆ ಹರಡಿ ತೀವ್ರ ಹಾನಿ ಉಂಟುಮಾಡಬಹುದು ಎಂದು ವೈದ್ಯರು ತಿಳಿಸುತ್ತಾರೆ.

ಹಲವು ಜನರು ಇದನ್ನು ತಾತ್ಕಾಲಿಕ ಸಮಸ್ಯೆ ಎಂದು ಭಾವಿಸಿ ನಿರ್ಲಕ್ಷಿಸುತ್ತಾರೆ. ಮೇಲ್ನೋಟಕ್ಕೆ ಸಣ್ಣ ಅಸ್ವಸ್ಥತೆಯಂತೆ ಕಾಣುವ ಇದರ ಹಿಂದೆ, ಗಂಭೀರವಾದ ಮೂತ್ರನಾಳದ ಸೋಂಕು ಉಲ್ಬಣಗೊಳ್ಳುತ್ತಿರಬಹುದು. ದೇಹದ ಸಣ್ಣ ಅಸ್ವಸ್ಥತೆಯಂತೆ ತೋರುವ ಈ ಸಮಸ್ಯೆಯನ್ನು ನಿರ್ಲಕ್ಷಿಸಿದರೆ, ಅದು ಅಂತಿಮವಾಗಿ ದೇಹದ ಅತ್ಯಂತ ಪ್ರಮುಖ ಅಂಗಗಳಾದ ಮೂತ್ರಪಿಂಡಗಳ ಆರೋಗ್ಯಕ್ಕೆ ಅಪಾಯ ಉಂಟುಮಾಡಬಹುದು.

### ಏನಿದು ಮೂತ್ರನಾಳದ ಸೋಂಕು?:

ಮೂತ್ರನಾಳದ ಸೋಂಕುಗಳು ಅತ್ಯಂತ ಸಾಮಾನ್ಯವಾದ ಬ್ಯಾಕ್ಟೀರಿಯಾದ ಸೋಂಕುಗಳಲ್ಲಿ ಒಂದಾಗಿವೆ. ಇವು ಸಾಮಾನ್ಯವಾಗಿ ತುರ್ತಾಗಿ, ಪದೇ ಪದೇ ಮೂತ್ರ ವಿಸರ್ಜನೆ ಮಾಡಬೇಕು ಎಂಬ ಭಾವನೆ ಹಾಗೂ ಮೂತ್ರ ವಿಸರ್ಜನೆಯ ಸಮಯದಲ್ಲಿ ಉರಿ ಅಥವಾ ನೋವಿನೊಂದಿಗೆ ಕಾಣಿಸಿಕೊಳ್ಳುತ್ತವೆ. ಈ ಸೋಂಕುಗಳು ಎಷ್ಟು ಬಾರಿ ಸಂಭವಿಸುತ್ತವೆ ಎಂಬುದು ಮಾತ್ರವಲ್ಲದೇ, ದೇಹದ ಇತರ ಭಾಗಗಳಿಗೆ – ನಿರ್ದಿಷ್ಟವಾಗಿ ಮೂತ್ರಪಿಂಡಗಳಿಗೆ ಹರಡುವ ಅಪಾಯವೇ ನಿಜವಾದ ಆತಂಕದ ವಿಷಯ ಎಂದು ತಜ್ಞರು ಗಮನಿಸುತ್ತಾರೆ.

ಈ ಸೋಂಕಿಗೆ ಸರಿಯಾದ ಚಿಕಿತ್ಸೆ ನೀಡದಿದ್ದರೆ ಬ್ಯಾಕ್ಟೀರಿಯಾಗಳು ಮೂತ್ರಕೋಶದಿಂದ ಮೇಲ್ಮುಖವಾಗಿ ಮೂತ್ರಪಿಂಡಗಳಿಗೆ ಚಲಿಸುವ ಅಪಾಯವಿರುತ್ತದೆ. ಇದು ಸುಲಭವಾಗಿ ಚಿಕಿತ್ಸೆ ಪಡೆಯಬಹುದಾದ ಸೋಂಕನ್ನು 'ಪೈಲೋನೆಫ್ರಿಟಿಸ್' ಎಂಬ ಗಂಭೀರ ಸ್ಥಿತಿಗೆ ಪರಿವರ್ತಿಸಬಹುದು. ಇದು ಮೂತ್ರಪಿಂಡಗಳಿಗೆ ಶಾಶ್ವತ ಹಾನಿ ಉಂಟುಮಾಡುವುದಲ್ಲದೇ, ಕೆಲವೊಮ್ಮೆ ಪ್ರಾಣಾಪಾಯಕ್ಕೂ ಕಾರಣವಾಗಬಹುದು ಎಂದು ವೈದ್ಯರು ಎಚ್ಚರಿಕೆ ನೀಡುತ್ತಾರೆ.

ಅಸ್ವಸ್ಥತೆಯು ಅಪಾಯಕಾರಿಯಾಗಿ ಬದಲಾದರೆ ಏನಾಗುತ್ತದೆ?: ಆರಂಭಿಕ ಲಕ್ಷಣಗಳು ಸಾಮಾನ್ಯವಾಗಿ ಮೂತ್ರ ವಿಸರ್ಜನೆಯ ಸಮಯದಲ್ಲಿ ಉರಿ, ಮಂಜಿನಂತಹ ಮೂತ್ರ ಅಥವಾ ಹೊಟ್ಟೆಯ ಕೆಳಭಾಗದಲ್ಲಿ ಸೌಮ್ಯ ನೋವು ಒಳಗೊಂಡಿರುತ್ತವೆ. ಆದರೆ, ಸೋಂಕು ಉಲ್ಬಣಗೊಂಡಂತೆ ದೇಹ ನೀಡುವ ಸಂಕೇತಗಳು ತೀವ್ರಗೊಳ್ಳುತ್ತವೆ. ಜ್ವರ, ಚಳಿ, ಬೆನ್ನು ನೋವು ಮತ್ತು ವಾಕರಿಕೆಯಂತಹ ಲಕ್ಷಣಗಳು ಕೇವಲ ತೀವ್ರತೆಯ ಹೆಚ್ಚಳವನ್ನಷ್ಟೇ ಸೂಚಿಸುವುದಿಲ್ಲ. ಬದಲಿಗೆ ಮೂತ್ರಪಿಂಡಗಳು ಗಂಭೀರ ಸೋಂಕಿಗೆ ಒಳಗಾಗಿವೆ ಎಂಬುದಕ್ಕೆ ಇವು ಸ್ಪಷ್ಟ ಸೂಚನೆಗಳಾಗಿವೆ ಎಂದು ತಜ್ಞರು ಹೇಳುತ್ತಾರೆ.

ಮೂತ್ರಪಿಂಡಗಳು ಕೇವಲ ತ್ಯಾಜ್ಯವನ್ನು ಶೋಧಿಸುವುದಲ್ಲದೇ, ರಕ್ತದೊತ್ತಡ ನಿಯಂತ್ರಿಸುತ್ತವೆ. ದೇಹದ ದ್ರವಗಳ ಸಮತೋಲನ ಕಾಪಾಡುತ್ತವೆ. ಅಗತ್ಯ ಖನಿಜಾಂಶಗಳನ್ನು ಉಳಿಸಿಕೊಳ್ಳುತ್ತವೆ. ಆದರೆ, ಗಖಿಖ ಮೂತ್ರಪಿಂಡಗಳಿಗೆ ಹರಡಿದಾಗ ಉಂಟಾಗುವ ಉರಿಯೂತವು ಈ ಪ್ರಮುಖ ಕಾರ್ಯಗಳಿಗೆ ಅಡ್ಡಿಪಡಿಸುತ್ತದೆ. ಮತ್ತೆ ಮತ್ತೆ ಬರುವ ಅಥವಾ ತೀವ್ರವಾದ ಸೋಂಕುಗಳು ಮೂತ್ರಪಿಂಡಗಳಲ್ಲಿ ಶಾಶ್ವತವಾದ ಗಾಯದ ಗುರುತುಗಳಿಗೆ ಕಾರಣವಾಗಬಹುದು ಹಾಗೂ ದೀರ್ಘಕಾಲದ ಮೂತ್ರಪಿಂಡ ಕಾಯಿಲೆಗೆ ದಾರಿ ಮಾಡಿಕೊಡಬಹುದು. ಈ ಅಡ್ಡಪರಿಣಾಮಗಳು ಸಾಮಾನ್ಯವಾಗಿ ನಿಧಾನವಾಗಿ, ಗುಪ್ತವಾಗಿ ಉಲ್ಬಣಗೊಳ್ಳುತ್ತವೆ ಮತ್ತು ಬಹಳ ತಡವಾದ ಹಂತದಲ್ಲಿ ಮಾತ್ರ ಪತ್ತೆಯಾಗುತ್ತವೆ ಎಂದು ವೈದ್ಯರು ಎಚ್ಚರಿಕೆ ನೀಡುತ್ತಾರೆ.

### ಲಕ್ಷಣಗಳನ್ನು ನಿರ್ಲಕ್ಷಿಸಬೇಡಿ:

ಮೂತ್ರವಿಸರ್ಜನೆಯಲ್ಲಿನ ಆರಂಭಿಕ ಬದಲಾವಣೆ: ಸೋಂಕು ಉಂಟಾಗುತ್ತಿರುವ ಪ್ರಮುಖ ಲಕ್ಷಣಗಳೆಂದರೆ, ಮೂತ್ರವಿಸರ್ಜನೆಯ ಸಮಯದಲ್ಲಿ ಉರಿ ಅನುಭವವಾಗುವುದು, ಅಲ್ಪ ಪ್ರಮಾಣದ ಮೂತ್ರವಿಸರ್ಜನೆಯಾದರೂ ಪದೇ ಪದೇ ಮೂತ್ರ ವಿಸರ್ಜನೆಯ ತೀವ್ರ ಬಯಕೆ ಉಂಟಾಗುವುದು, ಮೂತ್ರವು ಮಂಜಿನಂತೆ (ಮೋಡದಂತೆ) ಕಾಣುವುದು, ದುರ್ವಾಸನೆ ಬೀರುವುದು.

### ನಿರಂತರ ಅಸ್ವಸ್ಥತೆ:

ಹೊಟ್ಟೆಯ ಕೆಳಭಾಗದಲ್ಲಿ ಒತ್ತಡ ಇಲ್ಲವೇ ಸೊಂಟದ ಭಾಗದಲ್ಲಿ ನೋವು ಎರಡು ದಿನಗಳಿಗಿಂತ ಹೆಚ್ಚು ಕಾಲ ಮುಂದುವರಿದರೆ, ಸೋಂಕು ತನ್ನಷ್ಟಕ್ಕೇ ಗುಣವಾಗುತ್ತಿಲ್ಲ ಎಂದು ತಜ್ಞರು ಸೂಚಿಸುತ್ತಾರೆ.

### ಶರೀರದಾದ್ಯಂತ ಕಂಡುಬರುವ ಲಕ್ಷಣಗಳು:

ಜ್ವರ, ತೀವ್ರ ಆಯಾಸ ಇಲ್ಲವೇ ಚಳಿ – ನಡುಕದಂತಹ ಲಕ್ಷಣಗಳು ಕಾಣಿಸಿಕೊಳ್ಳಬಹುದು ಎಂದು ತಜ್ಞರು ಹೇಳುತ್ತಾರೆ. ಈ ಲಕ್ಷಣಗಳು ಕಂಡುಬಂದರೆ, ಸೋಂಕು ಮೂತ್ರನಾಳದ ಕೆಳಭಾಗದಿಂದ ಮೇಲ್ಭಾಗದ ಅಂಗಗಳಿಗೆ (ಮೂತ್ರಪಿಂಡಗಳ ಕಡೆಗೆ) ಹರಡುತ್ತಿದೆ ಎಂದು ಅರ್ಥ.

### ಬೆನ್ನು ನೋವು, ಪಕ್ಕೆಲುಬುಗಳ ಕೆಳಭಾಗದಲ್ಲಿ ನೋವು:

ಬೆನ್ನು ಅಥವಾ ಪಕ್ಕದ ಭಾಗಗಳಲ್ಲಿ ನೋವು ಕಾಣಿಸಿಕೊಳ್ಳುವುದು ಗಂಭೀರ ವಿಷಯವಾಗಿದೆ. ಇದು ಕೇವಲ ಮೂತ್ರಕೋಶದ ಸಾಮಾನ್ಯ ಸೋಂಕಲ್ಲ, ಬದಲಿಗೆ ಸೋಂಕು ಮೂತ್ರಪಿಂಡಗಳಿಗೂ ಹರಡಿದೆ ಎಂಬುದನ್ನು ಸೂಚಿಸುತ್ತದೆ.

ವಾಕರಿಕೆ & ವಾಂತಿ: ವಾಕರಿಕೆ, ವಾಂತಿಯಂತಹ ಲಕ್ಷಣಗಳು ದೇಹವು ತೀವ್ರ ಸೋಂಕಿನ ವಿರುದ್ಧ ಹೋರಾಡುತ್ತಿದೆ ಎಂಬುದನ್ನು ಸೂಚಿಸುತ್ತವೆ. ತಕ್ಷಣವೇ ವೈದ್ಯರನ್ನು ಸಂಪರ್ಕಿಸಲು ತಜ್ಞರು ಸಲಹೆ ನೀಡುತ್ತಾರೆ.

### ಈ ಕುರಿತು ವಿಳಂಬ ಮಾಡಬೇಡಿ:

ಮೂತ್ರನಾಳದ ಸೋಂಕುಗಳಿಗೆ ಪ್ರತಿಜೀವಕಗಳು (ಆಂಟಿಬಯಾಟಿಕ್ಸ್) ಹಾಗೂ ಸಾಕಷ್ಟು ದ್ರವಾಹಾರದ ಮೂಲಕ ಸುಲಭವಾಗಿ ಚಿಕಿತ್ಸೆ ನೀಡಬಹುದು. ಆದರೆ, ಸಮಯೋಚಿತ ಕ್ರಮ ಅತ್ಯಗತ್ಯ. ಆರಂಭಿಕ ಲಕ್ಷಣಗಳನ್ನು ನಿರ್ಲಕ್ಷಿಸುವುದರಿಂದ ಸುಲಭವಾಗಿ ತಡೆಗಟ್ಟಬಹುದಾದ ಸಮಸ್ಯೆಯು ಗಂಭೀರ ಸ್ಥಿತಿಗೆ ತಿರುಗಬಹುದು, ಅಪರೂಪದ ಸಂದರ್ಭಗಳಲ್ಲಿ ಇದು ಜೀವಕ್ಕೆ ಅಪಾಯವನ್ನೂ ಉಂಟುಮಾಡಬಹುದು.

# ಕೊಲೆಸ್ಟ್ರಾಲ್ ನಿಯಂತ್ರಣಕ್ಕೆ ಮನೆ ಮದ್ದು



ಬಹುತೇಕರ ಮನೆಗಳಲ್ಲಿ ಬಹಳ ಹಿಂದಿನಿಂದಲೂ ಹುಳಿ ಆಮ್ಲಾ (ನೆಲ್ಲಿಕಾಯಿ) ನಮ್ಮ ಆಹಾರದ ಭಾಗವಾಗಿದೆ. ಹಸಿ ಆಮ್ಲಾ, ಆಮ್ಲಾ ಜ್ಯೂಸ್, ಆಮ್ಲಾ ಚಟ್ನಿ ಹಾಗೂ ಪುಡಿಯಂತಹ ವಿವಿಧ ರೂಪಗಳಲ್ಲಿ ಸೇವಿಸಲಾಗುತ್ತದೆ. ಮಾರುಕಟ್ಟೆಯಲ್ಲಿ ತುಂಬಾ ಕಡಿಮೆ ಬೆಲೆಗೆ ಸಿಗುವಂತಹ ಆಮ್ಲಾ 50ಕ್ಕೂ ಹೆಚ್ಚು ಆರೋಗ್ಯದ ಪ್ರಯೋಜನಗಳನ್ನು ಹೊಂದಿದೆ. ನೆಲ್ಲಿಕಾಯಿಯಲ್ಲಿ ವಿಟಮಿನ್ ಸಿ, ಫೈಬರ್ ಹಾಗೂ ಉತ್ಕರ್ಷಣ ನಿರೋಧಕಗಳಂತಹ ಪೋಷಕಾಂಶಗಳನ್ನು ಹೊಂದಿರುತ್ತದೆ. ಇದಕ್ಕಾಗಿಯೇ ಆಮ್ಲಾ ಹೈಕೊಲೆಸ್ಟ್ರಾಲ್ ಕಡಿಮೆ ಮಾಡುವ ಜೊತೆಗೆ ವಿವಿಧ ಆರೋಗ್ಯದ ಪ್ರಯೋಜನಗಳನ್ನು ಹೊಂದಿದೆ.

### ಪೋಷಕಾಂಶಗಳ ಕಣಜ ಆಮ್ಲಾ

ಆಮ್ಲಾ ವಿಟಮಿನ್ ಸಿಯಿಂದ ಸಮೃದ್ಧವಾಗಿದೆ. ಚಿಕ್ಕ ಆಮ್ಲಾದಲ್ಲಿ ಕಂಡುಬರುವ ವಿಟಮಿನ್ ಸಿ ಸುಮಾರು 20 ಕಿತ್ತಳೆ ಹಣ್ಣುಗಳಿಗೆ ಸಮನಾಗಿರುತ್ತದೆ. ದೇಹದಲ್ಲಿ ಕಾಲಜನ್ ಉತ್ಪಾದನೆ, ಉತ್ಕರ್ಷಣ ನಿರೋಧಕ ರಕ್ಷಣೆಗೆ ತುಂಬಾ ಉಪಯುಕ್ತವಾಗಿದೆ. ಚರ್ಮದ ಸಾಮಾನ್ಯ ಆರೋಗ್ಯ, ರೋಗನಿರೋಧಕ ವ್ಯವಸ್ಥೆಗೆ ವಿಟಮಿನ್ ಸಿ ಅವಶ್ಯವಾಗಿದೆ. ಜೊತೆಗೆ ಗ್ಯಾಲಿಕ್ ಆಮ್ಲ, ಎಲಾಜಿಕ್ ಆಮ್ಲ ಮತ್ತು ಫ್ಲೇವನಾಯ್ಡ್‌ಗಳಂತಹ ಶಕ್ತಿಶಾಲಿ ಉತ್ಕರ್ಷಣ ನಿರೋಧಕಗಳನ್ನು ಹೊಂದಿದೆ. ಈ ಅಂಶಗಳು ದೇಹಕ್ಕೆ ಒಳ್ಳೆಯದು. ಇವು ದೇಹದ ಜೀವಕೋಶಗಳನ್ನು ಸ್ವತಂತ್ರ ರಾಡಿಕಲ್‌ಗಳ ದಾಳಿಯಿಂದ ರಕ್ಷಣೆ ಮಾಡುತ್ತವೆ.

### ಹೈಕೊಲೆಸ್ಟ್ರಾಲ್ ಕಡಿಮೆ ಮಾಡಲು ಬೆಸ್ಟ್

ದೈನಂದಿನ ಆಹಾರದಲ್ಲಿ ಆಮ್ಲಾ ಸೇರಿಸುವುದರಿಂದ ಕೆಟ್ಟ ಕೊಲೆಸ್ಟ್ರಾಲ್ ಟ್ರೈಗ್ಲಿಸರೈಡ್‌ಗಳು ಕಡಿಮೆಯಾಗುತ್ತವೆ, ಉತ್ತಮ ಕೊಲೆಸ್ಟ್ರಾಲ್ ಅನ್ನು ಸ್ವಲ್ಪ ಹೆಚ್ಚಿಸುತ್ತದೆ ಎಂದು ಸಂಶೋಧನೆ ತಿಳಿಸಿದೆ. ಇನ್ಸುಲಿನ್ ಸಂವೇದನೆ ಹೆಚ್ಚಿಸುತ್ತದೆ, ಉಪವಾಸದ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಪೂರ್ವ ಮಧುಮೇಹ ಹಾಗೂ ಟೈಪ್–2 ಮಧುಮೇಹ ಹೊಂದಿರುವವರಿಗೆ ಹೆಚ್ಚು ಪ್ರಯೋಜನವಾಗಿದೆ. ಆಮ್ಲಾದಲ್ಲಿರುವ ವಿಟಮಿನ್ ಸಿ ಕಾಲಜನ್ ಉತ್ಪಾದನೆಗೆ ಸಹಾಯವಾಗುತ್ತದೆ. ಇದು ಪರೋಕ್ಷವಾಗಿ ಚರ್ಮದ ಆರೋಗ್ಯಕ್ಕೂ ಹೆಚ್ಚು ಪ್ರಯೋಜನಕಾರಿಯಾಗಿದೆ. ಆಮ್ಲಾದಲ್ಲಿರುವ ಕರಗುವ ಫೈಬರ್ ಜೀರ್ಣಾಂಗ ವ್ಯವಸ್ಥೆಯಲ್ಲಿ ಕೊಲೆಸ್ಟ್ರಾಲ್ ಹೀರಿಕೊಳ್ಳುವಿಕೆ ಕಡಿಮೆ ಮಾಡುತ್ತದೆ, ಜೊತೆಗೆ ದೇಹದಿಂದ ಕೊಲೆಸ್ಟ್ರಾಲ್ ಹೊರಹಾಕಲು ತುಂಬಾ ಸಹಾಯ ಮಾಡುತ್ತದೆ.

### ಜೀರ್ಣಾಂಗಕ್ಕೂ ಅತ್ಯುತ್ತಮ

ನೆಲ್ಲಿಕಾಯಿಯಲ್ಲಿ ಫೈಬರ್ ಕೂಡ ಇದೆ. ಆಮ್ಲಾದಲ್ಲಿರುವ ಫೈಬರ್ ಅಂಶವು ಜೀರ್ಣಾಂಗ ವ್ಯವಸ್ಥೆಯನ್ನು ಸುಧಾರಿಸುತ್ತದೆ. ಜೊತೆಗೆ ಮಲಬದ್ಧತೆಯ ಸಮಸ್ಯೆ ಕಡಿಮೆ ಮಾಡುತ್ತದೆ. ಕರುಳಿನಲ್ಲಿರುವ ಉತ್ತಮ ಬ್ಯಾಕ್ಟೀರಿಯಾಗಳಿಗೆ ಆಹಾರವಾಗಿ ಕಾರ್ಯನಿರ್ವಹಿಸುತ್ತದೆ. ನೆಲ್ಲಿಕಾಯಿಯಲ್ಲಿರುವ ಉತ್ಕರ್ಷಣ ನಿರೋಧಕಗಳು ಯಕೃತ್ತಿನಲ್ಲಿ ಆಕ್ಸಿಡೇಟಿವ್ ಒತ್ತಡ, ಉರಿಯೂತ ಕಡಿಮೆ ಮಾಡುತ್ತದೆ. ಕೊಬ್ಬಿನ ಯಕೃತ್ತಿನ ಸಮಸ್ಯೆಯಿಂದ ಪರಿಹಾರ ಪಡೆದುಕೊಳಲು ಸಹಾಯವಾಗುತ್ತದೆ.

### ಹೃದಯದ ಆರೋಗ್ಯಕ್ಕೆ ಒಳ್ಳೆಯದು:

ನೆಲ್ಲಿಕಾಯಿಯಲ್ಲಿರುವ ಪೊಟ್ಯಾಸಿಯಮ್, ವಿಟಮಿನ್ ಸಿ ಅಧಿಕ ರಕ್ತದೊತ್ತಡ ನಿಯಂತ್ರಿಸುತ್ತದೆ. ಹೃದಯದ ಮೇಲಿನ ಒತ್ತಡ ಕಡಿಮೆ ಮಾಡುತ್ತದೆ. ಆಮ್ಲಾ ಕೆಟ್ಟ ಕೊಲೆಸ್ಟ್ರಾಲ್, ಟ್ರೈಗ್ಲಿಸರೈಡ್‌ಗಳನ್ನು ಕಡಿಮೆ ಮಾಡುವ ಮೂಲಕ ಉತ್ತಮ ಕೊಲೆಸ್ಟ್ರಾಲ್ ಮಟ್ಟ ಹೆಚ್ಚಿಸುತ್ತದೆ. ಅಪಧಮನಿಗಳ ಗೋಡೆಗಳಲ್ಲಿ ಕೊಬ್ಬು ಸಂಗ್ರಹವಾಗುವುದನ್ನು ತಡೆಯುತ್ತದೆ, ರಕ್ತ ಪರಿಚಲನೆ ಸುಧಾರಿಸುತ್ತದೆ ಹಾಗೂ ಶಕ್ತಿಶಾಲಿ ಉತ್ಕರ್ಷಣ ನಿರೋಧಕಗಳು ಹೃದಯ ಕೋಶಗಳನ್ನು ಆಕ್ಸಿಡೇಟಿವ್ ಒತ್ತಡದಿಂದ ರಕ್ಷಣೆ ಮಾಡುತ್ತದೆ. ಆಮ್ಲಾ ರಕ್ತವನ್ನು ತೆಳುಗೊಳಿಸಲು, ಹೃದಯಾಘಾತದ ಅಪಾಯ ಕಡಿಮೆ ಮಾಡುತ್ತದೆ ಎಂದು ಸಂಶೋಧನೆ ವಿವರಿಸುತ್ತದೆ.

### ಯಕೃತ್ತಿನ ಶುದ್ಧೀಕರಣ ಬೆಸ್ಟ್

ಯಕೃತ್ತನ್ನು ಶುದ್ಧೀಕರಿಸಲು ನೆಲ್ಲಿಕಾಯಿ ಸಹ ಉಪಯುಕ್ತವಾಗಿದೆ. ಆಮ್ಲಾದಲ್ಲಿನ ಪ್ರಬಲವಾದ ಉತ್ಕರ್ಷಣ ನಿರೋಧಕಗಳು ಯಕೃತ್ತಿನಲ್ಲಿ ಸಂಗ್ರಹವಾಗಿರುವ ವಿಷ, ವಿಷಕಾರಿ ತ್ಯಾಜ್ಯವನ್ನು ದೇಹದಿಂದ ಹೊರಹಾಕಲು ತುಂಬಾ ಸಹಾಯ ಮಾಡುತ್ತದೆ. ಯಕೃತ್ತಿನಲ್ಲಿ ಹೆಚ್ಚುವರಿ ಕೊಬ್ಬು ಸಂಗ್ರಹವಾಗುವುದನ್ನು ತಡೆಯುತ್ತದೆ. ಕೊಬ್ಬಿನ ಪಿತ್ತಜನಕಾಂಗದ ಕಾಯಿಲೆಯ ಅಪಾಯ ಕಡಿಮೆ ಮಾಡಲು ಪ್ರಮುಖ ಪಾತ್ರ ವಹಿಸುತ್ತದೆ. ಆಮ್ಲಾದಲ್ಲಿನ ವಿಟಮಿನ್ ಸಿ ಯಕೃತ್ತಿನ ಕೋಶಗಳನ್ನು ಆಕ್ಸಿಡೇಟಿವ್ ಒತ್ತಡ, ಸ್ವತಂತ್ರ ರಾಡಿಕಲ್‌ಗಳಿಂದ ಉಂಟಾಗುವ ಹಾನಿಯನ್ನು ತಡೆ–ಯುತ್ತದೆ. ಯಕೃತ್ತಿನ ಕಾರ್ಯವನ್ನು ಸುಧಾರಿಸುತ್ತದೆ, ಎ ಎಲ್ ಟಿ ಮತ್ತು ಎಎಸ್‌ಟಿ ನಂತಹ ಯಕೃತ್ತಿನ ಕಿಣ್ವದ ಮಟ್ಟಗಳು ಸಮತೋಲನದಲ್ಲಿ ಇರಿಸಲು ತುಂಬಾ ಸಹಾಯ ಮಾಡುತ್ತದೆ. ಯಕೃತ್ತಿನ ಮೇಲೆ ಆಲ್ಕೋಹಾಲ್, ಅತಿಯಾದ ಮಾದಕವಸ್ತು ಬಳಕೆಯ ಹಾನಿಕಾರಕ ಪರಿಣಾಮಗಳನ್ನು ಕಡಿಮೆ ಮಾಡುತ್ತದೆ. ಜೀರ್ಣಾಂಗ ವ್ಯವಸ್ಥೆ ಉತ್ತೇಜಿಸುವ ಮೂಲಕ ಪಿತ್ತರಸ ಸ್ರವಿಸುವಿಕೆ ಹೆಚ್ಚಿಸುತ್ತದೆ. ಕೊಬ್ಬಿನ ಜೀರ್ಣಕ್ರಿಯೆ ಹೆಚ್ಚಿಸುತ್ತದೆ, ಯಕೃತ್ತಿನ ದಕ್ಷತೆ ಸುಧಾರಿಸಲು ತುಂಬಾ ಅನುಕೂಲವಾಗುತ್ತದೆ.

### ನೆಲ್ಲಿಕಾಯಿ ಔಷಧಕ್ಕೆ ಪರ್ಯಾಯವಾಗಿಲ್ಲ:

ನೆಲ್ಲಿಕಾಯಿ ಅದ್ಭುತ ಆರೋಗ್ಯ ಪ್ರಯೋಜನಗಳನ್ನು ನೀಡುತ್ತದೆ. ಆದರೆ, ರೋಗಗಳಿಗೆ ಏಕೈಕ ಚಿಕಿತ್ಸೆಯಾಗಿ ಪರಿಗಣಿಸಬಾರದು. ವೈದ್ಯಕೀಯ ಚಿಕಿತ್ಸೆ ಮತ್ತು ಆರೋಗ್ಯಕರ ಜೀವನಶೈಲಿಗೆ ಪೂರಕವಾರುವ ಆಹಾರದಲ್ಲಿ ಸೇರಿಸಬೇಕು. ಪ್ರಸ್ತುತ ಲಭ್ಯವಿರುವ ಸಂಶೋಧನೆಯು ಬಹಳ ಸಣ್ಣ ಮಾದರಿ ಗಾತ್ರಗಳನ್ನು ಆಧರಿಸಿದೆ. ದೊಡ್ಡ ಕ್ಲಿನಿಕಲ್ ಪ್ರಯೋಗಗಳು ಅಗತ್ಯವಿದೆ ಎಂದು ಸಂಶೋಧಕರು ತಿಳಿಸುತ್ತಾರೆ.

ನೆಲ್ಲಿಕಾಯಿಯನ್ನು ಎಷ್ಟು ಹಾಗೂ ಯಾವ ಪ್ರಮಾಣದಲ್ಲಿ ಸೇವಿಸಬೇಕು ಆಮ್ಲಾ ಕಚ್ಚಾ, ಊಟದ ಭಾಗವಾಗಿ ಹಾಗೂ ಪುಡಿ ರೂಪದಲ್ಲಿ ಸೇವಿಸಬಹುದು. ಅನೇಕ ಜನರು ಆಮ್ಲಾ ರಸವನ್ನು ಸಹ ಸೇವನೆ ಮಾಡುತ್ತಾರೆ. ಯಾವುದೇ ರೂಪದಲ್ಲಿ ಸೇವಿಸಿದರೂ ಪ್ರಮಾಣ ಮುಖ್ಯವಾಗುತ್ತದೆ. ಅತಿಯಾಗಿ ಸೇವಿಸಿದರೆ, ಕೆಲವು ಜನರಲ್ಲಿ ಹೊಟ್ಟೆಯಲ್ಲಿ ಅಸ್ವಸ್ಥತೆ ಉಂಟಾಗಬಹುದು. ಆರೋಗ್ಯಕರ ಜೀವನಶೈಲಿಯ ಭಾಗವಾಗಿ ಪ್ರತಿದಿನ ಒಂದು ಇಲ್ಲವೇ ಎರಡು ಆಮ್ಲಾ ಅಥವಾ ಒಂದು 1 ಟೀಸ್ಪೂನ್ ಆಮ್ಲಾ ಪುಡಿ ಸೇವಿಸುವುದು ಒಳ್ಳೆಯದು. ಮಧುಮೇಹಕ್ಕೆ ಔಷಧಗಳನ್ನು ತೆಗೆದುಕೊಳ್ಳುತ್ತಿರುವವರು ನಿಯಮಿತವಾಗಿ ಆಮ್ಲಾ ಸೇವಿಸುವ ಮೊದಲು ವೈದ್ಯರ ಸಲಹೆಗಳನ್ನು ತೆಗೆದುಕೊಳ್ಳಬೇಕಾಗುತ್ತದೆ. ರಕ್ತದಲ್ಲಿನ ಸಕ್ಕರೆ ಮಟ್ಟ ನಿಯಮಿತವಾಗಿ ಮೇಲ್ವಿಚಾರಣೆ ಮಾಡುವುದು ತುಂಬಾ ಮುಖ್ಯವಾಗುತ್ತದೆ. ಆಮ್ಲಾ ಔಷಧಿಗಳ ಪರಿಣಾಮಗಳೊಂದಿಗೆ ಸೇರಿಸಿದರೆ ಶುಗರ್ ಲೆವಲ್ ಅನ್ನು ಕಡಿಮೆ ಮಾಡುತ್ತದೆ ಎಂದು ತಜ್ಞರು ವಿವರಿಸುತ್ತಾರೆ.

# ನಿದ್ರೆಯಲ್ಲಿ ಹಲ್ಲು ಕಡಿಯಲು ಕಾರಣ

ನಿದ್ರೆಯಲ್ಲಿ ಹಲ್ಲುಗಳನ್ನು ಬಿಗಿಯುವುದು, ಕಡಿಯುವುದು ಮಾಡುವ ಅಭ್ಯಾಸ ಹಲವರಿಗಿರುತ್ತದೆ. ಇದು ಪಕ್ಕದಲ್ಲಿ ಮಲಗಿರುವ ಕುಟುಂಬ ಸದಸ್ಯರು ಅಥವಾ ಸಂಗಾತಿ ಗಮನಿಸಿದ ನಂತರವೇ ಈ ಬಗ್ಗೆ ತಿಳಿಯಬಹುದು. ವೈದ್ಯಕೀಯವಾಗಿ ಇದನ್ನು ಬ್ರಕ್ಸಿಜಂ ಎಂದು ಕರೆಯಲಾಗುತ್ತದೆ. ಕೆಲವೊಮ್ಮೆ ಕಾಣಿಸಿಕೊಳ್ಳುವ ಸಣ್ಣ ಪ್ರಮಾಣದ ಹಲ್ಲು ಕಡಿಯುವಿಕೆ ದೊಡ್ಡ ಸಮಸ್ಯೆಯಾಗದಿರಬಹುದು. ಆದರೆ ಪದೇಪದೇ ಮತ್ತು ಹೆಚ್ಚಿನ ಬಲದಿಂದ ಹಲ್ಲುಗಳನ್ನು ಕಚ್ಚುತ್ತಿದ್ದರೆ, ಹಲ್ಲುಗಳು, ದವಡೆಯ ಸ್ನಾಯುಗಳು ಮತ್ತು ದವಡೆಯ ಜಾಯಿಂಟ್ ಮೇಲೆ ಒತ್ತಡ ಉಂಟಾಗಬಹುದು. ಹಾಗಾದರೆ ಈ ರೀತಿ ಆಗುವುದಕ್ಕೆ ಕಾರಣವೇನು, ಈ ರೀತಿ ಮಾಡುವುದನ್ನು ತಪ್ಪಿಸಲು ಏನು ಮಾಡಬಹುದು ಎಂಬ ಮಾಹಿತಿ ಇಲ್ಲಿದೆ

### ನಿದ್ರೆಯಲ್ಲಿ ಹಲ್ಲು ಕಡಿಯಲು ಕಾರಣಗಳೇನು

ಒತ್ತಡ ಮತ್ತು ಆತಂಕ ಬ್ರಕ್ಸಿಜಂಗೆ ಸಂಬಂಧಿಸಿದ ಪ್ರಮುಖ ಅಂಶಗಳಲ್ಲಿ ಸೇರಿವೆ. ಇದರ ಜೊತೆಗೆ ಗೊರಕೆ, ಸ್ಲೀಪ್ ಅಪ್ನಿಯಾ ಸೇರಿದಂತೆ ಕೆಲವು ನಿದ್ರಾ ಸಮಸ್ಯೆಗಳು ಕೂಡ ನಿದ್ರೆಯಲ್ಲಿನ ಹಲ್ಲು ಕಡಿಯುವಿಕೆಗೆ ಸಂಬಂಧಿಸಿರಬಹುದು. ಕೆಲವು ಔಷಧಿಗಳು, ಹೆಚ್ಚು ಕೆಫೀನ್ ಸೇವನೆ ಮತ್ತು ಧೂಮಪಾನದಂತಹ ಅಭ್ಯಾಸಗಳು ಕೆಲವು ವ್ಯಕ್ತಿಗಳಲ್ಲಿ ಬ್ರಕ್ಸಿಜಂಗೆ ಪ್ರಚೋದಕವಾಗಬಹುದು. ಆದರೆ ಯಾವುದಾದರೂ ಔಷಧಿಯೇ ಕಾರಣ ಎಂದು ಅನುಮಾನ ಬಂದರೆ, ವೈದ್ಯರ ಸಲಹೆಯಿಲ್ಲದೆ ಔಷಧಿಯನ್ನು ನಿಲ್ಲಿಸಬಾರದು.

### ಬೆಳಗ್ಗೆ ಈ ಲಕ್ಷಣಗಳು ಕಂಡರೆ ನಿರ್ಲಕ್ಷ್ಯ ಮಾಡಬೇಡಿ:

- ನಿದ್ರೆಯಲ್ಲಿ ಹಲ್ಲು ಕಡಿಯುವವರಿಗೆ ಬೆಳಗ್ಗೆ ಎದ್ದಾಗ ಕೆಲವು ಲಕ್ಷಣಗಳು ಕಾಣಿಸಿಕೊಳ್ಳಬಹುದು.
- ದವಡೆಯ ಸ್ನಾಯುಗಳಲ್ಲಿ ನೋವು ಅಥವಾ ಬಿಗಿತ
- ಬೆಳಗ್ಗೆ ತಲೆನೋವು
- ಹಲ್ಲುಗಳಲ್ಲಿ ನೋವು ಅಥವಾ ಸೆನ್ಸಿಟಿವಿಟಿ
- ಬಾಯಿ ತೆರೆದು ಮುಚ್ಚುವಾಗ ಕಷ್ಟವಾಗುವುದು
- ದವಡೆಯ ಜಾಯಿಂಟ್ ಸುತ್ತ ನೋವು ಅಥವಾ ಅಸ್ವಸ್ಥತೆ
- ನಿದ್ರೆಯಲ್ಲಿ ಹಲ್ಲು ಕಡಿಯುವ ಶಬ್ದವನ್ನು ಕುಟುಂಬ ಸದಸ್ಯರು ಗಮನಿಸುವುದು
- ಹಲ್ಲುಗಳಿಗೂ ಹಾನಿಯಾಗಬಹುದು:

ದೀರ್ಘಕಾಲ ಮತ್ತು ತೀವ್ರವಾಗಿ ಹಲ್ಲು ಕಡಿಯುವುದರಿಂದ ಹಲ್ಲುಗಳ ಮೇಲೆ ಹೆಚ್ಚುವರಿ ಒತ್ತಡ ಬೀಳುತ್ತದೆ. ಇದರಿಂದ ಹಲ್ಲುಗಳು ಸವೆಯುವುದು, ಹಲ್ಲಿನ ಮೇಲ್ಮೈ ಹಾನಿಯಾಗುವುದು, ಬಿರುಕುಗಳು ಉಂಟಾಗುವುದು ಅಥವಾ ಹಲ್ಲು ಮುರಿಯುವ ಅಪಾಯ ಹೆಚ್ಚಾಗಬಹುದು. ಕೆಲವರಲ್ಲಿ ದವಡೆಯ ಸ್ನಾಯುಗಳಲ್ಲಿ ನೋವು, ಆಯಾಸ ಅಥವಾ ದವಡೆಯ ಜಾಯಿಂಟ್‌ನಲ್ಲಿ ಒಂದು ರೀತಿಯ ಅನುಭವ ಕಾಣಿಸಿಕೊಳ್ಳಬಹುದು.

### ಬ್ರಕ್ಸಿಜಂ ಕಡಿಮೆ ಮಾಡಲು ಏನು ಮಾಡಬೇಕು

ಎಲ್ಲರಿಗೂ ಒಂದೇ ರೀತಿಯ ಚಿಕಿತ್ಸೆ ಅಗತ್ಯವಿರುವುದಿಲ್ಲ. ಸಮಸ್ಯೆ ಸೌಮ್ಯವಾಗಿದ್ದರೆ ಜೀವನಶೈಲಿಯಲ್ಲಿ ಕೆಲವು ಬದಲಾವಣೆಗಳು ಸಹಾಯ ಮಾಡಬಹುದು. ಪ್ರತಿದಿನ ಒಂದೇ ಸಮಯಕ್ಕೆ ಮಲಗುವುದು ಮತ್ತು ಎದ್ದೇಳುವುದು, ಸಾಕಷ್ಟು ನಿದ್ರೆ ಪಡೆಯುವುದು ಹಾಗೂ ಒತ್ತಡವನ್ನು ಕಡಿಮೆ ಮಾಡಿಕೊಳ್ಳುವುದು ಉಪಯುಕ್ತವಾಗಬಹುದು. ಹಲ್ಲುಗಳಿಗೆ ಹಾನಿಯಾಗುವ ಅಪಾಯವಿದ್ದರೆ ದಂತವೈದ್ಯರು ರಾತ್ರಿ ಬಳಸುವ ಮೌತ್‌ಗಾರ್ಡ್ ಅನ್ನು ಸೂಚಿಸಬಹುದು. ಆದರೆ ಮಾರುಕಟ್ಟೆಯಲ್ಲಿ ಸಿಗುವ ಮೌತ್‌ಗಾರ್ಡ್ ಅನ್ನು ಸ್ವತಃ ಆಯ್ಕೆ ಮಾಡಿಕೊಳ್ಳುವ ಬದಲು ದಂತವೈದ್ಯರ ಸಲಹೆ ಪಡೆಯುವುದು ಉತ್ತಮ.

ನಿದ್ರೆಯಲ್ಲಿ ಪದೇಪದೇ ಹಲ್ಲು ಕಡಿಯುತ್ತಿರುವುದು ಕಂಡುಬಂದರೆ ಅದನ್ನು ಕೇವಲ ಸಾಮಾನ್ಯ ಎಂದು ನಿರ್ಲಕ್ಷಿಸಬೇಡಿ. ಹಲ್ಲಿನ ನೋವು, ಸೆನ್ಸಿಟಿವಿಟಿ, ದವಡೆಯ ನಿರಂತರ ನೋವು ಅಥವಾ ನಿದ್ರೆಗೆ ಸಂಬಂಧಿಸಿದ ಸಮಸ್ಯೆಗಳು ಇದ್ದರೆ ದಂತವೈದ್ಯರು ಅಥವಾ ವೈದ್ಯರನ್ನು ಸಂಪರ್ಕಿಸುವುದು ಸೂಕ್ತ.

# ಮಧ್ಯಂತರ ಉಪವಾಸ

## ಎಚ್ಚರ ಅವಶ್ಯ



ಪ್ರಸ್ತುತ ಜನರು ತಮ್ಮ ದೇಹದ ತೂಕ ಇಳಿಸಿಕೊಳ್ಳಲು ವಿವಿಧ ವಿಧಾನಗಳನ್ನು ಪ್ರಯತ್ನಿಸುತ್ತಿದ್ದಾರೆ. ಇವುಗಳಲ್ಲಿ ಮಧ್ಯಂತರ ಉಪವಾಸ ಸಾಕಷ್ಟು ಜನಪ್ರಿಯವಾಗಿದೆ. ಇದರಲ್ಲಿ ದಿನದ ನಿರ್ದಿಷ್ಟ ಅವಧಿಯಲ್ಲಿ ಮಾತ್ರ ಆಹಾರ ಸೇವನೆಗೆ ಅವಕಾಶವಿರುತ್ತದೆ. ದೇಹದ ತೂಕ ಇಳಿಕೆಗೆ ತುಂಬಾ ಸಹಾಯ ಮಾಡುತ್ತದೆ ಎಂದು ಅನೇಕರು ನಂಬುತ್ತಾರೆ. ಇದರೊಂದಿಗೆ ರಕ್ತದೊತ್ತಡ ಕಡಿಮೆ ಮಾಡುವುದು, ವಿಶ್ರಾಂತ ಸ್ಥಿತಿಯಲ್ಲಿ ಹೃದಯ ಬಡಿತ ಕಡಿಮೆ ಮಾಡುವುದು ಸೇರಿದಂತೆ ವಿವಿಧ ಪ್ರಯೋಜನಗಳು ಲಭಿಸುತ್ತವೆ ಎಂದು ಹಲವು ಅಧ್ಯಯನಗಳು ತಿಳಿಸುತ್ತವೆ. ಮಧ್ಯಂತರ ಉಪವಾಸವು ಪ್ರತಿಯೊಬ್ಬರಿಗೂ ಉತ್ತಮವೇ? ಕೆಲವು ಸಂದರ್ಭಗಳಲ್ಲಿ ಈ ವಿಧಾನವು ಪ್ರಯೋಜನಕ್ಕಿಂತ ಹೆಚ್ಚಾಗಿ ಹಾನಿ ಉಂಟುಮಾಡಬಹುದು ಎಂದು ಕೆಲವು ಅಧ್ಯಯನಗಳು ತಿಳಿಸುತ್ತವೆ.

ಮಧ್ಯಂತರ ಉಪವಾಸ ಮಾಡುವವರಲ್ಲಿ ಈಗಾಗಲೇ ಆರೋಗ್ಯ ಸಮಸ್ಯೆಗಳಿದ್ದರೆ, ನಿಯಮಿತವಾಗಿ ಔಷಧಗಳನ್ನು ತೆಗೆದುಕೊಳ್ಳುತ್ತಿದ್ದರೆ ಹೆಚ್ಚು ಎಚ್ಚರಿಕೆ ವಹಿಸಬೇಕಾಗುತ್ತದೆ. ವೈದ್ಯರ ಸಲಹೆ ಪಡೆದುಕೊಳ್ಳದೆ, ದೀರ್ಘಕಾಲದವರೆಗೆ ಆಹಾರ ಸೇವಿಸದೆ ಇರುವುದು ಆರೋಗ್ಯ ವಿವಿಧ ಅಡ್ಡಪರಿಣಾಮಗಳು ಬೀರುತ್ತವೆ. ಜೊತೆಗೆ ದೀರ್ಘಕಾಲದವರೆಗೆ ಆಹಾರ ಸೇವಿಸದಿರುವ ಕಾರಣಕ್ಕೆ ತಲೆನೋವು, ದೌರ್ಬಲ್ಯ ಹಾಗೂ ರಕ್ತದಲ್ಲಿನ ಸಕ್ಕರೆ ಮಟ್ಟಕ್ಕೆ ಸಂಬಂಧಿಸಿದ ಸಮಸ್ಯೆಗಳು ಕಾಡುವ ಸಾಧ್ಯತೆ ಹೆಚ್ಚಿರುತ್ತದೆ. ದೇಹದ ತೂಕ ಇಳಿಸಿಕೊಳ್ಳುವ ಭರದಲ್ಲಿ ಮಧ್ಯಂತರ ಉಪವಾಸ ವೈದ್ಯಕೀಯ ಸಲಹೆ ಇಲ್ಲದೆ ಕುರುಡಾಗಿ ಅನುಸರಿಸುವುದು ಸರಿಯಲ್ಲ ಎಂದು ವೈದ್ಯರು ಎಚ್ಚರಿಕೆ ನೀಡುತ್ತಾರೆ.

ಮಧ್ಯಂತರ ಉಪವಾಸ ಪ್ರಯೋಜನಗಳೇನು? ಮಧ್ಯಂತರ ಉಪವಾಸ ಅನ್ನು ಹೆಚ್ಚಾಗಿ ತೂಕ ಇಳಿಸಿಕೊಳ್ಳಲು ಬಳಸಲಾಗುತ್ತದೆ. ಆಹಾರ ಸೇವನೆಯ ಸಮಯವನ್ನು ಮಿತಿಗೊಳಿಸುವುದರಿಂದ ನಿಮ್ಮ ದೈನಂದಿನ ಒಟ್ಟು ಕ್ಯಾಲೋರಿ ಸೇವನೆಯನ್ನು ಕಡಿಮೆ ಮಾಡಬಹುದು. ಇದರಿಂದ ಮಧ್ಯಂತರ ಉಪವಾಸ ದೇಹದ ತೂಕ ಇಳಿಕೆಗೆ ಸಹಾಯ ಮಾಡುತ್ತದೆ. ರಕ್ತದೊತ್ತಡ ಮತ್ತು ವಿಶ್ರಾಂತ ಸ್ಥಿತಿಯಲ್ಲಿ ಹೃದಯ ಬಡಿತವನ್ನು ಕಡಿಮೆಗೊಳಿಸಲು ಸಹಾಯ ಮಾಡುತ್ತದೆ ಎಂದು ಕೆಲವು ಅಧ್ಯಯನಗಳು ತಿಳಿಸುತ್ತವೆ.

16 ಗಂಟೆಗಳ ಕಾಲ ಉಪವಾಸ ಆಚರಿಸಿದ ಪುರುಷರಲ್ಲಿ ಕೊಬ್ಬು ಕಡಿಮೆಯಾಗುವ ಲಕ್ಷಣಗಳು ಕಾಣಿಸುತ್ತವೆ ಎಂದು ಅಧ್ಯಯನವೊಂದು ತಿಳಿಸುತ್ತದೆ. ಪ್ರಾಣಿಗಳ ಮೇಲೆ ನಡೆದ ಅಧ್ಯಯನಗಳಲ್ಲಿ ಇದೇ ರೀತಿಯ ಫಲಿತಾಂಶಗಳು ಕಂಡುಬಂದಿವೆ. ಆದ್ರೆ ಈ ಸಂಶೋಧನೆಗಳನ್ನು ನೇರವಾಗಿ ಪ್ರತಿಯೊಬ್ಬ ವ್ಯಕ್ತಿಗೂ ಅನ್ವಯಿಸಲು ಸಾಧ್ಯವಿಲ್ಲ. ಬೇರೆ ರೀತಿಯಲ್ಲಿ ಹೇಳುವುದಾದರೆ, ಮಧ್ಯಂತರ ಉಪವಾಸ ಕೆಲವರಿಗೆ ಪ್ರಯೋಜನಕಾರಿಯಾಗಿದ್ದರೂ, ಅದರ ಪರಿಣಾಮಗಳು ವ್ಯಕ್ತಿಯ ವಯಸ್ಸು, ಆಹಾರ ಕ್ರಮ, ದೇಹದ ತೂಕ ಹಾಗೂ ಆರೋಗ್ಯ ಸ್ಥಿತಿ ಅವಲಂಬಿಸಿರುತ್ತದೆ.

### ದೀರ್ಘಕಾಲದ ಉಪವಾಸದಿಂದ ತಲೆನೋವು:

ಮಧ್ಯಂತರ ಉಪವಾಸ ಪ್ರಾರಂಭಿಸಿದ ಬಳಿಕ ಕೆಲವರು ತಲೆನೋವು ಅನುಭವಿಸಬಹುದು. ದೀರ್ಘಕಾಲದವರೆಗೆ ಆಹಾರ ಸೇವಿಸದಿರುವುದು ಇದಕ್ಕೆ ಕಾರಣವಾಗಿದೆ. ದೇಹವು ದೀರ್ಘಕಾಲದವರೆಗೆ ಆಹಾರವಿಲ್ಲದೆ ಇದ್ದಾಗ ಕೆಲವರಲ್ಲಿ ತಲೆನೋವು ಅಥವಾ ತಲೆತಿರುಗುವಿಕೆಯಂತಹ ಚಿಹ್ನೆಗಳು ಕಂಡುಬರುತ್ತವೆ.

2020ರಲ್ಲಿ ಪ್ರಕಟವಾದ ಸಂಶೋಧನೆ ತಿಳಿಸುವ ಪ್ರಕಾರ, ಮಧ್ಯಂತರ ಉಪವಾಸ ಮಾಡುವವರಲ್ಲಿ ಸಾಮಾನ್ಯವಾಗಿ ತಲೆನೋವಿನ ಸಮಸ್ಯೆ ಕಾಡುತ್ತದೆ. ಇದರ ತೀವ್ರತೆಯು ವ್ಯಕ್ತಿಯಿಂದ ವ್ಯಕ್ತಿಗೆ ಬದಲಾಗುತ್ತದೆ. ಕೆಲವರು ಸೌಮ್ಯವಾದ ತಲೆನೋವು ಅನುಭವಿಸಬಹುದು. ಮತ್ತೆ ಕೆಲವು ಜನರಿಗೆ ತಲೆನೋವು ಹೆಚ್ಚು ತೀವ್ರವಾಗಿರಬಹುದು. ಉಪವಾಸದ ಸಮಯದಲ್ಲಿ ಮತ್ತೆ ಮತ್ತೆ ತಲೆನೋವನ್ನು ಅನುಭವಿಸುತ್ತಿದ್ದರೆ ನಿರ್ಲಕ್ಷ್ಯ ಮಾಡದೆ, ಸಂಬಂಧಪಟ್ಟ ವೈದ್ಯರನ್ನು ಸಂಪರ್ಕಿಸಬೇಕು ಎಂದು ತಜ್ಞರು ತಿಳಿಸುತ್ತಾರೆ.

### ಮಧುಮೇಹಿಗಳು ಉಪವಾಸಕ್ಕೂ ಮುನ್ನ ವೈದ್ಯರ ಸಲಹೆ ಪಡೆಯಿರಿ:

ಮಧುಮೇಹಿಗಳಿಗೆ 'ಮಧ್ಯಂತರ ಉಪವಾಸ' ಮಾಡುವುದು ಸ್ವಲ್ಪ ಸಂಕೀರ್ಣವಾಗಿರಬಹುದು. ದೀರ್ಘಕಾಲದವರೆಗೆ ಆಹಾರ ಸೇವಿಸದಿರುವುದು ರಕ್ತದಲ್ಲಿನ ಸಕ್ಕರೆಯ ಮಟ್ಟದಲ್ಲಿ ಏರಿಳಿತಗಳಿಗೆ ಕಾರಣವಾಗುತ್ತದೆ. ವಿಶೇಷವಾಗಿ ರಕ್ತದಲ್ಲಿನ ಸಕ್ಕ–ರೆಯ ಮಟ್ಟ ಕಡಿಮೆ ಮಾಡುವ ಔಷಧಗಳನ್ನು ಇಲ್ಲವೇ ಇನ್ಸುಲಿನ್ ತೆಗೆದುಕೊಳ್ಳುವವರು 'ಹೈಪೊಗ್ಲಿಸಿಮಿಯಾ' (ರಕ್ತದಲ್ಲಿನ ಸಕ್ಕರೆಯ ಮಟ್ಟವು ಅಪಾಯಕಾರಿ ಮಟ್ಟಕ್ಕೆ ಕುಸಿಯುವ ಸ್ಥಿತಿ) ಅಪಾಯ ಎದುರಿಸಬಹುದು. ಮಧುಮೇಹ ರೋಗಿಗಳು ಕೇವಲ ತೂಕ ಇಳಿಸಿಕೊಳ್ಳುವ ಉದ್ದೇಶದಿಂದ ಸ್ವಯಂಪ್ರೇರಿತರಾಗಿ ಉಪವಾಸ ಆರಂಭಿಸಬಾರದು. ನಿಮಗೆ ಯಾವ ರೀತಿಯ ಆಹಾರ ಕ್ರಮ ಸುರಕ್ಷಿತವಾಗಿದೆ ಎಂಬುದನ್ನು ತಿಳಿದುಕೊಳ್ಳಲು ಮೊದಲು ವೈದ್ಯರನ್ನು ಸಂಪರ್ಕಿಸುವುದು ತುಂಬಾ ಅವಶ್ಯವಾಗಿದೆ.




ಔಷಧಗಳನ್ನು ತೆಗೆದುಕೊಳ್ಳುವವರು ಎಚ್ಚರಿಕೆ ವಹಿಸಿ: ಅಧಿಕ ರಕ್ತದೊತ್ತಡ, ಹೃದಯ ರೋಗ ಇಲ್ಲವೇ ಇತರೆ ಯಾವುದೇ ಆರೋಗ್ಯ ಸಮಸ್ಯೆಗೆ ನಿಯಮಿತವಾಗಿ ಔಷಧಗಳನ್ನು ತೆಗೆದುಕೊಳ್ಳುತ್ತಿದ್ದರೆ ಉಪವಾಸ ಆರಂಭಿಸುವ ಮುನ್ನ ವೈದ್ಯರನ್ನು ಸಂಪರ್ಕಿಸುವುದು ಬಹಳ ಮುಖ್ಯವಾಗಿದೆ. ಉಪವಾಸದ ಸಮಯದಲ್ಲಿ ನಿಮ್ಮ ಆಹಾರ ಸೇವನೆಯ ವೇಳಾಪಟ್ಟಿ ಬದಲಾಯಿಸುವುದರಿಂದ ಔಷಧಗಳ ಸೇವನೆಯ ಸಮಯ ಬದಲಾಯಿಸಬೇಕಾಗಬಹುದು.

ದೀರ್ಘಕಾಲದವರೆಗೆ ಆಹಾರ ಸೇವಿಸದಿರುವುದು ದೌರ್ಬಲ್ಯ, ತಲೆತಿರುಗುವಿಕೆ ಹಾಗೂ ಇತರೆ ಆರೋಗ್ಯದ ಸಮಸ್ಯೆಗಳಿಗೆ ಕಾರಣವಾಗಬಹುದು. ಕೆಲವು ಔಷಧಗಳನ್ನು ಆಹಾರದೊಂದಿಗೆ ತೆಗೆದುಕೊಳ್ಳಬೇಕಾಗುತ್ತದೆ. ನಿಮಗೆ ಆರೋಗ್ಯ ಸಮಸ್ಯೆಗಳಿದ್ದರೆ, ಪ್ರತಿದಿನ ಔಷಧಗಳನ್ನು ತೆಗೆದುಕೊಳ್ಳುತ್ತಿದ್ದರೆ ತಾವೇ ಉಪವಾಸ ಮಾಡುವ ಮೊದಲು ವೈದ್ಯರನ್ನು ಸಂಪರ್ಕಿಸಬೇಕಾಗುತ್ತದೆ. ಸುರಕ್ಷಿತವಾದ ವಿಧಾನದ ಮೂಲಕ ದೇಹದ ತೂಕ ಇಳಿಸಿಕೊಳ್ಳುವುದು ತುಂಬಾ ಮುಖ್ಯವಾಗಿದೆ ಎಂದು ಆರೋಗ್ಯ ತಜ್ಞರು ತಿಳಿಸುತ್ತಾರೆ.

# ಎನ್‌ಎಂಐಟಿಯಲ್ಲಿ 1,402 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ

ಬೆಂಗಳೂರು,ಸೆ.28–ವೃತ್ತಿಜೀವನ ಅಥವಾ ಉದ್ಯಮಶೀಲತೆಗೆ ಕಾಲಿಡುವ ಯುವಕರು ತಮ್ಮ ವ್ಯಕ್ತಿತ್ವ ಹಾಗೂ ಆಸಕ್ತಿಗೆ ಪ್ರಾಮಾಣಿಕವಾಗಿ ಬದ್ಧರಾಗಿರಬೇಕು. ನಿರಂತರ ಕಲಿಕೆಯ ಮೂಲಕ ಬೆಳವಣಿಗೆಯ ಮನೋಭಾವ ಬೆಳೆಸಿಕೊಂಡು, ಕೃತಕ ಬುದ್ಧಿಮತ್ತೆ ಸೇರಿದಂತೆ ಬದಲಾಗುತ್ತಿರುವ ತಂತ್ರಜ್ಞಾನಕ್ಕೆ ಹೊಂದಿಕೊಳ್ಳಬೇಕು ಎಂದು ವೆಂಡ್ಟ್ ಇಂಡಿಯಾ ಲಿಮಿಟೆಡ್‌ನ ಅಧ್ಯಕ್ಷ ಭಾಗ್ಯ ಚಂದ್ರ ರಾವ್ ಹೇಳಿದರು.

ನಿಟ್ಟೆ ಮೀನಾಕ್ಷಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಎನ್‌ಎಂಐಟಿ)ಯಲ್ಲಿ ನಡೆದ 16ನೇ ಘಟಿಕೋತ್ಸವದಲ್ಲಿ (2026ನೇ ಸಾಲಿನ ನಿರ್ಗಮನ ವಿದ್ಯಾರ್ಥಿಗಳ ತಂಡ) ಪದವಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಆರಂಭಿಕ ಉದ್ಯೋಗದಲ್ಲಿ ವೇತನಕ್ಕಿಂತ ಕಲಿಕೆಯ ಅವಕಾಶ, ಉತ್ತಮ ಕಾರ್ಯಸಂಸ್ಕೃತಿ ಹಾಗೂ ಮಾರ್ಗದರ್ಶನಕ್ಕೆ ಆದ್ಯತೆ ನೀಡಬೇಕು ಎಂದರು.




ನಿಟ್ಟೆ (ಡೀಮ್ಡ್ ಟು ಬಿ ಯೂನಿವರ್ಸಿಟಿ) ಯ ಕುಲಾಧಿಪತಿ ವಿಶಾಲ್ ಹೆಗ್ಡೆ ಮಾತನಾಡಿ, ಪದವಿ ಎನ್ನುವುದು ಶಿಕ್ಷಣದ ಅಂತ್ಯವಲ್ಲ, ಜೀವನಪರ್ಯಂತ ಕಲಿಕೆಯ ಆರಂಭ ಎಂದು ಅವರು ಹೇಳಿದರು.

ಉಪಪ್ರಾಂಶುಪಾಲ ಡಾ. ಜೆ. ಸುಧೀರ್ ರೆಡ್ಡಿ ಪದವಿಗೆ ಅರ್ಹರಾದ ವಿದ್ಯಾರ್ಥಿಗಳ ಪಟ್ಟಿಯನ್ನು ಮಂಡಿಸಿದರು. ಒಟ್ಟು 1,402 ವಿದ್ಯಾರ್ಥಿಗಳು ಪದವಿ ಪಡೆದಿದ್ದು, ಇವರಲ್ಲಿ 1,159 ಪದವಿಪೂರ್ವ ಹಾಗೂ 243 ಸ್ನಾತಕೋತ್ತರ ವಿದ್ಯಾರ್ಥಿಗಳಿದ್ದಾರೆ.

ನಿಟ್ಟೆ ಎಜುಕೇಷನ್ ಟ್ರಸ್ಟ್‌ನ ಟ್ರಸ್ಟಿ ರೋಹಿತ್ ಪುಂಜ ಅವರು ನೂತನ ಪದವೀಧರರಿಗೆ ಪ್ರಮಾಣ ವಚನ ಬೋಧಿಸಿದರು.

ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್ ವಿಭಾಗದ 9.91 ಸಿಜಿಪಿಎ ಪಡೆದ ಸಂ– ಜಯ್ ಪಾಟೀಲ್ ಎಂ. ಅವರು 2022?26ನೇ ಬ್ಯಾಚ್‌ನ ಎಲ್ಲ ಪದವಿಪೂರ್ವ ವಿಭಾಗಗಳಲ್ಲಿಯೇ ಅತ್ಯಧಿಕ ಸಿಜಿಪಿಎ ಗಳಿಸಿ ನಿಟ್ಟೆ ಗುಲಾಬಿ ಶೆಟ್ಟಿ ಚಿನ್ನದ ಪದಕ ಪಡೆದರು. ಅತ್ಯುತ್ತಮ ಸರ್ವಾಂಗೀಣ ವಿದ್ಯಾರ್ಥಿ ಪ್ರಶಸ್ತಿಯಡಿ ಕೃತಕ ಬುದ್ಧಿಮತ್ತೆ ಮತ್ತು ಡೇಟಾ ಸೈನ್ಸ್ ವಿಭಾಗದ ಅಭಿಷೇಕ್ (9.39 ಸಿಜಿಪಿಎ) ಅವರಿಗೆ ಜಸ್ಟಿಸ್ ಕೆ.ಎಸ್. ಹೆಗ್ಡೆ ಸ್ಮಾರಕ ಚಿನ್ನದ ಪದಕ ಹಾಗೂ ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್ ವಿಭಾಗದ ಎಸ್. ಹರಿಪ್ರಿಯಾ (9.07 ಸಿಜಿಪಿಎ) ಅವರಿಗೆ ನಿಟ್ಟೆ ಮೀನಾಕ್ಷಿ ಸ್ಮಾರಕ ಚಿನ್ನದ ಪದಕ ನೀಡಲಾಯಿತು.

ಇದಲ್ಲದೆ ವಿವಿಧ ಪದವಿ ಹಾಗೂ ಸ್ನಾತಕೋತ್ತರ ವಿಭಾಗಗಳಲ್ಲಿ ಶೈಕ್ಷಣಿಕ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ 14 ಚಿನ್ನದ ಪದಕಗಳು ಮತ್ತು 101 ರ?ಯಾಂಕ್ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಎನ್‌ಎಂಐಟಿ ಪ್ರಾಂಶುಪಾಲ ಡಾ. ಎಚ್.ಸಿ. ನಾಗರಾಜ್ ಸ್ವಾಗತಿಸಿದರು. ನಿಟ್ಟೆ (ಡೀಮ್ಡ್ ಟು ಬಿ ಯೂನಿವರ್ಸಿಟಿ) ಬೆಂಗಳೂರು ಕ್ಯಾಂಪಸ್‌ನ ಉಪಾಧ್ಯಕ್ಷ ಡಾ. ಸಂದೀಪ್ ಶಾಸ್ತ್ರಿ, ಆಡಳಿತ ಮಂಡಳಿ ಸದಸ್ಯರು, ಪರೀಕ್ಷಾ ನಿಯಂತ್ರಕ ಡಾ. ಪ್ರಶಾಂತ್ ವಿ., ವಿವಿಧ ವಿಭಾಗಗಳ ಮುಖ್ಯಸ್ಥರು, ಬೋಧಕ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು.

# ಸೆ.೩೦,ಉತ್ತಮ ಶಿಕ್ಷಕ ಹಿರಿಯ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭ

ಬೆಂಗಳೂರು.ಸೆ28: ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ವಿಜೇತ ಪ್ರಾಥಮಿಕ ಶಿಕ್ಷಕರ ಸಂಘದ ವತಿಯಿಂದ ಸೆಪ್ಟೆಂಬರ್ 30, 2026 (ಬುಧವಾರ) ರಂದು ಬೆಳಿಗ್ಗೆ 10:30 ಕ್ಕೆ ನಗರದ ಅರಮನೆ ರಸ್ತೆಯಲ್ಲಿರುವ ಕೊಂಡಜ್ಜಿ ಬಸಪ್ಪ ಭವನ (ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕಛೇರಿ ಆವರಣ, ಮಹಾರಾಣಿ ಕಾಲೇಜು ಎದುರು) ದಲ್ಲಿ "ಉತ್ತಮ ಶಿಕ್ಷಕ ಪ್ರಶಸ್ತಿ" ಮತ್ತು "ಹಿರಿಯ ನಾಗರಿಕ ಪ್ರಶಸ್ತಿ" ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಿಕ್ಷಕರಾಗಿ ಸೇವೆಯನ್ನು ಸಲ್ಲಿಸಿ, ಶೈಕ್ಷಣಿಕ ಕ್ಷೇತ್ರದಲ್ಲಿ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಪ್ರಶಸ್ತಿಗಳನ್ನು ಪಡೆದಿರುವ ನಿವೃತ್ತ ಶಿಕ್ಷಕರನ್ನು ಗುರುತಿಸಿ ಗೌರವಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಸಂಘದ ರಾಜ್ಯ ಅಧ್ಯಕ್ಷರಾದ ಕೆ. ಕೃಷ್ಣಪ್ಪ ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ 80 ವರ್ಷಗಳನ್ನು ಪೂರೈಸಿರುವ ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕರಿಗೆ "ಹಿರಿಯ ನಾಗರಿಕ ಪ್ರಶಸ್ತಿ" ನೀಡಿ ಸನ್ಮಾನಿಸಲಾಗುವುದು.

ಸಮಾರಂಭದ ಉದ್ಘಾಟನೆಯನ್ನು ಮಾನ್ಯ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ನೆರವೇರಿಸಲಿದ್ದಾರೆ. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವರಾದ ಶ್ರೀ ರಿಜ್ವಾನ್ ಅರ್ಷದ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಹಿರಿಯ ನಾಗರಿಕರಿಗೆ ಪ್ರಶಸ್ತಿ ಪ್ರದಾನವನ್ನು ರಾಜ್ಯ ಪ್ರಧಾನ ಆಯುಕ್ತರಾದ ಶ್ರೀ ಪಿ.ಜಿ.ಆರ್. ಸಿಂಧ್ಯಾ ನೆರವೇರಿಸಲಿದ್ದು, ಸ್ಮರಣ ಸಂಚಿಕೆ ಬಿಡುಗಡೆಯನ್ನು ಕರ್ನಾಟಕ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ ಹೆಚ್. ಎಂ. ರೇವಣ್ಣ ಮಾಡಲಿದ್ದಾರೆ.

ಅತಿಥಿಗಳಿಗೆ ಹಾಗೂ ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಸನ್ಮಾನವನ್ನು ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಸಿ.ಎಸ್. ಷಡಕ್ಷರಿ ನೆರವೇರಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಶ್ರೀ ಕೆ.ವಿ. ಪ್ರಭಾಕರ್, ಸಾರ್ವಜನಿಕ ಶಿಕ್ಷಣ ಇಲಾಖೆಯ ನಿರ್ದೇಶಕರಾದ (ಪ್ರಾಥಮಿಕ ಶಿಕ್ಷಣ) ಶ್ರೀಮತಿ ಹೆಚ್.ಕೆ. ಪುಷ್ಪಲತಾ, ಸಾಹಿತಿ ಹಾಗೂ ಪತ್ರಕರ್ತರಾದ ಡಾ. ಎಂ.ಎಸ್. ಮಣಿ, ಮತ್ತು ಕರ್ನಾಟಕ ಸ.ನಿ.ಸ. ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಡಾ. ಎಲ್. ಬೈರಪ್ಪ ಭಾಗವಹಿಸಲಿದ್ದಾರೆ.

# ತ್ಯಾಜ್ಯವು ತೆರವು ದೇವಸ್ಥಾನಕ್ಕೆ ಮೆರಗು

ಕೆಂಗೇರಿ,ಸೆ.28: ಹೇರೋಹಳ್ಳಿಯಲ್ಲಿ ನೆಲೆಸಿರುವ ಪುರಾಣ ಪ್ರಸಿದ್ಧ ಶ್ರೀ ಆಂಜನೇಯಸ್ವಾಮಿ ದೇವಾಲಯದಲ್ಲಿ ನೆಲ, ಗೋಡೆ, ಛಾವಣಿ, ಮೂಲೆ ಮೂಲೆಗಳಲ್ಲಿ ಕಟ್ಟಿದ್ದ ಜಾಡು, ಮಸಿ, ಪಾಚಿಯನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಿ, ದೇವಾಲಯದ ಸುತ್ತಮುತ್ತ ಬಿಸಾಡಿದ ತ್ಯಾಜ್ಯವನ್ನು ಸಂಪೂರ್ಣವಾಗಿ ತೆರವುಗೊಳಿಸಿ ದೇವಸ್ಥಾನಕ್ಕೆ ಮೆರಗನ್ನು ನೀಡಲಾಯಿತು, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಹೆಸರಿನಲ್ಲಿ ಅಡಕೆ ಗಿಡಗಳನ್ನು ದೇವಸ್ಥಾನದ ಮುಂಭಾಗ ನೀಡಲಾಯಿತು

ಯಶವಂತಪುರ ವಿಧಾನಸಭಾ ಕ್ಷೇತ್ರದ ಬಿಜೆಪಿ ರೈತ ಮೋರ್ಚಾ ನಗರ ಮಂಡಲ ವತಿಯಿಂದ ನರೇಂದ್ರ ಮೋದಿ ಅವರ ಜನ್ಮದಿನಾಚರಣೆ ಅಂಗವಾಗಿ ನಡೆಯುತ್ತಿರುವ ಸೇವಾ ಸಂಕಲ್ಪ ಕಾರ್ಯಕ್ರಮದಲ್ಲಿ 80ಕ್ಕೂ ಹೆಚ್ಚು ಬಿಜೆಪಿ ಕಾರ್ಯಕರ್ತರು ಆಂಜನೇಯಸ್ವಾಮಿ ದೇವಾಲಯದಲ್ಲಿ ಶ್ರಮದಾನ ನಡೆಸಿದರು.

ಬಿಜೆಪಿ ರೈತಮೋರ್ಚಾ ಯಶವಂತಪುರ ನಗರ ಮಂಡಲ ಅಧ್ಯಕ್ಷ ಎನ್. ಸಿ. ಕುಮಾರ್ ಮಾತನಾಡಿ ನರೇಂದ್ರ ಮೋದಿಯವರು ಮುಖ್ಯಮಂತ್ರಿ. ಪ್ರಧಾನಮಂತ್ರಿಯಾಗಿ 25 ವರ್ಷ ಪೂರೈಸಿದ ಅಂಗವಾಗಿ ಪಕ್ಷದ



ವತಿಯಿಂದ ಒಂದು ತಿಂಗಳು ಕಾಲ ಹಮ್ಮಿಕೊಂಡಿರುವ ಸೇವಾ ಸಂಕಲ್ಪ ದಿನವನ್ನು ಆಚರಿಸುತ್ತಿದ್ದು. ಅದರ ಅಂಗವಾಗಿ ಪ್ರಸಿದ್ಧ ದೇವಾಲಯದ ಸ್ವಚ್ಛತೆ. ಪರಿಸರ ರಕ್ಷಣೆ. ಗಿಡಗಳನ್ನು ನೆಡುವುದು. ಶ್ರಮದಾನ ಕಾರ್ಯಕ್ರಮವನ್ನು ನಗರ ವ್ಯಾಪ್ತಿಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದರು

ಹಲವೆಡೆ ಆರೋಗ್ಯ ಶಿಬಿರ. ರಕ್ತದಾನ ಶಿಬಿರ. ಶ್ರಮಿಕರು. ಆರ್ಥಿಕವಾಗಿ ಹಿಂದುಳಿದ ಕಡು ಬಡವರಿಗೆ ಹಲವು ರೀತಿಯ ಸಹಾಯ ಮಾಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಆಂಜನೇಯ ಸ್ವಾಮಿ ದೇವಸ್ಥಾನ ಸಮಿತಿ ಅಧ್ಯಕ್ಷ ರಘುನಂದನ್ ವಾರ್ಡ್ ಬಿಜೆಪಿ ಅಧ್ಯಕ್ಷ ಶಿವಗಂಗೆಗೌಡ. ರೈತ ಮೋರ್ಚಾ ಪ್ರಧಾನಕಾರ್ಯದರ್ಶಿಗಳಾದ ಮಹೇಶ್ ಹುಲಿಗೌಡ. ಜಯದತ್ತ. ಉಪಾಧ್ಯಕ್ಷರಾದ ಪ್ರಕಾಶ್ ಚಂದ್ರ ಪಾಟೀಲ್. ಹೇಮಂತ್ ಬಿ. ಆರ್. ಕ್ಷೇತ್ರದ ಮಾಜಿ ಅಧ್ಯಕ್ಷ ಅನಿಲ್ ಚಳಗೇರಿ. ಮಾಜಿ ಪ್ರಧಾನ ಕಾರ್ಯದರ್ಶಿ ಆರ್.ಎಸ್. ದೀಪಕ್ ಶೆಟ್ಟಿ. ಓಬಿಸಿ ಅಧ್ಯಕ್ಷ ದಯಾನಂದ್ ಕಾಂತ. ಮಹಿಳಾ ಮೋರ್ಚಾ ಅಧ್ಯಕ್ಷ ತೇಜಸ್ವಿನಿ ಗೌಡ. ಉತ್ತರ ಜಿಲ್ಲಾ ಮಹಿಳಾ ಕಾರ್ಯದರ್ಶಿ ರೂಪ ಬಿ. ಸಿ. ಜಿಲ್ಲಾ ರೈತ ಮೋರ್ಚ ಕಾರ್ಯದರ್ಶಿ ವೀಣಾ, ಹೇರೋಹಳ್ಳಿ ವಾರ್ಡಿನ ರೈತ ಮೋರ್ಚಾ ಅಧ್ಯಕ್ಷ ಗಂಗಣ್ಣ, ವಾರ್ಡಿನ ಮಹಿಳಾ ಅಧ್ಯಕ್ಷ ಶಾರದಾ ಎನ್, ವಾರ್ಡಿನ ಎಸ್ ಟಿ ಮೋರ್ಚಾ ಅಧ್ಯಕ್ಷ ವರ ಲಕ್ಷ್ಮಮ್ಮ ಕ್ಷೇತ್ರದ ಮಹಿಳಾ ಪ್ರಧಾನ ಕಾರ್ಯದರ್ಶಿ , ಶೃತಿ ಮತ್ತಿತರರು ಶ್ರಮದಾನದಲ್ಲಿ ಪಾಲ್ಗೊಂಡಿದ್ದರು.

# ಗೆಲುವಿನ ಸಂಭ್ರಮಕ್ಕಿಂತ ಸೋಲಿನ ಪಾಠ ಅಮೂಲ್ಯ

ಶಿವಮೊಗ್ಗ, ಸೆ.28–ಸೋಲು ಎಂಬುದು ಅಂತ್ಯವಲ್ಲ, ಅದು ಗೆಲುವಿನತ್ತ ಕರೆದೊಯ್ಯುವ ಮೆಟ್ಟಿಲು. ಸೋತು ಗೆದ್ದಾಗ ಮಾತ್ರ ಗೆಲುವು ನಿಜವಾದ ಶ್ರೇಷ್ಠತೆಯನ್ನು ಪಡೆದುಕೊಳ್ಳುತ್ತದೆ ಎಂದು ಶಾಸಕ ಚನ್ನಬಸಪ್ಪ ಹೇಳಿದರು.

ಶಿವಮೊಗ್ಗ ನಗರದ ನೆಹರು ಕ್ರೀಡಾಂಗಣದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ, ರಾಷ್ಟ್ರೀಯ ಶಿಕ್ಷಣ ಸಮಿತಿ ಹಾಗೂ ಹೆಚ್.ಎಸ್. ರುದ್ರಪ್ಪ ಪದವಿಪೂರ್ವ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಭಾನುವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪದವಿಪೂರ್ವ ಕಾಲೇಜುಗಳ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡೆ ಎಂದರೆ ಕೇವಲ ಗೆಲುವು



ಸೋಲಿನ ಲೆಕ್ಕಾಚಾರವಲ್ಲ. ಅದು ಶಿಸ್ತು, ಪರಿಶ್ರಮ, ಆತ್ಮವಿಶ್ವಾಸ ಹಾಗೂ ಸೋಲನ್ನು ಎದುರಿಸುವ ಮನೋಸ್ಥೈರ್ಯವನ್ನು ಕಲಿಸುವ ಜೀವನದ ಪಾಠಶಾಲೆ. ಇಂದು ಇಡೀ ದೇಶ ಕ್ರೀಡೆಯತ್ತ ಹೊಸ ಉತ್ಸಾಹದಿಂದ ನೋಡುತ್ತಿದೆ. ಕ್ರೀಡೆ ದೇಶದ ಹೆಮ್ಮೆ ಹಾಗೂ ಯುವಶಕ್ತಿಯ ಪ್ರತೀಕವಾಗಿ ರೂಪುಗೊಳ್ಳುತ್ತಿದೆ. ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಲು ಭಾರತ ಸರ್ಕಾರವೂ ಹಲವು ಸೌಲಭ್ಯ ಹಾಗೂ ಅವಕಾಶಗಳನ್ನು ಕಲ್ಪಿಸುತ್ತಿದೆ ಎಂದರು.

ಸೋಲು ಗೆಲುವಿನ ಸೋಪಾನ ಎಂಬುದನ್ನು ವಿದ್ಯಾರ್ಥಿಗಳು ಸದಾ ನೆನಪಿನಲ್ಲಿಟ್ಟುಕೊಳ್ಳಬೇಕು. ಮೈದಾನದಲ್ಲಿ ಎದುರಾಗುವ ಪ್ರತಿಯೊಂದು ಸೋಲೂ ಮುಂದಿನ ಗೆಲುವಿಗೆ ಅಗತ್ಯವಾದ ಅನುಭವವನ್ನು ನೀಡುತ್ತದೆ. ಗೆಲ್ಲುವ ಉತ್ಸಾಹದಷ್ಟೇ ಸೋಲನ್ನು ಸ್ವೀಕರಿಸುವ ಮನೋಭಾವವೂ ಕ್ರೀಡಾಪಟುವಿನ ವ್ಯಕ್ತಿತ್ವವನ್ನು ರೂಪಿಸುತ್ತದೆ ಎಂದು ಹೇಳಿದರು.

ಕ್ರೀಡಾಂಗಣದಲ್ಲಿ ಗೆಲುವಿನ ಸಂಭ್ರಮಕ್ಕಿಂತಲೂ ಭಾಗವಹಿಸುವ ಮನೋಭಾವ, ಎದುರಾಳಿಯ ಗೌರವ ಹಾಗೂ ಸೋಲಿನಿಂದ ಕಲಿಯುವ ಗುಣವೇ ಶ್ರೇಷ್ಠ. ಪ್ರತಿಯೊಬ್ಬ ವಿದ್ಯಾರ್ಥಿಯ ಬದುಕಿನಲ್ಲೂ ಕ್ರೀಡೆಯ ಸ್ಫೂರ್ತಿ ಹೊಸ ಕನಸುಗಳಿಗೆ ದಾರಿಯಾಗಲಿ ಎಂದು ಆಶಿಸಿದರು.

# ಉಜ್ಜಯಿನಿ ಶಾಹಿ ಮಸೀದಿ ಭಾಗಶಃ ತೆರವು ಘರ್ಷಣೆ, ಕಲ್ಲು ತೂರಾಟ



ಉಜ್ಜಯಿನಿ,ಸೆ.28: ಉಜ್ಜಯಿನಿಯಲ್ಲಿ ಇಂದು ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದ್ದು, ರಸ್ತೆ ಅಗಲೀಕರಣ ಕಾಮಗಾರಿಗಾಗಿ ಶಾಹಿ ಮಸೀದಿಯ ಒಂದು ಭಾಗವನ್ನು ತೆರವುಗೊಳಿಸಲು ಉದ್ದೇಶಿಸಿರುವ ಸ್ಥಳದಲ್ಲಿ ಸ್ಥಳೀಯರು ಮತ್ತು ಪೊಲೀಸರ ನಡುವೆ ಘರ್ಷಣೆ ನಡೆದಿದೆ. ಕೆಲವರು ಪೊಲೀಸರತ್ತ ಕಲ್ಲುತೂರಾಟ ನಡೆಸಿದ ಹಿನ್ನೆಲೆಯಲ್ಲಿ ಪೊಲೀಸರು ಅಶ್ರುವಾಯು ಶೆಲ್‌ಗಳನ್ನು ಸಿಡಿಸಿ ಗುಂಪನ್ನು ಚದುರಿಸಿದರು.

ಪರಿಸ್ಥಿತಿಯನ್ನು ನಿಯಂತ್ರಿಸಲು ಕ್ಷಿಪ್ರ ಕಾರ್ಯಪಡೆ ಸಿಬ್ಬಂದಿಯನ್ನೂ ಸ್ಥಳದಲ್ಲಿ ನಿಯೋಜಿಸಲಾಗಿತ್ತು. ಸಿಂಹಸ್ಥ ಕುಂಭಮೇಳದ ಹಿನ್ನೆಲೆಯಲ್ಲಿ ಸಂಚಾರ ದಟ್ಟಣೆ ಕಡಿಮೆ ಮಾಡುವ ಉದ್ದೇಶದಿಂದ ಖಾಜಾ ವಾಲಿ ಮಸೀದಿಯಿಂದ ಗಣೇಶ್ ಚೌಕ್‌ವರೆಗೆ ಸಂಪರ್ಕ ಕಲ್ಪಿಸುವ 730 ಮೀಟರ್ ಉದ್ದದ ರಸ್ತೆಯನ್ನು ಅಗಲೀಕರಣ ಮಾಡಲು ಯೋಜಿಸಲಾಗಿದೆ. ಈ ಯೋಜನೆಯಡಿ ಧಾರ್ಮಿಕ ಸ್ಥಳಗಳು ಸೇರಿದಂತೆ ಒಟ್ಟು 272 ಕಟ್ಟಡಗಳು ಪರಿಣಾಮಕ್ಕೊಳಗಾಗಲಿವೆ.

ಈ ರಸ್ತೆ ಅಗಲೀಕರಣ ಯೋಜನೆಯ ಅಂದಾಜು ವೆಚ್ಚ 9.8 ಕೋಟಿ ರೂಪಾಯಿ ಎಂದು ತಿಳಿಸಲಾಗಿದೆ. ರಸ್ತೆ ಅಗಲೀಕರಣ ಯೋಜನೆಗಾಗಿ ಶಾಹಿ ಮಸೀದಿಯ ಒಂದು ಭಾಗವನ್ನು ತೆರವುಗೊಳಿಸುವ ಉಜ್ಜಯಿನಿ ಮಹಾನಗರ ಪಾಲಿಕೆಯ ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಎರಡು ಅರ್ಜಿಗಳನ್ನು ಮಧ್ಯಪ್ರದೇಶ ಹೈಕೋರ್ಟ್ ಈ ಹಿಂದೆ ವಜಾಗೊಳಿಸಿತ್ತು.

# ಸೇವಾ ಸಂಕಲ್ಪ ಅಭಿಯಾನದಡಿ ಹಲವು ಕಾರ್ಯಕ್ರಮ

ಕೆ.ಆರ್.ಪುರ,ಸೆ.28–ಸೇವಾ ಸಂಕಲ್ಪ ಅಭಿಯಾನದ ಅಡಿಯಲ್ಲಿ ಗಿಡ ನೆಡುವುದು, ಕೆರೆಸ್ವಚ್ಛತೆ, ಸ್ವಚ್ಛತಾ ಅಭಿಯಾನ, ರಕ್ತದಾನ ಶಿಬಿರ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಕ್ಷೇತ್ರದಲ್ಲಿ ನಡೆಸಲಾಗುವುದು ಎಂದು ಶಾಸಕ ಬಿ.ಎ.ಬಸವರಾಜ ಅವರು ತಿಳಿಸಿದರು.

ಕ್ಷೇತ್ರದ ವೆಂಗಯ್ಯನಕೆರೆ ಆವರಣದಲ್ಲಿ ಏರ್ಪಡಿಸಿದ್ದ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸೇವಾ ಕಾರ್ಯಗಳ ಮೂಲಕ ನಮ್ಮ ನೆಚ್ಚಿನ ಪ್ರಧಾನಿ ನರೇಂದ್ರ



ಮೋದಿ ಅವರ ಹುಟ್ಟುಹಬ್ಬ ಆಚರಣೆ ಮಾಡಲಾಗುತ್ತಿದೆ, ಅವರ ಮಾರ್ಗದರ್ಶನದಂತೆ ಸೇವೆ ಮಾಡಲಾಗುವುದು ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಹಾಕಿಕೊಟ್ಟಿರುವ ಹಾದಿಯಲ್ಲಿ ಸಾಗುವ ಮೂಲಕ ಜನಸೇವೆ ಮಾಡುತ್ತಿದ್ದು, ಬಡವರ ಪರವಾದ ಸಾಮಾಜಿಕ ಕಾರ್ಯಗಳನ್ನು ಮಾಡುತ್ತೇನೆಂದು ಭರವಸೆ ನೀಡಿದರು.

ಸೇವಾ ಅಭಿಯಾನದ ಅಡಿ ಪೌರಕಾರ್ಮಿಕರಿಗೆ ಸನ್ಮಾನ, ಮಕ್ಕಳಿಗೆ ಸ್ಪರ್ಧಾ ಕಾರ್ಯಕ್ರಮಗಳು, ದಿನಸಿ ಸಾಮಾಗ್ರಿಗಳ ವಿತರಣೆ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಮಾಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಂಡಲ ಅಧ್ಯಕ್ಷ ಮುನೇಗೌಡ, ಮಾಜಿ ಪಾಲಿಕೆ ಸದಸ್ಯರಾದ ಅಂತೋಣಿಸ್ವಾಮಿ, ಗೀತಾವಿವೇಕಾನಂದ, ಮಂಜುಳಾದೇವಿ, ಮಂಡಲ ಉಪಾಧ್ಯಕ್ಷ ಗಂಗಧರ್,

ವಾರ್ಡನ ಅಧ್ಯಕ್ಷರಾದ ಶಿವಪ್ಪ, ಮಾಜಿ ಅಧ್ಯಕ್ಷ ರಮೇಶ್‌ಗೌಡ, ಮುಖಂಡರಾದ ಕೆ.ಹೇಮಂತ್, ರವಿ, ಗಿರೀಶ್, ರಮೇಶ್, ಜೆಸಿಬಿ ಅಂತೋನಿ ಇದ್ದರು.

# ನವಜಾತ ಶಿಶುಗಳಿಗೆ ಚಿನ್ನದ ಉಂಗುರ ಯೋಜನೆಗೆ ವಿಜಯ್ ಚಾಲನೆ

ಮದುರೈ,ಸೆ.28: ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರು ಇಂದು ನವಜಾತ ಶಿಶುಗಳಿಗೆ 22 ಕ್ಯಾರೆಟ್‌ನ ಒಂದು ಗ್ರಾಂ ಚಿನ್ನದ ಉಂಗುರ ನೀಡುವ 'ತಾಯಿಮಾಮನ್ ತಂಗ ಮೊತಿರಂ ತಿಟ್ಟಂ' (ಮಾತೃ ಮಾಮನ ಚಿನ್ನದ ಉಂಗುರ ಯೋಜನೆ) ಗೆ ಚಾಲನೆ ನೀಡಿದರು. ಈ ಮೂಲಕ ತಮ್ಮ ಪ್ರಮುಖ ಚುನಾವಣಾ ಭರವಸೆಗಳಲ್ಲಿ ಒಂದನ್ನು ಈಡೇರಿಸಿದ್ದಾರೆ.

ಮದುರೈನ ಸರ್ಕಾರಿ ರಾಜಾಜಿ ಆಸ್ಪತ್ರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಯೋಜನೆಗೆ ಚಾಲನೆ ನೀಡಿದ ಮುಖ್ಯಮಂತ್ರಿ ವಿಜಯ್, ನವಜಾತ ಶಿಶುಗಳನ್ನು ಕೆಲಕಾಲ ಕೈಯಲ್ಲಿ ಹಿಡಿದುಕೊಂಡು ಅವರಿಗೆ ಚಿನ್ನದ ಉಂಗುರಗಳನ್ನು ವಿತರಿಸಿದರು.

ಈ ಯೋಜನೆಗಾಗಿ ರಾಜ್ಯ ಸರ್ಕಾರ 755.83 ಕೋಟಿ ರೂ. ಹಣವನ್ನು ಮೀಸಲಿಟ್ಟಿದೆ. ಮಾತೃತ್ವವನ್ನು ಗೌರವಿಸುವುದು, ಮಹಿಳೆಯರ ಆರೋಗ್ಯವನ್ನು ಉತ್ತೇಜಿಸುವುದು ಹಾಗೂ ಹೆಚ್ಚಿನ ಕುಟುಂಬಗಳನ್ನು ಸರ್ಕಾರಿ ಆರೋಗ್ಯ ಸೇವೆಗಳತ್ತ ಆಕರ್ಷಿಸುವ ಮೂಲಕ ಆಸ್ಪತ್ರೆಗಳಲ್ಲಿ ಹೆರಿಗೆ ಪ್ರಮಾಣವನ್ನು ಹೆಚ್ಚಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ಮುಖ್ಯಮಂತ್ರಿ ಅವರ ಹಲವು ಕಾರ್ಯಕ್ರಮಗಳ ಹಿನ್ನೆಲೆಯಲ್ಲಿ, ವಿಮಾನ ನಿಲ್ದಾಣದಿಂದ ಆರಂಭಿಸಿ ನಗರದಾದ್ಯಂತ ಪೊಲೀಸರು ಐದು ಹಂತದ ಭದ್ರತಾ ವ್ಯವಸ್ಥೆ ಕಲ್ಪಿಸಿದ್ದಾರೆ.

ಮೊದಲ ಹಂತದಲ್ಲಿ ರಾಜ್ಯ ಸರ್ಕಾರವು 1.28 ಲಕ್ಷ ಚಿನ್ನದ ಉಂಗುರಗಳನ್ನು ಖರೀದಿಸಿದ್ದು, ಸರ್ಕಾರಿ ಆಸ್ಪತ್ರೆಗಳಲ್ಲಿ ಜನಿಸಿದ ಹಾಗೂ ರಾಜ್ಯದ ಸ್ಥಳೀಯ ತಾಯಂದಿರಿಗೆ ಸೇರಿದ ಅರ್ಹ ಮಕ್ಕಳಿಗೆ ಯೋಜನೆಯ ಪ್ರಯೋಜನ ಒದಗಿಸಲಾಗುತ್ತದೆ.



ಪಶು ವೈದ್ಯಾಧಿಕಾರಿ ಹುದ್ದೆಗೆ ಆಯ್ಕೆಯಾದ ಪ್ರಕರಣಕ್ಕೆ ಸಂಬಂಧಿಸಿದ ಹಾಗೂ ಅರ್ಹ ಅಭ್ಯರ್ಥಿಗಳಿಗೆ ಸರ್ಕಾರದ ಬಳಿ ಇರುವ ಸಿಐಡಿ ವರದಿ, ಇಡಿ ವರದಿ ಹಾಗೂ ಅಭ್ಯರ್ಥಿಗಳಿಗೆ ನೀಡುವ ಸ್ವಯಂ ಘೋಷಣಾ ಪತ್ರಗಳನ್ನು ಪರಿಗಣಿಸಿ ಶೀಘ್ರ ಷರತ್ತು ಬದ್ಧ ನೇಮಕಾತಿ ಆದೇಶ ನೀಡುವಂತೆ ಒತ್ತಾಯಿಸಿ ಕರ್ನಾಟಕ ಸ್ವಾಭಿಮಾನಿ ವಿದ್ಯಾರ್ಥಿ ಸಮೂಹವು ಇಂದು ನಗರದ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

# ಕೆಪಿವೈಸಿಸಿ ಸಾಂಸ್ಕೃತಿಕ ಮತ್ತು ಕ್ರೀಡಾ ವಿಭಾಗದ ಅಧ್ಯಕ್ಷರಾಗಿ ಭರತ್ ಯಾದವ್ ಜಿ. ನೇಮಕ



ಬೆಂಗಳೂರು, ಸೆ.28: ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿಯ ಸಾಂಸ್ಕೃತಿಕ ಮತ್ತು ಕ್ರೀಡಾ ವಿಭಾಗದ ಅಧ್ಯಕ್ಷರನ್ನಾಗಿ ಶ್ರೀ ಭರತ್ ಯಾದವ್ ಜಿ. ಅವರನ್ನು ನೇಮಕ ಮಾಡಲಾಗಿದೆ ಎಂದು ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿ ತಿಳಿಸಿದೆ.

ಅಖಿಲ ಭಾರತ ಯುವ ಕಾಂಗ್ರೆಸ್ ಅಧ್ಯಕ್ಷ ಉದಯ್ ಭಾನು ಚಿಬ್ ಅವರ ನಿರ್ದೇಶನ, ಕರ್ನಾಟಕ ಯುವ ಕಾಂಗ್ರೆಸ್ ಉಸ್ತುವಾರಿ ನಿಗಮ್ ಭಂಡಾರಿ ಅವರ ಅನುಮೋದನೆ ಹಾಗೂ ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿಯ ರಾಜ್ಯಾಧ್ಯಕ್ಷ ಎಚ್.ಎಸ್. ಮಂಜುನಾಥ್ ಗೌಡ ಅವರ ಆದೇಶದ ಮೇರೆಗೆ ನೇಮಕ ಮಾಡಲಾಗಿದೆ.

ಯುವ ಕಾಂಗ್ರೆಸ್ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಸಾಂಸ್ಕೃತಿಕ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ವಿಸ್ತರಿಸುವುದು ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಯುವಜನರ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಜವಾಬ್ದಾರಿ ನೂತನ ಅಧ್ಯಕ್ಷರಿಗೆ ನೀಡಿ ಆದೇಶಿಸಲಾಗಿದೆ.

ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತ ಹಾಗೂ ಶಿಸ್ತಿಗೆ ಬದ್ಧರಾಗಿ, ರಾಜ್ಯ ಮತ್ತು ಜಿಲ್ಲಾ ಘಟಕಗಳೊಂದಿಗೆ ಸಮನ್ವಯ ಸಾಧಿಸಿ ಯುವ ಕಾಂಗ್ರೆಸ್ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವಂತೆ ಭರತ್ ಯಾದವ್ ಜಿ. ಅವರಿಗೆ ಸೂಚಿಸಲಾಗಿದ್ದು, ನೂತನ ಜವಾಬ್ದಾರಿಯನ್ನು ಪ್ರಾಮಾಣಿಕತೆ, ಬದ್ಧತೆ ಹಾಗೂ ಸಮರ್ಪಣಾ ಮನೋಭಾವದಿಂದ ನಿರ್ವಹಿಸುವಂತೆ ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿ ಆಶಿಸಿದೆ.

# ವಿದ್ಯಾರ್ಥಿಗಳು ಬಲಿಷ್ಠರಾಗಲು ಖಾದರ್ ಕರೆ




ಬೆಂಗಳೂರು,ಸೆ.28– "ಬಲಿಷ್ಠ ರಾಷ್ಟ್ರ ನಿರ್ಮಾಣ ಮಾಡಬೇಕಾದಲ್ಲಿ ವಿದ್ಯಾರ್ಥಿಗಳು ಬಲಿಷ್ಠರಾಗಬೇಕು" ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ಹೇಳಿದರು.

ಎಎಂಸಿ ಎಂಜಿನಿಯರಿಂಗ್ ಕಾಲೇಜು ಆಯೋಜಿಸಿದ್ದ ಮೊದಲ ವರ್ಷದ ಎಂಜಿನಿಯರಿಂಗ್ ತರಗತಿಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, "ಅಧಿಕಾರಿಗಳು, ರಾಜಕಾರಣಗಳಿಗಿಂತ ಬಲಿಷ್ಠ ರಾಷ್ಟ್ರ ನಿರ್ಮಾಣ ಮಾಡುವ ತಾಕತ್ತು ವಿದ್ಯಾರ್ಥಿಗಳ ಬಳಿ ಇದೆ. ಹೀಗಾಗಿ ವಿದ್ಯಾರ್ಥಿಗಳು ಮೊದಲು ಬಲಿಷ್ಠರಾಗಬೇಕು. ಆ ಮೂಲಕ ರಾಷ್ಟ್ರ ನಿರ್ಮಾಣಕ್ಕೆ ಕೈ ಜೋಡಿಸಬೇಕು" ಎಂದರು.

" ವಿದ್ಯಾರ್ಥಿಗಳು ಕಾಲೇಜಿನ ದಿನಗಳನ್ನು ಭವಿಷ್ಯದ ಬೆಳವಣಿಗೆಗೆ ಬಳಸಿಕೊಳ್ಳಬೇಕು. ದಿನ ನಿತ್ಯದ ಬದುಕಿನಲ್ಲಿ ಕಷ್ಟಗಳು ಇದ್ದೇ ಇದೆ. ಮರಣ ಹೊಂದಿದಾಗ ಮಾತ್ರವೇ ಕಷ್ಟಗಳು ಸಹ ಮಣ್ಣಾಗಲು ಸಾಧ್ಯ. ಹೀಗಾಗಿ ಹೆಚ್ಚಿನ ಸಮಯ ಒಳ್ಳೆಯ ಕಾರ್ಯಗಳಿಗೆ ಉಪಯೋಗಿಸಿ" ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಎಎಂಸಿ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರಾದ ಡಾ.ಕೆ.ಆರ್.ಪರಮಹಂಸ ಮಾತನಾಡಿ, "ನಮ್ಮಲ್ಲಿ ಎಲ್ಲ ರೀತಿಯ ಕೋರ್ಸ್‌ಗಳಿವೆ. ನಾವು ವಿದ್ಯಾರ್ಥಿಗಳ ಕಲಿಕೆಗೆ ಪೂರಕವಾದ ವಾತಾವರಣ ನಿರ್ಮಾಣ ಮಾಡಿಕೊಡುತ್ತೇವೆ. ಇದನ್ನು ಉಪಯೋಗಿಸಿಕೊಂಡು ಎತ್ತರಕ್ಕೆ ಬೆಳೆಯುವುದು ನಿಮ್ಮ ಕೈಯಲ್ಲಿದೆ. ಮುಂದಿನ ನಾಲ್ಕು ವರ್ಷ ಸುಗಮವಾಗಿ ನಡೆಯಲಿ" ಎಂದು ಶುಭ ಹಾರೈಸಿದರು.

ಈ ವೇಳೆ ಎಎಂಸಿ ಶಿಕ್ಷಣ ಸಂಸ್ಥೆಗಳ ಉಪಾಧ್ಯಕ್ಷರಾದ ಕೆ.ಗೀತಾ ಪರಮಹಂಸ, ಕಾರ್ಯನಿರ್ವಾಹಕ ಉಪಾಧ್ಯಕ್ಷರು ರಾಹುಲ್ ಕಲ್ಲೂರಿ, ಉಪಾಧ್ಯಕ್ಷೆ ಮೋನಿಕಾ ಕಲ್ಲೂರಿ, ಕಾಲೇಜಿನ ಪ್ರಾಂಶುಪಾಲ, ಡಾ.ಬಿ.ಎನ್. ಯುವರಾಜ್ ಇತರರು ಇದ್ದರು.

**ಕಳೆದು ಹೋಗಿದೆ**

ಬೆಂಗಳೂರು–560075, ಹೊಸ ತಿಪ್ಪಸಂದ್ರ, ಸೀತಪ್ಪ ಕಾಲೋನಿ, 8ನೇ ಮುಖ್ಯರಸ್ತೆ, 390ನೇ ನಂಬರ್ ಮನೆಯಲ್ಲಿ ವಾಸವಾಗಿರುವ ಶ್ರೀ ಕೆ. ಸಿದ್ದಪ್ಪರವರ ಮಗನಾದ ಸುಮಾರು 47 ವರ್ಷ ವಯಸ್ಸುಳ್ಳ **ಶ್ರೀ ಸುದೀಪ್ ಕುಮಾರ್ ಟಿ.ಎಸ್.** ಆದ ನಾನು ತಿಳಿಯಪಡಿಸುವುದೇನೆಂದರೆ ಬೆಂಗಳೂರು ಸರ್. ವಿಶ್ವೇಶ್ವರಯ್ಯ ಬಡಾವಣೆ, 4ನೇ ಬ್ಲಾಕ್‌ನಲ್ಲಿರುವ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ರಾಮಸಂದ್ರ ಗ್ರಾಮದ ಸರ್ವೆ ನಂ. 28/1ಎ, 28/2, ಮತ್ತು 28/3ನೇ ನಂಬರುಗಳ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಖಾಸಗಿ ಬಡಾವಣೆ ಮಂಜೂರಾಗಿ ಸದರಿ ಮಂಜೂರಾತಿಯನ್ನು ಅನುಸರಿಸಿ ಕನಕಶ್ರೀ ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತದವರು ರಚಿಸಿರುವ ನಿವೇಶನ ಸಂಖ್ಯೆ 87ನೇ ನಂಬರ್ ಸ್ವತ್ತು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಖಾತಾ ಪತ್ರ ಸುದೀಪ್ ಕುಮಾರ್. ಟಿ.ಎಸ್. ರವರ ಹೆಸರಿನಲ್ಲಿದ್ದು ಸದರಿ ಬಿಡಿಎ ಖಾತಾ ಪತ್ರವು ನನ್ನ ಮನೆಯನ್ನು ಖಾಲಿ ಮಾಡುವ ವೇಳೆ ಕಳೆದು ಹೋಗಿರುತ್ತದೆ. ಈ ಪತ್ರ ಯಾರಿಗಾದರೂ ಸಿಕ್ಕಲ್ಲಿ ಈ ಮೇಲ್ಕಂಡ ವಿಳಾಸಕ್ಕೆ ತಿಳಿಸುವುದು.

**ಪೋಲೀಸ್ ಕಂಪ್ಲೈಂಟ್ ನಂ.**
**2434490/2026 ದಿನಾಂಕ: 19.09.2026.**
ಸಂಪರ್ಕಿಸಿ:
**ಸುದೀಪ್ ಕುಮಾರ್.ಟಿ.ಎಸ್.**
**ಮೊ: 9686171515.**

**DOCUMENT LOST**

I, Suguna have Lost My Original Partition deed documents Situated in" Poonapalli Village of Hosur Taluk, Krishnagiri Dist., Doc No - 8908/2019, Sy No - 797/2, (Area Extend 0.23 1/2 Cents), Agri Land, (SRO Kelamangalam), While Some Personal Work in B'lore Near C.V. Raman Nagar, Case Registered in Byappanahalli, Case No - 2426962/2026, SAKALA NO - P0012S260002364, Aff No - IN-KA93547974167638Y,
Finder Please Contact or Return to This. Address, Suguna, Do/No - 39, Bidaragera, Kasaba Circle, Bestamaranahalli, Anekal, B'lore. Phone - 9663820177

**CHANGE OF NAME**

I, **JEELANI MOKASHI,** R/a No. 102, Fortune Silverton, Bore Bank Road, Benson Town, Bangalore North, Bengaluru-560046. have changed my daughter's name from **MISBAH FATHIMA JEELANI MOKASHI** to **MISBAH FATHIMA MOKASHI,** vide Affidavit dated 22-09-2026. Sworn before Notary **M.RAJENDRA,** Bengaluru.

**ಓದುಗರ ಗಮನಕ್ಕೆ**

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸ ಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ–ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಆದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು

**CHANGE OF NAME**

I, **SHARANABASAVA.S** S/o **SHIVABASAPPA,** R/at 7/1, 3rd Floor, H.M.Nayaka Road, 4th Cross, Jai Maruthi Nagar, Nandini layout, Bengaluru-560096. have changed to **SHARANABASAPPA,** vide Affidavit dated 28-09-2026. Sworn before Notary **S.VIJAYAKUMAR,** Bengaluru.

**ಹೆಸರು ಬದಲಾವಣೆ**

**ಯುವರಾಜ್** ಬಿನ್ ಲೇಟ್ ಯರಪ್ಪ, ವಯಸ್ಸು 36 ವರ್ಷ, ಶ್ರೀ ಕಾಡಸಿದ್ದೇಶ್ವರ ನಿಲಯ, ಕೆಂಚಾರೆಡ್ಡಿ ಲೇ ಔಟ್, 2ನೇ ಕ್ರಾಸ್, ನ್ಯೂ ಉಡುಪಿ ವೆಜ್ ರೆಸ್ಟೋರೆಂಟ್ ಹಿಂಭಾಗ, ಚನ್ನಸಂದ್ರ, ಕಾಡುಗೋಡಿ ಪೋಸ್ಟ್, ಬೆಂಗಳೂರು–560067. ಈ ವಿಳಾಸದಲ್ಲಿ ವಾಸವಾಗಿರುವ ನಾನು ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ ನನ್ನ ಮಗಳ ಹೆಸರನ್ನು ದಿಯ ರಾಜ್ (DIYA RAJ) ಎಂಬುದಕ್ಕೆ ಬದಲಾಗಿ **ನಿಶಿಖ ರಿಶ್ವಿ** (NISHIKHA RISHVI) ಎಂದು ದಿನಾಂಕ 22.9.2026 ರಂದು ಬೆಂಗಳೂರಿನ ನೋಟರಿ **ವೀಣಾ.ಜೆ** ಅವರ ಮುಂದೆ ಪ್ರಮಾಣೀಕರಿಸಿ ಬದಲಾಯಿಸಿರುತ್ತೇನೆ

# ಸಂಚಾರ ದಟ್ಟಣೆ ಅವಿನ್ಯೂ ರಸ್ತೆಯಲ್ಲಿ ಗೂಡ್ಸ್, ತಳ್ಳುವ ಗಾಡಿ ಪ್ರವೇಶ ನಿರ್ಬಂಧ

ಬೆಂಗಳೂರು, ಸೆ.28: ನಗರದ ಪ್ರಮುಖ ವಾಣಿಜ್ಯ ಪ್ರದೇಶವಾಗಿರುವ ಕೆ.ಆರ್. ಮಾರ್ಕೆಟ್‌ನ ಅವೆನ್ಯೂ ರಸ್ತೆಯಲ್ಲಿ ಸಂಚಾರ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆಗೆ ಬೆಂಗಳೂರು ಸಂಚಾರ ಪೊಲೀಸರು ಮುಂದಾಗಿದ್ದಾರೆ. ಸದಾ ಜನಜಂಗುಳಿಯಿಂದ ಕೂಡಿರುವ ಅವಿನ್ಯೂ ರಸ್ತೆಯಲ್ಲಿ ವಾಹನಗಳ ಓಡಾಟದಿಂದ ಉಂಟಾಗುತ್ತಿರುವ ಸಂಚಾರ ದಟ್ಟಣೆ ನಿಯಂತ್ರಿಸಲು ಹಲವು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.



ಅವೆನ್ಯೂ ರಸ್ತೆಯಲ್ಲಿ ದಿನವಿಡೀ ವ್ಯಾಪಾರ-ವಹಿವಾಟು ನಡೆಯುವುದರಿಂದ ಸಾವಿರಾರು ಜನರು ಓಡಾಡುತ್ತಾರೆ. ಕೆಲವೊಮ್ಮೆ ರಸ್ತೆಯಲ್ಲಿ ಹೆಜ್ಜೆ ಇಡಲೂ ಸಾಧ್ಯವಾಗದಷ್ಟು ಜನಸಂದಣಿ ಕಂಡುಬರುತ್ತದೆ. ಇದರ ನಡುವೆಯೇ ಆಟೋ, ತಳ್ಳುವ ಗಾಡಿ ಸೇರಿದಂತೆ ವಿವಿಧ ವಾಹನಗಳು ಸಂಚರಿಸುವುದರಿಂದ ಪಾದಚಾರಿಗಳು ಹಾಗೂ ವಾಹನ ಸವಾರರಿಗೆ ತೊಂದರೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸಂಚಾರ ಪೊಲೀಸರು ರಸ್ತೆ ಪ್ರವೇಶದ ಮೇಲೆ ನಿಯಂತ್ರಣ ಹೇರಲು ಮುಂದಾಗಿದ್ದಾರೆ.

ಈಗಾಗಲೇ ಅವಿನ್ಯೂ ರಸ್ತೆಗೆ ಆಟೋಗಳ ಪ್ರವೇಶಕ್ಕೆ ನಿರ್ಬಂಧ ವಿಧಿಸಲಾಗಿದೆ. ಇದರ ಬೆನ್ನಲ್ಲೇ ತಳ್ಳುವ ಗಾಡಿಗಳಿಗೂ ರಸ್ತೆ ಪ್ರವೇಶ ನಿರ್ಬಂಧಿಸಲಾಗಿದೆ. ತಳ್ಳುವ ಗಾಡಿಗಳನ್ನು ರಸ್ತೆಯೊಳಗೆ ಕೊಂಡೊಯ್ಯದಂತೆ ಸಂಚಾರ ಪೊಲೀಸರು ಸ್ಥಳದಲ್ಲೇ ನಿಯಂತ್ರಣ ಮಾಡುತ್ತಿದ್ದಾರೆ.

### ಗೂಡ್ಸ್ ವಾಹನಗಳಿಗೂ ನಿರ್ಬಂಧ

ತಳ್ಳುವ ಗಾಡಿಗಳ ಬಳಿಕ ಇದೀಗ ಸರಕು ಸಾಗಣೆ ವಾಹನಗಳ ಮೇಲೂ ನಿರ್ಬಂಧ ಹೇರುವ ಬಗ್ಗೆ ಚರ್ಚೆ ಆರಂಭವಾಗಿದೆ. ವಿಶೇಷವಾಗಿ ಪೀಕ್ ಅವರ್‌ನಲ್ಲಿ ಗೂಡ್ಸ್ ವಾಹನಗಳನ್ನು ಅವೆನ್ಯೂ ರಸ್ತೆಯೊಳಗೆ ಪ್ರವೇಶಿಸದಂತೆ ನಿರ್ಬಂಧಿಸುವ ಪ್ರಸ್ತಾವನೆ ಬಗ್ಗೆ ಸಂಚಾರ ಪೊಲೀಸರು, ಜಿಬಿಎ ಅಧಿಕಾರಿಗಳು ಹಾಗೂ ಸ್ಥಳೀಯ ಶಾಸಕರ ನಡುವೆ ಒಂದು ಸುತ್ತಿನ ಮಾತುಕತೆ ನಡೆದಿದೆ.

ಪೀಕ್ ಅವರ್‌ನಲ್ಲಿ ಸರಕು ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಿ, ರಾತ್ರಿ ವೇಳೆ ಮಾತ್ರ ಸರಕು ಸಾಗಣೆಗೆ ಅವಕಾಶ ನೀಡುವ ಸಾಧ್ಯತೆ ಬಗ್ಗೆ ಚರ್ಚೆ ನಡೆದಿದೆ. ಆದರೆ ಈ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳಬೇಕಿದೆ.

ಅವೆನ್ಯೂ ರಸ್ತೆಯ ವ್ಯಾಪಾರಸ್ಥರಿಗೆ ಸರಕು ಸಾಗಣೆ ಅತ್ಯಂತ ಪ್ರಮುಖವಾಗಿರುವ ಹಿನ್ನೆಲೆಯಲ್ಲಿ, ವ್ಯಾಪಾರ ವಹಿವಾಟಿಗೆ ತೊಂದರೆಯಾಗದಂತೆ ಹಾಗೂ ಸಾರ್ವಜನಿಕರ ಸಂಚಾರಕ್ಕೂ ಅಡ್ಡಿಯಾಗದಂತೆ ಸಮಯ ನಿಗದಿಪಡಿಸುವ ಸಾಧ್ಯತೆಯೂ ಇದೆ.

### ನಿರ್ಧಾರ ಏನು?

ಅವೆನ್ಯೂ ರಸ್ತೆಯಲ್ಲಿ ಸದ್ಯ ಆಟೋ ಹಾಗೂ ತಳ್ಳುವ ಗಾಡಿಗಳ ಪ್ರವೇಶಕ್ಕೆ ನಿರ್ಬಂಧ ಜಾರಿಯಲ್ಲಿದೆ. ಇದರ ಮುಂದುವರಿದ ಭಾಗವಾಗಿ ಪೀಕ್ ಅವರ್‌ನಲ್ಲಿ ಗೂಡ್ಸ್ ವಾಹನಗಳಿಗೂ ಬ್ರೇಕ್ ಹಾಕುವ ಬಗ್ಗೆ ಚರ್ಚೆ ನಡೆದಿದೆ. ಗೂಡ್ಸ್ ವಾಹನಗಳ ಪ್ರವೇಶವನ್ನು ಸಂಪೂರ್ಣವಾಗಿ ನಿಷೇಧಿಸಬೇಕೇ ಅಥವಾ ನಿರ್ದಿಷ್ಟ ಸಮಯದಲ್ಲಿ ಮಾತ್ರ ಅವಕಾಶ ನೀಡಬೇಕೇ ಎಂಬುದರ ಕುರಿತು ಶೀಘ್ರದಲ್ಲೇ ತೀರ್ಮಾನವಾಗುವ ನಿರೀಕ್ಷೆಯಿದೆ.

ಜನದಟ್ಟಣೆ ಹೆಚ್ಚಿರುವ ಅವೆನ್ಯೂ ರಸ್ತೆಯಲ್ಲಿ ಪಾದಚಾರಿಗಳ ಸಂಚಾರಕ್ಕೆ ಹೆಚ್ಚಿನ ಆದ್ಯತೆ ನೀಡುವ ಉದ್ದೇಶದಿಂದ ಸಂಚಾರ ವ್ಯವಸ್ಥೆಯಲ್ಲಿ ಬದಲಾವಣೆ ತರಲಾಗುತ್ತಿದೆ.

## ವೇಣು ವಿರುದ್ಧ ಅವಹೇಳನ ಪೋಸ್ಟ್
# ಐವರ ವಿರುದ್ಧ ಪ್ರಕರಣ



ನವದೆಹಲಿ,ಸೆ.28-ಪ್ರಧಾನ ಕಾರ್ಯದರ್ಶಿ ಹಾಗೂ ಸಂಸದ ಕೆ.ಸಿ. ವೇಣುಗೋಪಾಲ್ ಅವರನ್ನು ಗುರಿಯಾಗಿಸಿಕೊಂಡು ಫೇಸ್‌ಬುಕ್ ಸೇರಿದಂತೆ ಸಾಮಾಜಿಕ ಮಾಧ್ಯಮಗಳಲ್ಲಿ ಅವಹೇಳನಕಾರಿ ಮತ್ತು ಆಕ್ಷೇಪಾರ್ಹ ವಿಷಯವನ್ನು ಪೋಸ್ಟ್ ಮಾಡಿದ ಆರೋಪದ ಮೇಲೆ ಐದು ಜನರ ವಿರುದ್ಧ ಆಲಪ್ಪುಳ ಸೈಬರ್ ಕ್ರೈಮ್ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ ಎಂದು ಪೊಲೀಸರು ಸೋಮವಾರ (ಸೆಪ್ಟೆಂಬರ್ 28) ತಿಳಿಸಿದ್ದಾರೆ.ಕಾಂಗ್ರೆಸ್ ನಾಯಕ ಹಾಗೂ ವಕೀಲ ಜಾನ್ಸನ್ ಅಬ್ರಹಾಂ ಅವರು ಸಲ್ಲಿಸಿದ ದೂರಿನ ಆಧಾರದ ಮೇಲೆ ಪೊಲೀಸರು ಈ ಕ್ರಮ ಕೈಗೊಂಡಿದ್ದು, ಆರೋಪಿಗಳು ಮೇ 11 ರಿಂದ ಜುಲೈ 19 ರ ನಡುವೆ ವಿವಿಧ ದಿನಾಂಕಗಳಲ್ಲಿ ಸಮಾಜದಲ್ಲಿ ದ್ವೇಷವನ್ನು ಹರಡುವ ಮತ್ತು ಸಾರ್ವಜನಿಕ ಶಾಂತಿಯನ್ನು ಕದಡುವ ದುರುದ್ದೇಶದಿಂದ ಈ ಆಕ್ರಮಣಕಾರಿ ಪೋಸ್ಟ್‌ಗಳನ್ನು ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಯುಡಿಎಫ್ ಗೆಲುವಿನ ನಂತರ ಮುಖ್ಯಮಂತ್ರಿ ಅಭ್ಯರ್ಥಿಯ ಕುರಿತು ಚರ್ಚೆ ನಡೆಯುತ್ತಿದ್ದ ಸಂದರ್ಭದಲ್ಲಿ ಈ ಪೋಸ್ಟ್‌ಗಳನ್ನು ಮಾಡಲಾಗಿದ್ದು, ಮುಖ್ಯಮಂತ್ರಿ ಹುದ್ದೆಗೆ ಪರಿಗಣನೆಯಲ್ಲಿದ್ದ ವೇಣುಗೋಪಾಲ್ ಅವರ ಉಮೇದುವಾರಿಕೆಯನ್ನು ವಿರೋಧಿಸಿ ಆರೋಪಿಗಳು ಸೈಬರ್ ದಾಳಿ ನಡೆಸಿದ್ದರು. ಈ ಕುರಿತು ಜಾನ್ಸನ್ ಅಬ್ರಹಾಂ ಅವರು ಐದು ತಿಂಗಳ ಹಿಂದೆ ರಾಜ್ಯ ಪೊಲೀಸ್ ಮುಖ್ಯಸ್ಥರಿಗೆ ಐದು ಸಾಮಾಜಿಕ ಮಾಧ್ಯಮ ಖಾತೆಗಳ ವಿವರಗಳೊಂದಿಗೆ ದೂರು ನೀಡಿದ್ದರು, ಆದರೆ ಸೂಕ್ತ ಕ್ರಮ ಜರುಗದಿದ್ದಾಗ ಗೃಹ ಸಚಿವ ರಮೇಶ್ ಚೆನ್ನಿತ್ತಲ ಅವರಿಗೆ ಜ್ಞಾಪಕ ಪತ್ರ ಸಲ್ಲಿಸಿದ್ದರು. ತರುವಾಯ ಗೃಹ ಸಚಿವರ ನಿರ್ದೇಶನದ ಮೇರೆಗೆ ಸೈಬರ್ ವಿಂಗ್‌ನ ಐಜಿ ತನಿಖೆಯ ಜವಾಬ್ದಾರಿಯನ್ನು ವಹಿಸಿಕೊಂಡಿದ್ದು, ಪ್ರಸ್ತುತ ಆರೋಪಿಗಳ ವಿರುದ್ಧ ಭಾರತೀಯ ದಂಡ ಸಂಹಿತೆ (ಐಪಿಸಿ) ಹಾಗೂ ಕೇರಳ ಪೊಲೀಸ್ ಕಾಯ್ದೆಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಸುಳ್ಳು ಮಾಹಿತಿ ಹರಡುವಿಕೆ ಮತ್ತು ಗಲಭೆಗೆ ಪ್ರಚೋದನೆ ನೀಡಿದ ಆರೋಪಗಳ ಮೇಲೆ ಪ್ರಕರಣ ದಾಖಲಿಸಲಾಗಿದೆ. ಸದ್ಯ ಪೊಲೀಸರು ಆರೋಪಿಗಳು ಹಾಗೂ ಅವರ ಪೋಸ್ಟ್‌ಗಳ ಸಂಪೂರ್ಣ ಮಾಹಿತಿಯನ್ನು ಸಂಗ್ರಹಿಸಿದ್ದು, ಶೀಘ್ರದಲ್ಲೇ ಅವರನ್ನು ವಿಚಾರಣೆಗೆ ಒಳಪಡಿಸಲಾಗುವುದು ಎಂದು ತಿಳಿಸಿದ್ದಾರೆ.

# ಭಾರತ ಕ್ರಿಕೆಟ್ ತಂಡ ಸೆಮಿಫೈನಲ್‌ಗೆ

ನಾಗೋಯಾ, ಸೆ.28- ಇಂದು ಏಷ್ಯನ್ ಕ್ರೀಡಾ-ಕೂಟದ ಪುರುಷರ ಕ್ರಿಕೆಟ್ ವಿಭಾಗದಲ್ಲಿ ಭಾರತ ಮತ್ತು ಅಫ್ಘಾನಿಸ್ತಾನ ನಡುವೆ ಮಹತ್ವದ ಕ್ವಾರ್ಟರ್ ಫೈನಲ್ ಪಂದ್ಯ ಮಳೆಯಿಂದಾಗಿ ರದ್ದಾದ ಬೆನ್ನಲ್ಲೇ, ಉತ್ತಮ ರ್‍ಯಾಂಕಿಂಗ್ ಆಧಾರದ ಮೇಲೆ ಭಾರತೀಯ ಕ್ರಿಕೆಟ್ ತಂಡವು ಸೆಮಿಫೈನಲ್‌ಗೆ ತನ್ನ ಸ್ಥಾನವನ್ನು ಭದ್ರಪಡಿಸಿಕೊಂಡಿದೆ. ಈ ಮಹತ್ವದ ಪಂದ್ಯದಲ್ಲಿ ಮಳೆ ಎಡಬಿಡದೆ ಸುರಿದಿದ್ದರಿಂದ ಪಂದ್ಯವನ್ನು ರದ್ದುಗೊಳಿಸಲು ನಿರ್ಣಯಿಸಲಾಯಿತು. ಟಾಸ್ ಕೂಡ ನಡೆಸಲು ಸಾಧ್ಯವಾಗದೆ, ಪಂದ್ಯವನ್ನು ಸಂಪೂರ್ಣವಾಗಿ ರದ್ದುಗೊಳಿಸಲಾಯಿತು.

ಬಳಿಕ ಟೂರ್ನಿಯ ನಿಯಮಾವಳಿಗಳಂತೆ ಉತ್ತಮ ಶ್ರೇಯಾಂಕ (ರ್‍ಯಾಂಕಿಂಗ್) ಹೊಂದಿದ್ದ ಟೀಮ್ ಇಂಡಿಯಾ ನೇರವಾಗಿ ಸೆಮಿಫೈನಲ್ ತಲುಪಿದೆ ಎಂದು ಅಧಿಕೃತವಾಗಿ ಘೋಷಿಸಲಾಗಿದೆ.

ಬೆಳಿಗ್ಗೆ 10:30 ಕ್ಕೆ ನಿಶ್ಶಿನ್‌ನ ಕೊರೋಗಿ ಸ್ಪೋರ್ಟ್ಸ್ ಪಾರ್ಕ್‌ನಲ್ಲಿ ಈ ಪಂದ್ಯ ಪ್ರಾರಂಭವಾಗಬೇಕಿದ್ದು, ಪಂದ್ಯ ನಡೆಯುವ ಸಮಯದಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆ ಇದೆ.

ಇದೇ ಕ್ರೀಡಾಂಗಣದಲ್ಲಿ ನಡೆಯಬೇಕಿದ್ದ ಹಿಂದಿನ ಎರಡು ಪಂದ್ಯಗಳು ಸಹ ಮಳೆಯಿಂದಾಗಿಯೇ ಸಂಪೂರ್ಣವಾಗಿ ರದ್ದಾಗಿದ್ದವು.ಬಳಿಕ ಟೂರ್ನಿಯ ನಿಯಮಾವಳಿಗಳಂತೆ ಉತ್ತಮ ಶ್ರೇಯಾಂಕ (ರ್‍ಯಾಕಿಂಗ್) ಹೊಂದಿದ್ದ ಟೀಮ್ ಇಂಡಿಯಾ ನೇರವಾಗಿ ಸೆಮಿಫೈನಲ್ ತಲುಪಿದೆ ಎಂದು ಅಧಿಕೃತವಾಗಿ ಘೋಷಿಸಲಾಗಿದೆ.

ಟೂರ್ನಿಯ ನಿಯಮಾವಳಿಗಳ ಪ್ರಕಾರ, ಯಾವುದೇ ನಾಕೌಟ್ ಪಂದ್ಯವು ಮಳೆ ಅಥವಾ ಇತರೆ ಕಾರಣಗಳಿಂದ ರದ್ದಾದರೆ, ಐಸಿಸಿ ಅಂತರ ರಾಷ್ಟ್ರೀಯ ಶ್ರೇಯಾಂಕದಲ್ಲಿ ಉತ್ತಮ ಸ್ಥಾನ ಹೊಂದಿರುವ ತಂಡವು ಮುಂದಿನ ಹಂತಕ್ಕೆ ಅರ್ಹತೆ ಪಡೆಯುತ್ತದೆ. ಈ ನಿಯಮದಂತೆ, ಅಫ್ಘಾನಿಸ್ತಾನ್ ತಂಡಕ್ಕಿಂತ ಹೆಚ್ಚಿನ ಐಸಿಸಿ ಶ್ರೇಯಾಂಕವನ್ನು ಹೊಂದಿದ್ದ ಟೀಮ್ ಇಂಡಿಯಾ ಅಧಿಕೃತವಾಗಿ ಸೆಮಿಫೈನಲ್‌ಗೆ ತನ್ನ ಅರ್ಹತೆಯನ್ನು ಗಿಟ್ಟಿಸಿಕೊಂಡಿದೆ.

ಇದರೊಂದಿಗೆ ಭಾರತ ತಂಡವು ಪದಕದ ರೇಸ್‌ನಲ್ಲಿ ಮುನ್ನಡೆ ಸಾಧಿಸಿದ್ದು, ಮುಂಬರುವ ಸೆಮಿಫೈನಲ್ ಪಂದ್ಯದಲ್ಲಿ ತನ್ನ ಜಯದ ಓಟವನ್ನು ಮುಂದುವರಿಸುವ ವಿಶ್ವಾಸದಲ್ಲಿದೆ.



# ಮಾವುತರ ಜೊತೆ ಉಪಹಾರ ವಿಳಂಬಕ್ಕೆ ತನ್ವೀರ್ ಅಸಮಾಧಾನ

ಮೈಸೂರು, ಸೆ 28: ಮೈಸೂರು ಅರಮನೆ ಆವರಣದಲ್ಲಿ ಇಂದು ಬೆಳಿಗ್ಗೆ 9 ಗಂಟೆಗೆ ನಗರಾಭಿವೃದ್ಧಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಮಾವುತರು ಮತ್ತು ಕಾವಾಡಿಗಳಿಗೆ ಆಯೋಜಿಸಿದ್ದ ಉಪಹಾರ ಕೂಟ ಮತ್ತು ಕಿಟ್ ವಿತರಣಾ ಕಾರ್ಯಕ್ರಮ ನಡೆಯಿತು.



ಕಾರ್ಯಕ್ರಮ ಬೆಳಿಗ್ಗೆ 9 ಗಂಟೆಗೆ ನಿಗದಿಯಾಗಿದ್ದರೂ 9:30 ಗಂಟೆಯವರೆಗೂ ಆರಂಭವಾಗಲಿಲ್ಲ. ಇದರಿಂದ ಬೇಸರಗೊಂಡ ಶಾಸಕ ತನ್ವೀರ್ ಸೇಠ್ ಅವರು ಸ್ಥಳದಿಂದ ಹೊರನಡೆದ ಘಟನೆ ನಡೆಯಿತು.

ಬೆಳಗ್ಗೆಯಿಂದ ಕಾಯುತ್ತಿದ್ದ ಮಾವುತರಿಗೆ ಗೌರವ ನೀಡಬೇಕು, ಸಮಯಕ್ಕೆ ಸರಿಯಾಗಿ ಉಪಹಾರ ನೀಡಬೇಕು, ಅವರನ್ನು ಊಟಕ್ಕಾಗಿ ಕಾಯಿಸುವುದು ಸರಿಯಲ್ಲ ಎಂದು ಶಾಸಕರು ಸರ್ಕಾರಿ ಅಧಿಕಾರಿಗಳಿಗೆ ಕಾರ್ಯಕ್ರಮವನ್ನು ತಕ್ಷಣ ಆರಂಭಿಸುವಂತೆ ಸೂಚಿಸಿದರು. ಅಧಿಕಾರಿಗಳು ಆರಂಭಿಸದಿದ್ದಾಗ ಅವರು ಅಸಮಾಧಾನಗೊಂಡು ತೆರಳಿದರು.

## ಅಗತ್ಯ ವಸ್ತುಗಳ ಬೆಲೆ ಏರಿಕೆ ಬೆನ್ನಲ್ಲೇ ಮಾಲೀಕರಿಂದ
# ಪಿಜಿ ದರ ಹೆಚ್ಚಳಕ್ಕೆ ಚಿಂತನೆ



ಬೆಂಗಳೂರು: ಸೆ.28-ಅಗತ್ಯ ವಸ್ತುಗಳ ಬೆಲೆ ಏರಿಕೆ ಹಾಗೂ ನಿರ್ವಹಣಾ ವೆಚ್ಚ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ನಗರದಲ್ಲಿನ ಪಿಜಿ (ಪೇಯಿಂಗ್ ಗೆಸ್ಟ್) ದರಗಳೂ ಏರಿಕೆಯಾಗುವ ಸಾಧ್ಯತೆ ಎದುರಾಗಿದೆ. ಪಿಜಿ ದರ ಪರಿಷ್ಕರಣೆ ಕುರಿತು ಶೀಘ್ರದಲ್ಲೇ ಮಾಲೀಕರ ಸಭೆ ನಡೆಸಿ ಚರ್ಚಿಸಲು ಪಿಜಿ ಮಾಲೀಕರ ಅಸೋಸಿಯೇಷನ್ ಮುಂದಾಗಿದೆ.

ಅಕ್ಕಿ, ಬೇಳೆ, ಅಡುಗೆ ಅನಿಲ ಸಿಲಿಂಡರ್ ಸೇರಿದಂತೆ ದಿನನಿತ್ಯ ಬಳಕೆಯ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿರುವುದು ಪಿಜಿ ಮಾಲೀಕರಿಗೆ ಹೆಚ್ಚುವರಿ ಹೊರೆಯಾಗಿದೆ. ಇದರ ಜತೆಗೆ ಹಾಲಿನ ದರವೂ ಏರಿಕೆಯಾಗುವ ಸಾಧ್ಯತೆ ಇರುವುದರಿಂದ ಆಹಾರ ಸೇರಿದಂತೆ ಪಿಜಿ ನಿರ್ವಹಣಾ ವೆಚ್ಚ ಮತ್ತಷ್ಟು ಹೆಚ್ಚಾಗಲಿದೆ ಎಂದು ಮಾಲೀಕರು ಹೇಳುತ್ತಿದ್ದಾರೆ.

ಪ್ರಸ್ತುತ ಬಹುತೇಕ ಪಿಜಿಗಳಲ್ಲಿ ನಿವಾಸಿಗಳಿಗೆ ವಸತಿ ವ್ಯವಸ್ಥೆಯ ಜತೆಗೆ ಊಟ, ವಿದ್ಯುತ್, ನೀರು, ಸ್ವಚ್ಛತೆ ಹಾಗೂ ಇತರ ಮೂಲ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಆಹಾರ ಪದಾರ್ಥಗಳ ಬೆಲೆ ಏರಿಕೆಯಿಂದ ದಿನನಿತ್ಯದ ಖರ್ಚು ಹೆಚ್ಚಾಗಿದ್ದು, ಇದೇ ಪರಿಸ್ಥಿತಿ ಮುಂದುವರಿದರೆ ಈಗಿರುವ ದರದಲ್ಲಿ ಪಿಜಿ ನಡೆಸುವುದು ಕಷ್ಟವಾಗಲಿದೆ ಎಂಬುದು ಮಾಲೀಕರ ವಾದ.

### ಹಾಲಿನ ದರ ಏರಿಕೆಯತ್ತ ಗಮನ;

ಹಾಲಿನ ದರದಲ್ಲಿ ಎಷ್ಟು ಪ್ರಮಾಣದ ಏರಿಕೆಯಾಗಲಿದೆ ಎಂಬುದನ್ನು ಗಮನಿಸಿ ನಂತರ ಪಿಜಿ ದರ ಪರಿಷ್ಕರಣೆ ಮಾಡುವ ಕುರಿತು ಚಿಂತನೆ ನಡೆಸಲಾಗುತ್ತಿದೆ. ಹಾಲಿನ ದರ ಏರಿಕೆಯ ಪ್ರಮಾಣವೂ ಪಿಜಿಗಳಲ್ಲಿ ಆಹಾರ ನಿರ್ವಹಣಾ ವೆಚ್ಚದ ಮೇಲೆ ಪರಿಣಾಮ ಬೀರುವ ಹಿನ್ನೆಲೆಯಲ್ಲಿ ಅಂತಿಮ ನಿರ್ಧಾರ ಕೈಗೊಳ್ಳುವ ಮೊದಲು ಪರಿಸ್ಥಿತಿಯನ್ನು ಅವಲೋಕಿಸಲಾಗುತ್ತದೆ ಎಂದು ಪಿಜಿ ಅಸೋಸಿಯೇಷನ್ ಅಧ್ಯಕ್ಷ ಅರುಣ್ ಕುಮಾರ್ ತಿಳಿಸಿದರೆ.

### ಮಾಲೀಕರ ಅಭಿಪ್ರಾಯ ಸಂಗ್ರಹ:

ಪಿಜಿ ದರ ಏರಿಕೆ ಕುರಿತು ಏಕಪಕ್ಷೀಯವಾಗಿ ನಿರ್ಧಾರ ಕೈಗೊಳ್ಳದೆ ವಿವಿಧ ಪಿಜಿ ಮಾಲೀಕರೊಂದಿಗೆ ಚರ್ಚಿಸಿ ಅಭಿಪ್ರಾಯ ಸಂಗ್ರಹಿಸಲು ಅಸೋಸಿಯೇಷನ್ ಮುಂದಾಗಿದೆ. ಈ ಸಂಬಂಧ ಶೀಘ್ರದಲ್ಲೇ ಪಿಜಿ ಮಾಲೀಕರ ಸಭೆ ಕರೆಯಲಾಗುವುದು.

ಸಭೆಯಲ್ಲಿ ಪ್ರಸ್ತುತ ಪಿಜಿ ನಡೆಸಲು ತಗಲುತ್ತಿರುವ ವೆಚ್ಚ, ಆಹಾರ ಪದಾರ್ಥಗಳ ಬೆಲೆ ಏರಿಕೆ, ವಿದ್ಯುತ್ ಹಾಗೂ ಇತರ ನಿರ್ವಹಣಾ ವೆಚ್ಚಗಳ ಕುರಿತು ಚರ್ಚೆ ನಡೆಯಲಿದೆ.

ಬಳಿಕ ಪಿಜಿ ದರವನ್ನು ಎಷ್ಟು ಪ್ರಮಾಣದಲ್ಲಿ ಪರಿಷ್ಕರಿಸಬೇಕು ಎಂಬುದರ ಬಗ್ಗೆ ಮಾಲೀಕರ ಅಭಿಪ್ರಾಯ ಪಡೆದು ಮುಂದಿನ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

### ನಿವಾಸಿಗಳ ಜೇಬಿಗೆ ಹೊರೆ

ಬೆಂಗಳೂರು ನಗರದಲ್ಲಿ ಉದ್ಯೋಗ, ಶಿಕ್ಷಣ ಸೇರಿದಂತೆ ವಿವಿಧ ಕಾರಣಗಳಿಗೆ ಸಾವಿರಾರು ಮಂದಿ ಪಿಜಿಗಳಲ್ಲಿ ವಾಸಿಸುತ್ತಿದ್ದಾರೆ. ಪಿಜಿ ದರ ಏರಿಕೆಯಾದರೆ ಈಗಾಗಲೇ ಹೆಚ್ಚುತ್ತಿರುವ ಜೀವನ ವೆಚ್ಚದ ನಡುವೆ ಉದ್ಯೋಗಿಗಳು ಹಾಗೂ ವಿದ್ಯಾರ್ಥಿಗಳ ಮೇಲೂ ಹೆಚ್ಚುವರಿ ಆರ್ಥಿಕ ಹೊರೆ ಬೀಳುವ ಸಾಧ್ಯತೆ ಇದೆ. ಆದರೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಪಿಜಿ ನಿರ್ವಹಣಾ ವೆಚ್ಚ ಹೆಚ್ಚುತ್ತಿರುವುದರಿಂದ ದರ ಪರಿಷ್ಕರಣೆ ಅನಿವಾರ್ಯವಾಗಬಹುದು ಎಂದು ಮಾಲೀಕರು ಹೇಳುತ್ತಿದ್ದಾರೆ.

# ಅಕ್ಕಿ ಬೆಲೆ ಏರಿಕೆಯಲ್ಲಿ ರಾಜ್ಯಕ್ಕೆ 3ನೇ ಸ್ಥಾನ

ಬೆಂಗಳೂರು, ಸೆ.28- ರಾಜ್ಯದಲ್ಲಿ ಅಕ್ಕಿ ಬೆಲೆ ಗಣನೀಯವಾಗಿ ಏರಿಕೆಯಾಗಿದ್ದು,ಗ್ರಾಹಕರ ಜೇಬಿಗೆ ಮತ್ತಷ್ಟು ಹೊರೆ ಬಿದ್ದಿದೆ.

ಜುಲೈನಿಂದ ಸೆಪ್ಟೆಂಬರ್‌ವರೆಗೆ ಅಕ್ಕಿಯ ಬೆಲೆ ಕೆಜಿಗೆ ಶೇ. 7.30ರಷ್ಟು ಹೆಚ್ಚಳವಾಗಿದ್ದು, ಸೆಪ್ಟೆಂಬರ್‌ನಲ್ಲಿ ರಾಜ್ಯದ ಸರಾಸರಿ ಬೆಲೆ ಕೆಜಿಗೆ 63.70ಕ್ಕೆ ತಲುಪಿದೆ.



ಅಕ್ಕಿ ಬೆಲೆ ಏರಿಕೆ-ಯ ಪ್ರಮಾಣದಲ್ಲಿ ಕರ್ನಾಟಕ ದೇಶದಲ್ಲೇ ಮೂರನೇ ಸ್ಥಾನದಲ್ಲಿದೆ. ರಾಜ್ಯದಲ್ಲಿ ಮೂರು ತಿಂಗಳ ಅವಧಿಯಲ್ಲಿ ಅಕ್ಕಿ ಬೆಲೆ ಶೇ.12.94ರಷ್ಟು ಹೆಚ್ಚಾಗಿದೆ. ಇದೇ ಅವಧಿಯಲ್ಲಿ ತ್ರಿಪುರಾದಲ್ಲಿ ಶೇ.17.33 ಹಾಗೂ ತೆಲಂಗಾಣದಲ್ಲಿ ಶೇ.13.32ರಷ್ಟು ಏರಿಕೆ ದಾಖಲಾಗಿದೆ.ತೆಲಂಗಾಣದಲ್ಲಿ ಮೂರು ತಿಂಗಳಲ್ಲಿ ಅಕ್ಕಿ ಬೆಲೆ ಕೆಜಿಗೆ 7.20ರಷ್ಟು ಹೆಚ್ಚಾಗಿದ್ದರೆ, ಗೋವಾದಲ್ಲಿ 6.50 ಹಾಗೂ ಆಂಧ್ರಪ್ರದೇಶದಲ್ಲಿ 5.40ರಷ್ಟು ಏರಿಕೆಯಾಗಿದೆ.ಇನ್ನು ಮಹಾರಾಷ್ಟ್ರಕ್ಕೆ ಹೋಲಿಸಿದರೆಕರ್ನಾಟಕದಲ್ಲಿ ಅಕ್ಕಿ ಬೆಲೆ ಕೆಜಿಗೆ 13.50ರಷ್ಟು ಹೆಚ್ಚಿದ್ದು, ಛತ್ತೀಸ್‌ಗಢಕ್ಕೆ ಹೋಲಿಸಿದಾಗ ರಾಜ್ಯದಲ್ಲಿ ಕೆಜಿಗೆ 23.80ರಷ್ಟು ಹೆಚ್ಚಿನ ಬೆಲೆ ಇದೆ.

ಅಕ್ಕಿ ಸೇರಿದಂತೆ ಒಟ್ಟು 38 ದಿನಸಿ ಸಾಮಗ್ರಿಗಳ ಬೆಲೆಗಳ ಮೇಲೆ ನಿಗಾ ಇರಿಸಲಾಗಿದ್ದು, ದೇಶಾದ್ಯಂತ 575 ಕೇಂದ್ರಗಳಿಂದ ಪ್ರತಿನಿತ್ಯ ದಿನಸಿ ವಸ್ತುಗಳ ಬೆಲೆ ಸಂಗ್ರಹಿಸಲಾಗುತ್ತಿದೆ.

ಬೆಲೆ ಏರಿಕೆಯ ಪರಿಣಾಮವಾಗಿ ಗ್ರಾಹಕರು ಕಡಿಮೆ ಬೆಲೆಯ ಅಕ್ಕಿಯತ್ತ ಮುಖ ಮಾಡುತ್ತಿದ್ದಾರೆ. ಹೆಚ್ಚುತ್ತಿರುವ ಅಕ್ಕಿ ಬೆಲೆ ದಿನಸಿ ಖರ್ಚಿನ ಮೇಲೂ ಪರಿಣಾಮ ಬೀರುತ್ತಿದ್ದು, ಗ್ರಾಹಕರಿಗೆ ಬೆಲೆ ಏರಿಕೆಯ ಬಿಸಿ ತಟ್ಟುತ್ತಿದೆ.

## ಸಿಹಿ ಗ್ರಾಮದಲ್ಲಿ ಕಹಿ ಘಟನೆ
# ಕೊಳವೆ ಬಾವಿಗೆ ಬಿದ್ದು ಮಗು ಸಾವು

ಫರಿದಾಬಾದ್,ಸೆ.28-ಹರಿಯಾಣದ ಫರಿದಾಬಾದ್ ಜಿಲ್ಲೆಯ ಸಿಹಿ ಗ್ರಾಮದಲ್ಲಿ ನಡೆದ ಘಟನೆಯು ಪ್ರತಿಯೊಬ್ಬರ ಕಣ್ಣಂಚಿನಲ್ಲಿ ನೀರು ತರಿಸುವಂತಿದೆ. ಭಾನುವಾರ ಸಂಜೆ ಸುಮಾರು 5:30 ರ ಸುಮಾರಿಗೆ, ಕೂಲಿ ಕಾರ್ಮಿಕ ರಾಮದೀನ್ ಅವರ ಮೂರು ವರ್ಷದ ಮಗಳು ನೇಹಾ ಮನೆ ಬಳಿ ಹಾಗೂ ನಿಲ್ಲಿಸಿದ್ದ ಟ್ರ್ಯಾಕ್ಟರ್ ಹತ್ತಿರ ಇತರ ಮಕ್ಕಳೊಂದಿಗೆ ಆಟವಾಡುತ್ತಿದ್ದಾಗ, ತೆರೆದುಕೊಂಡಿದ್ದ ಆಳವಾದ ಕೊಳವೆಬಾವಿಯೊಳಗೆ ಆಕಸ್ಮಿಕವಾಗಿ ಬಿದ್ದಿದ್ದು ಈ ಕೊಳವೆಬಾವಿಯು ಸುಮಾರು 80 ರಿಂದ 250 ಅಡಿಗಳಷ್ಟು ಆಳ ಹೊಂದಿದ್ದು, ನಗರಸಭೆಗೆ ಸೇರಿದ ಈ ಬೋರ್‌ವೆಲ್ ಕಳೆದ 10 ವರ್ಷಗಳಿಂದ ಬಳಕೆಯಾಗದೆ ಮುಚ್ಚಲ್ಪಟ್ಟಿತ್ತು, ಆದರೆ ಇತ್ತೀಚೆಗೆ ಅದರ ಮೇಲಿದ್ದ ಮುಚ್ಚಳ ನಾಪತ್ತೆಯಾಗಿದ್ದರಿಂದ ಈ ದುರಂತ ಸಂಭವಿಸಿದೆ ಎಂದು ತಿಳಿದುಬಂದಿದೆ.



ಮಗು ಬೋರ್‌ವೆಲ್‌ನೊಳಗೆ ಬಿದ್ದ ಸುದ್ದಿ ತಿಳಿಯುತ್ತಿದ್ದಂತೆಯೇ ಸ್ಥಳೀಯರು ಕೂಡಲೇ ಪೊಲೀಸರಿಗೆ ಹಾಗೂ ಜಿಲ್ಲಾಡಳಿತಕ್ಕೆ ಮಾಹಿತಿ ತಲುಪಿಸಿದರು. ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳೀಯ ಪೊಲೀಸರು, ಅಗ್ನಿಶಾಮಕ ದಳದ ಸಿಬ್ಬಂದಿ, ತಹಸೀಲ್ದಾರ್ ಹಾಗೂ ಎನ್‌ಡಿಆರ್‌ಎಫ್ ರಕ್ಷಣಾ ಪಡೆಗಳು ತಕ್ಷಣವೇ ಸ್ಥಳಕ್ಕೆ ಆಗಮಿಸಿ ಜಂಟಿ ರಕ್ಷಣಾ ಕಾರ್ಯಾಚರಣೆಗೆ ಚಾಲನೆ ನೀಡಿದವು. ಮಗು ಕೊಳವೆಬಾವಿಯ ಸುಮಾರು 80 ಅಡಿಗಳಷ್ಟು ಆಳದಲ್ಲಿದ್ದ ಕಾರಣ ಆಕೆಗೆ ತಕ್ಷಣವೇ ಆಮ್ಲಜನಕ ಸಿಗುವಂತೆ ಪೈಪ್‌ಗಳ ಮೂಲಕ ಆಕ್ಸಿಜನ್ ಪೂರೈಸಲಾಯಿತು. ಬೋರ್‌ವೆಲ್‌ನ ಪಕ್ಕದಲ್ಲೇ ಜೆಸಿಬಿ ಮತ್ತು ಪೋಕ್ಲೇನ್ ಯಂತ್ರಗಳನ್ನು ಬಳಸಿ ಸಮಾಂತರವಾಗಿ ಬೃಹತ್ ಗುಂಡಿಯನ್ನು ತೋಡಿ, ಅಲ್ಲಿಂದ ಮಗುವಿದ್ದ ಜಾಗಕ್ಕೆ ಸುರಂಗ ಕೊರೆಯುವ ಅತ್ಯಂತ ಜಾಗರೂಕತೆಯ ಕಾರ್ಯಾಚರಣೆ ರಾತ್ರಿಯಿಡೀ ನಡೆಯಿತು.

ಸ್ಥಳೀಯರು, ರಕ್ಷಣಾ ಸಿಬ್ಬಂದಿ ಮತ್ತು ಕುಟುಂಬಸ್ಥರು ಮಗು ಜೀವಂತವಾಗಿ ಹೊರಬರಲೆಂದು ಭರವಸೆಯಿಂದ ರಾತ್ರಿಯಿಡೀ ಕಾದಿದ್ದರು. ಸತತ 10 ಗಂಟೆಗಳ ಕಾಲ ನಡೆದ ಕಠಿಣ ಕಾರ್ಯಾಚರಣೆಯ ನಂತರ ಸೋಮವಾರ ಮುಂಜಾನೆ ಸುಮಾರು 4 ಗಂಟೆಗೆ ಬಾಲಕಿಯನ್ನು ಬೋರ್‌ವೆಲ್‌ನಿಂದ ಹೊರತೆಗೆಯಲಾಯಿತು. ತಕ್ಷಣವೇ ಸಿದ್ಧವಾಗಿದ್ದ ಆಂಬ್ಯುಲೆನ್ಸ್ ಮೂಲಕ ಆಕೆಯನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತಾದರೂ, ವೈದ್ಯರು ಪರೀಕ್ಷಿಸಿ ಬಾಲಕಿ ಈಗಾಗಲೇ ಕೊನೆಯುಸಿರೆಳೆದಿದ್ದಾಳೆ ಎಂದು ದೃಢಪಡಿಸಿದರು. ಆಡಳಿತ ಮಂಡಳಿಯ ನಿರ್ಲಕ್ಷ್ಯ ಮತ್ತು ಅಜಾಗರೂಕತೆಗೆ ಪುಟಾಣಿ ಮಗುವೊಂದು ಬಲಿಯಾಗಿದ್ದು, ತನ್ನ ಮುದ್ದು ಮಗಳನ್ನು ಕಳೆದುಕೊಂಡ ತಂದೆ-ತಾಯಿಯ ಆಕ್ರಂದನ ಮುಗಿಲು ಮುಟ್ಟಿತ್ತು.

# ಬ್ಯಾಂಕ್ ನೌಕರರ ಮುಷ್ಕರ ವಾಪಸ್

ಬೆಂಗಳೂರು, ಸೆ.28-ವಾರದಲ್ಲಿ ಐದು ದಿನ ಮಾತ್ರ ಬ್ಯಾಂಕ್‌ಗಳು ಕಾರ್ಯನಿರ್ವಹಿಸುವಂತೆ ಆಗ್ರಹಿಸಿ ಬ್ಯಾಂಕ್ ನೌಕರರ ಸಂಘಟನೆಗಳು ನೀಡಿದ್ದ ಮುಷ್ಕರದ ಕರೆ ವಾಪಸ್ ಪಡೆಯಲಾಗಿದೆ. ಹೀಗಾಗಿ ಇಂದು ಬ್ಯಾಂಕ್‌ಗಳು ಎಂದಿನಂತೆ ಕಾರ್ಯನಿರ್ವಹಿಸುತ್ತಿವೆ. ಗ್ರಾಹಕರಿಗೆ ಎಂದಿನಂತೆ ಬ್ಯಾಂಕಿಂಗ್ ಸೇವೆಗಳು ಲಭ್ಯವಾಗಿವೆ.

ಐದು ದಿನಗಳ ಕೆಲಸದ ವ್ಯವಸ್ಥೆ ಜಾರಿಗೆ ತರಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್ ಮುಷ್ಕರಕ್ಕೆ ಕರೆ ನೀಡಿತ್ತು. ಆರಂಭದಲ್ಲಿ ಮೂರು ದಿನಗಳ ಕಾಲ ಮುಷ್ಕರ ನಡೆಸಲು ಸಂಘಟನೆ ನಿರ್ಧರಿಸಿತ್ತು.ಮುಷ್ಕರ ವಾಪಸ್ ಪಡೆದಿರುವ ಹಿನ್ನೆಲೆಯಲ್ಲಿ ದೇಶಾದ್ಯಂತ ಬ್ಯಾಂಕ್ ಶಾಖೆಗಳು ಎಂದಿನ ವೇಳಾಪಟ್ಟಿಯಂತೆ ಕಾರ್ಯನಿರ್ವಹಿಸಲಿವೆ. ಹಣ ಜಮೆ, ಹಣ ತೆಗೆಯುವುದು, ಚೆಕ್ ವ್ಯವಹಾರ, ಖಾತೆ ಸಂಬಂಧಿತ ಸೇವೆಗಳು ಸೇರಿದಂತೆ ಶಾಖೆಗಳಲ್ಲಿ ಲಭ್ಯವಿರುವ ಸಾಮಾನ್ಯ ಬ್ಯಾಂಕಿಂಗ್ ಸೇವೆಗಳು ಮುಂದುವರಿಯಲಿವೆ.ವಾರದಲ್ಲಿ ಐದು ದಿನಗಳ ಕೆಲಸದ ಬೇಡಿಕೆ ಬ್ಯಾಂಕ್ ನೌಕರರ ಪ್ರಮುಖ ಬೇಡಿಕೆಗಳಲ್ಲಿ ಒಂದಾಗಿದೆ. ಪ್ರಸ್ತುತ ಬ್ಯಾಂಕ್‌ಗಳಿಗೆ ತಿಂಗಳ ಎರಡನೇ ಮತ್ತು ನಾಲ್ಕನೇ ಶನಿವಾರ ರಜೆ ಇರುತ್ತದೆ. ಉಳಿದ ಶನಿವಾರಗಳ ಕೆಲಸದ ಬದಲು ಎಲ್ಲಾ ಶನಿವಾರ ಮತ್ತು ಭಾನುವಾರ ರಜೆ ನೀಡಿ, ಐದು ದಿನಗಳ ಕೆಲಸದ ವಾರ ಜಾರಿಗೆ ತರಬೇಕು ಎಂಬ ಬೇಡಿಕೆಯನ್ನು ನೌಕರರ ಸಂಘಟನೆಗಳು ಮುಂದಿಟ್ಟಿವೆ.

ಆದರೆ ಮಾತುಕತೆ ಮುಂದುವರಿದಿರುವ ಹಿನ್ನೆಲೆಯಲ್ಲಿ ತಕ್ಷಣದ ಮುಷ್ಕರವನ್ನು ಹಿಂಪಡೆಯಲಾಗಿದೆ. ಹೀಗಾಗಿ ಬ್ಯಾಂಕ್ ಗ್ರಾಹಕರು ಮುಷ್ಕರದ ಆತಂಕವಿಲ್ಲದೆ ಎಂದಿನಂತೆ ತಮ್ಮ ಬ್ಯಾಂಕಿಂಗ್ ವ್ಯವಹಾರಗಳನ್ನು ನಡೆಸಬಹುದಾಗಿದೆ.

# ಮೈಸೂರು ದಸರಾ : ಗವಿಮಠದ ಶ್ರೀಗಳಿಗೆ ಆಹ್ವಾನ

ಕೊಪ್ಪಳ.ಸೆ.28- ನಾಡಹಬ್ಬ ಮೈಸೂರು ದಸರಾ ಉದ್ಘಾಟನೆಗೆ ಗವಿಮಠದ ಶ್ರೀಗಳನ್ನು ಆಹ್ವಾನಿಸಲಾಗಿದೆ. ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಅವರು ಇಂದು ಗವಿಮಠಕ್ಕೆ ಆಗಮಿಸಿ ಶ್ರೀಗಳಿಗೆ ಅಧಿಕೃತ ಆಹ್ವಾನ ನೀಡಿದರು.

ಅಕ್ಟೋಬರ್ 11ರಿಂದ ಆರಂಭವಾಗಲಿರುವ ಮೈಸೂರು ದಸರಾ ಕಾರ್ಯಕ್ರಮದಲ್ಲಿ 11 ದಿನಗಳ ಕಾಲ ಭಾಗವಹಿಸುವಂತೆ ಸಚಿವರು ಮನವಿ ಮಾಡಿದರು. ಈ ವೇಳೆ ಸಂಸದ ರಾಜಶೇಖರ ಹಿಟ್ನಾಳ, ಶಾಸಕ ರಾಘವೇಂದ್ರ ಹಿಟ್ನಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಶ್ರೀಗಳ ಆಯ್ಕೆ ಈ ಭಾಗದ ಜನರಿಗೆ ಸಂತಸ

ನಂತರ ಕೊಪ್ಪಳದಲ್ಲಿ ಮಾತನಾಡಿದ ಸಚಿವ ಶಿವರಾಜ ತಂಗಡಗಿ, ವಿಶ್ವವಿಖ್ಯಾತ ಮೈಸೂರು ದಸರಾಕ್ಕೆ ವಿಶ್ವದ ವಿವಿಧ ಭಾಗಗಳಿಂದ ಜನರು ಆಗಮಿಸುತ್ತಾರೆ.ಪ್ರತಿವರ್ಷ ಸಾಧಕರಿಂದ ದಸರಾ ಉದ್ಘಾಟನೆ ಮಾಡಿಸಲಾಗುತ್ತಿದ್ದು, ಕನ್ನಡ ಮತ್ತು ಸಂಸ್ಕೃತಿ ಸಚಿವನಾಗಿ ತಾವು ನಾಲ್ಕನೇ ಬಾರಿ ದಸರಾ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿರುವುದಾಗಿ ಹೇಳಿದರು.ಈ ಬಾರಿ ದಸರಾ ಉದ್ಘಾಟನೆಗೆ ಗವಿಶ್ರೀಗಳನ್ನು ಆಯ್ಕೆ ಮಾಡಿರುವುದು ಈ ಭಾಗದ ಜನರಿಗೆ ಸಂತಸ ತಂದಿದೆ. ಮುಖ್ಯಮಂತ್ರಿ



ಜೊತೆ ಶ್ರೀಗಳು ಮಾತನಾಡಿ ಸಂತೋಷದಿಂದ ಒಪ್ಪಿಕೊಂಡಿದ್ದಾರೆ ಎಂದು ತಿಳಿಸಿದರು.

ಶ್ರೀಗಳ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಕೆಲವು ಅಪಪ್ರಚಾರಗಳು ನಡೆದಿವೆ ಎಂದು ಆರೋಪಿಸಿದ ಸಚಿವರು,ಗವಿಮಠದ ಶ್ರೀಗಳು ಸೂಕ್ಷ್ಮ ಮನಸ್ಸಿನವರಾಗಿದ್ದು, ಅವರಿಗೆ ನೋವಾಗದಂತೆ ನಡೆದುಕೊಳ್ಳಬೇಕು ಎಂದು ಹೇಳಿದರು. ಅಧಿಕೃತ ಸಾಕ್ಷ್ಯಾಧಾರಗಳಿಲ್ಲದೆ ಸುದ್ದಿ ಪ್ರಸಾರ ಮಾಡುವವರಿಗೆ ನೋಟಿಸ್ ನೀಡಲಾಗುವುದು ಎಂದು ಎಚ್ಚರಿಸಿದರು.

ಗವಿಶ್ರೀಗಳಿಂದ ದಸರಾ ಉದ್ಘಾಟನೆ ಮಾಡಿಸುವ ಅವಕಾಶ ದೊರೆತಿರುವುದು ಸರ್ಕಾರಕ್ಕೂ ಗೌರವದ ವಿಷಯವಾಗಿದೆ. ಶ್ರೀಗಳು ಅದ್ದೂರಿತನ ಮತ್ತು ಆಡಂಬರದಿಂದ ದೂರವಿರುವ ವ್ಯಕ್ತಿತ್ವ ಹೊಂದಿದ್ದಾರೆ ಎಂದು ಸಚಿವರು ಹೇಳಿದರು.

ಅಕ್ಟೋಬರ್ 10ರಂದು ಶ್ರೀಗಳು ಮೈಸೂರಿಗೆ ಆಗಮಿಸಲಿದ್ದು, ಅಕ್ಟೋಬರ್ 11ರಂದು ದಸರಾಗೆ ಚಾಲನೆ ನೀಡಲಿದ್ದಾರೆ ಎಂದು ಸಚಿವರು ತಿಳಿಸಿದರು.

### ಗ್ಯಾರಂಟಿ ಯೋಜನೆಗಳ ಕುರಿತು ಸಮೀಕ್ಷೆ

ಗ್ಯಾರಂಟಿ ಯೋಜನೆಗಳ ಪ್ರಯೋಜನಗಳು ಮೃತಪಟ್ಟವರಿಗೂ ಹೋಗಿರುವ ಪ್ರಕರಣಗಳ ಕುರಿತು ಸಮೀಕ್ಷೆ ನಡೆಸಲಾಗುವುದು ಎಂದು ಸಚಿವ ಶಿವರಾಜ ತಂಗಡಗಿ ಹೇಳಿದರು.

ಚುನಾವಣೆಯ ಸಂದರ್ಭದಲ್ಲಿ ನೀಡಿರುವ ಭರವಸೆಗಳಂತೆ ಸರ್ಕಾರ ಕಾರ್ಯನಿರ್ವಹಿಸುತ್ತಿದ್ದು, ಅಭಿವೃದ್ಧಿ ಕಾರ್ಯಗಳಿಗೆ ಯಾವುದೇ ಹಣದ ತೊಂದರೆ ಇಲ್ಲ.ಬಿಜೆಪಿ ನಾಯಕರು ನೀಡುವ ಹೇಳಿಕೆಗಳು ಮತ್ತು ಪಾದಯಾತ್ರೆಗಳ ಬಗ್ಗೆ ತಲೆಕೆಡಿಸಿಕೊಳ್ಳುವ ಅಗತ್ಯವಿಲ್ಲ ಎಂದು ಹೇಳಿದರು.

### ಧರ್ಮದ ವಿಚಾರದಲ್ಲಿ ಬಿಜೆಪಿ ವಿರುದ್ಧ ಟೀಕೆ

ಹಿಂದೂ ಧರ್ಮದ ಹೆಸರಿನಲ್ಲಿ ಮತ್ತೊಂದು ಧರ್ಮವನ್ನು ಅವಹೇಳನ ಮಾಡುವುದು ನಮ್ಮ ಸಂಸ್ಕಾರ ಮತ್ತು ಸಂಸ್ಕೃತಿಯಲ್ಲ ಎಂದು ಸಚಿವರು ಹೇಳಿದರು.

# ಏಷ್ಯನ್ ಗೇಮ್ಸ್: ಇಶಾ ಬೆಳ್ಳಿ ಪದಕ, ಲವ್ಲಿನಾಗೆ ಪದಕ ಖಚಿತ

ನಗೋಯಾ,ಸೆ.28-ಜಪಾನ್‌ನ ನಗೋಯಾದಲ್ಲಿ ನಡೆಯುತ್ತಿರುವ ಏಷ್ಯನ್ ಕ್ರೀಡಾಕೂಟದಲ್ಲಿ ಭಾರತದ ಶೂಟರ್ ಇಶಾ ಸಿಂಗ್ ಮಹಿಳೆಯರ 25 ಮೀಟರ್ ಪಿಸ್ತೂಲ್ ಸ್ಪರ್ಧೆಯ ಅತ್ಯಂತ ರೋಚಕ ಫೈನಲ್‌ನಲ್ಲಿ ಬೆಳ್ಳಿ ಪದಕವನ್ನು ತಮ್ಮದಾಗಿಸಿಕೊಂಡಿದ್ದಾರೆ. ಅತ್ಯುತ್ತಮ ಪ್ರದರ್ಶನ ನೀಡಿದ ಅವರು ಚಿನ್ನದ ಪದಕವನ್ನು ಕೊಂಚ ಅಂತರದಲ್ಲಿ ಕೈಚೆಲ್ಲಿದರು.ಸೋಮವಾರ ನಡೆದ ಅತ್ಯಂತ ಕಠಿಣ ಹಾಗೂ ಜಿದ್ದಾಜಿದ್ದಿನ ಫೈನಲ್ ಪಂದ್ಯದಲ್ಲಿ ಇಶಾ ಅವರು ಐದು ಪದಕ ಶೂಟ್-ಆಫ್‌ಗಳನ್ನು ಎದುರಿಸಬೇಕಾಯಿತು. ಮೊದಲು ಬೆಳ್ಳಿ ಪದಕವನ್ನು ಖಚಿತಪಡಿಸಿಕೊಂಡ ಅವರು, ತದನಂತರ ಚಿನ್ನದ ಪದಕಕ್ಕಾಗಿ ಸವಾಲು ಒಡ್ಡಿದರು. ಎರಡನೇ ಶೂಟ್-ಆಫ್‌ನಲ್ಲಿ ಇಶಾ ಅವರು ತಮಗೆ ಸಿಕ್ಕ ಐದು ಶಾಟ್‌ಗಳಲ್ಲಿ ಮೂರು ಶಾಟ್‌ಗಳನ್ನು




ತಪ್ಪಿಸಿಕೊಂಡರೆ, ಚೀನಾದ ಕ್ಸಿಯಾವೊ ಕೇವಲ ಎರಡು ಶಾಟ್‌ಗಳನ್ನು ಮಾತ್ರ ತಪ್ಪಿಸಿ ಚಿನ್ನಕ್ಕೆ ಮುತ್ತಿಟ್ಟರು.ಇದಕ್ಕೂ ಮುನ್ನ ಅರ್ಹತಾ ಸುತ್ತಿನಲ್ಲಿ 580 ಅಂಕಗಳನ್ನು ಗಳಿಸುವ ಮೂಲಕ ಇಶಾ ಫೈನಲ್ ಪ್ರವೇಶಿಸಿದ್ದರು.

ಇದೇ ಸ್ಪರ್ಧೆಯಲ್ಲಿದ್ದ ಮತ್ತೊಬ್ಬ ಪ್ರಮುಖ ಭಾರತೀಯ ಶೂಟರ್ ಮನು ಭಾಕರ್ 579 ಅಂಕಗಳನ್ನು ಗಳಿಸಿ ಅರ್ಹತಾ ಸುತ್ತಿನಲ್ಲೇ ಹೊರಬಿದ್ದರು ಮತ್ತು ಟೀಮ್ ಇಂಡಿಯಾ ಒಟ್ಟು 1727 ಅಂಕಗಳನ್ನು ಕಲೆಹಾಕಿ ಐದನೇ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿತು. ಪ್ರಸ್ತುತ ಭಾರತವು ನಾಲ್ಕು ಚಿನ್ನ, 16 ಬೆಳ್ಳಿ ಹಾಗೂ 18 ಕಂಚಿನ ಪದಕಗಳು ಸೇರಿದಂತೆ ಒಟ್ಟು 38 ಪದಕಗಳೊಂದಿಗೆ ಪದಕಗಳ ಪಟ್ಟಿಯಲ್ಲಿ 12 ನೇ ಸ್ಥಾನದಲ್ಲಿದೆ.

ಮತ್ತೊಂದೆಡೆ, 2026 ರ ಏಷ್ಯನ್ ಗೇಮ್ಸ್‌ನ ಬಾಕ್ಸಿಂಗ್ ವಿಭಾಗದಲ್ಲಿ ಭಾರತದ ಲವ್ಲಿನಾ ಬೊರ್ಗೊಹೈನ್ ಮಹಿಳೆಯರ 75 ಕೆಜಿ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ದಕ್ಷಿಣ ಕೊರಿಯಾದ ಸಿಯೊಂಗ್ ಸುಯೆನ್ ಅವರನ್ನು ಭರ್ಜರಿಯಾಗಿ ಸೋಲಿಸಿ ಸೆಮಿಫೈನಲ್ ತಲುಪಿದ್ದಾರೆ. ಈ ಮೂಲಕ ಅವರು ಭಾರತಕ್ಕೆ ಮತ್ತೊಂದು ಪದಕವನ್ನು ಖಚಿತಪಡಿಸಿದ್ದಾರೆ.

ಪಂದ್ಯದ ಆರಂಭಿಕ ಕ್ಷಣದಿಂದಲೂ ಎದುರಾಳಿಯ ಮೇಲೆ ಸಂಪೂರ್ಣ ಒತ್ತಡ ಹೇರಿದ ಲೊವ್ಲಿನಾ, ಮೊದಲ ಸುತ್ತಿನಲ್ಲೇ ಎಲ್ಲಾ ತೀರ್ಪುಗಾರರ ಸ್ಕೋರ್‌ಕಾರ್ಡ್‌ಗಳಲ್ಲಿ 5-0 ಮುನ್ನಡೆ ಸಾಧಿಸಿದರು. ಆ ನಂತರ ಅತ್ಯುತ್ತಮ ಪಟ್ಟುಗಳನ್ನು ಪ್ರದರ್ಶಿಸಿ ಅಂತಿಮವಾಗಿ 30-27 ಅಂಕಗಳ ಅಂತರದಿಂದ ಪಂದ್ಯವನ್ನು ತಮ್ಮದಾಗಿಸಿಕೊಂಡರು.

ಆದರೆ ಬಿಲ್ಲುಗಾರಿಕೆ ವಿಭಾಗದಲ್ಲಿ ಭಾರತ-ಕ್ಕೆ ನಿರಾಶೆಯೆದುರಾಗಿದ್ದು, ಅನುಭವಿ ಆಟಗಾರ್ತಿ ಜ್ಯೋತಿ ಸುರೇಖಾ ವೆನ್ನಮ್ ಅವರು ಮಹಿಳೆಯರ ವೈಯಕ್ತಿಕ ಸಂಯುಕ್ತ ಬಿಲ್ಲುಗಾರಿಕೆಯ 16 ರ ಸುತ್ತಿನಲ್ಲೇ ಕೂಟದಿಂದ ಹೊರಬಿದ್ದಿದ್ದಾರೆ. ದಕ್ಷಿಣ ಕೊರಿಯಾದ 14 ವರ್ಷದ ಉದಯೋನ್ಮುಖ ಆಟಗಾರ್ತಿ ಕಾಂಗ್ ಯೆಯೊನ್ಸಿಯೊ ವಿರುದ್ಧ ಜ್ಯೋತಿ ಅವರು 150-146 ಅಂತರದಲ್ಲಿ ಪರಾಭವಗೊಂಡರು. ಈ ಪಂದ್ಯದಲ್ಲಿ ಕಾಂಗ್ ಎಲ್ಲಾ ಬಾಣಗಳನ್ನು ಸರಿಯಾದ ಗುರಿಗೆ ಹೊಡೆಯುವ ಮೂಲಕ ಪರಿಪೂರ್ಣ 150 ಅಂಕಗಳನ್ನು ಗಳಿಸಿ ಗಮನಸೆಳೆದರು.